ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಅಕ್ಟೋಬರ್ 1 ಮಂಗಳವಾರ 2024

ಸಂಪುಟ: 45 | ಸಂಚಿಕೆ: 166 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮುಡಾ ಆಯುಕ್ತರಿಗೆ ಸಿಎಂ ಸಿದ್ದರಾಮಯ್ಯನವರ ಪತ್ನಿ ಶ್ರೀಮತಿ ಪಾರ್ವತಿ ಪತ್ರ

14 ನಿವೇಶನ ಹಿಂದಿರುಗಿಸಲು ನಿರ್ಧಾರ



ಮೈಸೂರು, ಸೆ.30–ಮುಖ್ಯಮಂತ್ರಿ ಸಿದ್ದರಾಮಯ್ಯನವರ ಧರ್ಮಪತ್ನಿ ಶ್ರೀಮತಿ ಪಾರ್ವತಿ ಅವರು ಮುಡಾದಿಂದ ಮಂಜೂರಾಗಿರುವ 14 ನಿವೇಶನಗಳನ್ನು ಹಿಂದಿರುಗಿಸುವುದಾಗಿ ಸೋಮವಾರ ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಈ ಪತ್ರ ಇಂದು ಸಂಜೆ ಮುಡಾ ತಲುಪಿದೆ. ಮೈಸೂರು ತಾಲೂಕು, ಕಸಬಾ ಹೋಬಳಿ, ಕೆಸರೆ ಗ್ರಾಮದ ಸರ್ವೆ ನಂ.464ರಲ್ಲಿ 3 ಎಕರೆ 16 ಗುಂಟೆ ವಿಸ್ತೀರ್ಣದ ನನ್ನ ಜಮೀನನ್ನು ಪ್ರಾಧಿಕಾರವು ಭೂಸ್ವಾಧೀನವಿಲ್ಲದೆ ಉಪಯೋಗಿಸಿ ಕೊಂಡಿದ್ದಕ್ಕಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಪರಿಹಾರವಾಗಿ ವಿಜಯನಗರ 3 ಮತ್ತು 4ನೇ ಹಂತದಲ್ಲಿ ವಿವಿಧ ಅಳತೆಯ 13 ನಿವೇಶನಗಳನ್ನು ಮಂಜೂರು ಮಾಡಿರುವುದು ನಿಮಗೆ ತಿಳಿದಿದೆ. ಮುಂದುವರೆದು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನನ್ನ ಪರವಾಗಿ ಕಾರ್ಯಗತಗೊಳಿಸಿದ 14 ನಿವೇಶನಗಳ ಕ್ರಯಪತ್ರಗಳನ್ನು ರದ್ದುಗೊಳಿಸುವ ಮೂಲಕ ನಾನು ಪರಿಹಾರದ ನಿವೇಶನಗಳನ್ನು ಒಪ್ಪಿಸಲು ಮತ್ತು ಹಿಂದಿರುಗಿಸಲು ಬಯಸುತ್ತೇನೆ. ನಿವೇಶನಗಳ ಸ್ವಾಧೀನವನ್ನು ಸಹ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಮರಳಿ ಹಸ್ತಾಂತರಿಸುತ್ತಿದ್ದೇನೆ. ದಯವಿಟ್ಟು ಈ ನಿಟ್ಟಿನಲ್ಲಿ ಆದಷ್ಟು ಬೇಗ ಅಗತ್ಯ ಕ್ರಮಗಳನ್ನು ಕೈಗೊಳ್ಳಿ ಎಂದು ಪತ್ರದಲ್ಲಿ ಶ್ರೀಮತಿ ಪಾರ್ವತಿ ಮನವಿ ಮಾಡಿದ್ದಾರೆ.



ಇವರಿಗೆ,
ಆಯುಕ್ತರು,
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ
ಝಾನ್ಸಿ ಲಕ್ಷ್ಮಿ ಬಾಯಿ ರಸ್ತೆ,
ಮೈಸೂರು, ಕರ್ನಾಟಕ - 570 005

ಇಂದ,
ಶ್ರೀಮತಿ. ಪಾರ್ವತಿ,
W/o ಶ್ರೀ ಸಿದ್ದರಾಮಯ್ಯ,
R/a 'ಕಾವೇರಿ',
ಕುಮಾರ ಕೃಪಾ ರಸ್ತೆ,
ಬೆಂಗಳೂರು.

ಮಾನ್ಯರೇ,

ವಿಷಯ: ಮೈಸೂರಿನ ಕೆಸರೆ ಗ್ರಾಮದ ಸರ್ವೇ ನಂ 464 ರಲ್ಲಿ 3 ಎಕರೆ 16 ಗುಂಟೆ ಜಮೀನನ್ನು ಪ್ರಾಧಿಕಾರವು ಭೂಸ್ವಾಧೀನವಿಲ್ಲದೆ ಉಪಯೋಗಿಸಿಕೊಂಡಿದ್ದಕ್ಕಾಗಿ ಪರಿಹಾರದ ಬದಲಾಗಿ ವಿಜಯನಗರ 3 ಮತ್ತು 4 ನೇ ಹಂತದಲ್ಲಿ ನನಗೆ ಮಂಜೂರು ಮಾಡಲಾದ 14 ನಿವೇಶನಗಳನ್ನು ಹಿಂದಿರುಗಿಸುವ ಕುರಿತು.

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಕೆಸರೆ ಗ್ರಾಮದ ಸರ್ವೇ ನಂ 464 ರಲ್ಲಿ 3 ಎಕರೆ 16 ಗುಂಟೆ ವಿಸ್ತೀರ್ಣದ ನನ್ನ ಜಮೀನನ್ನು ಪ್ರಾಧಿಕಾರವು ಭೂಸ್ವಾಧೀನವಿಲ್ಲದೆ ಉಪಯೋಗಿಸಿಕೊಂಡಿದ್ದಕ್ಕಾಗಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಪರಿಹಾರವಾಗಿ ವಿಜಯನಗರ 3 ಮತ್ತು 4 ನೇ ಹಂತದಲ್ಲಿ ವಿವಿಧ ಅಳತೆಯ 14 ನಿವೇಶನಗಳನ್ನು ಮಂಜೂರು ಮಾಡಿರುವುದು ನಿಮಗೆ ತಿಳಿದಿದೆ.

ಮುಂದುವರಿದು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನನ್ನ ಪರವಾಗಿ ಕಾರ್ಯಗತಗೊಳಿಸಿದ 14 ನಿವೇಶನಗಳ ಕ್ರಯಪತ್ರಗಳನ್ನು ರದ್ದುಗೊಳಿಸುವ ಮೂಲಕ ನಾನು ಪರಿಹಾರದ ನಿವೇಶನಗಳನ್ನು ಒಪ್ಪಿಸಲು ಮತ್ತು ಹಿಂತಿರುಗಿಸಲು ಬಯಸುತ್ತೇನೆ. ನಿವೇಶನಗಳ ಸ್ವಾಧೀನವನ್ನು ಸಹ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಮರಳಿ ಹಸ್ತಾಂತರಿಸುತ್ತಿದ್ದೇನೆ. ದಯವಿಟ್ಟು ಈ ನಿಟ್ಟಿನಲ್ಲಿ ಆದಷ್ಟು ಬೇಗ ಅಗತ್ಯ ಕ್ರಮಗಳನ್ನು ಕೈಗೊಳ್ಳಿ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ
Parvathi
(ಶ್ರೀಮತಿ. ಪಾರ್ವತಿ)

ಮುಡಾ ಆಯುಕ್ತರಿಗೆ ಪಾರ್ವತಿಯವರು ಬರೆದ ಪತ್ರ

ದ್ವೇಷ ಸಾಧನೆಗಾಗಿ ರಾಜಕೀಯ ಕುಟುಂಬದ ಹೆಣ್ಣು ಮಕ್ಕಳ ಘನತೆ, ಗೌರವಗಳಿಗೆ ಹಾನಿ ಮಾಡಬೇಡಿ: ರಾಜಕೀಯ ನಾಯಕರು, ಮಾಧ್ಯಮಗಳಲ್ಲಿ ಶ್ರೀಮತಿ ಪಾರ್ವತಿ ಮನವಿ

ನನ್ನ ಪತಿಯಾಗಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ 40 ವರ್ಷದ ಸುದೀರ್ಘ ರಾಜಕಾರಣದಲ್ಲಿ ಯಾವುದೇ ಸಣ್ಣ ಕಳಂಕವೂ ಅಂಟಿಕೊಳ್ಳದಂತಹ ನೈತಿಕತೆಯನ್ನು ವ್ರತದಂತೆ ಪಾಲಿಸಿಕೊಂಡು ಬಂದವರು.

ರಾಜಕೀಯವೂ ಸೇರಿದಂತೆ ಸಾರ್ವಜನಿಕ ಜೀವನದಲ್ಲಿ ಕಾಣಿಸಿಕೊಂಡು ಅವರಿಗೆ ಮುಜುಗರ ಉಂಟು ಮಾಡಬಾರದು ಎಂಬ ನಿರ್ಧಾರಕ್ಕೆ ಬದ್ಧಳಾಗಿ ಬದುಕಿದವಳು ನಾನು. ನಾನೆಂದೂ ಮನೆ, ಆಸ್ತಿ, ಚಿನ್ನ, ಸಂಪತ್ತನ್ನು ಬಯಸಿದವಳಲ್ಲ. ಯಾವುದೇ ಕಾರಣಕ್ಕೂ ನನ್ನಿಂದ ಅವರ ರಾಜಕೀಯ ಜೀವನಕ್ಕೆ ಒಂದು ಸಣ್ಣ ಹನಿಯಷ್ಟೂ ಕಳಂಕ ತಟ್ಟಬಾರದೆಂದು ಎಚ್ಚರಿಕೆಯಿಂದ ನಡೆದುಕೊಂಡವಳು.

ನನ್ನ ಪತಿಗೆ ರಾಜ್ಯದ ಜನತೆ ಹರಿಸುತ್ತಾ ಬಂದ ಪ್ರೀತಿ–ಅಭಿಮಾನಗಳನ್ನು ದೂರದಿಂದಲೇ ಕಂಡು ಸಂತೋಷ ಮತ್ತು ಹೆಮ್ಮೆ ಪಟ್ಟವಳು.

ಹೀಗಿದ್ದರೂ ಮೈಸೂರಿನ ಮುಡಾ ನಿವೇಶನಕ್ಕೆ ಸಂಬಂಧಿಸಿದಂತೆ ಕೇಳಿಬಂದ ಆರೋಪಗಳಿಂದ ನಾನು ಘಾಸಿಗೊಂಡಿದ್ದೇನೆ. ನನ್ನ ಸ್ವಂತ ಸೋದರ ಅರಿಶಿನ–ಕುಂಕುಮದ ಭಾಗವಾಗಿ ಕೊಟ್ಟ ಜಮೀನಿನ ಬಾಬ್ತು ಪಡೆದ ನಿವೇಶನಗಳು ಇಷ್ಟೊಂದು ರಾದ್ಧಾಂತವಾಗುತ್ತದೆ. ಇದರಿಂದ ನನ್ನ ಪತಿಯವರು ಅನ್ಯಾಯವಾಗಿ ಆರೋಪಗಳನ್ನು ಎದುರಿಸುವಂತಾಗಬಹುದು ಎನ್ನುವುದನ್ನು ನಾನು ಊಹಿಸಿದವಳೂ ಅಲ್ಲ.

ನನಗೆ ಈ ನಿವೇಶನ, ಮನೆ, ಆಸ್ತಿ, ಸಂಪತ್ತು ಯಾವುದೂ ಕೂಡ ನನ್ನ ಪತಿಯ ಗೌರವ, ಘನತೆ, ಮರ್ಯಾದೆ ಮತ್ತು ಅವರ ನೆಮ್ಮದಿಗಿಂತ ದೊಡ್ಡದಲ್ಲ. ಇಷ್ಟು ವರ್ಷಗಳ ಕಾಲ ಅಧಿಕಾರದಲ್ಲಿದ್ದ ಅವರಿಂದ ಏನನ್ನೂ ನನಗಾಗಲೀ, ನನ್ನ ಕುಟುಂಬಕ್ಕಾಗಲೀ ಬಯಸದೇ ಇದ್ದ ನನಗೆ ಈ ನಿವೇಶನಗಳು ತೃಣಕ್ಕೆ ಸಮ. ಈ ಹಿನ್ನೆಲೆಯಲ್ಲಿ ವಿವಾದಕ್ಕೆ ಕಾರಣವಾಗಿರುವ ಮುಡಾದ 14 ನಿವೇಶನಗಳನ್ನು ವಾಪಸ್ ಮಾಡಲು ನಿರ್ಧರಿಸಿದ್ದೇನೆ.

ಈ ಬಗ್ಗೆ ನನ್ನ ಪತಿಯವರ ಅಭಿಪ್ರಾಯ ಏನಿದೆ ಎನ್ನುವುದು ನನಗೆ ತಿಳಿದಿಲ್ಲ. ನನ್ನ ಮಗನ ಬಳಿಯಾಗಲಿ, ನನ್ನ ಕುಟುಂಬದ ಇತರ ಸದಸ್ಯರ ಬಳಿಯಾಗಲಿ ಇದರ ಬಗ್ಗೆ ನಾನು ಚರ್ಚಿಸಿಲ್ಲ. ಇದು ನಾನು ನನ್ನ ಆತ್ಮ ಸಾಕ್ಷಿಯ ಕರೆಗೆ ಓಗೊಟ್ಟು ಪ್ರಜ್ಞಾಪೂರ್ವಕವಾಗಿ ಕೈಗೊಂಡಿರುವ ತೀರ್ಮಾನ.

ಈ ಹಂತದಲ್ಲಿ ಇಂತಹ ನಿರ್ಧಾರಕ್ಕೆ ಏಕೆ ಬಂದಿರಿ? ಎಂದು ಯಾರಾದರೂ ಕೇಳಬಹುದು. ಆರೋಪ ಕೇಳಿಬಂದ ದಿನವೇ ನಾನು ಈ ನಿರ್ಧಾರ ಮಾಡಿದ್ದೆ. ಆದರೆ, ಈ ಮುಡಾ ನಿವೇಶನ ಹಂಚಿಕೆಯ ಆರೋಪವನ್ನು ರಾಜಕೀಯ ದುರುದ್ದೇಶದಿಂದ ಮಾಡಲಾಗಿದ್ದು, ಈ ಅನ್ಯಾಯದ ವಿರುದ್ಧ ಹೋರಾಡಬೇಕು. ಅವರ ಸಂಚಿಗೆ ನಾವು ಬಲಿಯಾಗಬಾರದು ಎಂದು ಕೆಲವು ಹಿತೈಷಿಗಳು ಹೇಳಿದ ಕಾರಣಕ್ಕೆ ನಿವೇಶನ ವಾಪಸು ಮಾಡಬೇಕೆಂಬ ನಿರ್ಧಾರವನ್ನು ಕೈಬಿಟ್ಟಿದ್ದೆ.

ನನ್ನ ಈ ನಿರ್ಧಾರ ಅಚಲವಾಗಿದ್ದು, ಈ ನಿವೇಶನಗಳನ್ನು ವಾಪಸು ನೀಡುವುದರ ಜೊತೆಗೆ ಮುಡಾಕ್ಕೆ ಸಂಬಂಧಿಸಿದ ಎಲ್ಲಾ ಆರೋಪಗಳ ಬಗ್ಗೆ ಸಮಗ್ರ ತನಿಖೆ ಮಾಡಬೇಕೆಂದು ಆಗ್ರಹಿಸುತ್ತೇನೆ.

ಕೊನೆಯದಾಗಿ, ಎಲ್ಲಾ ರಾಜಕೀಯ ಪಕ್ಷದ ನಾಯಕರು ಮತ್ತು ಮಾಧ್ಯಮ ಕ್ಷೇತ್ರದ ಬಂಧುಗಳಲ್ಲಿ ನನ್ನ ವಿನಮ್ರ ವಿನಂತಿ.

ದಯವಿಟ್ಟು ರಾಜಕೀಯ ಕ್ಷೇತ್ರದಿಂದ ದೂರವಿದ್ದು, ತಮ್ಮ ಪಾಡಿಗೆ ತಾವಿರುವ ರಾಜಕೀಯ ಕುಟುಂಬದ ಹೆಣ್ಣು ಮಕ್ಕಳನ್ನು ರಾಜಕೀಯ ದ್ವೇಷ ಸಾಧನೆಗಾಗಿ ವಿವಾದದ ಕಣಕ್ಕೆ ಎಳೆದು ತಂದು ಅವರ ಘನತೆ, ಗೌರವಗಳಿಗೆ ಹಾನಿ ಮಾಡಬೇಡಿ. –ಶ್ರೀಮತಿ ಪಾರ್ವತಿ

“ನನ್ನ ಹೋರಾಟಕ್ಕೆ ಮೊದಲ ಜಯ ದೊರೆತಿದೆ. ಮುಖ್ಯಮಂತ್ರಿಗಳ ಪತ್ನಿ ನಿವೇಶನ ವಾಪಸ್ ಮಾಡುವುದಾಗಿ ಪತ್ರ ಬರೆಯುವ ಮೂಲಕ ತಪ್ಪನ್ನು ಒಪ್ಪಿಕೊಂಡಂತಾಗಿದೆ. ನ್ಯಾಯಾಲಯವು ಅವರ ಈ ನಿರ್ಧಾರವನ್ನೂ ಪರಿಗಣಿಸುತ್ತದೆ. ತಪ್ಪಿತಸ್ಥರಿಗೆ ಶಿಕ್ಷೆಯಂತೂ ಆಗುತ್ತದೆ. ನ್ಯಾಯಾಲಯ ಮನಸ್ಸು ಮಾಡಿದರೆ ಶಿಕ್ಷೆ ಪ್ರಮಾಣ ಕಡಿಮೆಯಾಗಬಹುದು. ನನ್ನ ಉದ್ದೇಶವು ಅಕ್ರಮವಾಗಿ ವಿತರಣೆಯಾಗಿರುವ ನಿವೇಶನಗಳು ಮುಡಾಗೆ ವಾಪಸ್ ಬರಬೇಕು ಎಂಬುದೇ ಆಗಿದೆ. 2015ರಿಂದ 50:50 ಅನುಪಾತದಡಿ ಅಕ್ರಮವಾಗಿ ವಿತರಣೆಯಾಗಿರುವ ಎಲ್ಲಾ ನಿವೇಶನಗಳು ಮುಡಾಗೆ ವಾಪಸ್ ಬರಬೇಕು ಎಂಬುದು ನನ್ನ ಗುರಿಯಾಗಿದ್ದು, ಆ ದಿಕ್ಕಿನಲ್ಲಿ ಕಾನೂನು ಹೋರಾಟ ಮುಂದುವರೆಸುತ್ತೇನೆ. – ಸ್ನೇಹಮಯಿ ಕೃಷ್ಣ, ಸಾಮಾಜಿಕ ಹೋರಾಟಗಾರ.



ಪತ್ನಿಯ ನಿರ್ಧಾರವನ್ನು ನಾನು ಗೌರವಿಸುತ್ತೇನೆ...


“ಮೈಸೂರಿನ ಮುಡಾ ಭೂಸ್ವಾಧೀನ ನಡೆಸದೆ ವಶಕ್ಕೆ ಪಡೆದಿದ್ದ ಜಮೀನಿಗೆ ಪರಿಹಾರ ರೂಪದಲ್ಲಿ ನೀಡಿದ್ದ ನಿವೇಶನಗಳನ್ನು ನನ್ನ ಪತ್ನಿ ಪಾರ್ವತಿ ಹಿಂತಿರುಗಿಸಿದ್ದಾರೆ. ನನ್ನ ವಿರುದ್ಧ ರಾಜಕೀಯ ದ್ವೇಷ ಸಾಧನೆಗಾಗಿ ವಿರೋಧ ಪಕ್ಷಗಳು ಸುಳ್ಳು ದೂರನ್ನು ಸೃಷ್ಟಿಸಿ, ನನ್ನ ಕುಟುಂಬವನ್ನು ವಿವಾದಕ್ಕೆ ಎಳೆದು ತಂದಿರುವುದು ರಾಜ್ಯದ ಜನತೆಗೂ ತಿಳಿದಿದೆ. ಈ ಅನ್ಯಾಯಕ್ಕೆ ತಲೆಬಾಗದೆ ಹೋರಾಟ ಮಾಡಬೇಕೆಂಬುದು ನನ್ನ ನಿಲುವಾಗಿತ್ತು. ಆದರೆ ನನ್ನ ವಿರುದ್ಧ ನಡೆಯುತ್ತಿರುವ ರಾಜಕೀಯ ಷಡ್ಯಂತ್ರದಿಂದ ನೊಂದಿರುವ ನನ್ನ ಪತ್ನಿ, ಈ ನಿವೇಶನಗಳನ್ನು ಹಿಂತಿರುಗಿಸುವ ನಿರ್ಧಾರ ಕೈಗೊಂಡು, ನನಗೂ ಆಶ್ಚರ್ಯ ಉಂಟು ಮಾಡಿದ್ದಾರೆ. ನಾಲ್ಕು ದಶಕಗಳ ಸುದೀರ್ಘ ರಾಜಕಾರಣದಲ್ಲಿ ಎಂದೂ ಕೂಡ ಮಧ್ಯ ಪ್ರವೇಶಿಸದೆ ಕುಟುಂಬಕ್ಕಷ್ಟೇ ಸೀಮಿತವಾಗಿದ್ದ ನನ್ನ ಪತ್ನಿ ನನ್ನ ವಿರುದ್ಧದ ದ್ವೇಷದ ರಾಜಕಾರಣಕ್ಕೆ ಬಲಿಯಾಗಿ, ಮಾನಸಿಕವಾಗಿ ಹಿಂಸೆ ಅನುಭವಿಸುವಂತಾಗಿರುವುದಕ್ಕೆ ನನಗೆ ವಿಷಾದವಿದೆ. ಹೀಗಿದ್ದರೂ ನಿವೇಶನಗಳನ್ನು ಹಿಂತಿರುಗಿಸಿದ ನನ್ನ ಪತ್ನಿಯ ನಿರ್ಧಾರವನ್ನು ನಾನು ಗೌರವಿಸುತ್ತೇನೆ.

ಮುಡಾ ದ್ವೇಷ ರಾಜಕಾರಣ
ಸತ್ಯಮೇವ ಜಯತೆ
ಎಕ್ಸ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪೋಸ್ಟ್



ನಾನು ಅಂದು ಹೇಳಿದಂತೆ ಮಾಡಿದ್ದರೆ ಗೌರವವಿತ್ತು...

“ಈ ಪ್ರಕರಣ ಆರಂಭವಾದ ಮೊದಲ ದಿನವೇ ಮುಡಾ ಮುಂದೆ ಪತ್ರಿಕಾಗೋಷ್ಠಿ ನಡೆಸಿದ ನಾನು ಸಿದ್ದರಾಮಯ್ಯನವರು ಪತ್ನಿ ಹೆಸರಿನಲ್ಲಿ ಪಡೆದಿರುವ 14 ನಿವೇಶನಗಳನ್ನು ವಾಪಸ್ ಮಾಡಿ, ಸಮಗ್ರ ತನಿಖೆಗೆ ಆದೇಶಿಸಬೇಕು ಎಂದು ಸಲಹೆ ನೀಡಿದ್ದೆ. ಆದರೆ ಯಾರನ್ನೋ ರಕ್ಷಿಸುವ ಸಲುವಾಗಿ ಸಿದ್ದರಾಮಯ್ಯನವರು ಸಿಕ್ಕಿಹಾಕಿಕೊಂಡಿದ್ದಾರೆ. ಈಗ ನಿವೇಶನಗಳನ್ನು ವಾಪಸ್ ಕೊಟ್ಟರೆ ಅವರು ತಪ್ಪು ಮಾಡಿರುವುದನ್ನು ಒಪ್ಪಿಕೊಂಡಂತಾಗುತ್ತದೆ. ನ್ಯಾಯಾಲಯದಲ್ಲಿ ಶಿಕ್ಷೆಗೂ ಗುರಿಯಾಗಬೇಕಾಗುತ್ತದೆ ಎಂಬುದು ಸ್ವತಃ ವಕೀಲರಾಗಿರುವ ಸಿದ್ದರಾಮಯ್ಯನವರಿಗೆ ಗೊತ್ತಿರಬೇಕಿತ್ತು. ಆದರೆ ಮುಂದೆ ಆಗಬಹುದಾದ ಅನಾಹುತಗಳಿಂದ ತಪ್ಪಿಸಿಕೊಳ್ಳಬಹುದು ಎಂಬ ಉದ್ದೇಶದಿಂದ ಅವರು ಪತ್ನಿಯಿಂದ ಪತ್ರ ಬರೆಸಿದ್ದಾರೆ. ಇದರಿಂದಾಗಿ ಸಿದ್ದರಾಮಯ್ಯ ಅನಾಹುತಗಳಿಂದ ತಪ್ಪಿಸಿಕೊಳ್ಳಲು ಸಾಧ್ಯವೇ ಇಲ್ಲ. ನಾನು ಹೇಳಿದಾಗಲೇ ನಿವೇಶನ ವಾಪಸ್ ಮಾಡಿ ತನಿಖೆಗೆ ಆದೇಶಿಸಿದ್ದರೆ ಮುಡಾದಿಂದ ಅಕ್ರಮವಾಗಿ ನಿವೇಶನಗಳನ್ನು ಪಡೆದಿರುವ ಹಲವಾರು ತಿಮಿಂಗಿಲಗಳು ಸಿಕ್ಕಿ ಹಾಕಿಕೊಳ್ಳುತ್ತಿದ್ದವು. ಸಿದ್ದರಾಮಯ್ಯನವರಿಗೂ ಗೌರವ ದೊರೆಯುತ್ತಿತ್ತು. – ಎ.ಹೆಚ್.ವಿಶ್ವನಾಥ್, ವಿಧಾನ ಪರಿಷತ್ ಸದಸ್ಯರು.



ನಿಯಮ ಉಲ್ಲಂಘಿಸಿ ವರುಣ, ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿ 387 ಕೋಟಿ ಕಾಮಗಾರಿ


ಸಿಎಂ ಸಿದ್ದರಾಮಯ್ಯ ಇಡಿ ಇಕ್ಕಟ್ಟಿಗೆ

ಬೆಂಗಳೂರು, ಸೆ.30– ಪತ್ನಿ ಹೆಸರಿನಲ್ಲಿ ಮುಡಾದಿಂದ 50:50 ಅನುಪಾತದಡಿ 14 ನಿವೇಶನ ಪಡೆದಿರುವ ಪ್ರಕರಣದಲ್ಲಿ ಈಗಾಗಲೇ ಲೋಕಾಯುಕ್ತ ತನಿಖೆ ಎದುರಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ.



ವರುಣ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರಗಳಲ್ಲಿ ಮುಡಾದಿಂದ ಅಕ್ರಮವಾಗಿ 387 ರೂ. ಕಾಮಗಾರಿ ನಡೆಸುವ ಮೂಲಕ ಅಕ್ರಮ ಹಣ ವರ್ಗಾವಣೆಯಾಗಿದೆ ಎಂದು ಮುಡಾದ ನಿವೃತ್ತ ನಗರ ಯೋಜನಾ ಸಹಾಯಕ ನಿರ್ದೇಶಕ, ಮೈಸೂರಿನ ಬೃಂದಾವನ ಬಡಾವಣೆ ನಿವಾಸಿ ಪಿ.ಎಸ್.ನಟರಾಜ್ ಅವರು ಆ.27ರಂದು ರಾಜ್ಯಪಾಲರಿಗೆ ನೀಡಿದ್ದ ದೂರನ್ನು ಆಧರಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒಂದನೇ ಆರೋಪಿಯನ್ನಾಗಿಸಿ ಇಂದು ಜಾರಿ ನಿರ್ದೇಶನಾಲಯ (ಇಡಿ) ಸಿದ್ದರಾಮಯ್ಯ ವಿರುದ್ಧ ಪಿಎಂಎಲ್‌ಎ (ಪ್ರಿವೆನ್ಷನ್ ಆಫ್ ಮನಿಲ್ಯಾಂಡರಿಂಗ್ ಆಕ್ಟ್) ಅಡಿ ಇಸಿಐಆರ್ (ಎನ್‌ಫೋರ್ಸ್‌ಮೆಂಟ್ ಕೇಸ್ ಇನ್ಫರ್ಮೇಷನ್ ರಿಪೋರ್ಟ್) ದಾಖಲಿಸಿದೆ. ಇಡಿ ದಾಖಲಿಸಿರುವ ಪಿಎಂಎಲ್‌ಎ ಎಂಬುದು ಪೊಲೀಸ್ ಠಾಣೆಗಳಲ್ಲಿ ದಾಖಲಾಗುವ ಎಫ್‌ಐಆರ್‌ಗೆ ಸಮನಾಂತರವಾಗಿದ್ದು, ಪಿಎಂಎಲ್‌ಎ ದಾಖಲಾದ ನಂತರ ತನಿಖೆ ನಡೆಸಲು ಇಡಿ ಅಧಿಕಾರಿಗಳಿಗೆ ವಿಶೇಷ ಅಧಿಕಾರ ದೊರೆಯುತ್ತದೆ. ಈ ಪ್ರಕರಣದಲ್ಲಿ ಇಡಿ ಅಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇತರ ಆರೋಪಿಗಳನ್ನು ನೋಟೀಸ್ ನೀಡಿ ವಿಚಾರಣೆಗೆ ಕರೆಯಬಹುದಾಗಿದೆ. ಅಗತ್ಯಬಿದ್ದರೆ ಬಂಧಿಸಲೂ ಬಹುದು ಹಾಗೂ ಆಸ್ತಿ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದೆ. ತನಿಖೆಗಾಗಿ ಆರೋಪಿಗಳ ಮನೆ ಹಾಗೂ ಕಚೇರಿಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಬಹುದು. ಅಧಿಕಾರಿಗಳಿಗೆ ಖಚಿತ ಮಾಹಿತಿ ಇದ್ದಲ್ಲಿ ಆರೋಪಿಗಳ ■ 2ನೇ ಪುಟಕ್ಕೆ

ನಾಳೆ ಗಾಂಧಿ ಜಯಂತಿ: ಪ್ರಾರ್ಥನಾ ಸಭೆ



ಮೈಸೂರು.ಸೆ.30– ಜಿಲ್ಲಾಡಳಿತ, ಮೈಸೂರು ಮಹಾನಗರಪಾಲಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದೊಂದಿಗೆ ಅ.2 ರಂದು ಬೆಳಗ್ಗೆ 8.30 ಗಂಟೆಗೆ ಶ್ರೀ ರಂಗಾಚಾರ್ಲು ಸ್ಮಾರಕ ಪುರಭವನದಲ್ಲಿ ಗಾಂಧಿ ಜಯಂತಿ ಪ್ರಯುಕ್ತ ಪ್ರಾರ್ಥನಾ ಸಭೆ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಉದ್ಘಾಟಿಸಲಿದ್ದು, ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸುವರು.

ರೇಷ್ಮೆ ಸಚಿವ ಕೆ.ವೆಂಕಟೇಶ್, ಶಾಸಕ ಅನಿಲ್‌ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಯದುವೀರ್ ಒಡೆಯರ್ ಹಾಗೂ ಸುನಿಲ್ ಬೋಸ್ ಆಗಮಿಸಲಿದ್ದಾರೆ. ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಡಿ.ರವಿಶಂಕರ್, ಜಿ.ಡಿ.ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ಟಿ.ಎಸ್.ಶ್ರೀವತ್ಸ ಹಾಗೂ ವಿಧಾನಪರಿಷತ್ ಸದಸ್ಯರಾದ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ. ಮಾದೇಗೌಡ, ಡಾ.ಯತೀಂದ್ರ, ಕೆ.ವಿವೇಕಾನಂದ ಸಮಾರಂಭದ ಅತಿಥಿಗಳಾಗಿ ಭಾಗವಹಿಸುವರು. ಮುಡಾ ಅಧ್ಯಕ್ಷ ಕೆ.ಮರೀಗೌಡ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರಾಧಿಕಾರದ ಅಧ್ಯಕ್ಷ ಮರಿಸ್ವಾಮಿ, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷೆ ಡಾ.ಮಾನಸ ಅತಿಥಿಗಳಾಗಿ ಭಾಗವಹಿಸುವರು.



ಶ್ರೀಕಾಂತ್ ಅವಿರೋಧ ಆಯ್ಕೆ


ಮೈಸೂರು–ಚಾಮರಾಜನಗರ ಜಿಲ್ಲಾ ಮದ್ಯ ವರ್ತಕರ ಸಂಘದ ಆಡಳಿತ ಮಂಡಳಿ ಸದಸ್ಯ ಸ್ಥಾನಕ್ಕೆ ಸಾಮಾನ್ಯ ವರ್ಗದಿಂದ ಅವಿರೋಧವಾಗಿ ಆಯ್ಕೆಯಾದ ಎಸ್.ಶ್ರೀಕಾಂತ್ ಅವರಿಗೆ ಚುನಾವಣಾಧಿಕಾರಿ ಕುಮಾರಸ್ವಾಮಿ ಪ್ರಮಾಣಪತ್ರ ನೀಡಿದರು. ಇದೇ ವೇಳೆ ಕೆ.ಪಿ ಪರಮೇಶ್, ಕೆ.ಎಸ್ ಮುರುಳಿ, ಆರ್.ಲಕ್ಷ್ಮಣ್, ಎಂ.ಶ್ರೀನಿವಾಸ್ ಹಲವರು ಉಪಸ್ಥಿತರಿದ್ದರು.

ಭಗತ್‌ಸಿಂಗ್ ಜಯಂತಿ



ಸ್ವಾತಂತ್ರ್ಯ ಹೋರಾಟಗಾರ ಭಗತ್ ಸಿಂಗ್ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪಡುವಾರಹಳ್ಳಿಯಲ್ಲಿ ಪುಷ್ಪನಮನ ಸಲ್ಲಿಸಲಾಯಿತು. ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ಎಂ.ಭೈರಪ್ಪ, ಉಪಾಧ್ಯಕ್ಷ ಸಿ.ಸಂತೋಷ್, ನಿರ್ದೇಶಕರಾದ ಎಸ್.ಕೃಷ್ಣಕುಮಾರ್, ರಾಘವ್ ಗೌಡ, ಪಾಲಿಕೆ ಮಾಜಿ ಸದಸ್ಯ ಎಂ.ಚಿಕ್ಕವೆಂಕಟು, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಎಸ್‌ಟಿ ವಿಭಾಗದ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ, ಕೇಬಲ್ ವೆಂಕಟಗಿರಿಗೌಡ (ಕಿಟ್ಟಿ), ಗಿರೀಶ್ ಮತ್ತಿತರರು ಉಪಸ್ಥಿತರಿದ್ದರು.

ಎಸ್‌ಡಿಎಂಸಿ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಮೈಸೂರು ತಾಲೂಕು ಸಿದ್ದರಾಮನಹುಂಡಿಯ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಎಸ್‌ಡಿಎಂಸಿ ಅಧ್ಯಕ್ಷರಾಗಿ ಹೊಸಳ್ಳಿ ಬಲರಾಮ್, ಉಪಾಧ್ಯಕ್ಷರಾಗಿ ಶ್ರೀನಿವಾಸ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ವೇಳೆ ಸದಸ್ಯ ಬಸವರಾಜು, ಡೈರಿ ಅಧ್ಯಕ್ಷ ಸಿದ್ದರಾಮ, ಗ್ರಾಪಂ ಅಧ್ಯಕ್ಷ ಚಂದ್ರಶೇಖರ್, ಮುಖಂಡರಾದ ಉದಯರಾಜ್, ಕುಮಾರ, ಮುಖ್ಯೋಪಾಧ್ಯಾಯ ಮಾದೇಶ್, ಶಿಕ್ಷಕರು ಇದ್ದರು.

ಪದಾಧಿಕಾರಿಗಳ ಆಯ್ಕೆ



ಪೇರೆಂಟ್ಸ್ ಅಸೋಸಿಯೇಷನ್ ಆಫ್ ಡೆಫ್ ಚಿಲ್ಡ್ರನ್ ಸಂಸ್ಥೆಯ 41ನೇ ಸರ್ವ ಸದಸ್ಯರ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಲೋಹಿಯಾ–ಅಧ್ಯಕ್ಷ, ಗಿರೀಶ್ ಕೋಣಮನೆ–ಉಪಾಧ್ಯಕ್ಷ, ಭಾಸ್ಕರ್‌ಶೆಟ್ಟಿ–ಕಾರ್ಯದರ್ಶಿ, ಓಂಪ್ರಕಾಶ್–ಖಜಾಂಚಿ, ಕಾರ್ಯಕಾರಿ ಸಮಿತಿ ಸದಸ್ಯರು: ದಿನಕರ್ ಶೆಟ್ಟಿ, ರತ್ನ ಶೆಟ್ಟಿ, ಸಿದ್ದೇಗೌಡ, ಮಲ್ಲಿಕಾರ್ಜುನ, ದೀಪಾಭಟ್, ಹರಿಯಪ್ಪ ನಾಯಕ್, ಪ್ರಭಾಕರಯ್ಯ, ರಾಯಣ್ಣಗೌಡರ್ ಮತ್ತು ಜಲಜ ಗೋವಿಂದಪ್ಪ.

ಒಂದನೇ ಪುಟದಿಂದ

ಇಡಿ ಇಕ್ಕಟ್ಟಿಗೆ

ಸಂಬಂಧಿಕರು ಹಾಗೂ ಸ್ನೇಹಿತರ ಮನೆ ಹಾಗೂ ಕಚೇರಿಗಳ ಮೇಲೂ ಕೂಡ ದಾಳಿ ನಡೆಸಿ, ಪರಿಶೀಲಿಸುವ ಅಧಿಕಾರ ಇಡಿ ಅಧಿಕಾರಿಗಳಿಗಿದೆ.

ಹಿನ್ನೆಲೆ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಕರ್ನಾಟಕ ನಗರ ಅಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 15 ಮತ್ತು 25ರಂತೆ ತನ್ನ ವ್ಯಾಪ್ತಿಗೆ ಒಳಪಟ್ಟಿರುವ ಪ್ರದೇಶದಲ್ಲಿ ಮಾತ್ರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬಹುದಾಗಿದೆ. ಉದಾಹರಣೆಗೆ ಮೈಸೂರು ನಗರದಲ್ಲೇ ಮುಡಾ ವ್ಯಾಪ್ತಿಗೆ ಒಳಪಡದೆ ನಗರಪಾಲಿಕೆ ವ್ಯಾಪ್ತಿಗೆ ಸೇರಿರುವ ಪ್ರದೇಶದಲ್ಲಿ ಮುಡಾ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದು ನಿಯಮ ಉಲ್ಲಂಘನೆಯಾಗುತ್ತದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೌಖಿಕ ಆದೇಶದಂತೆ 2023ರಲ್ಲಿ ಅವರ ಸ್ವಕ್ಷೇತ್ರವಾದ ವರುಣ ಹಾಗೂ ಕಾಂಗ್ರೆಸ್ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ಪ್ರತಿನಿಧಿಸುತ್ತಿರುವ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ 387 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯವನ್ನು ಮುಡಾ ಕೈಗೊಂಡಿತ್ತು. ವರುಣ ಕ್ಷೇತ್ರಕ್ಕೆ ಸೇರಿದ 24 ಗ್ರಾಮಗಳಲ್ಲಿ ಹಾಗೂ ಶ್ರೀರಂಗಪಟ್ಟಣ ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಮುಖ್ಯಮಂತ್ರಿಗಳ ಮೌಖಿಕ ಸೂಚನೆ ಮೇರೆಗೆ 2023ರ ಸೆ.6 ರಂದು ನಡೆದಿದ್ದ ಮುಡಾ ಸಾಮಾನ್ಯ ಸಭೆಯಲ್ಲಿ ನಿರ್ಣಯ ತೆಗೆದುಕೊಂಡು ಅನುಮೋದನೆಗಾಗಿ ಸರ್ಕಾರಕ್ಕೆ ಕಳುಹಿಸಿದ ನಂತರ ಕಾಮಗಾರಿಗಳನ್ನು ನಡೆಸಲಾಗಿತ್ತು. ಈ ಸಂಬಂಧ ಮುಡಾ ನಿವೃತ್ತ ನಗರ ಯೋಜನಾ ಸಹಾಯಕ ನಿರ್ದೇಶಕ ಪಿ.ಎಸ್.ನಟರಾಜು ಅವರು ಆ.27ರಂದು ರಾಜ್ಯಪಾಲರಿಗೆ ದೂರು ಸಲ್ಲಿಸಿ, ಸಾರ್ವಜನಿಕ ಹಣವನ್ನು ದುರುಪಯೋಗ ಮಾಡಿರುವ ಅಧಿಕಾರಿಗಳನ್ನು ಅಮಾನತಿನಲ್ಲಿರಿಸಿ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಿ ಮುಡಾ ದಿವಾಳಿಯಾಗುವುದನ್ನು ತಪ್ಪಿಸಬೇಕು ಎಂದು ಕೋರಿದ್ದರು.

ಈ ದೂರಿನ ಆಧಾರದ ಮೇರೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಸೆ.5ರಂದು ರಾಜ್ಯ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ರವಾನಿಸಿ ಈ ಪ್ರಕರಣವು ಗಂಭೀರ ಸ್ವರೂಪದ್ದಾಗಿದ್ದು, ವರುಣ ಮತ್ತು ಶ್ರೀರಂಗಪಟ್ಟಣ ಕ್ಷೇತ್ರಗಳಲ್ಲಿ ನಿಯಮ ಉಲ್ಲಂಘಿಸಿ ಮುಡಾ ನಡೆಸಿರುವ ಕಾಮಗಾರಿಗಳ ಬಗ್ಗೆ ಅಗತ್ಯ ದಾಖಲೆಗಳೊಂದಿಗೆ ಸಮಗ್ರ ವರದಿ ಸಲ್ಲಿಸುವಂತೆ ಸೂಚಿಸಿದ್ದರು. ಇದೀಗ ಇದೇ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಇಡಿ ಇಸಿಐಆರ್ ದಾಖಲಿಸಿದೆ.

ಅ.3ರಿಂದ ರಂಗಾಯಣದಲ್ಲಿ ನವರಾತ್ರಿ ಜನಪದ ರಂಗ ಉತ್ಸವ



ನವರಾತ್ರಿ ರಂಗ ಉತ್ಸವದ ಪೋಸ್ಟರ್ ಅನ್ನು ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು ಬಿಡುಗಡೆ ಮಾಡಿದರು.

ನವರಾತ್ರಿ ರಂಗ ಉತ್ಸವದ ಅಂಗವಾಗಿ ರಂಗಾಯಣದ ವನರಂಗದಲ್ಲಿ ಪ್ರತಿದಿನ ಸಂಜೆ 5.30ಕ್ಕೆ ಜಾನಪದ ನೃತ್ಯ ಕಾರ್ಯಕ್ರಮ ಜರುಗಲಿದೆ. ಉತ್ತರಪ್ರದೇಶದ ಹೋಲಿನೃತ್ಯ, ಮಹಾರಾಷ್ಟ್ರದ ಲಾವಣಿ ನೃತ್ಯ, ತ್ರಿಪುರದ ಮಮಿತ ನೃತ್ಯ, ಮಧ್ಯಪ್ರದೇಶದ ಬದಾಯಿ ನೃತ್ಯ, ಒಡಿಸ್ಸಾದ ಬದಾನ್ಸ್ನೃತ್ಯ, ಕೇರಳದ ಸಿಂಗಾರಿ ಮೇಳಂ, ತಮಿಳುನಾಡಿನ ಕರಗಂ ನೃತ್ಯ, ರಾಜಸ್ಥಾನದ ಚಕ್ರಿ ನೃತ್ಯ, ಉತ್ತರ ಕಾಂಡದ ಥಡಿಯಾ ಚಾಫ್ಲಾ ಮತ್ತು ಹರಿಯಾಣದ ಫೋಮರ್ ನೃತ್ಯ ಪ್ರದರ್ಶನ ಏರ್ಪಡಿಸಲಾಗಿದೆ.

ಮೈಸೂರು,ಸೆ.30(ಎಂಟಿವೈ)– ದಸರಾ ಮಹೋತ್ಸವದ ಅಂಗವಾಗಿ ಮೈಸೂರಿನ ರಂಗಾಯಣದಲ್ಲಿ ಅ.3ರಿಂದ 11ರವರೆಗೆ ನವರಾತ್ರಿ ಜನಪದ ರಂಗ ಉತ್ಸವವನ್ನು ಆಯೋಜಿಸಿದ್ದು, ಒಂಬತ್ತು ನಾಟಕಗಳ ಪ್ರದರ್ಶನದೊಂದಿಗೆ ಹತ್ತು ಮಂದಿ ಕಲಾವಿದರನ್ನು ಸನ್ಮಾನಿಸಲಾಗುತ್ತಿದೆ ಎಂದು ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು ತಿಳಿಸಿದ್ದಾರೆ.

ಮೈಸೂರಿನ ರಂಗಾಯಣದ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಂಗಾಯಣದ ವನರಂಗದಲ್ಲಿ ಅ.3ರಂದು ಸಂಜೆ 5.30ಕ್ಕೆ ನವರಾತ್ರಿ ಜನಪದ ರಂಗ ಉತ್ಸವವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್.ತಂಗಡಗಿ ಉದ್ಘಾಟಿಸಲಿದ್ದಾರೆ. ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸುವ ಕಾರ್ಯಕ್ರಮದಲ್ಲಿ ತೊಗಲು ಗೊಂಬೆಗಳ ಪ್ರದರ್ಶನಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಡಾ.ಎಂ.ಎನ್.ಅಜಯ್ ನಾಗಭೂಷಣ್ ಚಾಲನೆ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಕೆ.ಧರಣಿದೇವಿ ಮಾಲಗತ್ತಿ, ಜಾನಪದ ವಿದ್ವಾಂಸ ಡಾ.ಪಿ.ಕೆ.ರಾಜಶೇಖರ್, ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದು, ರಂಗ ಸಮಾಜದ ಸದಸ್ಯರಾದ ಡಾ.ರಾಜಪ್ಪ ದಳವಾಯಿ, ಶಶಿಧರ್ ಭಾರಿಘಾಟ್, ಹೆಚ್.ಎಸ್. ಸುರೇಶ್‌ಬಾಬು, ಲಕ್ಷ್ಮೀ ಚಂದ್ರಶೇಖರ್, ಕೆ.ರಾಮಕೃಷ್ಣಯ್ಯ, ಮಹಾಂತೇಶ ಎಂ.ಗಜೇಂದ್ರಗಡ, ಡಿಂಗ್ರಿ ನರೇಶ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಜನಪದ ರಂಗ ಉತ್ಸವ: ರಂಗಾಯಣದ ಆವರಣದಲ್ಲಿ ಅ.3ರಿಂದ 11ರವರೆಗೆ ನಡೆಯುವ ನವರಾತ್ರಿ ರಂಗ ಉತ್ಸವ ಕಾರ್ಯಕ್ರಮ ಪ್ರತಿದಿನ ಸಂಜೆ 6.30ಕ್ಕೆ ಆರಂಭವಾಗಲಿದೆ. ಅ. 3ರಂದು ಸಂಜೆ 6.30ಕ್ಕೆ ರಂಗಾಯಣ ಆವರಣದಲ್ಲಿ ಮೈಸೂರು ಗುರುರಾಜ್ ಮತ್ತು ತಂಡದ ಸದಸ್ಯರು ಮಂಟೇಸ್ವಾಮಿ ಕಾವ್ಯ ಪ್ರಸ್ತುತಪಡಿಸಲಿದ್ದಾರೆ. ಅ.4ರಂದು ಸಂಜೆ 6.30ಕ್ಕೆ ಸಂಗಮೇಶ್ವರ ನಾಟಕ ಮಂಡಳಿಯಿಂದ ರೇಣುಕಾ ಮಹಾತ್ಮೆ, ಅ.5ರಂದು ಸಂಜೆ 6.30ಕ್ಕೆ ಶ್ರೀರಾಜಾರಾಮ ತೊಗಲುಗೊಂಬೆ ಮೇಳದಿಂದ ಮಾಯಾವಿ ಇಂದ್ರಜಿತ್, ಅ.6ರಂದು ಸಂಜೆ 6.30ಕ್ಕೆ ಸವದಿಯ ಶ್ರೀ ವೀರಭದ್ರೇಶ್ವರ ಕಲಾ ಸಂಘ ಮತ್ತು ಶ್ರೀಕೃಷ್ಣ ಪಾರಿಜಾತ ಕಂಪನಿಯಿಂದ ಶ್ರೀಕೃಷ್ಣ ಪಾರಿಜಾತ ನಾಟಕ ಪ್ರದರ್ಶನ ಇರಲಿದೆ.

ಅ.7ರಂದು ಸಂಜೆ 6.30ಕ್ಕೆ ಅಶ್ವಿನಿ ಕೊಂಡದಕುಳಿ ಮತ್ತು ತಂಡದಿಂದ ನರಕಾಸುರ ವಧೆ ಯಕ್ಷಗಾನ ಪ್ರದರ್ಶನ, ಅ.8ರಂದು ಅಮ್ಮಣಗಿಯ ಶ್ರೀ ಅಂಬಿಕಾದೇವಿ ಸಂಗ್ಯಾಬಾಳ್ಯ ಬಯಲಾಟ ಕಲಾ ಸಂಘದಿಂದ ಸಂಗ್ಯಾಬಾಳ್ಯ ನಾಟಕ, ಅ.9 ರಂದು ಕೊನೆಹಳ್ಳಿಯ ಮೂಡಲಪಾಯ ಯಕ್ಷಗಾನ ಟ್ರಸ್ಟ್‌ನಿಂದ ಕರಿಭಂಟನ ಕಾಳಗ, ಅ.10ರಂದು ಡಾ. ಲಕ್ಷ್ಮಣದಾಸ್ ಮಿತ್ರ ಮಂಡಳಿಯ ರಂಗಕೀರ್ತನ ಸಂಪದದಿಂದ ಪಾದುಕಾ ಪಟ್ಟಾಭಿಷೇಕ ಮತ್ತು ಅ.11ರಂದು ನಂಜನಗೂಡು ತಾಲೂಕು ಹಲ್ಲರೆಯ ಶ್ರೀರಾಮೇಶ್ವರ ಕೃಪಾಪೋಷಿತ ಯಕ್ಷಗಾನ ಸೂತ್ರದ ಬೊಂಬೆ ಮೇಳದಿಂದ ಸತ್ಯಹರಿಶ್ಚಂದ್ರ ಪ್ರದರ್ಶನ ಇರುತ್ತದೆ ಎಂದು ಅವರು ವಿವರಿಸಿದರು.

ಕಲಾವಿದರಿಗೆ ಸನ್ಮಾನ: ಅ.3ರಂದು ನೀಲಗಾರ ಜನಪದ ಗಾಯಕ ಡಾ.ಮೈಸೂರು ಗುರುರಾಜ್, ಅ.4ರಂದು ಹಿರಿಯ ಬಯಲಾಟ ಕಲಾವಿದ ವೀರನಗೌಡ ಮುದ್ದಟನೂರು, ಅ.5ರಂದು ತೊಗಲು ಗೊಂಬೆಯಾಟದ ದಾಕ್ಷಾಯಿಣಿ ಮತ್ತು ಪ್ರಭಾವತಿ, ಅ.6ರಂದು ಶ್ರೀಕೃಷ್ಣ ಪಾರಿಜಾತ ಹಿರಿಯ ಕಲಾವಿದ ವಿಠಲ ಗೋವಿಂದಗುರುವ, ಅ.7ರಂದು ಹಿರಿಯ ಯಕ್ಷಗಾನ ಕಲಾವಿದ ರಾಮಚಂದ್ರ ಗಣೇಶ ಹೆಗಡೆ, ಅ.8ರಂದು ಹುಕ್ಕೇರಿಯ ಸಣ್ಣಾಟದ ಕಲಾವಿದೆ ಡಾ.ಲಕ್ಷ್ಮೀಬಾಯಿ ಮಾದಾರ, ಅ.9ರಂದು ಮೂಡಲಪಾಯ ಯಕ್ಷಗಾನದ ಹಿರಿಯ ಕಲಾವಿದ ಎ.ಬಿ. ಶಂಕರಪ್ಪ, ಅ.10ರಂದು ವೃತ್ತಿರಂಗಭೂಮಿ ಹಿರಿಯ ಕಲಾವಿದೆ ಸರಸ್ವತಿ ಉರುಫ್ಪುಲೇಖಾ ಬೇಗಂ ಮತ್ತು ಅ.11 ರಂದು ಹಿರಿಯ ಕಲಾವಿದೆ ಇಂದಿರಮ್ಮ ಅವರನ್ನು ಸನ್ಮಾನಿಸಲಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕನ್ನಡ–ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ರಂಗಾಯಣ ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ನವರಾತ್ರಿ ಜನಪದ ರಂಗ ಉತ್ಸವದ ಸಂಚಾಲಕಿ ಬಿ.ಎನ್.ಶಶಿಕಲಾ ಇದ್ದರು.

ಹೆಬ್ಬಾಳ ಕೆರೆ ಶೌಚಾಲಯ ಉದ್ಘಾಟನೆ ಸಮಾರಂಭ...



ಇನ್ಫೋಸಿಸ್ ಫೌಂಡೇಷನ್ ಅಧ್ಯಕ್ಷೆ ಸುಧಾಮೂರ್ತಿ ಅವರ ನೆರವಿಂದ ನಿರ್ಮಿಸಿರುವ ಹೆಬ್ಬಾಳ ಕೆರೆ ಶೌಚಾಲಯ ಉದ್ಘಾಟಿಸಲಾಯಿತು. ನಗರಸಭೆ ಆಯುಕ್ತ ಚಂದ್ರಶೇಖರ್, ಹೆಬ್ಬಾಳ ಕೆರೆ ಹಿತರಕ್ಷಣಾ ಸಮಿತಿ ಅಧ್ಯಕ್ಷ ಆರ್.ರವಿ ಡೆಲ್ಲಿ, ಪಾಲಿಕೆ ಮಾಜಿ ಸದಸ್ಯ ಶಿವಣ್ಣ, ಇನ್‌ಫೋಸಿಸ್ ಮುಖ್ಯಸ್ಥ ಗಣೇಶ, ಅನಂತರಾಜು, ಒದ್ದಿಂಗೇಗೌಡ, ಭೈರಮೂರ್ತಿ ಪ್ರಕಾಶ, ಪ್ರೊಗೋಪಾಲ್, ಧರ್ಮೇಶ್ ಇತರರಿದ್ದರು.

ಡಾ.ಎಚ್.ಶ್ರೀಧರ್‌ಗೆ ಯಂಗ್ ಅಕಾಡೆಮಿಷಿಯನ್ ಅವಾರ್ಡ್



ಮೈಸೂರು, ಸೆ.30– ಬಿಜಾಪುರದ ಕಲಾಸ್ ರಿಸರ್ಚ್ ಅಂಡ್ ಸ್ಕಿಲ್ ಟ್ರೈನಿಂಗ್ ಆರ್ಗನೈಸೇಷನ್ ವತಿಯಿಂದ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಕ್ಷೇತ್ರದಲ್ಲಿ ಸಲ್ಲಿಸಿರುವ ಸುದೀರ್ಘ ಸೇವೆ ಮತ್ತು ಕೊಡುಗೆಯನ್ನು ಪರಿಗಣಿಸಿ ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನ ಶೈಕ್ಷಣಿಕ ಡೀನ್ ಹಾಗೂ ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಶ್ರೀಧರ್ ಎಚ್. ಅವರು ಯಂಗ್ ಅಕಾಡೆಮಿಷಿಯನ್ ಅವಾರ್ಡ್‌ಗೆ ಭಾಜನರಾಗಿದ್ದಾರೆ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಕರ್ನಾಟಕ ಸೇನಾಪಡೆಯಿಂದ ದೇವರಾಜ ಅರಸು ಜಯಂತಿ ಆಚರಣೆ



ವಿವಿಧ ಕ್ಷೇತ್ರದ ಸಾಧಕರಿಗೆ ಡಿ. ದೇವರಾಜ ಅರಸು ಸೇವಾ ರತ್ನ ಪ್ರಶಸ್ತಿ ನೀಡಿ, ಸನ್ಮಾನಿಸಲಾಯಿತು.

ಮೈಸೂರು, ಸೆ.30–ಕರ್ನಾಟಕ ಸೇನಾಪಡೆ ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮ ಅಂಗವಾಗಿ ಹಿಂದುಳಿದ ವರ್ಗಗಳ ಧೀಮಂತ ನಾಯಕ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜಯಂತಿಯನ್ನು ಮೈಸೂರಿನ ರೋಟರಿ ಶಾಲಾ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಡಿ.ದೇವರಾಜ ಅರಸು ಅವರು ಪ್ರಾತಃಸ್ಮರಣೀಯರು. ನಾಡಿನ ಪ್ರತಿಯೊಬ್ಬರು ಅವರನ್ನು ನೆನೆಯಲೇಬೇಕು. ಧ್ವನಿ ಇಲ್ಲದವರಿಗೆ ಧ್ವನಿ ಕೊಟ್ಟವರು. ಅವರ ಆಡಳಿತ ಕಾಲದಲ್ಲಿ ಹಿಂದುಳಿದವರಿಗೆ, ದೀನ ದಲಿತರಿಗೆ ಹಲವಾರು ಯೋಜನೆಗಳನ್ನು ಸರ್ಕಾರದ ವತಿಯಿಂದ ಆಯೋಜನೆ ಮಾಡಿ, ಪ್ರತಿ ಸೌಲಭ್ಯಗಳು ಪ್ರತಿಯೊಬ್ಬರಿಗೂ ತಲುಪುವಂತೆ ಮಾಡಿದವರು. ಹಿಂದೆ ಇದ್ದಂತಹ ಮಲ ಹೊರುವ ಪದ್ಧತಿಯನ್ನು ನಿರ್ಮೂಲನೆಗೊಳಿಸಿದರು. ಉಳುವವನಿಗೆ ಭೂಮಿ ಎಂದು ಹಲವಾರು ನಿರ್ಗತಿಕರಿಗೆ ಭೂಮಿ ಕೊಡಿಸಿಕೊಟ್ಟ ಮಹಾನಾಯಕ. ಇಂತಹ ಮಹನೀಯರ ಹೆಸರಿನಲ್ಲಿ ಕರ್ನಾಟಕ ಸೇನಾಪಡೆ ಸೇವಾರತ್ನ ಪ್ರಶಸ್ತಿ ನೀಡುತ್ತಿರುವುದು ಸೂಕ್ತ ಎಂದರು.

ಮೈಸೂರು ಮಹಾನಗರಪಾಲಿಕೆ ಉಪ ಆಯುಕ್ತ (ಕಂದಾಯ) ಜಿಎಸ್ ಸೋಮಶೇಖರ್, ಶೈಕ್ಷಣಿಕ ಕ್ಷೇತ್ರದ–ಪ್ರೊ.ಎನ್ ಲಕ್ಷ್ಮೀ, ಡೀನ್ (ಶೈಕ್ಷಣಿಕ), ಕರಾಮುವಿ, ಸಮಾಜಸೇವೆ ಕ್ಷೇತ್ರದ–ಎಸ್.ಬಸವೇಗೌಡ, ಮುಖ್ಯಸ್ಥರು, ಎಸ್‌ಎಂಪಿ ಕನ್ಸ್ಟ್ರಕ್ಷನ್, ಪೋಲೀಸ್ ಸೇವಾ ಕ್ಷೇತ್ರದ–ಎನ್.ಸಿ.ನಾಗೇಗೌಡ, ಆರಕ್ಷಕ ನಿರೀಕ್ಷಕರು, ಕೆ.ಆರ್. ಪೊಲೀಸ್ ಠಾಣೆ, ಉನ್ನತ ಶಿಕ್ಷಣ ಕ್ಷೇತ್ರದ–ಬಿಳಿಗಿರಿರಂಗ, ಮುಖ್ಯಸ್ಥರು, ಸ್ನಾತಕೋತ್ತರ ಸಸ್ಯಶಾಸ್ತ್ರ ವಿಭಾಗ, ಜೆಎಸ್‌ಎಸ್, ನಿರ್ವಹಣಾ ಕ್ಷೇತ್ರದ–ಡಾ.ಚಿರಂತ್, ಸಹಾಯಕ ಪ್ರಾಧ್ಯಾಪಕರು ವಿಟಿಯು ಅವರಿಗೆ ಡಿ.ದೇವರಾಜ ಅರಸು ಸೇವಾ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಡಾ ಅಧ್ಯಕ್ಷ ಸಿ.ಮರಿಸ್ವಾಮಿ ವಹಿಸಿದ್ದರು. ಪ್ರಾಸ್ತಾವಿಕ ಭಾಷಣವನ್ನು ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ ನೆರವೇರಿಸಿದರು. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ವಲಯ ಉಪಾಧ್ಯಕ್ಷ ಡಾ. ಬಿ.ಆರ್.ನಟರಾಜ್ ಜೋಯಿಸ್, ಕರ್ನಾಟಕ ಸೇನಾಪಡೆಯ ರಾಜ್ಯಾಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ, ಭೂ ದಾಖಲೆಗಳ ಸಹಾಯಕ ನಿರ್ದೇಶಕ ಎಚ್.ಮಂಜುನಾಥ್, ತಾಂತ್ರಿಕ ಸಹಾಯಕ ಭಾಸ್ಕರ್, ಕರ್ನಾಟಕ ಸೇನಾಪಡೆಯ ಪ್ರಭುಶಂಕರ್, ಕೃಷ್ಣಪ್ಪ, ಪ್ರಜೀಶ್, ಸುರೇಶ್ ಗೋಲ್ಡ್, ಪ್ರಭಾಕರ್, ನೇಹ, ಮಂಜುಳಾ, ಶಿವಲಿಂಗಯ್ಯ, ಸುಶೀಲಾ ನಂಜಪ್ಪ, ಲಕ್ಷ್ಮಿ, ಭಾಗ್ಯಮ್ಮ, ಶಿವಕುಮಾರ್, ಕೃಷ್ಣೇಗೌಡ, ವಿಜಯೇಂದ್ರ, ಮಲ್ಲೇಶ್, ನಾಗರಾಜು, ಹನುಮಂತಯ್ಯ, ಗೀತಾ ಗೌಡ, ಕುಮಾರ್, ರಘು ಅರಸ್, ಅಕ್ಬರ್, ನಂದಕುಮಾರ್ ವಿಷ್ಣು ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

01.10.2024 ಮಂಗಳವಾರ, ಮಳೆ ನಕ್ಷತ್ರ: ಹಸ್ತ, 27.09.2024ರಿಂದ 09.10.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ಪುಬ್ಬ, ರಾಹುಕಾಲ : ಮಧ್ಯಾಹ್ನ 3 ರಿಂದ 4.30 ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 9 ರಿಂದ ಶರದ್ ವಿರೇಚನ–ಪಂಚಕರ್ಮ ಚಿಕಿತ್ಸಾ ಶಿಬಿರ, ಕಾಮಾಲೆ ಮತ್ತು ಯಕೃತ್ತಿನ ಸಮಸ್ಯೆಗೆ ಚಿಕಿತ್ಸಾ ಶಿಬಿರ, ಬೆಳಗ್ಗೆ 6.30 ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.
- **ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಮೈಸೂರು ಗ್ರಾಮಾಂತರ, ಮೇಜರ್ ಧ್ಯಾನ್‌ಚಂದ್ ಸ್ಪೋರ್ಟ್ಸ್ ಫೌಂಡೇಷನ್ :** ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ವಾಲಿಬಾಲ್ ಪಂದ್ಯಾವಳಿ, ಉದ್ಘಾಟನೆ : ಅಂತರರಾಷ್ಟ್ರೀಯ ವಾಲಿಬಾಲ್ ಕ್ರೀಡಾಪಟು ಶ್ರೀಮತಿ ಹೆಚ್.ಎನ್. ಹೇಮಲತಾ, ಸ್ಥಳ: ಯೂನಿವರ್ಸಿಟಿ ಪೆವಿಲಿಯನ್ ಮೈದಾನ, ಬೆಳಗ್ಗೆ 10ಕ್ಕೆ.
- **ಆರ್ಯ ಹಾಸ್ಪಿಟಲ್, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ :** ರಾಷ್ಟ್ರೀಯ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಸ್ವಯಂಪ್ರೇರಿತ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು : ಆರ್ಯ ಹಾಸ್ಪಿಟಲ್ ನಿರ್ದೇಶಕ ಡಾ. ಮಹೇಶ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಎಸ್.ಇ. ಗಿರೀಶ್, ಸ್ಥಳ: ಆರ್ಯ ಆಸ್ಪತ್ರೆ, ನ್ಯೂ ಕಾಂತರಾಜ ಅರಸ್ ರಸ್ತೆ, ಬೆಳಗ್ಗೆ 11 ರಿಂದ.
- **ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜೆಎಸ್‌ಎಸ್ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ:** ಬೆಳಗ್ಗೆ 11ಕ್ಕೆ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಹಾಗೂ ಕಾನೂನು ಅರಿವು ಕಾರ್ಯಕ್ರಮ, ಉಪಸ್ಥಿತರು: ಮುಖ್ಯಮಂತ್ರಿ ಸಿದ್ದರಾಮಯ್ಯ, ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಉಪಸ್ಥಿತರು: ಪಶು ಸಂಗೋಪನೆ ಸಚಿವ ಕೆ.ವೆಂಕಟೇಶ್, ಶಾಸಕರಾದ ಅನಿಲ್ ಕುಮಾರ್, ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷ ಡಾ. ಮಾನಸ, ಅಧ್ಯಕ್ಷತೆ: ಶಾಸಕ ಟಿ.ಎಸ್.ಶ್ರೀವತ್ಸ, ಮುಖ್ಯ ಅತಿಥಿಗಳು: ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಶಾಸಕರಾದ ತನ್ವೀರ್‌ಸೇಠ್, ಜಿ.ಟಿ.ದೇವೇಗೌಡ; ಮಧ್ಯಾಹ್ನ 2ಕ್ಕೆ ಕಾನೂನು ಅರಿವು ಕಾರ್ಯಕ್ರಮ, ಉದ್ಘಾಟನೆ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರವೀಂದ್ರ ಹೆಗಡೆ, ಅಧ್ಯಕ್ಷತೆ: ಜೆಎಸ್‌ಎಸ್ ಮಹಾವಿದ್ಯಾಪೀಠದ ಸಾಮಾನ್ಯ ಅಭಿವೃದ್ಧಿ ವಿಭಾಗದ ನಿರ್ದೇಶಕ ಕೆ.ಎಲ್.ರೇವಣ್ಣಸ್ವಾಮಿ, ಮುಖ್ಯ ಅತಿಥಿಗಳು: ಹಿರಿಯ ಸಿವಿಲ್ ನ್ಯಾಯಾಧೀಶ ಬಿ.ಜಿ. ದಿನೇಶ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶಂಕರಗೌಡ ಪಾಟೀಲ, ಜೆಎಸ್‌ಎಸ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಸಿ.ಪಿ.ಮಧು, ಸ್ಥಳ: ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸಭಾಂಗಣ, ಜೆಎಸ್‌ಎಸ್ ಹಳೆ ಆಸ್ಪತ್ರೆ ಆವರಣ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಡಾ. ಸಂಧ್ಯಾ ರೆಡ್ಡಿ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ಶ್ರದ್ಧೆಯ ಶಿಲ್ಪ' ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎ.ಎನ್.ಶೀಲಾ, ವ್ಯಾಖ್ಯಾನ–ಪ್ರೊ. ಮೈಸೂರು ಕೃಷ್ಣಮೂರ್ತಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಅ.ನ.ಕೃ ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ : ಉಮೇಶ್ ಎಸ್. ಎಸ್., 8.30 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್., 8.40 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 9.05 ವಿಶ್ವ ಹಿರಿಯ ನಾಗರಿಕರ ದಿನದ ಹಿನ್ನೆಲೆಯಲ್ಲಿ – ಹಿರಿಯ ನಾಗರಿಕರಿಗೆ ಇರುವ ಸರಕಾರಿ ಸೌಲಭ್ಯಗಳನ್ನು ಕುರಿತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕರಾದ ರಾಘವೇಂದ್ರ ಟಿ ಅವರೊಡನೆ ಸಂದರ್ಶನ, ಸಂದರ್ಶಕರು – ಸಿ ನಾಗರತ್ನ, 9.30 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಗೀತಾ. ವೈ. ಪುಟ್ಟಿ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಚೈತ್ರಿಕಾ

ಮಧ್ಯಾಹ್ನ: 12.05 ವನಿತಾ ವಿಹಾರ–ಹೀಗಿದೆ ನೋಡಿ ನಮ್ ಜೋಡಿ, ಭಾಗವಹಿಸುವವರು: ಲೇಖಕಿ ಮತ್ತು ನಿವೃತ್ತ ಕುಲಪತಿ ಸಬಿಹಾ ಮತ್ತು ಪ್ರಾಧ್ಯಾಪಕ, ಚಿಂತಕ ಭೂಮಿಗೌಡ, ಪ್ರಸ್ತುತಿ: ಅಬ್ದುಲ್ ರಶೀದ್, 12.30 ದೇವರನಾಮ–ಮಾನಸನಯನ, 12.45 ದಸರಾ ಮಹೋತ್ಸವದ ಅಂಗವಾಗಿ ರಂಗಾಯಣದಲ್ಲಿ ಆಯೋಜಿಸಲಾಗಿರುವ ದಸರಾ ಜನಪದ ರಂಗ ಉತ್ಸವ ಕುರಿತು ರಂಗಾಯಣದ ನಿರ್ದೇಶಕರಾದ ಸತೀಶ್ ತಿಪಟೂರು ಅವರೊಂದಿಗೆ ಮಾತುಕತೆ, ಪ್ರಸ್ತುತಿ: ಪ್ರಭುಸ್ವಾಮಿ ಮಳೀಮಠ್, 1.00 ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್., 1.20 ಭಾವಗೀತೆಗಳು –ಎಂ. ಮಹಾಲಿಂಗ, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಎ.ಪದ್ಮಾವತಿ–ವೀಣಾ ವಾದನ, 4.00 ಕಥಾ ಕಾಲಕ್ಷೇಪ–ಕಟೀಲು ಕ್ಷೇತ್ರ ಮಹಾತ್ಮೆ, ಪ್ರಸ್ತುತಿ: ವಿದ್ವಾನ್. ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ: ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ರೇಷ್ಮೆ ಐಸಿರಿ– ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ, ಊಜಿ ನೊಣಗಳ ನಿಯಂತ್ರಣ ಕ್ರಮಗಳು. ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ. ಎಸ್. ಮಹಿಬಾ ಹೆಲನ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 'ಮೈಸೂರು ಜಂಕ್ಷನ್' ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್, 8.00 ಕ್ರೀಡಾಲೋಕ – ಇತ್ತೀಚೆಗೆ ಮುಕ್ತಾಯಗೊಂಡ ಚೆಸ್ ಒಲಂಪಿಯಾಡ್ ಕುರಿತು ವಿಮರ್ಶೆ. ಭಾಗವಹಿಸುತ್ತಾರೆ: ಅರವಿಂದ್ ಶಾಸ್ತ್ರಿ, ಕರ್ನಾಟಕ ರಾಜ್ಯ ಚೆಸ್ ಅಸೋಸಿಯೇಷನ್ ಕಾರ್ಯದರ್ಶಿ ಹಾಗೂ ಚೆಸ್ ಆಟಗಾರ್ತಿ ಸಂಜನಾ ರಘುನಾಥ್, 8.30 ನಮ್ಮ ಆರೋಗ್ಯ–ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನದ ಸಂದರ್ಭದಲ್ಲಿ 'ರಕ್ತದಾನ ಮಹಾದಾನ' ಕುರಿತು ಮೈಸೂರು ಜಿಲ್ಲಾ ಆಸ್ಪತ್ರೆಯ ರಕ್ತನಿಧಿ ಅಧಿಕಾರಿ ಡಾ. ಬಿ.ಎಸ್. ಮಂಜುನಾಥ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.15 ಅಕ್ಟೋಬರ್ ಮೂರರಂದು ಉದ್ಘಾಟನೆಯಾಗಲಿರುವ ದಸರಾ ಚಲನಚಿತ್ರೋತ್ಸವ ಕುರಿತು ಸಂವಾದ. ಭಾಗವಹಿಸುತ್ತಾರೆ : ಉಪವಿಶೇಷಾಧಿಕಾರಿ ಡಾ.ಕೆ.ಎನ್.ಬಸವರಾಜ್ ಹಾಗೂ ಕಾರ್ಯಾಧ್ಯಕ್ಷರಾದ ರಂಗೇಗೌಡ. ಬಿ ಇವರೊಂದಿಗೆ ಭಾಗವಹಿಸುತ್ತಾರೆ : ಪ್ರಭುಸ್ವಾಮಿ ಮಳೀಮಠ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ : ಡಾ. ಪದ್ಮಮೂರ್ತಿ–ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ. ವಾಚನ : ಹೆಚ್.ಎಲ್. ಶ್ರೀಕಂಠ, ವ್ಯಾಖ್ಯಾನ: ಹೆಚ್.ಎಸ್.ಗೋಪಾಲ್, ಪ್ರಸ್ತುತಿ: ಡಾ.ಎ.ಎಸ್.ಶಂಕರನಾರಾಯಣ, 10.30 ಸವಿನೆನಪು

- **ಶ್ರೀ ರವಿವರ್ಮ ಆರ್ಟ್ ಇನ್ಸ್‌ಟಿಟ್ಯೂಟ್:** ಪದಗ್ರಹಣ ಮತ್ತು ಕೇರಳ ಮುರಲ್ ಪೇಯಿಂಟಿಂಗ್ ಎಕ್ಸಿಬಿಷನ್, ಉದ್ಘಾಟನೆ: ರಂಗಾಯಣ ಮಾಜಿ ನಿರ್ದೇಶಕ ಜನಾರ್ಧನ್, ಮುಖ್ಯ ಅತಿಥಿಗಳು : ಶಿಲ್ಪಕಲಾ ಅಕಾಡೆಮಿ ಸದಸ್ಯ ವಿಶ್ವಕರ್ಮ ಆಚಾರ್ಯ, ಶ್ರೀ ರವಿವರ್ಮ ಆರ್ಟ್ ಇನ್ಸ್‌ಟಿಟ್ಯೂಟ್ ಪ್ರಿನ್ಸಿಪಾಲ್ ಶಿವಕುಮಾರ್ ಕೇಸರಮಾಡು, ಎನ್.ಸೌಮ್ಯ, ಸ್ಥಳ: ಶ್ರೀ ರವಿವರ್ಮ ಆರ್ಟ್ ಇನ್ಸ್‌ಟಿಟ್ಯೂಟ್, ಬೆಳಗ್ಗೆ 11ಕ್ಕೆ

ಮೈಸೂರು ಮಿತ್ರ

ಮಂಗಳವಾರ 1 ಅಕ್ಟೋಬರ್ 2024

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ

ಮಂಡ್ಯ ಬಳಿ ಬಸ್ ಅಪಘಾತ

● 20 ಮಂದಿಗೆ ಗಂಭೀರ, 10 ಮಂದಿಗೆ ಸಣ್ಣಪುಟ್ಟ ಗಾಯ ● ಚಾಲಕನ ನಿಯಂತ್ರಣ ತಪ್ಪಿ ನಿಂತಿದ್ದ ಕ್ಯಾಂಟರ್‌ಗೆ ಡಿಕ್ಕಿ ಹೊಡೆದ ನಂತರ ಉರುಳಿ ಬಿದ್ದ ಸಾರಿಗೆ ಬಸ್



ಮಂಡ್ಯ,ಸೆ.30– ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನಲ್ಲಿ, ಮಂಡ್ಯ ಬಳಿ ಭೀಕರ ಅಪಘಾತ ಸಂಭವಿಸಿದ್ದು, ನಿಂತಿದ್ದ ಕ್ಯಾಂಟರ್‌ಗೆ ಸಾರಿಗೆ ಬಸ್ ಡಿಕ್ಕಿ ಹೊಡೆದು ಉರುಳಿ ಬಿದ್ದು ವಿದ್ಯಾರ್ಥಿಗಳು, ಮಹಿಳೆಯರು ಸೇರಿದಂತೆ 20 ಮಂದಿ ಗಂಭೀರವಾಗಿ ಗಾಯಗೊಂಡು, ಹತ್ತು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿರುವ ದುರಂತ ಮಂಡ್ಯ ನಗರದ ಹೊರವಲಯದ ಉಮ್ಮಡಹಳ್ಳಿ ಗೇಟ್‌ನ ಸ್ಯಾಂಜೋ ಆಸ್ಪತ್ರೆ ಮುಂಭಾಗ ಸೋಮವಾರ ಬೆಳಿಗ್ಗೆ ಸಂಭವಿಸಿದೆ.

ತುಮಕೂರಿನಿಂದ ಮೈಸೂರಿಗೆ ಬರುತ್ತಿದ್ದ ಕೆಎಸ್ ಆರ್‌ಟಿಸಿ ಬಸ್ (ಕೆಎ–06, ಎಫ್–0956) ಬೆಳಿಗ್ಗೆ 9.30ರ ಸಮಯದಲ್ಲಿ ಮಂಡ್ಯ ನಗರ ಪ್ರವೇಶಿಸಲು ಸ್ಯಾಂಜೋ ಆಸ್ಪತ್ರೆ ಬಳಿ ಇರುವ ಸರ್ವೀಸ್ ರಸ್ತೆಗೆ ಬರಲು ಎಕ್ಸ್‌ಪ್ರೆಸ್‌ವೇನಿಂದ ಎಡಭಾಗಕ್ಕೆ ಚಾಲಕ ಬಸ್‌ನ್ನು ತಿರುಗಿಸಿದ್ದಾನೆ. ಈ ಸಂದರ್ಭದಲ್ಲಿ ನಿಯಂತ್ರಣ ತಪ್ಪಿದ ಬಸ್ ನೋಡ ನೋಡುತ್ತಿದ್ದಂತೆ ರಸ್ತೆಯ ಪಕ್ಕದಲ್ಲಿ ನಿಂತಿದ್ದ ಕ್ಯಾಂಟರ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಬಸ್ ಉರುಳಿ ಬಿದ್ದು, ಹಲವು ಮಂದಿಗೆ ಗಾಯಗಳಾಗಿವೆ. ಜೊತೆಗೆ ಬಸ್ ಸಂಪೂರ್ಣ ನಜ್ಜುಗುಜ್ಜಾಗಿದೆ.

ಕೂದಲೆಳೆ ಅಂತರದಿಂದ ಬಚಾವಾದ ಬೈಕ್ ಚಾಲಕ: ಭೀಕರ ಅಪಘಾತದ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿದ್ದು, ಬಸ್ ಕ್ಯಾಂಟರ್‌ಗೆ ಡಿಕ್ಕಿ ಹೊಡೆಯುವ ಮುನ್ನ ಸರ್ವೀಸ್ ರಸ್ತೆಯಲ್ಲಿ ಬರುತ್ತಿದ್ದ ಬೈಕ್ ಸವಾರ ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಬೈಕ್ ಸವಾರ ಸ್ವಲ್ಪವೇ ಮುಂದಿದ್ದರೆ, ಬಸ್ ಮತ್ತು ಕ್ಯಾಂಟರ್ ಮಧ್ಯೆ ಸಿಲುಕಿ ಘೋರ ದುರಂತ ಸಂಭವಿಸುವ ಸಾಧ್ಯತೆ ಇತ್ತು. ಅದೃಷ್ಟವಶಾತ್ ಬಸ್, ಕ್ಯಾಂಟರ್‌ಗೆ ಡಿಕ್ಕಿಯಾಗಿ ಉರುಳಿ ಬಿದ್ದ ಬಳಿಕ ಬೈಕ್ ಸವಾರ ಬಸ್‌ಗೆ ಡಿಕ್ಕಿ ಹೊಡೆದಿದ್ದು, ಕೆಳಗೆ ಬಿದ್ದು, ಸಣ್ಣಪುಟ್ಟ ಗಾಯಗಳಾಗಿವೆ.

30 ಮಂದಿಗೆ ಗಾಯ: ಬಸ್ ಉರುಳಿ ಬಿದ್ದ ಬಳಿಕ ಗ್ರಾಮಸ್ಥರು ಬಸ್‌ನ ಕಿಟಕಿ ಗಾಜುಗಳನ್ನು ಒಡೆದು ಪ್ರಯಾಣಿಕರನ್ನು ಹೊರಗೆಳೆದು ತಂದರು. ಈ ಪೈಕಿ 20 ಮಂದಿ ಗಂಭೀರವಾಗಿ ಗಾಯಗೊಂಡಿದ್ದು, ಕಾಲು, ಕೈ, ಮುಖ ಇನ್ನಿತರೆ ಭಾಗಗಳಿಗೆ ಹಾನಿಯಾಗಿದ್ದರೆ, ಇನ್ನು 10 ಮಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಘಟನೆ ನಡೆದ ಕೆಲವೇ ನಿಮಿಷಗಳಲ್ಲಿ ಆಗಮಿಸಿದ ಆಂಬುಲೆನ್ಸ್‌ನಲ್ಲಿ ಎಲ್ಲಾ ಗಾಯಾಳುಗಳನ್ನು ಮಂಡ್ಯ ಮಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಚಾಲಕನ ವಿರುದ್ಧ ಆಕ್ರೋಶ: ಚಾಲಕ ಶಿವಕುಮಾರ್, ಬಸ್‌ನ್ನು ಚಲಾಯಿಸುವಾಗಲೇ ಮಂಡ್ಯ ತಾಲೂಕಿನ ಬೂದನೂರು ಬಳಿಯಿಂದ ಮೊಬೈಲ್‌ನಲ್ಲಿ ಮಾತನಾಡಿಕೊಂಡು ಬರುತ್ತಿದ್ದ ಎಂದು ಚಾಲಕನ ಹಿಂಬದಿಯ ಸೀಟಿನಲ್ಲಿ ಕುಳಿತಿದ್ದ ಸಾಗರ್ ಎಂಬ ಪ್ರಯಾಣಿಕ ದೂರಿದ್ದಾನೆ. ಆದರೆ ಇದನ್ನು ತಳ್ಳಿ ಹಾಕಿರುವ ಚಾಲಕ ಶಿವಕುಮಾರ್, ನಾನು ಮೊಬೈಲ್ ಬಳಕೆ ಮಾಡಿಲ್ಲ. ಪ್ರಯಾಣದ ಸಂದರ್ಭದಲ್ಲಿ ಮೊಬೈಲ್ ಬಳಸಲು ನಮ್ಮ ಇಲಾಖೆಯ ಅನುಮತಿ ಇಲ್ಲ. ಇದು ಸತ್ಯಕ್ಕೆ ದೂರವಾದ ಹೇಳಿಕೆ. ಅಪಘಾತಕ್ಕೂ ಮುನ್ನ ನಾನು ಬ್ರೇಕ್ ಹಾಕಿದೆ. ಆದರೆ ಲೈನರ್ ಸಮಸ್ಯೆಯಾಗಿ ಬಸ್ ನಿಯಂತ್ರಣಕ್ಕೆ ಸಿಗದೆ ಅಪಘಾತ ಸಂಭವಿಸಿತು ಎಂದು ವಿವರಿಸಿದ್ದಾನೆ.

ಹೆಚ್ಚು ಪ್ರಯಾಣಿಕರಿದ್ದರು: ಇನ್ನು ಬಸ್‌ನಲ್ಲಿ 60ಕ್ಕೂ ಹೆಚ್ಚು ಪ್ರಯಾಣಿಕರಿದ್ದರು ಎಂದು ಹೇಳಲಾಗಿದೆ. ಸೋಮವಾರ ಬೆಳಗ್ಗೆ 9.30ರ ಸಮಯವಾದ್ದರಿಂದ ವಿದ್ಯಾರ್ಥಿಗಳು, ನೌಕರರೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸುತ್ತಿದ್ದರು.

ಸಾರ್ವಜನಿಕರ ಆಕ್ರೋಶ: ಘಟನಾ ಸ್ಥಳವು ಎಕ್ಸ್‌ಪ್ರೆಸ್‌ವೇನಿಂದ ಸರ್ವೀಸ್ ರಸ್ತೆಗೆ ಸಂಪರ್ಕಿಸುವ ಜಂಕ್ಷನ್ ಆಗಿರುವುದರಿಂದ ಸರ್ವೀಸ್ ರಸ್ತೆ ವಿಶಾಲವಾಗಿದ್ದರೂ ಕೆಲವರು ರಸ್ತೆ ಪಕ್ಕದಲ್ಲಿ ಕ್ಯಾಂಟರ್, ಗೂಡ್ಸ್‌ಗಾಡಿಗಳನ್ನು ನಿರಂತರವಾಗಿ ನಿಲ್ಲಿಸಿಕೊಂಡಿರುತ್ತಾರೆ. ಇದರಿಂದ ಸರ್ವೀಸ್ ರಸ್ತೆಗೆ ಬರುವ ಭಾರಿ ವಾಹನಗಳಿಗೆ ತೊಂದರೆಯಾಗುತ್ತದೆ. ಈ ಸ್ಥಳದಲ್ಲಿ ಇಂತಹ ಅಪಘಾತ ಇದೇ ಮೊದಲೇನಲ್ಲ. ಹಲವು ಅಪಘಾತಗಳು ಸಂಭವಿಸಿದ್ದು, ಈ ಜಾಗದಲ್ಲಿ ವಾಹನ ನಿಲ್ಲಿಸದಂತೆ ನಿಷೇಧ ಹೇರಿ ಇಲ್ಲವೇ ಎಕ್ಸ್‌ಪ್ರೆಸ್ ವೇ ಎಂಟ್ರಿಯನ್ನೇ ಮುಚ್ಚಿ ಎಂದು ಆಕ್ರೋಶ ಹೊರ ಹಾಕಿದರು.

ಘಟನಾ ಸ್ಥಳಕ್ಕೆ ಶಾಸಕ ರವಿಕುಮಾರ್ ಗಣಿಗ, ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಎಎಸ್ಪಿ ಗಂಗಾಧರಸ್ವಾಮಿ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಬಳಿಕ ಆಸ್ಪತ್ರೆಗೂ ತೆರಳಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಎಲ್ಲರೂ ಆರೋಗ್ಯವಾಗಿದ್ದು, ಸಣ್ಣಪುಟ್ಟ ಗಾಯಗಳಾಗಿವೆ. ಚಿಕಿತ್ಸಾ ವೆಚ್ಚವನ್ನು ಕೆಎಸ್ ಆರ್‌ಟಿಸಿ ಸಂಸ್ಥೆಯೇ ಭರಿಸಲಿದೆ ಎಂದರು.

ಇದಲ್ಲದೇ ಆಸ್ಪತ್ರೆಗೆ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ, ಮಾಜಿ ಶಾಸಕರಾದ ರವೀಂದ್ರ ಶ್ರೀಕಂಠಯ್ಯ, ಕೆ.ಸುರೇಶ್ ಗೌಡ ಸಹ ಭೇಟಿ ನೀಡಿ, ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

ಮುಡಾ ನಿವೇಶನ ಹಂಚಿಕೆ ಹಗರಣ; ಮುಖ್ಯಮಂತ್ರಿ ಸಿದ್ದರಾಮಯ್ಯ ತನಿಖೆ ಪ್ರಕ್ರಿಯೆ

ಬೆಂಗಳೂರಲ್ಲಿ ಎಡಿಜಿಪಿ ಭೇಟಿ ಮಾಡಿದ ಮೈಸೂರು ಲೋಕಾಯುಕ್ತ ಪೊಲೀಸ್ ತಂಡ

● ನೋಟಿಸ್ ನೀಡಿ ಮೊದಲು ಮುಡಾ ಅಧಿಕಾರಿಗಳ ವಿಚಾರಣೆ ಸಾಧ್ಯತೆ

● ನಂತರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬದವರ ವಿಚಾರಣೆಗೆ ಸಿದ್ಧತೆ

ಮೈಸೂರು, ಸೆ.30(ಆರ್‌ಕೆ)– ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಆದೇಶದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ನಾಲ್ವರ ವಿರುದ್ಧ ಎಫ್‌ಆರ್‌ಐ ದಾಖಲಿಸಿರುವ ಮೈಸೂರು ಲೋಕಾಯುಕ್ತ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಮುಖ್ಯಮಂತ್ರಿ ಪತ್ನಿ ಎಂ.ಬಿ.ಪಾರ್ವತಿ ಅವರಿಗೆ 50:50 ಅನುಪಾತದಡಿ ಅಭಿವೃದ್ಧಿಪಡಿಸಿದ ಬಡಾವಣೆಗಳಲ್ಲಿ ಕೋಟ್ಯಾಂತರ ರೂ. ಬೆಲೆ ಬಾಳುವ 14 ನಿವೇಶನ ಮಂಜೂರು ಮಾಡಿರುವ ಪ್ರಕರಣದ ತನಿಖೆಗೆ ರಾಜ್ಯ ಹೈಕೋರ್ಟ್ ಏಕಸದಸ್ಯ ಪೀಠ ಹಾಗೂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶ ನೀಡಿರುವ ಹಿನ್ನೆಲೆಯಲ್ಲಿ ಶುಕ್ರವಾರ ಲೋಕಾಯುಕ್ತ ಮೈಸೂರು ಎಸ್‌ಪಿ ಉದೇಶ್ ವಿವಿಧ ಸೆಕ್ಷನ್ ಅಡಿ ಎಫ್‌ಐಆರ್ ದಾಖಲಿಸಿದ್ದರು. ಶನಿವಾರ ಮತ್ತು ಭಾನುವಾರ ರಜಾ ಇದ್ದ ಕಾರಣ, ಇಂದು ಬೆಳಗ್ಗೆ ಕಚೇರಿಗೆ ಆಗಮಿಸಿದ ಎಸ್‌ಪಿ, ತನಿಖೆಗೆ ರಚಿಸಿರುವ ನಾಲ್ವರು ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದರು. ಯಾವ ಯಾವ ಆಯಾಮದಲ್ಲಿ ತನಿಖೆ ನಡೆಸಬೇಕೆಂಬುದರ ಬಗ್ಗೆ ಶನಿವಾರವೇ ಜವಾಬ್ದಾರಿ ಹಂಚಿಕೆ ಮಾಡಿ ಪ್ರಶ್ನಾವಳಿ ಸಿದ್ಧಪಡಿಸಿದ್ದಂತೆ ಮಾಹಿತಿ, ದಾಖಲೆಗಳನ್ನು ಸಂಗ್ರಹಿಸಬೇಕೆಂದು ತಾಕೀತು ಮಾಡಿದರು.

ಇಂದು ಬೆಳಗ್ಗೆ 10.45ರ ನಂತರ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಬಳಿ ಲಭ್ಯವಿರುವ ಪ್ರಾಥಮಿಕ ದಾಖಲೆ ಪತ್ರಗಳೊಂದಿಗೆ ನಾಲ್ವರು ಅಧಿಕಾರಿಗಳೊಂದಿಗೆ ಕಾರಿನಲ್ಲಿ ಬೆಂಗಳೂರಿಗೆ ತೆರಳಿದ್ದು, ಲೋಕಾಯುಕ್ತ ಎಡಿಜಿಪಿ ಮನೀಷ್ ಕರ್ಬಿಕರ್ ಅವರನ್ನು ಭೇಟಿ ಮಾಡಿದ್ದರು.



ಮೈಸೂರು ಲೋಕಾಯುಕ್ತ ಎಸ್ಪಿ ಕಚೇರಿ

ಈಗಾಗಲೇ ಪ್ರಕರಣ ದಾಖಲಾಗಿರುವುದರಿಂದ ಪ್ರತಿ ಹಂತದಲ್ಲೂ ತನಿಖೆ ನಡೆಸಿ, ಪೂರಕ ದಾಖಲೆಗಳು, ಮಾಹಿತಿಯೊಂದಿಗೆ ಆರೋಪಿಗಳನ್ನು ವಿಚಾರಣೆ ನಡೆಸಿ ಹೇಳಿಕೆಯನ್ನು ದಾಖಲಿಸಿಕೊಳ್ಳಬೇಕು, ಹೇಳಿಕೆ ಪಡೆಯುವಾಗ ಆಡಿಯೋ–ವಿಡಿಯೋ ರೆಕಾರ್ಡ್ ಮಾಡಿಕೊಳ್ಳಬೇಕು ಎಂದೂ ಮನೀಷ್ ಕರ್ಬಿಕರ್ ತನಿಖಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆನ್ನಲಾಗಿದೆ. ದೂರುದಾರ ಸ್ನೇಹಮಯಿ ಕೃಷ್ಣ ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಕಂದಾಯ ಇಲಾಖೆ ಗ್ರಾಮಲೆಕ್ಕಿಗ, ಕಂದಾಯ ನಿರೀಕ್ಷಕರು, ಶಿರಸ್ತೇದಾರ್, ಉಪ ತಹಸೀಲ್ದಾರ್, ತಹಸೀಲ್ದಾರ್, ಮುಡಾ ವಿಶೇಷ ಭೂಸ್ವಾಧೀನಾಧಿಕಾರಿ, ಕಚೇರಿ ವ್ಯವಸ್ಥಾಪಕ, ಸಂಬಂಧಿಸಿದ ಗುಮಾಸ್ತ, ಸರ್ವೇಯರ್‌ಗಳಿಗೆ ಮೊದಲು ನೋಟಿಸ್ ನೀಡಿ, ಕಚೇರಿಗೆ ಕರೆಸಿಕೊಂಡು ವಿಚಾರಣೆ ನಡೆಸಿ, ವಿವಾದಾತ್ಮಕ ದೇವನೂರು ಸರ್ವೆ ನಂಬರ್ ಭೂಮಿ ಈ ಹಿಂದಿನ ಸ್ಥಿತಿ–ಗತಿ ಏನು? ಯಾರಿಂದ ಯಾರಿಗೆ ಕ್ರಯವಾಯಿತು, ಭೂ ಉಪಯೋಗ ಬದಲಾವಣೆ, ಸ್ವಾಧೀನ ಪ್ರಕ್ರಿಯೆ, ಡಿನೋಟಿಫೈ, ವಸತಿ ಬಡಾವಣೆ ನಿರ್ಮಾಣ, ಭೂ ಮಾಲೀಕರಿಗೆ ಪ್ರೋತ್ಸಾಹದಾಯಕ ನಿವೇಶನಗಳ ಹಂಚಿಕೆವರೆಗೆ ನಡೆದಿರುವ ಬೆಳವಣಿಗೆ ಬಗ್ಗೆ ನೈಜ ಮಾಹಿತಿ ಕಲೆ ಹಾಕುವಂತೆಯೂ ಮೈಸೂರು ಲೋಕಾಯುಕ್ತ ಪೊಲೀಸ್ ತಂಡಕ್ಕೆ ಕರ್ಬಿಕರ್ ತಿಳಿಸಿದ್ದಾರೆ ಎನ್ನಲಾಗಿದೆ.

ಕಂದಾಯ ಇಲಾಖೆ, ಮುಡಾ ಅಧಿಕಾರಿಗಳಿಗೆ ನೋಟಿಸ್ ನೀಡಿ ಕಚೇರಿಗೆ ಕರೆಸಿಕೊಂಡು ವಿಚಾರಣೆ ನಡೆಸಲಿರುವ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು, ಲಿಖಿತ ಹೇಳಿಕೆ ಹಾಗೂ ಪೂರಕ ದಾಖಲೆಗಳನ್ನು ಪಡೆದುಕೊಳ್ಳಲಿದ್ದಾರೆ. ನಂತರ ದೂರುದಾರ ಸ್ನೇಹಮಯಿ ಕೃಷ್ಣ, ಆರೋಪಿಗಳೆನಿಸಿರುವ ಸಿಎಂ ಸಿದ್ದರಾಮಯ್ಯ, ಪತ್ನಿ ಬಿ.ಎಂ.ಪಾರ್ವತಿ, ಭಾವಮೈದುನ ಬಿ.ಎಂ.ಮಲ್ಲಿಕಾರ್ಜುನಸ್ವಾಮಿ ಹಾಗೂ ಜೆ.ದೇವರಾಜು ಅವರನ್ನು ಲೋಕಾಯುಕ್ತ ಎಸ್‌ಪಿ ಕಚೇರಿಗೆ ಕರೆಸಿಕೊಂಡು ತನಿಖೆ ನಡೆಸಬೇಕಿದೆ.

ನಾಳೆ (ಅ.1)ಯಿಂದ ಅಧಿಕಾರಿಗಳಿಗೆ ನೋಟಿಸ್ ನೀಡಲಿರುವ ಲೋಕಾಯುಕ್ತ ಪೊಲೀಸರು, ದಾಖಲೆಗಳೊಂದಿಗೆ ವಿಚಾರಣೆಗೆ ಆಗಮಿಸುವಂತೆ ಸೂಚಿಸಲಿದ್ದು, ತನಿಖೆ ಚುರುಕುಗೊಳಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ನಾಳೆ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಮೈಸೂರು ಪ್ರವಾಸ

ಮೈಸೂರು, ಸೆ.30(ಎಸ್‌ಪಿಎನ್)– ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಅವರು, ಅ.2ರಂದು ಮೈಸೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಗ್ಗೆ 11.30ಕ್ಕೆ ಜನನಿ ಸೇವಾ ಟ್ರಸ್ಟ್ ಪದಾಧಿಕಾರಿಗಳು ಮೈಸೂರು ದಸರಾ ಮಹೋತ್ಸವಕ್ಕೆ ಆಗಮಿಸುತ್ತಿರುವ ಆಹ್ವಾನಿತರಿಗೆ ಅರಮನೆಯಲ್ಲಿ ಸಾಂಕೇತಿಕ ಆಹ್ವಾನ ನೀಡಿ, ಕಾರ್ಯಕ್ರಮಕ್ಕೆ ವಿಧ್ಯುಕ್ತ ಚಾಲನೆ ನೀಡಲಿದ್ದಾರೆ ಎಂದು ಆಪ್ತ ಕಾರ್ಯದರ್ಶಿ ಕಿರಣ್(ಮೊ: 96323–24166) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಅಡಿಯಲ್ಲಿ ಮಂಡಿ ಶಸ್ತ್ರಚಿಕಿತ್ಸೆ, ಹಿಪ್ ರಿಪ್ಲೇಸ್‌ಮೆಂಟ್ ಲಭ್ಯ

Pradhan Mantri Jan Arogya Yojana
Ayushman Bharat
PM-JAY

ಬೆಂಗಳೂರು: ಮಂಡಿ ಶಸ್ತ್ರಚಿಕಿತ್ಸೆ (ಟೋಟಲ್ ನೀ ರಿಪ್ಲೇಸ್‌ಮೆಂಟ್) ಮತ್ತು ಟೋಟಲ್ ಹಿಪ್ ರಿಪ್ಲೇಸ್‌ಮೆಂಟ್ (ಟಿಎಚ್ ಆರ್) ಶಸ್ತ್ರಚಿಕಿತ್ಸೆ ಅಗತ್ಯವಿರುವ ಜನರ ಸಂಖ್ಯೆ ಹೆಚ್ಚಾಗುತ್ತಿದ್ದು, ಆಪರೇಷನ್ ಅಂತಾ ಹೋದ್ರೆ ಲಕ್ಷ ಲಕ್ಷ ವೆಚ್ಚವಾಗುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈ ಎರಡು ಶಸ್ತ್ರಚಿಕಿತ್ಸೆಗಳನ್ನು ಆಯುಷ್ಮಾನ್ ಭಾರತ್ ಯೋಜನೆಗೆ ಒಳಪಡಿಸಿ ಆದೇಶ ಹೊರಡಿಸಿದೆ.

ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ (ABArK)ಯೋಜನೆ ಅಡಿಯಲ್ಲಿ ಮಂಡಿ ಶಸ್ತ್ರಚಿಕಿತ್ಸೆ ಮತ್ತು ಟೋಟಲ್ ಹಿಪ್ ರಿಪ್ಲೇಸ್‌ಮೆಂಟ್ ಚಿಕಿತ್ಸೆ ಪಡೆಯಲು ಅವಕಾಶ ನೀಡಲಾಗಿದ್ದು, ಇದು ಖಾಸಗಿ ಆರೋಗ್ಯ ಸೌಲಭ್ಯಗಳ ಮೇಲಿನ ಪ್ರಸ್ತುತ ಅವಲಂಬನೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿದೆ. ಪ್ರಸ್ತುತ, ಸರ್ಕಾರಿ ಆಸ್ಪತ್ರೆಗಳಲ್ಲಿ ಕೇವಲ ಶೇ. 35 ರಷ್ಟು ರೋಗಿಗಳಿಗೆ ಮಾತ್ರ TKR ಮತ್ತು THR ಶಸ್ತ್ರಚಿಕಿತ್ಸೆಗಳನ್ನು ನೀಡಲಾಗುತ್ತಿದೆ. ಈ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಬೆಂಗಳೂರಿನಲ್ಲಿರುವ ಸಂಜಯ್ ಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಟ್ರಾಮಾ ಮತ್ತು ಆರ್ಥೋಪೆಡಿಕ್ಸ್ ಅನ್ನು TKR ಮತ್ತು THR ಶಸ್ತ್ರಚಿಕಿತ್ಸೆಗಳಿಗಾಗಿ 'ಉತ್ಕೃಷ್ಟತೆಯ ಕೇಂದ್ರ' (CoE) ಎಂದು ಗೊತ್ತುಪಡಿಸಿದೆ.

ರಾಜ್ಯ ಸರ್ಕಾರ ABArK ಯೋಜನೆಯಡಿಯಲ್ಲಿ ಮಂಡಿ ಶಸ್ತ್ರಚಿಕಿತ್ಸೆ ಮತ್ತು ಹಿಪ್ ರಿಪ್ಲೇಸ್‌ಮೆಂಟ್ ಪರಿಶೀಲಿಸಲು ಜವಾಬ್ದಾರಿಯುತ ಸಮಿತಿಯನ್ನು ಪುನರ್ರಚಿಸಿದೆ. ಈಗ ಮೂರರಿಂದ ನಾಲ್ಕು ಹೆಚ್ಚುವರಿ ಮಂಡಿ ಶಸ್ತ್ರಚಿಕಿತ್ಸಕರನ್ನು ಒಳಗೊಂಡಿರುವ ಈ ಸಮಿತಿಯು ಅಗತ್ಯ ಮತ್ತು ಸೂಕ್ತವಾದ ಶಸ್ತ್ರಚಿಕಿತ್ಸೆಗಳನ್ನು ಮಾತ್ರ ನಿರ್ವಹಿಸುತ್ತದೆ ಮತ್ತು ಖಾಸಗಿ ಆಸ್ಪತ್ರೆಗಳ ರೆಫರಲ್‌ಗಳನ್ನು ಮೇಲ್ವಿಚಾರಣೆ ಮಾಡುತ್ತದೆ.

ದ್ವಿಚಕ್ರವಾಹನದಲ್ಲಿ ಮಕ್ಕಳಿಗೆ ಸುರಕ್ಷತಾ ಉಪಕರಣ ಕಡ್ಡಾಯ: ಉಲ್ಲಂಘಿಸುವವರಿಗೆ ದಂಡ



ಬೆಂಗಳೂರು: ದ್ವಿಚಕ್ರವಾಹನದಲ್ಲಿ ಮಕ್ಕಳನ್ನು ಕರೆದೊಯ್ಯುವ ವೇಳೆ ಕೈಗೊಳ್ಳಬೇಕಿರುವ ಸುರಕ್ಷತಾ ಉಪಕರಣ ಬಗ್ಗೆ ಹಲವರಿಗೆ ಅರಿವು ಇಲ್ಲ. ಈ ಸುರಕ್ಷತಾ ಕ್ರಮಗಳನ್ನು ಕಡ್ಡಾಯಗೊಳಿಸಲಾಗಿದೆ.

ಜನತೆ 9 ರಿಂದ 4 ವರ್ಷಗಳವರೆಗಿನ ಮಕ್ಕಳನ್ನು ದ್ವಿಚಕ್ರವಾಹನಗಳಲ್ಲಿ ಕರೆದೊಯ್ಯುವಾಗ ಸುರಕ್ಷತಾ ಉಪಕರಣ ಬಳಕೆ ಮಾಡಿರದೇ ಇದ್ದಲ್ಲಿ ರಾಜ್ಯ ಸಾರಿಗೆ ಸಂಸ್ಥೆ 1,000 ರೂಪಾಯಿ ದಂಡ ವಿಧಿಸುವ ಎಚ್ಚರಿಕೆ ನೀಡಿದೆ. ನಾಲ್ಕು ವರ್ಷದೊಳಗಿನ ಇಬ್ಬರು ಮಕ್ಕಳ ತಂದೆಯಾಗಿರುವ ಖಾಸಗಿ ಕಂಪನಿ ಉದ್ಯೋಗಿ ವೆಂಕಟೇಶ್ ಎಂ, ಈ ಬಗ್ಗೆ ಮಾತನಾಡಿದ್ದು ಇಂತಹ ನಿಯಮವಿದೆ ಎಂದು ನಮಗೆ ತಿಳಿದಿಲ್ಲ. ಮೊದಲನೆಯದಾಗಿ, ಸಾರಿಗೆ ಇಲಾಖೆಯು ಸುರಕ್ಷತಾ ಕ್ರಮಗಳ ಮಹತ್ವದ ಬಗ್ಗೆ ಮತ್ತು ಕಡ್ಡಾಯ ನಿಯಮದ ಬಗ್ಗೆ ಸಾಕಷ್ಟು ಜಾಗೃತಿ ಮೂಡಿಸಬೇಕು. ಜಾಗೃತಿ ಮೂಡಿಸದೆ ವಾಹನ ಸವಾರರಿಗೆ ಸಾಕಷ್ಟು ಸಮಯಾವಕಾಶ ನೀಡದೆ, ನಿಯಮ ಜಾರಿಗೊಳಿಸಿ ಭಾರಿ ದಂಡ ವಿಧಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಸುರಕ್ಷಾ ಉಪಕರಣಗಳನ್ನು ಭಾರತೀಯ ಮಾನದಂಡಗಳ ಬ್ಯೂರೋ ಪ್ರಮಾಣೀಕರಿಸಬೇಕು ಮತ್ತು ಮಗುವಿನ ಗಾತ್ರ ಮತ್ತು ತೂಕಕ್ಕೆ (30 ಕೆಜಿವರೆಗೆ) ಬದಲಾಯಿಸಬಹುದಾದ ಹೊಂದಾಣಿಕೆ ಪಟ್ಟಿಗಳನ್ನು ಹೊಂದಿರಬೇಕು ಎಂದು ನಿಯಮ ಉಲ್ಲೇಖಿಸಿದೆ.

ಸಾರಿಗೆ ಇಲಾಖೆಯು ಶೀಘ್ರದಲ್ಲೇ ನಿಯಮವನ್ನು ಜಾರಿಗೊಳಿಸಲು ಪ್ರಾರಂಭಿಸಲಿದೆ ಎಂದು ಸಾರಿಗೆ ಹೆಚ್ಚುವರಿ ಆಯುಕ್ತ (ಜಾರಿ) ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ನಾವು ಜಾಗೃತಿ ಮೂಡಿಸುತ್ತಿದ್ದೇವೆ. ಮಕ್ಕಳೊಂದಿಗೆ ಸವಾರಿ ಮಾಡುವವರು ದ್ವಿಚಕ್ರ ವಾಹನದಿಂದ ಮಕ್ಕಳು ಬೀಳುವುದನ್ನು ತಡೆಯಲು ಸರಂಜಾಮು ಬಳಸಬೇಕು ಎಂದು ಅವರು ಹೇಳಿದರು.

ಸುರಕ್ಷತಾ ಸರಂಜಾಮುಗಳನ್ನು ಸರಬರಾಜು ಮಾಡಲು ತಯಾರಕರಿಗೆ ತಿಳಿಸಲಾಗಿದೆ: ಸುರಕ್ಷತಾ ಸರಂಜಾಮು ಪೂರೈಸಲು ವಾಹನ ತಯಾರಕರಿಗೆ ಸಾರಿಗೆ ಇಲಾಖೆ ಮನವಿ ಮಾಡಿದೆ ಮತ್ತು ಅವರು ನೀಡದಿದ್ದರೆ ದಂಡ ವಿಧಿಸಬಹುದು ಎಂದು ಹೆಚ್ಚುವರಿ ಸಾರಿಗೆ ಆಯುಕ್ತ (ಜಾರಿ) ಮಲ್ಲಿಕಾರ್ಜುನ್ ಸಿ ತಿಳಿಸಿದ್ದಾರೆ.

ಶಾಸಕ ಜನಾರ್ದನ ರೆಡ್ಡಿ 14 ವರ್ಷಗಳ ನಂತರ ಬಳ್ಳಾರಿ ಪ್ರವೇಶಕ್ಕೆ 'ಸುಪ್ರೀಂ' ಅನುಮತಿ

ಬಳ್ಳಾರಿ: ಮಹತ್ವದ ಬೆಳವಣಿಗೆಯೊಂದರಲ್ಲಿ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿಗೆ ಸುಪ್ರೀಂ ಕೋರ್ಟ್‌ನಲ್ಲಿ ಬಿಗ್ ರಿಲೀಫ್ ದೊರೆತಿದೆ. ಬಳ್ಳಾರಿಗೆ ತೆರಳಲು ಅವರಿಗೆ ಸುಪ್ರೀಂಕೋರ್ಟ್ ಅನುಮತಿ ನೀಡಿ ಸೋಮವಾರ ಆದೇಶಿಸಿದೆ. ಇದರೊಂದಿಗೆ, ಯಾವುದೇ ಪೂರ್ವಾನುಮತಿ ಇಲ್ಲದೆ ಬಳ್ಳಾರಿಗೆ ತೆರಳಲು ಜನಾರ್ದನ ರೆಡ್ಡಿಗೆ ಅವಕಾಶ ದೊರೆತಂತಾಗಿದೆ.

ಅಕ್ರಮ ಗಣಿಗಾರಿಕೆ ಆರೋಪದ ಹಿನ್ನೆಲೆ ಕಳೆದ ಒಂದೂವರೆ ದಶಕಗಳಿಂದ ತವರು ಜಿಲ್ಲೆಯ ಪ್ರವೇಶವಿಲ್ಲದೆ ವನವಾಸ ಅನುಭವಿಸಿದ್ದ ಮಾಜಿ ಸಚಿವ, ಹಾಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರಿಗೆ ಬಳ್ಳಾರಿ ಪ್ರವೇಶಕ್ಕೆ ಸುಪ್ರೀಂಕೋರ್ಟ್ ಕೊನೆಗೂ ಅನುಮತಿ ನೀಡಿದೆ. ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಆರೋಪಿಯಾಗಿರುವ ಜನಾರ್ದನ ರೆಡ್ಡಿಗೆ ಜಾಮೀನು ನೀಡುವಾಗ ಕೋರ್ಟ್ ಬಳ್ಳಾರಿಗೆ ಭೇಟಿ ನೀಡದಂತೆ ನಿರ್ಬಂಧ ಹೇರಿತ್ತು ಆದ್ದರಿಂದ ಅವರು ಕೊಪ್ಪಳ ಜಿಲ್ಲೆಯ ಗಂಗಾವತಿ ಮತ್ತು ಬೆಂಗಳೂರಿನ 'ಪಾರಿಜಾತ' ನಿವಾಸದಲ್ಲಿಯೇ ವಾಸ್ತವ್ಯ ಹೂಡಿದ್ದರು. ಜನಾರ್ದನ ರೆಡ್ಡಿ ಸಲ್ಲಿಕೆ ಮಾಡಿದ್ದ ಅರ್ಜಿಯ ವಿಚಾರಣೆಯನ್ನು ನಡೆಸಿದ ಸುಪ್ರೀಂಕೋರ್ಟ್ ಬಳ್ಳಾರಿಗೆ ಭೇಟಿ ನೀಡದಂತೆ ಹಾಕಿದ್ದ ಷರತ್ತುಗಳನ್ನು ಸಡಿಲಿಸಿದೆ. ಆದ್ದರಿಂದ ಅವರು ಇನ್ನು ಮುಂದೆ ಬಳ್ಳಾರಿ ಜಿಲ್ಲೆಗೆ ಭೇಟಿ ನೀಡಬಹುದು. ಅಲ್ಲಿರುವ ತಮ್ಮ ಐಷಾರಾಮಿ ನಿವಾಸದಲ್ಲಿ ವಾಸ್ತವ್ಯವನ್ನು ಹೂಡಬಹುದು.



ಮಾಜಿ ಸಚಿವ ಜನಾರ್ದನ ರೆಡ್ಡಿ ಪುತ್ರಿ ಬ್ರಹ್ಮಣಿ ವಿವಾಹದ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಅನುಮತಿ ಪಡೆದು ಬಳ್ಳಾರಿಯ ನಿವಾಸಕ್ಕೆ ಭೇಟಿ ನೀಡಿದ್ದರು. ವಿವಾಹದ ಕಾರಣ 10ಕ್ಕೂ ಹೆಚ್ಚು ದಿನಗಳ ಕಾಲ ಅವರು ಬಳ್ಳಾರಿಯಲ್ಲಿ ವಾಸ್ತವ್ಯ ಹೂಡಲು ಕೋರ್ಟ್ ಅನುಮತಿ ನೀಡಿತ್ತು. ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿದ್ದ ಜನಾರ್ದನ ರೆಡ್ಡಿ ಅವರನ್ನು 2011ರ ಸೆ. 5 ರಂದು ಸಿಬಿಐ ಅಧಿಕಾರಿಗಳು ಬಂಧಿಸಿದ್ದರು. ಬಳಿಕ ರೆಡ್ಡಿ ಆಂಧ್ರಪ್ರದೇಶದ ಚರ್ಲಪಲ್ಲಿ ಜೈಲು ಸೇರಿದ್ದರು. ನಂತರ ನಡೆದ ವಿಚಾರಣೆಯಲ್ಲಿ ಜನಾರ್ದನರೆಡ್ಡಿ ಪ್ರಭಾವಿಯಾಗಿದ್ದು, ಸಾಕ್ಷ್ಯ ನಾಶ ಸಾಧ್ಯತೆ ಹಿನ್ನೆಲೆಯಲ್ಲಿ ಅಕ್ರಮ ಗಣಿಗಾರಿಕೆ ಮಾಡಿದ ಪ್ರದೇಶಗಳಾದ ಬಳ್ಳಾರಿ, ಅನಂತಪುರ ಮತ್ತು ಕರ್ನೂಲು ಜಿಲ್ಲೆ ಪ್ರವೇಶ ನಿಷೇಧ ಹೇರಲಾಗಿತ್ತು. ಹೀಗಾಗಿ 13 ವರ್ಷಗಳಿಂದ ಜನಾರ್ದನ ರೆಡ್ಡಿ ಬಳ್ಳಾರಿಯಿಂದ ದೂರವಿದ್ದರು.

ದೇಶಿ ಹಸುಗಳು 'ರಾಜ್ಯಮಾತಾ–ಗೋಮಾತೆ'; ಮಹಾರಾಷ್ಟ್ರ ಸರ್ಕಾರ ಘೋಷಣೆ

ಮುಂಬೈ: ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೆ ಮುನ್ನ ಬಿಜೆಪಿ ನೇತೃತ್ವದ ರಾಜ್ಯ ಸರ್ಕಾರವು ಸೋಮವಾರ ದೇಸಿ(ಸ್ಥಳೀಯ) ಹಸುಗಳನ್ನು 'ರಾಜ್ಯಮಾತಾ–ಗೋಮಾತೆ' ಎಂದು ಘೋಷಿಸಿದೆ.

ವೇದಗಳ ಕಾಲದಿಂದಲೂ ಹಸುಗಳು ಹೊಂದಿರುವ ಪ್ರಾಮುಖ್ಯತೆಯನ್ನು ಪರಿಗಣಿಸಿ ಅವುಗಳನ್ನು 'ರಾಜ್ಯಮಾತಾ–ಗೋಮಾತೆ' ಎಂದು ಘೋಷಿಸಿರುವುದಾಗಿ ಸರ್ಕಾರದ ಅಧಿಕೃತ ಅಧಿಸೂಚನೆ ತಿಳಿಸಿದೆ. ಮಾನವನ ಪೋಷಣೆಯಲ್ಲಿ ದೇಶಿ ಹಸುವಿನ ಹಾಲಿನ ಪ್ರಾಮುಖ್ಯತೆ, ಆಯುರ್ವೇದ ಮತ್ತು ಪಂಚಗವ್ಯ ಚಿಕಿತ್ಸೆ ಮತ್ತು ಸಾವಯವ ಕೃಷಿಯಲ್ಲಿ ಹಸುವಿನ ಗೊಬ್ಬರದ ಬಳಕೆ ಇತರ ಅಂಶಗಳನ್ನು ಪರಿಗಣಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ರಾಜ್ಯ ಕೃಷಿ, ಹೈನುಗಾರಿಕೆ ಅಭಿವೃದ್ಧಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಹೊರಡಿಸಿದ ಸರ್ಕಾರದ ನಿರ್ಣಯ ತಿಳಿಸಿದೆ.

"ದೇಶಿ ಹಸುಗಳು ರೈತರಿಗೆ ವರದಾನವಾಗಿದೆ. ಆದ್ದರಿಂದ ಮಹಾರಾಷ್ಟ್ರ ಸರ್ಕಾರವು ಅವುಗಳಿಗೆ 'ರಾಜ್ಯ ಮಾತಾ' ಸ್ಥಾನಮಾನ ನೀಡಲು ನಿರ್ಧರಿಸಿದೆ. ಹೆಚ್ಚುವರಿಯಾಗಿ, ಗೋಶಾಲೆಗಳಲ್ಲಿ ದೇಶಿ ಹಸುಗಳನ್ನು ಸಾಕಲು ನೆರವು ನೀಡಲಾಗುವುದು ಎಂದು ಮಹಾರಾಷ್ಟ್ರ ಡಿಸಿಎಂ ದೇವೇಂದ್ರ ಫಡ್ನವಿಸ್ ಹೇಳಿರುವುದಾಗಿ ಎಎನ್‌ಐ ವರದಿ ಮಾಡಿದೆ. ಮಹಾರಾಷ್ಟ್ರ ಮುಖ್ಯಮಂತ್ರಿಗಳ ಕಚೇರಿಯ ಹೇಳಿಕೆಯ ಪ್ರಕಾರ, ರಾಜ್ಯ ಸಚಿವ ಸಂಪುಟವು ದೇಶಿ ಹಸುಗಳನ್ನು ಸಾಕಲು ದಿನಕ್ಕೆ 50 ರೂಪಾಯಿ ಸಬ್ಸಿಡಿ ಯೋಜನೆಗೆ ಅನುಮೋದನೆ ನೀಡಿದೆ.

ರೇವ್ ಪಾರ್ಟಿ; ನಿರ್ಲಕ್ಷ್ಯ, ಕರ್ತವ್ಯ ಲೋಪ

ಇಲವಾಲ ಠಾಣೆ ಸಬ್‌ಇನ್‌ಸ್ಪೆಕ್ಟರ್, ಇಬ್ಬರು ಹೆಡ್‌ಕಾನ್‌ಸ್ಟೇಬಲ್ ಅಮಾನತು

ಮೈಸೂರು, ಸೆ. 30(ಆರ್‌ಕೆ)– ದೊಡ್ಡ ಪ್ರಮಾಣದಲ್ಲಿ ರೇವ್ ಪಾರ್ಟಿ ಆಯೋಜನೆ ಮಾಡಿದ್ದರೂ ತಮಗೆ ಮಾಹಿತಿ ಇರಲಿಲ್ಲ ಎಂದ ಇಲವಾಲ ಠಾಣೆ ಸಬ್‌ಇನ್‌ಸ್ಪೆಕ್ಟರ್ ಎಂ. ಮಂಜುನಾಥ ನಾಯಕ, ಎಸ್‌ಬಿ (ಸ್ಪೆಷಲ್ ಬ್ರಾಂಚ್) ಹೆಡ್ ಕಾನ್‌ಸ್ಟೇಬಲ್ ನಾರಾಯಣ ಹಾಗೂ ಸ್ಥಳದ ಬೀಟ್ ಜವಾಬ್ದಾರಿ ನಿರ್ವಹಿಸುವ ಹೆಡ್ ಕಾನ್‌ಸ್ಟೇಬಲ್ ನಂಜುಂಡೇರಾಜೇ ಅರಸ್ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.



ಎಂ.ಮಂಜುನಾಥ ನಾಯಕ

ಈ ಸಂಬಂಧ ಇಂದು ಆದೇಶ ಹೊರಡಿಸಿರುವ ಮೈಸೂರು ಜಿಲ್ಲಾ ಎಸ್ಪಿ ಎನ್. ವಿಷ್ಣುವರ್ಧನ, ಪೊಲೀಸ್ ಠಾಣಾ ಸರಹದ್ದಿನಲ್ಲಿ ದೊಡ್ಡ ಟೆಂಟ್ ಹಾಕಿ, ಜನರೇಟರ್ ಅಳವಡಿಸಿಕೊಂಡು ಡಿಜೆ ಏರ್ಪಡಿಸಿ, 150ಕ್ಕೂ ಹೆಚ್ಚು ಮಂದಿ ಒಳಗೊಂಡಂತೆ ಪಾರ್ಟಿ ಮಾಡಿ, ಇಡೀ ರಾತ್ರಿ ಮತ್ತಿನಲ್ಲಿ ತೇಲಾಡಿದ್ದರೂ, ಸಬ್‌ಇನ್‌ಸ್ಪೆಕ್ಟರ್‌ಗೆ ಮಾಹಿತಿಯೇ ಇರಲಿಲ್ಲ ಎಂಬುದು ನಿರ್ಲಕ್ಷ್ಯ ಹಾಗೂ ಕರ್ತವ್ಯ ಲೋಪ ಎಂದು ಎಂ. ಮಂಜುನಾಥ ನಾಯಕ ಸೇರಿ ಮೂವರನ್ನು ಇಲಾಖಾ ವಿಚಾರಣೆ ಬಾಕಿ ಇರಿಸಿ, ಸೇವೆಯಿಂದ ಅಮಾನತುಗೊಳಿಸಿದ್ದಾರೆ.

ಅದೇ ರೀತಿ ತಮ್ಮ ಠಾಣಾ ವ್ಯಾಪ್ತಿಯ ಗ್ರಾಮಗಳಲ್ಲಿ ಜನರೊಂದಿಗೆ ಸಂಪರ್ಕ ಇರಿಸಿಕೊಂಡು, ಸಭೆ–ಸಮಾರಂಭ, ಕೂಟ ಸೇರುವುದು, ಗುಂಪು ಚರ್ಚೆ, ರಾಜಕೀಯ ವಿದ್ಯಮಾನ, ಪ್ರತಿಭಟನೆ, ಸಮಾಜಘಾತುಕ ಚಟುವಟಿಕೆಗಳ ಹುನ್ನಾರ, ಕಾನೂನು–ಸುವ್ಯವಸ್ಥೆಗೆ ಭಂಗ ಉಂಟು ಮಾಡುವಂತಹ ಘಟನೆಗಳ ಸಂಬಂಧ ರಹಸ್ಯವಾಗಿ ಮಾಹಿತಿ ಸಂಗ್ರಹಿಸಿ ಸಂಭವಿಸಬಹುದಾದ ಕೃತ್ಯಗಳನ್ನು ತಡೆಯಬೇಕಾದ ಎಸ್‌ಬಿ ಹೆಡ್‌ಕಾನ್‌ಸ್ಟೇಬಲ್ ಬೇಜವಾಬ್ದಾರಿ ಪ್ರದರ್ಶಿಸಿದ್ದಾರೆ ಎಂದು ಎಸ್ಪಿ ಅಮಾನತು ಆದೇಶದಲ್ಲಿ ತಿಳಿಸಿದ್ದಾರೆ.

ಹಾಗೆಯೇ ತಮಗೆ ನಿಗದಿಪಡಿಸಿರುವ ದಿನದಂದು ರಾತ್ರಿ ಬೀಟ್ ಕರ್ತವ್ಯ ನಿರ್ವಹಿಸಬೇಕಾದ ಹೆಡ್‌ಕಾನ್‌ಸ್ಟೇಬಲ್ ನಂಜುಂಡರಾಜೇ ಅರಸ್ ಎಚ್ಚರ ವಹಿಸಿದ್ದರೂ, ರೇವ್ ಪಾರ್ಟಿ ವಿಷಯ ತಿಳಿಯುತ್ತಿತ್ತು. ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದರೆ ಆ ಕಾರ್ಯಕ್ರಮ ತಡೆಯಬಹುದಿತ್ತು ಎಂದು ವಿಷ್ಣುವರ್ಧನ್ ಆದೇಶದಲ್ಲಿ ಉಲ್ಲೇಖಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

ಮೈಸೂರು,ಸೆ.30– ಮೈಸೂರು ನಗರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಲ್ಲಿ ಖಾಲಿ ಇರುವ 6 ಅಂಗನವಾಡಿ ಕಾರ್ಯಕರ್ತೆ ಹಾಗೂ 30 ಅಂಗನವಾಡಿ ಸಹಾಯಕಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಮಾಹಿತಿಗಾಗಿ ದೂ: 0821–2491962 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

ನವಭಾರತ್ ನಿರ್ಮಾಣ್ ಸೇವಾ ಟ್ರಸ್ಟ್ ವತಿಯಿಂದ

ಅ.4ರಿಂದ 6ರವರೆಗೆ ಮೂರು ದಿನ ಹೆಬ್ಬಾಳು ದಸರಾ ಮಹೋತ್ಸವ

● ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡೆ ಸೇರಿ ವೈವಿಧ್ಯಮಯ ಕಾರ್ಯಕ್ರಮ ಆಯೋಜನೆ ● ಸಾಮಾಜಿಕ ಅನಿಷ್ಟಗಳ ವಿರುದ್ಧ ಜನಜಾಗೃತಿಗೂ ಆದ್ಯತೆ ● ಟ್ರಸ್ಟ್ ಅಧ್ಯಕ್ಷ ಹೆಬ್ಬಾಳ್ ಕೆ.ವಿ.ಶ್ರೀಧರ ಮಾಹಿತಿ

ಮೈಸೂರು, ಸೆ.30(ಪಿಎಂ)– ಮೈಸೂರು ದಸರಾ ಸಂದರ್ಭದಲ್ಲಿ ನವಭಾರತ್ ನಿರ್ಮಾಣ್ ಸೇವಾ ಟ್ರಸ್ಟ್ ವತಿಯಿಂದ ಕಳೆದ 4 ವರ್ಷಗಳಿಂದ ಆಚರಿಸಲಾಗುತ್ತಿರುವ ಹೆಬ್ಬಾಳು ದಸರಾ ಈ ಬಾರಿಯೂ ಅದ್ಧೂರಿಯಾಗಿ ಆಯೋಜನೆಗೊಂಡಿದೆ. ಅ.4ರಿಂದ 6ರವರೆಗೆ ಮೂರು ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮ, ಕ್ರೀಡೆ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳೊಂದಿಗೆ ಹೆಬ್ಬಾಳು ದಸರಾ ಮಹೋತ್ಸವ ಆಚರಿಸಲಾಗುತ್ತಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಟ್ರಸ್ಟ್‌ನ ಅಧ್ಯಕ್ಷರೂ ಆದ ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹೆಬ್ಬಾಳ್ ಕೆ.ವಿ.ಶ್ರೀಧರ ಈ ವಿಷಯ ತಿಳಿಸಿದರು. 'ಹೆಬ್ಬಾಳು' ಎಂದರೆ ಅರ್ಥ ದೊಡ್ಡದು ಎನ್ನುವುದಾಗಿದೆ. ಹಾಗಾಗಿ ದೊಡ್ಡ ಊರಿನ ಹಬ್ಬ ಇದು. ಹೆಬ್ಬಾಳು ಗ್ರಾಮದ ವ್ಯಾಪ್ತಿಗೆ ಮಂಚೇಗೌಡನಕೊಪ್ಪಲು, ಕುಂಬಾರಕೊಪ್ಪಲು, ಲಕ್ಷ್ಮೀಕಾಂತನಗರ, ಲೋಕನಾಯಕ ನಗರ, ವಿಜಯನಗರ ಮೊದಲ ಹಂತ ಭಾಗಶಃ ಪ್ರದೇಶ, ವಾಣಿವಿಲಾಸ ಬಡಾವಣೆ ಸೇರಿದಂತೆ ಮೊದಲಾದ ಬಡಾವಣೆಗಳು ಒಳಗೊಳ್ಳಲಿವೆ. ಹೆಬ್ಬಾಳು ಗ್ರಾಮದ ಹೆಸರಿನಲ್ಲಿ ಈ ಕಾರ್ಯಕ್ರಮ ಮಾಡುತ್ತಿದ್ದೇವೆ ಎಂದು ಅವರು ತಿಳಿಸಿದರು.

ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳಿಂದ ಯುವ ಸಮುದಾಯವನ್ನು ರಕ್ಷಿಸಿ ಜಾಗೃತಿ ಮೂಡಿಸುವುದು ಈ ಬಾರಿಯ ಹೆಬ್ಬಾಳು ದಸರಾದ ಮುಖ್ಯ ಉದ್ದೇಶವಾಗಿದೆ. ಇಂತಹ ಗೇಮ್‌ಗಳಿಗೆ ಆಕರ್ಷಿತರಾಗಿರುವ ಯುವ ಸಮುದಾಯ ತಮ್ಮ ಜೀವನವನ್ನು ಸರ್ವನಾಶ ಮಾಡಿಕೊಳ್ಳುತ್ತಿದೆ. ಬೆಟ್ಟಿಂಗ್ ಗೇಮ್‌ಗಳಿಂದ ಉಂಟಾಗುವ ಅನಾಹುತಗಳ ಬಗ್ಗೆ ಎಚ್ಚೆತ್ತುಕೊಳ್ಳುವುದು ತುರ್ತು ಅಗತ್ಯವಾಗಿದೆ ಎಂದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಹೆಬ್ಬಾಳು ದಸರಾದ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು.

ಅ.4ರಂದು ಯುವ ಜಾಗೃತಿ: ಅ.4ರಂದು ಬೆಳಗ್ಗೆ 6 ಗಂಟೆಗೆ ಯುವ ಜಾಗೃತಿಯ ಸೈಕಲ್ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ. ಜಾಥಾವು ವಿಜಯನಗರ ರೈಲ್ವೆ ಲೇಔಟ್‌ನ ಇಂದಿರಾ ನರ್ಸಿಂಗ್ ಹೋಂ ಎದುರಿನ ರಂಗಮಂದಿರ ಬಳಿಯಿಂದ ಆರಂಭಿಸಿ ಒಂಟಿಕೊಪ್ಪಲು ಮಾರ್ಗವಾಗಿ ಅರಮನೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಸಮಾವೇಶಗೊಳ್ಳಲಿದೆ. ಇಲ್ಲಿ ಮಾಜಿ ಕ್ರಿಕೆಟ್ ಪಟು ಜಾವಗಲ್ ಶ್ರೀನಾಥ್ ಸೈಕಲ್ ಜಾಥಾಗೆ ಚಾಲನೆ ನೀಡಲಿದ್ದಾರೆ ಎಂದು ಹೇಳಿದರು.

ಜಾಥಾದ ಮೂಲಕ ಯುವ ಜನರಲ್ಲಿ ಬೆಟ್ಟಿಂಗ್ ಗೇಮ್‌ಗಳಿಂದ ಆಗುವ ಅಪಾಯದ ಬಗ್ಗೆ ಜಾಗೃತಿ ಮೂಡಿಸಲಾಗುವುದು. ಜೊತೆಗೆ ದಿನೇ ದಿನೆ ಹವಾಮಾನ ವೈಪರೀತ್ಯ ಹೆಚ್ಚುತ್ತಿದ್ದು, ಇದರಿಂದ ಭೂಮಿ ಮೇಲೆ ತಾಪಮಾನ, ಭೂಕುಸಿತ, ಪ್ರವಾಹ ಮುಂತಾದ ಹಲವು ತೊಂದರೆಗಳಾಗುತ್ತಿವೆ. ನಾಗರಿಕರಾದ ನಾವು ಈ ನಿಟ್ಟಿನಲ್ಲಿ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಜಾಥಾ ಮೂಲಕ ಅರಿವು ಮೂಡಿಸಲಾಗುವುದು. ಸೈಕಲ್ ಜಾಥಾದಲ್ಲಿ ಭಾಗವಹಿಸುವವರಿಗೆ ಉಪಾಹಾರ, ಟೀ–ಶರ್ಟ್ ನೀಡಲಾಗುತ್ತದೆ. ಮೊದಲು ಹೆಸರು ನೋಂದಾಯಿಸಿಕೊಂಡವರಿಗೆ ಮಾತ್ರ ಜಾಥಾದಲ್ಲಿ ಸೈಕಲ್ ನೀಡಲಾಗುತ್ತದೆ ಎಂದರು.

ಅ.5, 6ರಂದು ಕ್ರೀಡಾ ಹಬ್ಬ: ಕ್ರೀಡಾ ಹಬ್ಬ ಕಾರ್ಯಕ್ರಮವನ್ನು ವಿಜಯನಗರ ರೈಲ್ವೆ ಲೇಔಟ್‌ನ ಇಂದಿರಾ ನರ್ಸಿಂಗ್ ಹೋಂ ಎದುರಿನ ರಂಗಮಂದಿರದಲ್ಲಿ ಆಯೋಜನೆ ಮಾಡಲಾಗುತ್ತಿದೆ. ಅ.5ರಂದು ಹೆಬ್ಬಾಳಿನ ಮಹಿಳೆಯರು ಮತ್ತು ಮಕ್ಕಳು ಹಾಗೂ ಅ.6ರಂದು ಹೆಬ್ಬಾಳು ಬಡಾವಣೆಯ ಪುರುಷರಿಗೆ ಕ್ರೀಡೆಗಳು ನಡೆಯಲಿವೆ. ಅಲ್ಲದೆ, ಚಿತ್ರಕಲೆ, ಲೆಮನ್ ಅಂಡ್ ಸ್ಪೂನ್, ಹಗ್ಗಜಗ್ಗಾಟ, ಓಟದ ಸ್ಪರ್ಧೆ, ಶಾಟ್‌ಪುಟ್, ಮ್ಯೂಸಿಕಲ್ ಚೇರ್, ಬಾಲ್ ಇನ್ ದ ಬಕೆಟ್ ಸೇರಿದಂತೆ ಹಲವು ಸ್ಪರ್ಧೆಗಳನ್ನು 10ರಿಂದ 60 ವರ್ಷ ವಯೋಮಾನದವರಿಗೆ ಆಯೋಜಿಸಲಾಗಿದೆ ಎಂದು ಹೇಳಿದರು.

ಅ.6ರಂದು ಸಾಂಸ್ಕೃತಿಕ ಸಂಭ್ರಮ: ವಿಜಯನಗರ ರೈಲ್ವೆ ಬಡಾವಣೆಯ ಇಂದಿರಾ ನರ್ಸಿಂಗ್ ಹೋಂ ಎದುರಿನ ರಂಗಮಂದಿರದಲ್ಲಿ ಅ.6ರಂದು ಸಂಜೆ 6ಕ್ಕೆ ಸಂಗೀತ ಸೇರಿದಂತೆ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮ ಆಯೋಜಿಸಲಾಗಿದೆ. ಖ್ಯಾತ ಗಾಯಕಿ ಐಶ್ವರ್ಯಾ ರಂಗರಾಜನ್ ಅವರ ಕಾರ್ಯಕ್ರಮ ಇದ್ದು, ಇದರೊಂದಿಗೆ ಹಲವು ನೃತ್ಯ ತಂಡಗಳು ಪ್ರದರ್ಶನ ನೀಡಲಿವೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಬಡಾವಣೆಯ ನಾಗರಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಹೆಬ್ಬಾಳ್ ಕೆ.ವಿ.ಶ್ರೀಧರ ಕೋರಿದರು. ಆನ್‌ಲೈನ್ ಗೇಮ್‌ಗಳು ಹಾಗೂ ಬೆಟ್ಟಿಂಗ್‌ಗಳು ಕೋವಿಡ್–19ರ ಅವಧಿಯಲ್ಲಿ ಶುರುವಾದ ಚಟ. ಇದು ಭಾರತದ ಯುವ ಜನರನ್ನು ಆಕರ್ಷಿಸಿ ಅವರ ಜೀವನವನ್ನು ಸರ್ವನಾಶ ಮಾಡುತ್ತಿದೆ. ಅಂದಾಜಿನ ಪ್ರಕಾರ ಭಾರತದಲ್ಲಿ ಸರಿಸುಮಾರು 15ರಿಂದ 19 ವರ್ಷದೊಳಗಿನ ಯುವ ಜನರು (ಶೇ.15) ಹೆಚ್ಚಿನ ಪ್ರಮಾಣದಲ್ಲಿ ಆನ್‌ಲೈನ್ ಅಥವಾ ಬೆಟ್ಟಿಂಗ್ ಗೇಮಿಂಗ್ ಆ್ಯಪ್‌ಗಳ ವ್ಯಸನಿಗಳಾಗುತ್ತಿದ್ದಾರೆ. ಈ ಚಟವು ಮದ್ಯಪಾನ, ಡ್ರಗ್ಸ್ ಸೇವನೆಗಳಿಗಿಂತಲೂ ಹಾನಿಕಾರಕ ಎಂದು ಅವರು ವಿಷಾದಿಸಿದರು. ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಸೇರಿದಂತೆ ಮತ್ತಿತರರು ಗೋಷ್ಠಿಯಲ್ಲಿದ್ದರು.

ನಕ್ಕರೆ ಅದೇ ಸ್ವರ್ಗ

ಗಂಡ : ಮದುವೆಯಾಗಿ 20 ವರ್ಷವಾಯ್ತು. ನಾನು ಏನು ಮಾತಾಡಿದ್ರೂ ತಪ್ಪು ಕಂಡು ಹಿಡೀತೀಯಲ್ಲೇ...

ಹೆಂಡತಿ : ನೆಟ್ಟಗೆ ಮಾತಾಡೋದು ಈ ಜನ್ಮಕ್ಕೆ ನಿಮಗೆ ಬರಲ್ಲ. ನಮ್ ಮದುವೆಯಾಗಿ ಇಪ್ಪತ್ತಲ್ಲ ಇಪ್ಪತ್ತೊಂದು ವರ್ಷವಾಯಿತು..!

ಮೈಸೂರು ಮಿತ್ರ

ಮಂಗಳವಾರ, 1 ಅಕ್ಟೋಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ನನ್ನಂತಹವರು ಕನ್ನಡಕ್ಕೆ ಅನೇಕರಿದ್ದಾರೆ. ಆದರೆ ನನಗಿರುವುದು ಒಂದೇ ಕನ್ನಡ. –ಅ.ನ. ಕೃಷ್ಣರಾಯರು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಾಯಲ್ಲೆಲ್ಲಾ ವೇದಾಂತ, ಮಾಡುವುದೆಲ್ಲಾ ರಾದ್ಧಾಂತ.

ನಿಮ್ಮ ಪತ್ರಗಳು

ದಾಸಪ್ಪ ಸರ್ಕಲ್ ಅವ್ಯವಸ್ಥೆ

ಮಾನ್ಯರೆ,



ಮೈಸೂರಿನ ಪಾರಂಪರಿಕ ತಾಣವಾಗ ಬೇಕಿದ್ದ ದಾಸಪ್ಪ ಸರ್ಕಲ್ ನಗರ ಪಾಲಿಕೆ ಮತ್ತು ನಗರ ಪೋಲೀಸರ ನಿರ್ಲಕ್ಷತನದಿಂದ ಅವ್ಯವಸ್ಥೆಯ ತಾಣ ವಾಗಿದೆ. ನಗರ ಪಾಲಿಕೆಯು ಕೋಟಿ ಕೋಟಿ ರೂಗಳನ್ನು ಖರ್ಚು ಮಾಡಿ ಪಾರಂಪರಿಕ ದೀಪಗಳನ್ನು ಅಳವಡಿಸಿ, ಕಾಲುಹಾಸುಗಳನ್ನು ಹಾಕಿ ದಾಸಪ್ಪ ಸರ್ಕಲ್ ಕಂಗೊಳಿಸುವಂತೆ ಮಾಡಿದ್ದರು. ಅವರ ಆಲೋಚನೆಯು ಚೆನ್ನಾಗಿತ್ತು. ಆದರೆ ಸದರಿ ಸರ್ಕಲ್ ಅನ್ನು ಫುಟ್‌ಪಾತ್ ಕ್ಯಾಂಟೀನ್‌ಗಳಿಗೆ ಅವಕಾಶ ಮಾಡಿ ಕೊಟ್ಟು ನಗರದ ಪಾರಂಪರಿಕ ಉದ್ದೇಶವನ್ನೇ ಮರೆತಿದ್ದಾರೆ. ಖಾಲಿ ಲೋಟ ತಟ್ಟೆಗಳು ದಾಸಪ್ಪ ಸರ್ಕಲ್‌ನ ಅಂದವನ್ನು ಹಾಳು ಮಾಡಿವೆ. ವಿಪರ್ಯಾಸವೆಂದರೆ ಹತ್ತಿರದಲ್ಲೇ ಪೊಲೀಸ್ ಚೌಕಿ ಇದೆ. ಫುಟ್‌ಪಾತ್‌ಗಳಲ್ಲಿ ಬಡ ವ್ಯಾಪಾರಿಗಳನ್ನು ಒಕ್ಕಲೆಬ್ಬಿಸುವ ಪೊಲೀಸರಿಗೆ ಸದರಿ ಸರ್ಕಲ್‌ನಲ್ಲಿ ಕ್ಯಾಂಟಿನ್ ನಡೆಸುತ್ತಿರುವುದು ಗೊತ್ತಿಲ್ಲವೆ ಅಥವಾ ಜಾಣ ಕುರುಡೆ. ನಗರಪಾಲಿಕೆ ಕಮೀಷನರ್ ಇಲ್ಲವೇ ಪೊಲೀಸ್ ಕಮಿಷನರ್ ಅವರು ದಾಸಪ್ಪ ಸರ್ಕಲ್‌ನ ಅವ್ಯವಸ್ಥೆಯನ್ನು ಗಮನಿಸಿಲ್ಲವೇ? ಪಾರಂಪರಿಕ ತಾಣವಾಗಿರುವ ನಮ್ಮ ಮೈಸೂರಿಗೆ ಪ್ರವಾಸಿಗರನ್ನು ಸೆಳೆಯಬೇಕಾದರೆ ಈ ರೀತಿಯ ಅವ್ಯವಸ್ಥೆಗಳನ್ನು ಮೊದಲು ಸರಿಪಡಿಸಬೇಕು.

–ಮೈ.ನಾ. ನರೇಂದ್ರ, ಮೈಸೂರು.

ಪಾರಿವಾಳಗಳ ಹೊಟ್ಟೆಯ ಮೇಲೆ ಹೊಡೆಯಬೇಡಿ

ಮಾನ್ಯರೆ,

ಮೈಸೂರಿನ ಪಾರಂಪರಿಕ ಕಟ್ಟಡಗಳ ಸುತ್ತಮುತ್ತ ಅದರಲ್ಲೂ ವಿಶೇಷವಾಗಿ ಮೈಸೂರು ಅರಮನೆಯ ಆಜುಬಾಜಿನಲ್ಲಿ ನೆಲೆ ಕಂಡುಕೊಂಡಿರುವ ಸಾವಿರಾರು ಅತ್ಯಾಕರ್ಷಕ ಪಾರಿವಾಳಗಳಿಗೆ ಪ್ರತಿ ನಿತ್ಯ ಧಾನ್ಯ ಹಾಗೂ ಇತರ ಕಾಳುಗಳನ್ನು ಆಹಾರ ರೂಪದಲ್ಲಿ ಕೆಲವು ಪಕ್ಷಿ ಪ್ರಿಯರು ಹಾಗೂ ಸಂಘ ಸಂಸ್ಥೆಗಳು ಹಾಕುತ್ತಾ ಬರುತ್ತಿರುವುದು ಸರಿಯಷ್ಟೆ ಆದರೆ ಪಾರಿವಾಳಗಳು ಹಾಕುವ ಹಿಕ್ಕೆಗಳಿಂದ ಪಾರಂಪರಿಕ ಕಟ್ಟಡ, ಪರಿಸರದ ಮೇಲೆ ವ್ಯತಿರಕ್ತ ಪರಿಣಾಮ ಉಂಟಾಗುತ್ತದೆ ಹಾಗೂ ಪಾರಂಪರಿಕ ಕಟ್ಟಡಗಳ ಅಸ್ತಿತ್ವಕ್ಕೆ ಧಕ್ಕೆ ಉಂಟಾಗುತ್ತದೆ ಎಂಬ ಕಾರಣದಿಂದ ಪಾರಿವಾಳಗಳಿಗೆ ಧಾನ್ಯಗಳನ್ನು ಹಾಕಬಾರದು ಎಂಬ ಕೂಗು ಕಳೆದ ಕೆಲವು ತಿಂಗಳುಗಳಿಂದ ಕೇಳಿ ಬರುತ್ತಿದೆ. ಮನುಷ್ಯರಂತೆ, ಪಶು– ಪಕ್ಷಿಗಳಿಗೂ ಆಹಾರದ ಅನಿವಾರ್ಯತೆ ಬಹಳ ಇದೆ. ಅದು ಸುಲಭ ರೀತಿ ಸಿಗುವುದು ಒಳ್ಳೆಯದು. ಮನುಷ್ಯ ನಾನಾ ರೀತಿಯ ಕಸರತ್ತು ಮಾಡಿ ತನ್ನ ತುತ್ತಿನ ಚೀಲ ತುಂಬಿಸಿಕೊಳ್ಳುತ್ತಾನೆ. ಆದರೆ, ಪಾರಿವಾಳಗಳು ಎಲ್ಲಿಗೆ ಹೋಗಬೇಕು? ಅದೂ ಅಲ್ಲದೆ ಈ ಪಾರಿವಾಳಗಳು ನೂರಾರು ವರ್ಷಗಳಿಂದ ಅರಮನೆಯ ಸುತ್ತ ಮುತ್ತಲಿನ ಸ್ಥಳಗಳಲ್ಲಿ ಅಥವಾ ಅರಮನೆಯ ಪ್ರವೇಶ ದ್ವಾರ ಮತ್ತು ಇತರ ಸ್ಥಳಗಳಲ್ಲಿ ತಮ್ಮ ಆಹಾರ ಕಂಡುಕೊಂಡಿವೆ. ಅವುಗಳನ್ನು ಅಲ್ಲಿಂದ ಓಡಿಸುವುದು ಪಾಪದ ಕೆಲಸ. ಅರಮನೆ ಮಂಡಳಿಯಾಗಲೀ ಅಥವಾ ಜಿಲ್ಲಾ ಆಡಳಿತವಾಗಲೀ, ಪಾರಿವಾಳಗಳ ಆಹಾರ ಪೂರೈಕೆಗೆ ಸಮಸ್ಯೆ ಉಂಟಾಗದ ಹಾಗೆ ಈ ಸಮಸ್ಯೆಯನ್ನು ಬಗೆಹರಿಸುವುದು ಸೂಕ್ತ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು


ಯುವ ದಸರಾ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆಸುವುದು ಸೂಕ್ತ

ಮಾನ್ಯರೆ,

ಯುವ ದಸರಾವನ್ನು ಈ ವರ್ಷ ಉತ್ತನಹಳ್ಳಿ ಬಳಿ ಏರ್ಪಡಿಸಲು ನಿರ್ಧಾರ ಮಾಡಿರುವುದು ಅಷ್ಟು ಸೂಕ್ತವಲ್ಲ. ಕಾರ್ಯಕ್ರಮ ಮುಗಿದ ನಂತರ ಹಿರಿಯ ನಾಗರಿಕರು, ಮಹಿಳೆಯರು, ಮಕ್ಕಳು ಮತ್ತು ಹೆಣ್ಣು ಮಕ್ಕಳು ಮಧ್ಯ ರಾತ್ರಿಯಲ್ಲಿ ಊರಾಚೆಯಿಂದ ಬರುವುದು ಅಷ್ಟು ಸುರಕ್ಷಿತವಲ್ಲ. ಈ ಮೆಗಾ ಕಾರ್ಯಕ್ರಮ ನಗರದ ಹೊರವಲಯದಲ್ಲಿ ನಡೆಯುವುದರಿಂದ ಸ್ವಂತ ವಾಹನಗಳನ್ನು ಹೊಂದಿರುವವರು ಬಂದು ಹೋಗಬಹುದು. ಆದರೆ ವಾಹನಗಳಿಲ್ಲದಿರುವವರು ಕಾರ್ಯಕ್ರಮಕ್ಕೆ ಹೋಗಿ ನಡು ರಾತ್ರಿಯಲ್ಲಿ ವಾಪಸ್ ಮನೆಗೆ ಬರುವುದಾದರೂ ಹೇಗೆ? ಇನ್ನು ದಸರಾ ಸಮಯದಲ್ಲಿ ಆಟೋದವರು ದುಪ್ಪಟ್ಟು ಹಣ ಕೇಳುತ್ತಾರೆ. ಆದರೂ ಬರುವುದಿಲ್ಲ. ಜಿಲ್ಲಾಡಳಿತ ಬಸ್ ವ್ಯವಸ್ಥೆ ಮಾಡಬಹುದು. ಅದೂ ಸಮರ್ಪಕವಾಗಿರುವ ಖಾತರಿಯಂತೂ ಇಲ್ಲ. ಇವೆಲ್ಲದರ ಬಗ್ಗೆ ಯೋಚಿಸಿ ಸೂಕ್ತ ಪರ್ಯಾಯ ವ್ಯವಸ್ಥೆಗಳನ್ನು ಮಾಡುವುದಾದರೆ ಮಾತ್ರ ಹೊರ ವಲಯದಲ್ಲಿ ಕಾರ್ಯಕ್ರಮ ಆಯೋಜಿಸಲಿ. ಇಲ್ಲವಾದರೆ ಎಂದಿನಂತೆ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜನೆ ಮಾಡಲಿ.

–ಕೃಷ್ಣ ಹೆಗಡೆ, ರಾಜರಾಜೇಶ್ವರಿನಗರ, ಮೈಸೂರು.

ನಿರ್ವಹಣೆ ಇಲ್ಲದ ಜೆಎಸ್‌ಎಸ್ ಕಾನೂನು ಕಾಲೇಜು ಹಿಂಭಾಗದ ಶೌಚಾಲಯ



ಮಾನ್ಯರೆ,

ಜೆಎಸ್‌ಎಸ್ ಕಾನೂನು ಕಾಲೇಜಿನ ಹತ್ತಿರದ ಸಾರ್ವಜನಿಕ ಶೌಚಾಲಯದಲ್ಲಿ ಸರಿಯಾದ ನಿರ್ವಹಣೆ ಇಲ್ಲ. ಶೌಚಾಲಯದಿಂದ ಬರುವ ದುರ್ವಾಸನೆಯಿಂದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ನಿತ್ಯ ಮೂಗು ಮುಚ್ಚಿ ಓಡಾಡುವಂತಾಗಿದೆ. ಇದನ್ನು ಬಳಕೆ ಮಾಡಿದವರು ಅನಾರೋಗ್ಯಕ್ಕೀಡಾಗುವ ಸಾಧ್ಯತೆ ಇದೆ.

ಇದರ ಜೊತೆಗೆ, ಕಾನೂನು ಕಾಲೇಜಿನ ಸುತ್ತಮುತ್ತ ಸಾರ್ವಜನಿಕರು ವ್ಯಾಪಕವಾಗಿ ಧೂಮಪಾನ ಮಾಡುವುದುಂಟು. ಇಂತಹ ಸ್ಥಳದಲ್ಲಿ ಧೂಮಪಾನ ಮಾಡುವುದು ಕಾನೂನಿನ ಪ್ರಕಾರ ತಪ್ಪು ಮಾತ್ರವಲ್ಲ, ಅದು ಜನರ ಆರೋಗ್ಯಕ್ಕೂ ತೀವ್ರ ಹಾನಿ ಉಂಟುಮಾಡುತ್ತಿದೆ. ವಿದ್ಯಾರ್ಥಿಗಳ ಓದಿಗೆ ಈ ನಕಾರಾತ್ಮಕ ಪರಿಸರವು ಮಾರಕವಾದುದು. ಸಂಬಂಧಪಟ್ಟ ಅಧಿಕಾರಿಗಳು ಈ ಸಮಸ್ಯೆಗಳನ್ನು ಶೀಘ್ರವಾಗಿ ಸರಿಪಡಿಸಬೇಕೆಂದು ಸಂಬಂಧಪಟ್ಟವರಲ್ಲಿ ಮನವಿ.

–ಜೆಎಸ್‌ಎಸ್ ಕಾನೂನು ವಿದ್ಯಾರ್ಥಿಗಳು, ಮೈಸೂರು.

ಅಪರಾಧ ತನಿಖೆಯಲ್ಲಿ 'ಫೊರೆನ್ಸಿಕ್ ಸೈನ್ಸ್' ಮಹತ್ವ



> "ಕ್ಲಿಷ್ಟಕರ ಪ್ರಕರಣಗಳನ್ನು ಭೇದಿಸಿ ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸಲು ನ್ಯಾಯ ವಿಜ್ಞಾನ ಪ್ರಯೋಗಾಲಯ ಸದಾ ಸಹಾಯಕವಾಗಿವೆ. ಆದರೂ ವಿವಿಧ ಪ್ರಕರಣಗಳು ನ್ಯಾಯಾಲಯ ಅಂಗಳದಲ್ಲಿ ಹಲವಾರು ಕಾರಣಗಳಿಂದ ಖುಲಾಸೆಯಾಗುತ್ತಿವೆ. ಸಾಕ್ಷ್ಯಾಧಾರಗಳ ಕೊರತೆಯಿಂದಲೋ ಅಥವಾ ಇತರ ಅಂಶಗಳಿಂದಲೋ ಅಪರಾಧಿಗಳು ಶಿಕ್ಷೆಯಿಂದ ತಪ್ಪಿಸಿಕೊಳ್ಳುತ್ತಿದ್ದಾರೆ. ಸುಮಾರು 20 ವರ್ಷಗಳ ಕಾಲ ವಿಚಾರಣೆ ನಡೆಸಿದ ಸುಪ್ರಿಂಕೋರ್ಟ್ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಉತ್ತರ ಭಾರತದ ಇಬ್ಬರು ಸರಣಿ ಅತ್ಯಾಚಾರಿಗಳನ್ನು ಸಾಕ್ಷ್ಯಾಧಾರಗಳ ಕೊರತೆಯಿಂದ ಖುಲಾಸೆ ಮಾಡಿತು. ಇದು ದೇಶದಲ್ಲೇ ಅಚ್ಚರಿ ಮೂಡಿಸಿದ ಸಂಗತಿ.



ಡಾ.ಎಲ್.ಶಶಿಕುಮಾರ್
ವೈಜ್ಞಾನಿಕ ಅಧಿಕಾರಿ,
ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ,
ಜಲಪುರಿ, ಕೆಪಿಎ ಆವರಣ, ಮೈಸೂರು
ಮೊ: 7204932795

ಉಗುರಿನಲ್ಲಿದ್ದ ಚರ್ಮದ ತುಣುಕಿನಿಂದ ಸಿಕ್ಕಿ ಬಿದ್ದ ಕೊಲೆಗಾರ! ಕೂದಲಿನ ಪರೀಕ್ಷೆಯಲ್ಲಿ ಸೆರೆಸಿಕ್ಕ ಅತ್ಯಾಚಾರಿ ಕಾಮುಕ! ರಕ್ತದ ಮಾದರಿಯಲ್ಲಿ ಬಯಲಾದ ನಿಜವಾದ ನರಹಂತಕ! ಹೀಗೆ ಬೆಳಗ್ಗೆ ಹಾಸಿಗೆಯಿಂದ ಎದ್ದ ತಕ್ಷಣ ದಿನಪತ್ರಿಕೆಗಳಲ್ಲಿ ಕಣ್ಣಾಡಿಸಿದಾಗ ಕೊಲೆ, ಮಾನಭಂಗದಂತಹ ಬರ್ಬರ ಕೃತ್ಯ ಪ್ರಕರಣಗಳ ಅಪರಾಧಿಗಳು ಸಿಕ್ಕಿ ಬಿದ್ದ ವಿಷಯಗಳನ್ನು ನಾವು ನೋಡುತ್ತಿರುತ್ತೇವೆ. ಇಂತಹ ಅಪರಾಧ ಪ್ರಕರಣಗಳನ್ನು ಭೇದಿಸುವಲ್ಲಿ ನಮಗೆ ಇಂದು ನಿಜವಾಗಿಯೂ ನೆರವಾಗುತ್ತಿರುವುದು ನಾವು ಕರೆಯುವ 'ನ್ಯಾಯ ವಿಜ್ಞಾನ' (ಫೊರೆನ್ಸಿಕ್ ಸೈನ್ಸ್) ಆಗಿದೆ.

ಹಲವು ತಿಂಗಳುಗಳಿಂದ ಬಹಳಷ್ಟು ಸದ್ದು ಮಾಡಿದ್ದ ಹುಲಿ ಉಗುರಿನ ನೈಜತೆ ಪರೀಕ್ಷೆಗೂ ನ್ಯಾಯ ವಿಜ್ಞಾನದ ಸಹಾಯ ಬೇಕಾಗಿದೆ. ನ್ಯಾಯ ವಿಜ್ಞಾನ (ಇಂಗ್ಲೀಷ್‌ನಲ್ಲಿ ಫೊರೆನ್ಸಿಕ್ ಸೈನ್ಸ್) ಎಂಬುದು ಒಂದು ಕಾನೂನು ವ್ಯವಸ್ಥೆಗೆ ಸಂಬಂಧಿಸಿದ ಹಿತಾಸಕ್ತಿಯ ಪ್ರಶ್ನೆಗಳನ್ನು ಉತ್ತರಿಸಲು ಅನ್ವಯಿಸಲಾಗುವ ವಿಜ್ಞಾನಗಳ ಒಂದು ವ್ಯಾಪಾರ ಶ್ರೇಣಿಯಾಗಿದೆ. ಇದು ವೈಜ್ಞಾನಿಕ ಕ್ಷೇತ್ರದೊಂದಿಗೆ ಬಹಳಷ್ಟು ನಿಕಟವಾದ ಸಂಬಂಧವನ್ನು ಹೊಂದಿದೆ. ಶಿಕ್ಷೆಯಿಂದ ನುಣುಚಿಕೊಳ್ಳುವ ಅಪರಾಧಿಗಳನ್ನು ಕಟ್ಟಿಹಾಕುವಲ್ಲಿ ನ್ಯಾಯ ವಿಜ್ಞಾನವು ಬಹಳಷ್ಟು ಸಹಕಾರಿಯಾಗಿದೆ. ನ್ಯಾಯ ವಿಜ್ಞಾನದ ಉಗಮ ಮೊದಲಿಗೆ ಯಾರು ತತ್ವಗಳು ಮತ್ತು ಕೌಶಲ್ಯಗಳನ್ನು ಉಪಯೋಗಿಸಿಕೊಂಡು ಅಪರಾಧ ಸ್ಥಳದಲ್ಲಿ ದೊರಕುವ ಭೌತಿಕ ಸುಳಿವುಗಳನ್ನು ಹೋಲಿಸಲು ಅಭಿವೃದ್ಧಿ ಪಡಿಸಿದರೋ ಅವರಿಗೆ ಸಲ್ಲುತ್ತದೆ. ನ್ಯಾಯ ವಿಜ್ಞಾನವು ಸಂಪೂರ್ಣವಾಗಿ ಭೌತಿಕ ಸುಳಿವುಗಳ ಮೇಲೆ ಅವಲಂಬಿತವಾಗಿದೆ ಎಂಬುದರಲ್ಲಿ ಎರಡು ಮಾತಿಲ್ಲ.

ಭವ್ಯ ಭಾರತದಲ್ಲಿ ಅನೇಕ ಕೇಂದ್ರ ಹಾಗೂ ರಾಜ್ಯ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಿವೆ. ಇತಿಹಾಸದ ಪುಟ ತಿರುಗಿಸಿ ನೋಡಿದರೆ ನಮ್ಮ ರಾಜ್ಯದಲ್ಲಿ ನ್ಯಾಯವಿಜ್ಞಾನ ಪ್ರಯೋಗಾಲಯವು 1967ನೇ ಇಸವಿಯಲ್ಲಿ ರಾಜಧಾನಿ ಬೆಂಗಳೂರಿನಲ್ಲಿ ಆರಂಭಗೊಂಡಿದೆ.

ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ವಿವಿಧ ಅಪರಾಧ ಪ್ರಕರಣಗಳನ್ನು ತನ್ನದೇ ಆದ ವೈಜ್ಞಾನಿಕ ತಂತ್ರಜ್ಞಾನ ಬಳಸಿಕೊಂಡು ಅಪರಾಧ ಸ್ಥಳದಲ್ಲಿ ದೊರೆತ ಮಾದರಿಗಳನ್ನು, ಕುರುಹುಗಳನ್ನು ಪರೀಕ್ಷಿಸಿ ಅಪರಾಧಿಗಳನ್ನು ಪತ್ತೆ ಹಚ್ಚಲು ವಿವಿಧ ವಿಭಾಗಗಳಿವೆ. ಆರಂಭದಲ್ಲಿ ಜೀವಶಾಸ್ತ್ರ ಹಾಗೂ ವಿಷಶಾಸ್ತ್ರ ವಿಭಾಗಗಳಿಗೆ ಸಂಬಂಧಿಸಿದ (ಮರಣಕ್ಕೆ ಕಾರಣವಾದ) ವರದಿಗಳನ್ನು ಮಾತ್ರ ನೀಡಲಾಗುತ್ತಿತ್ತು. ಕಾಲಕಳೆದಂತೆ ರಸಾಯನ, ಪ್ರಶ್ನಾತಾ ದಸ್ತಾವೇಜು, ಮನೋವಿಜ್ಞಾನ, ಡಿಎನ್‌ಎ, ಬೆರಳು ಮುದ್ರೆ, ಭೌತಶಾಸ್ತ್ರ, ಅಗ್ನಿಅಸ್ತ್ರ ಹಾಗೂ ಬಂದೂಕು, ಸೈಬರ್ ಹಾಗೂ ಛಾಯಾಚಿತ್ರ ವಿಭಾಗಗಳು ಸೇರ್ಪಡೆಯಾಗಿದ್ದು, ವಿವಿಧ ಬಗೆಯ ಪರೀಕ್ಷೆಗಳನ್ನು ನಡೆಸಿ ತನಿಖೆಗೆ ಸಹಾಯ ಮಾಡುತ್ತಿವೆ.

ನ್ಯಾಯ ವಿಜ್ಞಾನ ಪ್ರಯೋಗಾಲಯದ ಜೀವ ಶಾಸ್ತ್ರ ವಿಭಾಗದಲ್ಲಿ ಕೊಲೆ, ಕೊಲೆಗೆ ಯತ್ನ, ಅತ್ಯಾಚಾರ, ಅಪಘಾತ, ಅನುಮಾನಾಸ್ಪದ ಸಾವು ಇತ್ಯಾದಿ ಪ್ರಕರಣಗಳ ಸಂಬಂಧ ರಕ್ತ, ಕೂದಲು, ಉಗುರು, ಚರ್ಮ, ವೀರ್ಯ ಸಸ್ಯಜೀವಿ ಶೈವಲ (ಡಯಾಟಮ್) ಇತ್ಯಾದಿ ಅಂಶಗಳ ಪರೀಕ್ಷೆಯನ್ನು ಮಾಡಿ ವರದಿ ನೀಡಲಾಗುತ್ತದೆ. ವಿಷ ವಿಜ್ಞಾನ ವಿಭಾಗದಲ್ಲಿ ಅಸ್ವಾಭಾವಿಕ ಸಾವು, ಆತ್ಮಹತ್ಯೆ, ಸಾವು, ಕೊಲೆ ಇತ್ಯಾದಿ ಪ್ರಕರಣಗಳ ವಿಷಯವಾಗಿ ರಕ್ತ, ವಾಂತಿ, ಮನುಷ್ಯನ ದೇಹದ ಒಳಾಂಗಗಳ ಪರೀಕ್ಷೆಯನ್ನು ನಡೆಸಲಾಗುತ್ತದೆ.

ನ್ಯಾಯ ವಿಜ್ಞಾನ ರಸಾಯನ ವಿಭಾಗದಲ್ಲಿ ನ್ಯಾಯಬಾಹಿರ ಮಾದಕ ವಸ್ತು ಮತ್ತು ದ್ರವ್ಯಗಳು, ಸ್ಫೋಟಕ ಕಾಯ್ದೆ ಇತ್ಯಾದಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾದಕ ವಸ್ತುಗಳು, ಬೆಂಕಿ ಹಚ್ಚುವ ವೇಗವರ್ಧಕಗಳು, ಸ್ಫೋಟಕ ವಸ್ತುಗಳ ಪರೀಕ್ಷೆ, ಹಾಗೂ ಬಂದೂಕು ಹೊಡೆತದ ಅವಶೇಷದ ಪತ್ತೆಹಚ್ಚುವಿಕೆ ಹಾಗೂ ಗುರುತಿಸುವಿಕೆ ಕುರಿತು ವರದಿಯನ್ನು ಕೊಡಲಾಗುತ್ತದೆ. ಇನ್ನು ಪ್ರಶ್ನಿತಾ ದಸ್ತಾವೇಜು ವಿಭಾಗದಲ್ಲಿ ಸಹಿ ಬರವಣಿಗೆ, ಮರಣಪತ್ರ (ಡೆತ್‌ನೋಟ್) ದಾಖಲೆ, ಸೀಲ್ ಇತ್ಯಾದಿ ಅಂಶಗಳನ್ನು ಪರೀಕ್ಷೆಗೊಳಪಡಿಸಿ ವರದಿ ತಯಾರಿಸುತ್ತಾರೆ. ನ್ಯಾಯ ವಿಜ್ಞಾನ ಮನೋವಿಜ್ಞಾನ ವಿಭಾಗದಲ್ಲಿ ಸುಳ್ಳು ಪತ್ತೆ ಪರೀಕ್ಷೆ, ಮಂಪರು ಪರೀಕ್ಷೆ (ನಾರ್ಕೋ ಅನಾಲಿಸಿಸ್), ಬ್ರೈನ್ ಮ್ಯಾಪಿಂಗ್ ಪರೀಕ್ಷೆಯ ಮೂಲಕ ಓರ್ವ ಅಪರಾಧಿಯ ವರ್ತನೆಯ ಹಿಂದಿರುವ ಸಂದರ್ಭಗಳನ್ನು ಸಾಮಾನ್ಯವಾಗಿ ನಿರ್ಣಯಿಸಲಾಗುತ್ತದೆ.

ಡಿ.ಎನ್.ಎ. ವಿಭಾಗದಲ್ಲಿ ಅಪರಾಧ ನಡೆದ ಸ್ಥಳದಲ್ಲಿ ದೊರಕಿದ ಸಾಕ್ಷ್ಯಾಧಾರ ವಸ್ತುಗಳಲ್ಲಿರುವ (ವೀರ್ಯಾಣು, ರಕ್ತ, ಕೂದಲು, ಜೊಲ್ಲು, ಮೂತ್ರ, ಚರ್ಮ, ಮಾಂಸ, ಮೂಳೆ ಇತ್ಯಾದಿ) ಡಿ.ಎನ್.ಎ ಮಾದರಿಯನ್ನು ವಿಶ್ಲೇಷಿಸುವ ಮೂಲಕ ಅಪರಾಧಿಗಳನ್ನು ಬಹಳ ಸುಲಭವಾಗಿ ಪತ್ತೆಹಚ್ಚಬಹುದಾಗಿದೆ. ಇದಲ್ಲದೆ ಈ ವಿಭಾಗವು ಪಿತೃತ್ವ/ಮಾತೃತ್ವ ಪರೀಕ್ಷೆ, ಮಕ್ಕಳ ಬದಲಾಯಿಸುವಿಕೆ, ಕಾಣೆಯಾದ ವ್ಯಕ್ತಿ ಗುರುತಿಸುವಿಕೆ, ಸಾಮೂಹಿಕ ಅತ್ಯಾಚಾರ, ಅಪಹರಣ, ಸುಟ್ಟ/ ಅರೆಬೆಂದ ಮನುಷ್ಯನ ಗುರುತಿಸುವಿಕೆ ಕಾರ್ಯಗಳಲ್ಲಿ ತನ್ನದೇ ಆದ ಮಹತ್ವವನ್ನು ಪಡೆದಿದೆ.

ನ್ಯಾಯ ವಿಜ್ಞಾನ ಬೆರಳುಮುದ್ರೆ ವಿಭಾಗವು ಬೆರಳು ಗುರುತುಗಳಿಂದ ವ್ಯಕ್ತಿಗಳನ್ನು ಪತ್ತೆ ಹಚ್ಚಲು ಸಹಾಯಕವಾಗುತ್ತಿದೆ. ಇತ್ತೀಚಿನ ಸಂಶೋಧನೆಯ ಪ್ರಕಾರ ಬೆರಳು ಗುರುತುಗಳು ನಮ್ಮ ಜೀವನ ಶೈಲಿಯ ಸುಳಿವುಗಳನ್ನು ಒದಗಿಸಬಲ್ಲವು ಅಂದರೆ ಅಪರಾಧ ನಡೆದ ಸ್ಥಳದಲ್ಲಿ ಯಾವ ವ್ಯಕ್ತಿಯ ಬಿಟ್ಟುಹೋದ ಬೆರಳ ಗುರುತುಗಳು ಆ ವ್ಯಕ್ತಿಯ ಜೀವನ ಶೈಲಿಯ ಬಗ್ಗೆ ಸುಳಿವುಗಳನ್ನು ನೀಡುವುದರಿಂದ ಪಟ್ಟಿಯಲ್ಲಿ ಶಂಕಿತರ ಹೆಸರುಗಳನ್ನು ಕಡಿಮೆಗೊಳಿಸುವಲ್ಲಿ ಬೆರಳು ಗುರುತುಗಳು ಪೊಲೀಸರಿಗೆ ಸಹಾಯ ಮಾಡುತ್ತವೆ.

ನ್ಯಾಯ ವಿಜ್ಞಾನ ಭೌತಶಾಸ್ತ್ರಜ್ಞರು ಬಣ್ಣಗಳು ಮತ್ತು ಗೀರುಗಳ (Scratches) ಹೋಲಿಕೆ ಮತ್ತು ಪತ್ತೆ ಹಚ್ಚುವಿಕೆ, ಉಪಕರಣಗಳ ಗುರುತು, ಟೈರ್ ಗುರುತು, ಬಟ್ಟೆಯ ಹರಿದ ಚೂರುಗಳು, ವೈರ್‌ನ ಚೂರುಗಳು ಮತ್ತು ಉಪಕರಣದಿಂದ ಕತ್ತರಿಸಿದ ಲೋಹದ ತುಂಡು ಇತ್ಯಾದಿಗಳ ಹೋಲಿಕೆ ಮತ್ತು ಪತ್ತೆ ಹಚ್ಚುವಿಕೆಯನ್ನು ಮಾಡುವುದು, ಸಣ್ಣ ಧೂಳಿನ ಕಣಗಳಾದ ಗಾಜಿನ ಚೂರು, ಮಣ್ಣು ಮತ್ತು ಅದರ ವಿಶ್ಲೇಷಣೆ ಇತ್ಯಾದಿಗಳನ್ನು ಸೂಕ್ಷ್ಮದರ್ಶಕ ಯಂತ್ರದ ಪರೀಕ್ಷೆಯ ಮೂಲಕ ಮಾಡಿ ಅಪರಾಧ ಪ್ರಕರಣಗಳನ್ನು ಸುಲಲಿತವಾಗಿ ಭೇದಿಸಲು ನೆರವಾಗುತ್ತಾರೆ.

ನ್ಯಾಯವಿಜ್ಞಾನ ಅಗ್ನಿ ಅಸ್ತ್ರ ಮತ್ತು ಬಂದೂಕು ವಿಭಾಗವು ಆಯುಧಗಳ ಕಾಯ್ದೆ ಅಡಿಯಲ್ಲಿ ಬರುವ ಪ್ರಕರಣಗಳಲ್ಲಿ ಯಾವ ರೀತಿಯ ಗುಂಡು, ಮದ್ದು ಮತ್ತು ಆಯುಧಗಳನ್ನು ಕೃತ್ಯಕ್ಕೆ ಉಪಯೋಗಿಸಿದ್ದಾರೆ? ಆಯುಧದ ಸ್ಥಿತಿಗತಿ, ಗುಂಡು ಹಾರಿಸುವಿಕೆ, ಹಾರಿಸಿರುವ ದೂರವನ್ನು ನಿರ್ಧರಿಸುವುದು ಇತ್ಯಾದಿಗಳ ಪರೀಕ್ಷೆಗಳ ಮೂಲಕ ಪೊಲೀಸರಿಗೆ ತನಿಖೆಗೆ ಸಹಾಯ ಮಾಡುತ್ತದೆ.

ಇನ್ನು ಸೈಬರ್ ವಿಭಾಗವು ಮೂರು ಉಪವಿಭಾಗಗಳಾದ ಆಡಿಯೋ, ವಿಡಿಯೋ, ಕಂಪ್ಯೂಟರ್ ಪೊರೆನ್ಸಿಕ್ ಹಾಗೂ ಮೊಬೈಲ್ ಪೊರೆನ್ಸಿಕ್‌ಗಳಿಂದ ಒಳಗೊಂಡಿದೆ. ನ್ಯಾಯ ವಿಜ್ಞಾನದ ಆಡಿಯೋ, ವಿಡಿಯೋ ವಿಷಯ ಎಂಬುದು ವೈಜ್ಞಾನಿಕ ಪರೀಕ್ಷೆ, ಹೋಲಿಕೆ ಹಾಗೂ ಮೌಲ್ಯಮಾಪನವಾಗಿದೆ. ಕಂಪ್ಯೂಟರ್ ಪೊರೆನ್ಸಿಕ್ಸ್ ವಿಭಾಗದಲ್ಲಿ ತನಿಖಾ ಮತ್ತು ವಿಶ್ಲೇಷಣಾ ತಂತ್ರಗಳನ್ನು ಅಳವಡಿಸಿ ವೈಜ್ಞಾನಿಕವಾಗಿ ಮಾಹಿತಿಯನ್ನು ಸಂಗ್ರಹಿಸಿ ಸೂಕ್ತವಾದ ರೀತಿಯಲ್ಲಿ ಪ್ರಸ್ತುತಪಡಿಸಲಾಗುವುದು. ಇಲ್ಲಿ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡಿದ್ದು, ಹಾನಿಗೊಳಗಾದ ಸಾಧನದಿಂದ ಮಾಹಿತಿಯನ್ನು ಸಂಗ್ರಹಿಸುವ ಸೌಲಭ್ಯವನ್ನು ಹೊಂದಿದೆ. ಹಾಗೆಯೇ ಮೊಬೈಲ್ ಫೊರೆನ್ಸಿಕ್ ವಿಭಾಗದಲ್ಲಿಯೂ ಭೌತಿಕವಾಗಿ ಹಾನಿಯಾಗಿರುವ ಮೊಬೈಲ್ ಫೋನ್‌ಗಳಿಂದ ದತ್ತಾಂಶಗಳನ್ನು ಸಂಗ್ರಹಿಸಲಾಗುವುದು. ಇದು ಅಪರಾಧ ತನಿಖೆಗೆ ಬಹಳಷ್ಟು ಸಹಕಾರಿಯಾಗಬಲ್ಲದು. ಹಾಗೆಯೇ ಛಾಯಾಚಿತ್ರ ವಿಭಾಗವು ದಾಖಲೆಗಳ ಆಯುಧಗಳ, ಅಪರಾಧ ನಡೆದ ಸ್ಥಳ ಇತ್ಯಾದಿಗಳ ಉತ್ತಮ ಛಾಯಾಚಿತ್ರಗಳನ್ನು ತೆಗೆದುಕೊಳ್ಳುವುದು. ಅಳಿಸಿ ಹಾಕಿರುವ ದಾಖಲೆಗಳ ಬಗ್ಗೆ ಅಲ್ಟ್ರಾ ವೈಯಲೆಟ್ (Ultraviolet) ಮತ್ತು ಇನ್‌ಫ್ರಾರೆಡ್ (Infrared)

ಛಾಯಾಚಿತ್ರ ಹಾಗೂ ವಿವಿಧ ವಸ್ತುಗಳ ಕ್ಷ–ಕಿರಣ ಛಾಯಾಚಿತ್ರ ತೆಗೆಯುವುದೆಲ್ಲವೂ ಅಪರಾಧ ತನಿಖೆಗೆ ಬಹಳಷ್ಟು ಸಹಕಾರಿಯಾಗುತ್ತದೆ ಎಂಬುದರಲ್ಲಿ ಎರಡು ಮಾತಿಲ್ಲ.

ಹೀಗೆ ನಮ್ಮ ದೇಶದಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯಗಳ ಹಲವಾರು ವಿಭಾಗಗಳನ್ನು ಹೊಂದಿ ವಿವಿಧ ರೀತಿಯ ತನಿಖೆಗಳಿಗೆ ಸಾಕಷ್ಟು ಸಹಕಾರಿಯಾಗಿರುವುದರಿಂದ ಇಡೀ ಪೊಲೀಸ್ ಇಲಾಖೆಯ ಬೆನ್ನೆಲುಬು ಎಂದರೆ ತಪ್ಪಾಗಲಾರದು. ಪ್ರಕರಣಗಳ ಸ್ವರೂಪಗಳ ವಿಶ್ಲೇಷಣೆ ಜೊತೆಗೆ ಹೊಸದಾಗಿ ಆಯ್ಕೆಯಾಗುವ ವಿವಿಧ ಹಂತದ ಪೊಲೀಸ್ ಅಧಿಕಾರಿಗಳಿಗೆ ಉತ್ತಮ ತರಬೇತಿಯನ್ನು ಸಹ ಆಯಾ ರಾಜ್ಯದ ನ್ಯಾಯ ವಿಜ್ಞಾನ ಪ್ರಯೋಗಾಲಯಗಳು ನೀಡುತ್ತಿವೆ.

ಇನ್ನೂ ದಿನದ 24 ಗಂಟೆ ವರ್ಷದ 365 ದಿನಗಳೂ ನ್ಯಾಯ ವಿಜ್ಞಾನ ಪ್ರಯೋಗಾಲಯದ ಪರಿಣಿತ ತಂಡವು ಕೊಲೆ, ಅತ್ಯಾಚಾರ, ಆತ್ಮಹತ್ಯೆ, ಅನುಮಾನಾಸ್ಪದ ಸಾವು ಇತ್ಯಾದಿ ಘಟನಾ ನಡೆದ ಸ್ಥಳಗಳಿಗೆ ಶೀಘ್ರವಾಗಿ ಖುದ್ದು ಭೇಟಿ ನೀಡಿ ಸಾಕ್ಷ್ಯಾಧಾರಗಳ ಸಂಗ್ರಹಣೆ ಮತ್ತು ಪರಿಶೀಲನೆ ಮಾಡುವುದರ ಮೂಲಕ ಪೊಲೀಸ್ ತನಿಖಾಧಿಕಾರಿಗಳಿಗೆ ನೆರವಾಗುತ್ತಿದ್ದಾರೆ.

ವಿವಿಧ ಪ್ರಕರಣಗಳಿಗೆ ಸಂಬಂಧಪಟ್ಟಂತಹ ಪ್ರಸಂಗಗಳನ್ನು ಆಯಾ ವಿಭಾಗದ ವೈಜ್ಞಾನಿಕ ತಂಡವು ಪ್ರಯೋಗಕ್ಕೆ ಒಳಪಡಿಸಿ ವರದಿ ನೀಡುತ್ತವೆ.

ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪ್ರಕರಣಗಳಾದ ಸಾಮೂಹಿಕ ಅತ್ಯಾಚಾರ, ರೈತ ಆತ್ಮಹತ್ಯೆ, ಕೊಲೆ ಇತ್ಯಾದಿ ಪ್ರಕರಣಗಳ ವರದಿಗಳನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗನೆ ವರದಿ ಕಲ್ಪಿಸಲಾಗುತ್ತಿದೆ. ಜೊತೆಗೆ ಸಂಬಂಧಪಟ್ಟ ವರದಿ ನೀಡಿದ ಅಧಿಕಾರಿಗಳು ನ್ಯಾಯಾಲಯಗಳಿಗೆ ಹಾಜರಾಗಿ ಪ್ರಕರಣದ ಸಂಬಂಧ ಸಾಕ್ಷಿ ಹೇಳುವ ಮೂಲಕ ಸಮಾಜಕ್ಕೆ ಸತ್ಯ ತಿಳಿಸುವ ಕೆಲಸ ಮಾಡುತ್ತಿರುವುದು ಸಂತೋಷಕರ ಸಂಗತಿ. ಹೀಗೆ ದೇಶದಲ್ಲಿ ನ್ಯಾಯ ವಿಜ್ಞಾನ ಪ್ರಯೋಗಾಲಯಗಳು ತಮ್ಮ ತಮ್ಮ ಕಾರ್ಯದಕ್ಷತೆಯನ್ನು ಹೆಚ್ಚಿಸಿಕೊಂಡು ನೊಂದವರ ಹಾಗೂ ಅಮಾಯಕರ ಸೇವೆ ಮಾಡುವ ಮೂಲಕ ಎಲ್ಲರ ಗಮನ ಸೆಳೆಯುತ್ತಿವೆ.

ಕ್ಲಿಷ್ಟಕರ ಪ್ರಕರಣಗಳನ್ನು ಭೇದಿಸಿ ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸಲು ನ್ಯಾಯ ವಿಜ್ಞಾನ ಪ್ರಯೋಗಾಲಯ ಸದಾ ಸಹಾಯಕವಾಗಿವೆ. ಆದರೂ ವಿವಿಧ ಪ್ರಕರಣಗಳು ನ್ಯಾಯಾಲಯ ಅಂಗಳದಲ್ಲಿ ಹಲವಾರು ಕಾರಣಗಳಿಂದ ಖುಲಾಸೆಯಾಗುತ್ತಿವೆ. ಸಾಕ್ಷ್ಯಾಧಾರಗಳ ಕೊರತೆಯಿಂದಲೋ ಅಥವಾ ಇತರ ಅಂಶಗಳಿಂದಲೋ ಅಪರಾಧಿಗಳು ಶಿಕ್ಷೆಯಿಂದ ತಪ್ಪಿಸಿಕೊಳ್ಳುತ್ತಿದ್ದಾರೆ. ಸುಮಾರು 20 ವರ್ಷಗಳ ಕಾಲ ವಿಚಾರಣೆ ನಡೆಸಿದ ಸುಪ್ರಿಂಕೋರ್ಟ್ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಉತ್ತರ ಭಾರತದ ಇಬ್ಬರು ಸರಣಿ ಅತ್ಯಾಚಾರಿಗಳನ್ನು ಸಾಕ್ಷ್ಯಾಧಾರಗಳ ಕೊರತೆಯಿಂದ ಖುಲಾಸೆ ಮಾಡಿತು. ಇದು ದೇಶದಲ್ಲೇ ಅಚ್ಚರಿ ಮೂಡಿಸಿದ ಸಂಗತಿ.

ದೇಶದ ವಿವಿಧ ರಾಜ್ಯಗಳ ನ್ಯಾಯ ವಿಜ್ಞಾನ ಪ್ರಯೋಗಾಲಯಗಳನ್ನು ಮತ್ತಷ್ಟು ಉನ್ನತ ದರ್ಜೆಗೇರಿಸುವುದು ಮುಖ್ಯವಾದ ಅಂಶವಾಗಿದೆ. ಹೊಸ ಹೊಸ ಆಯಾಮಗಳನ್ನು ಅಪರಾಧಿಗಳು ಕಂಡುಕೊಳ್ಳುತ್ತಿರುವುದರಿಂದ ನಾವು ಸಹ ಇಂದು ಅದಕ್ಕೆ ಪೂರಕವಾಗಿ ಹೊಸ ವಿಧಾನ ಹಾಗೂ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕು. ಪ್ರಮುಖವಾಗಿ ನ್ಯಾಯ ವಿಜ್ಞಾನ ಕುರಿತ ಸಂಶೋಧನೆ ಮತ್ತು ಅಭಿವೃದ್ಧಿಗೆ ಇನ್ನಷ್ಟು ಮಹತ್ವ ನೀಡಬೇಕಾಗಿದೆ.

ಇನ್ನು ನ್ಯಾಯ ವಿಜ್ಞಾನ ಕೀಟಶಾಸ್ತ್ರ ನ್ಯಾಯ ವಿಜ್ಞಾನ ದಂತಶಾಸ್ತ್ರ, ನ್ಯಾಯ ವಿಜ್ಞಾನ ಭೂ ವಿಜ್ಞಾನ ಮತ್ತು ಇತರೆ ಹೊಸ ಹೊಸ ವಿಭಾಗಗಳು ದೇಶದ ಎಲ್ಲಾ ನ್ಯಾಯ ಪ್ರಯೋಗಾಲಯಗಳಲ್ಲಿ ಆರಂಭಗೊಂಡರೆ ತನಿಖೆಯನ್ನು ಮತ್ತಷ್ಟು ನಿಖರ ಹಾಗೂ ವೇಗವಾಗಿ ನಡೆಸಬಹುದು. ನ್ಯಾಯ ವಿಜ್ಞಾನ ಪ್ರಯೋಗಾಲಯದ ಹೊಸ ವೈಜ್ಞಾನಿಕ ವಿಧಾನಗಳು ಮತ್ತು ಚಿಂತನೆಗಳು ಮತ್ತು ನಮ್ಮ ಚಾಣಾಕ್ಷ ಪೊಲೀಸ್ ತನಿಖೆಯ ವಿವಿಧ ಕೋನಗಳು ಒಗ್ಗೂಡಿ ಚುರುಕಾಗಿ ಕಾರ್ಯನಿರ್ವಹಿಸಿದರೆ ನಾವು ಎಂತಹ ಕಠಿಣ ಪ್ರಕರಣವನ್ನು ಭೇದಿಸಿ ನೊಂದವರಿಗೆ ತ್ವರಿತವಾಗಿ ನ್ಯಾಯ ದೊರಕಿಸಿಕೊಡಬಹುದು. ಆ ಮೂಲಕ ಒಂದು ನಿರ್ಮಲ ಸಮಾಜವನ್ನು ಕಟ್ಟಬಹುದಲ್ಲವೇ?

ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಅನುಷ್ಠಾನ ಸಂಬಂಧ ಸಮಿತಿ ರಚನೆ

ಮೈಸೂರು, ಸೆ.30(ಎಸ್‌ಪಿಎನ್)– ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ನೂತನ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ವಿವಿಧ ಸಮಿತಿಯನ್ನು ರಚಿಸಿದೆ.

ಅಂತೆಯೇ ಈ ಸಮಿತಿಗಳಿಗೆ ವಿವಿಧ ವಿಷಯ ತಜ್ಞರು, ಇಲಾಖಾ ಮುಖ್ಯಸ್ಥರನ್ನು ಅಧ್ಯಕ್ಷರು, ಸದಸ್ಯರನ್ನಾಗಿ ನೇಮಿಸಿದೆ. ಕೆಎಎಸ್‌ಎಸ್ ಉನ್ನತ ಮಟ್ಟದ ಕಾರ್ಯನೀತಿ ಸಮಿತಿ, ಕೆಎಎಸ್‌ಎಸ್ ತಜ್ಞರ ಸಲಹಾ ಸಮಿತಿ, ಕೆಎಎಸ್‌ಎಸ್ ನೋಂದಾವಣಿ, ಶಿಸ್ತು ಮತ್ತು ಕುಂದು ಕೊರತೆಗಳ ನಿವಾರಣಾ ಸಮಿತಿಗಳ ಸಂಯೋಜನೆ, ಪ್ರಕಾರ್ಯಗಳು ಮತ್ತು ಜವಾಬ್ದಾರಿಗಳನ್ನು ವಹಿಸಿ, ವಿವಿಧ ತಜ್ಞರು ಪರಿಶೀಲಿಸಿದ ಬಳಿಕ ವರದಿ ಸಲ್ಲಿಸುವಂತೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಆಯುಕ್ತರಿಗೆ ಸೂಚಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿ ನಾಗರತ್ನ ವಿ. ಪಾಟೀಲ್ ಸೂಚಿಸಿದ್ದಾರೆ.

ಮುಂಬಡ್ತಿಗೆ ಕನಿಷ್ಟ 3 ವರ್ಷ ಸೇವೆ ಪರಿಗಣಿಸಲು ನಿರ್ಧಾರ

ಮೈಸೂರು, ಸೆ.30(ಎಸ್‌ಪಿಎನ್)– ಸರ್ಕಾರಿ ನೌಕರರಲ್ಲಿ ಮುಂಬಡ್ತಿಗೆ 5 ವರ್ಷ ಸೇವೆ ಸಲ್ಲಿಸಿದ ಎಸ್ಸಿ–ಎಸ್ಟಿ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಕನಿಷ್ಟ 3 ವರ್ಷ ಸೇವೆ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳನ್ನು ಮುಂಬಡ್ತಿಗೆ ಪರಿಗಣಿಸಲು ಎಲ್ಲಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಕರ್ನಾಟಕ ಸರ್ಕಾರ ಸಚಿವಾಲಯ ಸೆ.30ರಂದು ಸುತ್ತೋಲೆ ಹೊರಡಿಸಿದೆ.

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಎಸ್ಸಿ ಎಸ್ಟಿ ಪಂಗಡಗಳ ಕೆಲವು ಸರ್ಕಾರಿ ಅಧಿಕಾರಿ/ನೌಕರರು ನಿಯಮಾನುಸಾರ ಮೀಸಲಾತಿಯಲ್ಲಿ ನಿಗದಿಪಡಿಸಿರುವ ಪ್ರಾತಿನಿಧ್ಯ ಮುಂಬಡ್ತಿಯಲ್ಲಿ ನಿಗದಿಪಡಿಸುವಂತೆ ಸದರಿ ಸಮಿತಿಗೆ ಹಲವು ಮನವಿಗಳು ಸಲ್ಲಿಕೆಯಾಗಿದ್ದವು.

ಈ ಕುರಿತು ಕರ್ನಾಟಕ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಅವರು, ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ಪತ್ರ ಬರೆದು, ತಮ್ಮ ಅರೆ ಸರ್ಕಾರಿ ಪತ್ರ ಸಂ:ಕವಿಸಸ/ಅಜಾ–ಅಪ/ 04/2024, ದಿ:12.8.2024ರಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್/126/ಎಸ್‌ಸಿಆರ್/82, ದಿ:26.11.1982ರನ್ವಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ನೌಕರರು ಮುಂಬಡ್ತಿಗೆ ಸಮಿತಿಯು ನೀಡಿರುವ ನಿರ್ದೇಶನವನ್ನು ಪಾಲಿಸುವಂತೆ ಸರ್ಕಾರದ ಎಲ್ಲಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಈವರೆಗೂ ಅಳವಡಿಸಿಕೊಂಡಿರುವುದಿಲ್ಲವೋ ಆ ಇಲಾಖೆಯಲ್ಲಿ ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಸೂಚಿಸಿದ್ದಾರೆ.

ಸದರಿ ಅಧಿಕೃತ ಜ್ಞಾಪನದನ್ವಯ ಎಸ್ಸಿ, ಎಸ್ಟಿ ನೌಕರರು 5 ವರ್ಷ ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಕನಿಷ್ಟ 3 ವರ್ಷ ಸೇವೆ ಸಲ್ಲಿಸಿರುವವರನ್ನು ಮುಂಬಡ್ತಿಗೆ ಪರಿಗಣಿಸಲು ನಿಗಮ/ಮಂಡಳಿ/ ಸಂಘ–ಸಂಸ್ಥೆ/ ಆಯೋಗ/ ವಿಶ್ವ ವಿದ್ಯಾಲಯಗಳು/ ಇತರೆ ಇಲಾಖೆಗಳು ಈ ನಿಯಮವನ್ನು ಅಳವಡಿಸಿಕೊಳ್ಳದಿದ್ದಲ್ಲಿ ಕಡಾಯವಾಗಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ಅಳವಡಿಸಿಕೊಂಡಿರುವ ಮಾಹಿತಿಯನ್ನು ಸಮಾಜ ಕಲ್ಯಾಣ ಇಲಾಖೆ ಆಯುಕ್ತರ ಕಚೇರಿಗೆ ಮಾಹಿತಿಯನ್ನು ವರದಿ ಮಾಡುವಂತೆ ಸಮಾಜ ಕಲ್ಯಾಣ ಇಲಾಖೆ ಜಂಟಿ ಕಾರ್ಯದರ್ಶಿ ಎಸ್.ವಿ.ಕಲಾವತಿ ಸೂಚಿಸಿದ್ದಾರೆ.

ನಿಷೇಧಿತ ಪ್ಲಾಸ್ಟಿಕ್ ವಶ



ಮೈಸೂರು, ಸೆ.30(ಎಂಕೆ)– ನಗರಪಾಲಿಕೆ ವಲಯ ಕಚೇರಿ–6ರ ವ್ಯಾಪ್ತಿಯ ಸಂತೆಪೇಟೆಯಲ್ಲಿರುವ ಸತ್ಯನಾರಾಯಣ ಎಂಟರ್‌ಪ್ರೈಸಸ್ ಮೇಳೆ ಸೋಮವಾರ ದಾಳಿ ನಡೆಸಿದ ಪಾಲಿಕೆ ಅಧಿಕಾರಿಗಳು 80 ಕೆ.ಜಿ ನಿಷೇಧಿತ ಪ್ಲಾಸ್ಟಿಕ್ ವಶಪಡಿಸಿಕೊಂಡಿದ್ದಾರೆ.

ಪ್ಲಾಸ್ಟಿಕ್ ಬಳಕೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕಾರ್ಯಾಚರಣೆ ನಡೆಸುತ್ತಿರುವ ಪಾಲಿಕೆ ಅಧಿಕಾರಿಗಳು ಪ್ಲಾಸಿಕ್ ಬಳಕೆಯ ಪೇಪರ್ ಬೌಲ್ ಸೇರಿದಂತೆ ನಿಷೇಧಿತ ಪ್ಲಾಸ್ಟಿಕ್ ವಶಪಡಿಸಿಕೊಂಡು ಮಾಲೀಕರಿಗೆ ಸ್ಥಳದಲ್ಲೇ 25 ಸಾವಿರ ರೂ, ದಂಡ ವಿಧಿಸಿದ್ದಾರೆ. ವಲಯ ಕಚೇರಿ–6ರ ಎಸಿ ಪ್ರತಿಭಾ, ಪರಿಸರ ಇಂಜಿನಿಯರ್ ಮೈತ್ರಿ, ಸಿಬ್ಬಂದಿಗಳಾದ ಬಸವರಾಜ್, ಕೃಷ್ಣ, ಮಂಜುಕುಮಾರ್, ಧನಂಜಯ ಮತ್ತಿತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ



ಮೈಸೂರು ಹೊರವಲಯದ ಉತ್ತನಹಳ್ಳಿ ಬಳಿ ಯುವ ದಸರಾ ಆಯೋಜನೆ

ಅಂಜಿಕೆ ಬೇಡ! ಸಿಸಿಟಿವಿಗಳಿವೆ, ಪೊಲೀಸ್ ಬಂದೋಬಸ್ತ್ ಮಾಡಿದ್ದೇವೆ

- ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ಭರವಸೆ
- 80 ಎಕರೆ ಮೈದಾನ, 90 ಸಾವಿರ ಜನರ ಸಾಮರ್ಥ್ಯವಿದೆ
- ಕುಡಿಯುವ ನೀರು, ಶೌಚಾಲಯ, ವಿಶೇಷ ಬಸ್ ವ್ಯವಸ್ಥೆ
- ಹೋಟೆಲ್‌ಗಳಲ್ಲಿ ದುಬಾರಿ ದರಕ್ಕೆ ಕಡಿವಾಣ
- ದಸರಾ ವೇಳೆ ಸಂವಿಧಾನ ಆಶಯ ಕುರಿತ ಸಮ್ಮೇಳನ

ಮೈಸೂರು, ಸೆ.30(ಬಿಎಲ್‌ಯು)– ಯುವ ದಸರಾ ನಡೆಯುವ ಮೈಸೂರಿನ ರಿಂಗ್ ರಸ್ತೆಯ ಉತ್ತನಹಳ್ಳಿ ಬಳಿಯ ಮೈದಾನದ ಸುತ್ತಮುತ್ತ ಸಿಸಿಟಿವಿ ಅಳವಡಿಸಿ, ಕಾನೂನು ಸುವ್ಯಸ್ಥೆಗೆ ಧಕ್ಕೆ ಆಗದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ ನೀಡಿದರು.



ಮೈಸೂರಿನ ಸಿದ್ಧಾರ್ಥನಗರದ ನೂತನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು. ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಹಾಗೂ ಜಿಪಂ ಸಿಇಒ ಕೆ.ಎಂ.ಗಾಯತ್ರಿ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರಿನ ಸಿದ್ಧಾರ್ಥ ನಗರದ ನೂತನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಹೊರವಲಯದಲ್ಲಿ ಯುವ ದಸರಾ ನಡೆಯುತ್ತಿರುವ ಬಗ್ಗೆ ಯಾವುದೇ ಅಂಜಿಕೆ ಬೇಡ, ಜನರ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಜನರಲ್ಲಿ ಧೈರ್ಯ ತುಂಬಿದರು.

ಮಹಾರಾಜ ಕಾಲೇಜು ಮೈದಾನದಲ್ಲಿ ಜಾಗದ ಅಭಾವವಿತ್ತು. ಈ ಬಾರಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರಿಯ ಮಟ್ಟದ ಹೆಸರಾಂತ ಕಲಾವಿದರ ವಿಶಿಷ್ಟ ಕಾರ್ಯಕ್ರಮ ಇರುವ ಕಾರಣ ಹೆಚ್ಚು ಜನರು ಸೇರುತ್ತಾರೆ. ಈ ಹಿನ್ನೆಲೆಯಲ್ಲಿ 80 ಎಕರೆ ಪ್ರದೇಶದ ವಿಶಾಲವಾದ ಈ ಮೈದಾನವನ್ನು ಯುವ ದಸರಾಗೆ ಆಯ್ಕೆ ಮಾಡಲಾಗಿದೆ ಎಂದು ಸಚಿವ ಡಾ.ಮಹದೇವಪ್ಪ ತಿಳಿಸಿದರು.

ಯುವ ದಸರಾ ನಡೆಯುವ ಸ್ಥಳದಲ್ಲಿ ಶೌಚಾಲಯ, ಕುಡಿಯುವ ನೀರು ಸೇರಿದಂತೆ ಹಲವು ವ್ಯವಸ್ಥೆ ಮಾಡಲಾಗುವುದು. ನಗರ ಬಸ್ ನಿಲ್ದಾಣದಿಂದ ಕಾರ್ಯಕ್ರಮ ಸ್ಥಳಕ್ಕೆ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಮಾಹಿತಿ ನೀಡಿದರು.

ಸಾವಿರಾರು ಜನರು ನೆರೆಯುವ ಕಾರಣ ಮೈದಾನದ ಸುತ್ತ ಸಿಸಿಟಿವಿ ಕ್ಯಾಮರಾ ಅಳವಡಿಸಿ ಚಲನವಲನದ ಮೇಲೆ ಕಣ್ಣೀಡಲಾಗುವುದು. ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು. ಮೈದಾನದ ಸುತ್ತ ಹಾಗೂ ರಿಂಗ್ ರಸ್ತೆಯಲ್ಲಿ ಜನರ ಸುರಕ್ಷತೆ ಹಿತದೃಷ್ಟಿಯಿಂದ ವಿದ್ಯುತ್ ದೀಪದ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಬಾರಿಯು ದಸರಾ ವೇಳೆ ಏರ್ ಶೋ ನಡೆಯುವುದು ಅನುಮಾನ ಎಂದು ಸ್ಪಷ್ಟನೆ ನೀಡಿದ ಡಾ.ಮಹದೇವಪ್ಪ, 1500 ಡ್ರೋನ್ ಮೂಲಕ ದಸರಾ ಪರಂಪರೆ ಪ್ರದರ್ಶನ ಆಯೋಜಿಸಲಾಗಿದೆ ಎಂದರು.

ಮೈಸೂರು ದಸರಾ ಸಂದರ್ಭದಲ್ಲಿ ಅಕ್ಟೋಬರ್ 5ರಂದು ಸಂವಿಧಾನ ಅಂಗೀಕಾರವಾದ ಅಂಗವಾಗಿ, ಅಮೃತ ಮಹೋತ್ಸವದ ಪ್ರಯುಕ್ತ ಪ್ರಭುತ್ವ ಮತ್ತು ಸಂವಿಧಾನದ ಆಶಯ ಕುರಿತ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ತಿಳಿಸಿದರು.

ನಗರದ ಮಾನಸ ಗಂಗೋತ್ರಿಯ ಸೆನೆಟ್ ಭವನದಲ್ಲಿ ಅಕ್ಟೋಬರ್ 5 ಮತ್ತು 6ರಂದು ಸಮ್ಮೇಳನ ನಡೆಯಲಿದೆ. ಅಕ್ಟೋಬರ್ 5 ರಂದು ಬೆಳಿಗ್ಗೆ 10.30 ಗಂಟೆಗೆ ನವದೆಹಲಿಯ ಹಿರಿಯ ಪತ್ರಕರ್ತ ಮನೋಜ್ ಮಿತ್ತ ಸಮ್ಮೇಳನ ಉದ್ಘಾಟನೆ ಮಾಡಲಿದ್ದಾರೆ. ಎರಡು ದಿನಗಳ ಕಾಲ ಹಲವು ವಿಚಾರ ಕುರಿತು ಗೋಷ್ಠಿಗಳು ನಡೆಯಲಿವೆ ಎಂದು ಡಾ.ಮಹದೇವಪ್ಪ ವಿವರಿಸಿದರು.

ದಸರಾ ಆರಂಭಕ್ಕೆ ಇನ್ನೊಂದೇ ದಿನ ಬಾಕಿ; ಸಿದ್ಧತೆ ಬಹುತೇಕ ಪೂರ್ಣ

ಈ ಸಾಲಿನ ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ ಆರಂಭಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಸಿದ್ಧತೆಗಳು ಬಹುತೇಕ ಪೂರ್ಣಗೊಂಡಿವೆ ಎಂದು ಡಾ.ಮಹದೇವಪ್ಪ ತಿಳಿಸಿದರು.

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಅ.3ರಂದು ಬೆಳಿಗ್ಗೆ 9.15ರಿಂದ 9.40 ಗಂಟೆ ಅವಧಿಯಲ್ಲಿ ದಸರಾ ಮಹೋತ್ಸವಕ್ಕೆ ವಿದ್ಯುಕ್ತ ಚಾಲನೆ ದೊರೆಯಲಿದೆ. ಅಂದಿನಿಂದಲೇ ದಸರಾ ವಸ್ತು ಪ್ರದರ್ಶನ, ದಸರಾ ಕುಸ್ತಿ, ದಸರಾ ಫಲಪುಷ್ಪ ಪ್ರದರ್ಶನ ಸೇರಿದಂತೆ ಹಲವು ಕಾರ್ಯಕ್ರಮಗಳು ಆರಂಭವಾಗಲಿವೆ. ಅದೇ ದಿನದಂದು ಸಂಜೆ ಅರಮನೆ ಆವರಣದಲ್ಲಿ ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನ ಮಾಡಲಿದ್ದಾರೆ. ಅಂದಿನಿಂದ 9 ದಿನಗಳ ಕಾಲ ಅರಮನೆಯಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದರು. ನಗರದ ಪುರಭವನ, ನಂಜನಗೂಡು ಸೇರಿದಂತೆ ಹಲವು ಕಡೆ ನಾಟಕ ಸೇರಿದಂತೆ ಹಲವು ವಿನೂತನ ಕಾರ್ಯಕ್ರಮ ಆಯೋಜಿಸಲಿದ್ದು, 508 ತಂಡಗಳ 6500 ಕಲಾವಿದರಲ್ಲಿ ಇದರಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಡಾ.ಮಹದೇವಪ್ಪ ಮಾಹಿತಿ ನೀಡಿದರು.

ದಸರಾ ಸಂದರ್ಭದಲ್ಲಿ ಹೋಟೆಲ್‌ನವರು ದುಬಾರಿ ದರ ನಿಗದಿ ಮಾಡದಂತೆ ಸೂಚನೆ ನೀಡಲು ಹೋಟೆಲ್ ಮಾಲೀಕರ ಸಭೆ ನಡೆಸುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು. ಜಿಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ.ಎಂ.ಗಾಯತ್ರಿ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಯುವ ದಸರಾ ವೀಕ್ಷಣೆಗೆ 2500, 1500 ಟಿಕೆಟ್ ಮಾರಾಟ

- ಇನ್ನು 1 ಸಾವಿರ ದಸರಾ ಗೋಲ್ಡ್ ಕಾರ್ಡ್ ಲಭ್ಯ
- ಕಾಳಸಂತೆ ಮಾರಾಟಕ್ಕೆ ಕಡಿವಾಣ
- ಅರಮನೆ ಅರ್ಧ ಭಾಗ, ಅರಸು ರಸ್ತೆಯಲ್ಲಿ ನೋ ವೆಹಿಕಲ್ ಜೋನ್

ಮೈಸೂರು, ಸೆ.30(ಬಿಎಲ್‌ಯು)– ಈಗ ಮಾರಾಟವಾಗುತ್ತಿರುವ ಯುವ ದಸರಾ ಟಿಕೆಟ್ ದುಬಾರಿ ಎಂಬ ದೂರಿನ ಹಿನ್ನೆಲೆಯಲ್ಲಿ 2,500 ಹಾಗೂ 1,500 ಬೆಲೆಯ ಟಿಕೆಟ್ ಮಾರಾಟ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ತಿಳಿಸಿದರು.

ಯುವ ದಸರಾಗೆ 8 ಸಾವಿರ ಹಾಗೂ 5 ಸಾವಿರ ರೂಪಾಯಿಗೆ ಟಿಕೆಟ್ ಮಾರಾಟ ಮಾಡಲಾಗುತ್ತಿದೆ. ಆದರೆ ಇದು ಬಹಳ ದುಬಾರಿ ಎಂಬ ದೂರಿನ ಮೇರೆಗೆ ಈಗ 2,500 ಹಾಗೂ 1,500 ಬೆಲೆಯ ಟಿಕೆಟ್‌ಗಳನ್ನೂ ಮಾರಾಟ ಮಾಡಲಾಗುವುದು. ಒಂದು ಟಿಕೆಟ್ ಒಂದು ದಿನದ ಕಾರ್ಯಕ್ರಮಕ್ಕೆ ಮಾತ್ರ ಸೀಮಿತ ಎಂದು ಸ್ಪಷ್ಟಪಡಿಸಿದರು.

ಯುವ ದಸರಾದಲ್ಲಿ ಟಿಕೆಟ್ ಖರೀದಿ ಮಾಡುವವರಿಗೆ ಮುಂದಿನ ಸಾಲಿನಲ್ಲಿ ಆಸನದ ವ್ಯವಸ್ಥೆ ಮಾಡಿ, ಪ್ರತ್ಯೇಕ ಗ್ಯಾಲರಿಗಳನ್ನು ನಿರ್ಮಾಣ ಮಾಡಲಾಗುವುದು. ಇದರ ಜೊತೆಗೆ ಯಾವುದೇ ಶುಲ್ಕವಿಲ್ಲದೆ 80ರಿಂದ 90 ಸಾವಿರ ಜನರು ಯುವ ದಸರಾ ವೀಕ್ಷಣೆ ಮಾಡಲು ಮೈದಾನದಲ್ಲಿ ವ್ಯವಸ್ಥೆ ಮಾಡಲಾಗುವುದು ಎಂದರು.

ಡಿಸಿ ಲಕ್ಷ್ಮಿಕಾಂತ ರೆಡ್ಡಿ ಮಾಹಿತಿ

ದಸರಾ ಗೋಲ್ಡ್ ಕಾರ್ಡ್‌ಗಳು ಕೇವಲ ಅರ್ಧ ದಿನದಲ್ಲೇ ಮಾರಾಟವಾಗಿವೆ. ಇದರಿಂದ ತಮಗೆ ಗೋಲ್ಡ್ ಕಾರ್ಡ್ ಖರೀದಿಗೆ ಸಿಗಲಿಲ್ಲ ಎಂದು ಕಳೆದ ದಸರಾದಲ್ಲಿ ಆರೋಪ ಮಾಡಲಾಗಿತ್ತು. ಆದರೆ ಈ ಬಾರಿ ಆನ್‌ಲೈನ್‌ನಲ್ಲಿ ಸಮರ್ಪಕವಾಗಿ ಗೋಲ್ಡ್ ಕಾರ್ಡ್ ಮಾರಾಟ ಮಾಡಲಾಗುತ್ತಿದೆ. ಈಗಾಗಲೇ ಮಾರಾಟವಾಗಿರುವ ಗೋಲ್ಡ್ ಕಾರ್ಡ್ ಜೊತೆಗೆ ಇನ್ನು ಒಂದು ಸಾವಿರ ಮಾರಾಟಕ್ಕೆ ಲಭ್ಯವಿದ್ದು, ಯಾರೂ ಬೇಕಾದರೂ ಖರೀದಿ ಮಾಡಬಹುದು ಎಂದರು.

ಎಲ್ಲಾ ಗೋಲ್ಡ್ ಕಾರ್ಡ್ ಮಾರಾಟವಾದ ನಂತರ ಮತ್ತಷ್ಟು ಬೇಡಿಕೆ ಬಂದರೆ ಇನ್ನು ಹೆಚ್ಚಿನ ಗೋರ್ಡ್ ಕಾರ್ಡ್ ಮಾರಾಟ ಮಾಡಲಾಗುವುದು ಎಂದರು.

ಹೆಚ್ಚು ಗೋಲ್ಡ್ ಕಾರ್ಡ್ ಖರೀದಿಸಿ. ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ಬಾರಿ ಹಲವು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಓಟಿಪಿ ಮೂಲಕ ಒಬ್ಬ ವ್ಯಕ್ತಿಗೆ ನಾಲ್ಕು ಕಾರ್ಡ್ ಮಾತ್ರ ಖರೀದಿಗೆ ಅವಕಾಶ ನೀಡಲಾಗಿದೆ. ಇದರಿಂದ ಬ್ಲ್ಯಾಕ್ ಮಾರ್ಕೆಟ್‌ನಲ್ಲಿ ಗೋಲ್ಡ್ ಕಾರ್ಡ್ ಮಾರಾಟಕ್ಕೆ ಕಡಿವಾಣ ಹಾಕಲಾಗಿದೆ ಎಂದರು.

ದಸರಾ ಸಂದರ್ಭದಲ್ಲಿ ಅರಮನೆ, ಫಲಪುಷ್ಪ ಪ್ರದರ್ಶನ ಸೇರಿದಂತೆ ಇತರೆ ಸ್ಥಳಗಳಿಗೆ ಭೇಟಿ ನೀಡಲು ಅರಮನೆ ಅರ್ಧ ಭಾಗ ಹಾಗೂ ದೇವರಾಜ ಅರಸ್ ರಸ್ತೆಯಲ್ಲಿ ನೋ ವೆಹಿಕಲ್ ಜೋನ್ (ವಾಹನ ಮುಕ್ತ ವಲಯ) ಎಂದು ಘೋಷಣೆ ಮಾಡಲಾಗಿದೆ ಎಂದರು.

ದಸರಾ ಆರಂಭವಾಗುವ ಅ.3ರಿಂದ ಈ ನಿಯಮ ಜಾರಿಗೊಳಿಸ ಲಾಗುವುದು. ಇದರ ಸಾಧಕ–ಬಾಧಕ ಹಾಗೂ ಯಶಸ್ವಿ ನೋಡಿಕೊಂಡು 9 ದಿನಗಳ ಕಾಲ ಪೂರ್ಣವಾಗಿ ಇದನ್ನು ಅನುಷ್ಠಾನ ಮಾಡಲು ಚಿಂತನೆ ನಡೆಸಲಾಗುವುದು ಎಂದು ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದರು.

ಸಿದ್ದರಾಮಯ್ಯ ಪೆಡಂಭೂತ ರೀತಿ ಕಾಡುತ್ತಿದ್ದಾರೆ

ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟವರಿಗೆ ಸಿದ್ದರಾಮಯ್ಯ ಪೆಡಂಭೂತದ ರೀತಿ ಕಾಡುತ್ತಿದ್ದಾರೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಗೇಲಿ ಮಾಡಿದರು.

ಸಿದ್ದರಾಮಯ್ಯ ಶಾಸಕಾಂಗ ಪಕ್ಷದ ಪೂರ್ಣ ವಿಶ್ವಾಸ ಪಡೆದು ಮುಖ್ಯಮಂತ್ರಿಯಾಗಿದ್ದಾರೆ. ಈ ವಿಚಾರವಾಗಿ ಎಲ್ಲಾ ಶಾಸಕರು ಹೈಕಮಾಂಡ್ ತೀರ್ಮಾನಕ್ಕೆ ಬದ್ಧರಾಗಿದ್ದಾರೆ. ಇದೇನೆ ಇರಲಿ, ಸದ್ಯ ಮುಖ್ಯಮಂತ್ರಿ ಸ್ಥಾನವಂತೂ ಖಾಲಿ ಇಲ್ಲ ಎಂದು ವಿರೋಧಿಗಳಿಗೆ ತಿರುಗೇಟು ನೀಡಿದರು. ಪ್ರಸ್ತುತ ಸಂದರ್ಭ ಅಥವಾ ಬೇರೆ ಪರಿಸ್ಥಿತಿಯೇ ಇರಲಿ, ವ್ಯಕ್ತಿಗಿಂತ ಪಕ್ಷ ಮುಖ್ಯ, ಪಕ್ಷಕ್ಕಿಂತ ದೇಶ ಮುಖ್ಯ. ಇದು ಕಾಂಗ್ರೆಸ್‌ನಲ್ಲಿ ಮಾತ್ರವಲ್ಲದೆ ಎಲ್ಲಾ ಪಕ್ಷದಲ್ಲೂ ಇದೆ ಎಂದು ಅಭಿಪ್ರಾಯಪಟ್ಟರು.

ದೇಶಾದ್ಯಂತ 250ಕ್ಕೂ ಹೆಚ್ಚು ರಾಜಕಾರಣಿಗಳ ಮೇಲೆ ಎಫ್‌ಐಆರ್ ದಾಖಲಾಗಿದೆ. ಹಲವರು ಜಾಮೀನಿನ ಮೇಲೆ ಇದ್ದಾರೆ. ಹೀಗಿರುವಾಗ ಪ್ರಕರಣ ಎದುರಿಸುತ್ತಿರುವ ಎಲ್ಲಾ ರಾಜಕಾರಣಿಗಳು ರಾಜೀನಾಮೆ ನೀಡಲು ಸಾಧ್ಯವಾ ಎಂದು ಪ್ರಶ್ನಿಸಿದರು. ಚುನಾವಣಾ ಬಾಂಡ್ ಮೂಲಕ ನಿಧಿ ಸಂಗ್ರಹದ ಆರೋಪದಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮ್ ವಿರುದ್ಧ ಪ್ರಕರಣ ದಾಖಲಾಗಿದ್ದು, ಅವರು ರಾಜೀನಾಮೆ ನೀಡುತ್ತಾರೆಯೇ ಎಂದು ಪ್ರಶ್ನಿಸಿದರು.

ಮುಡಾ ಹಗರಣದ ಆರೋಪದಿಂದ ಸಿದ್ದರಾಮಯ್ಯ ಕುಗ್ಗಿಲ್ಲ. ಆದರೆ ಪ್ರಜಾಪ್ರಭುತ್ವ ವ್ಯವಸ್ಥೆ ಎತ್ತ ಕಡೆ ಸಾಗುತ್ತಿದೆ ಎಂಬ ಬೇಸರದಲ್ಲಿದ್ದಾರೆ. ಭಾರತದ ಇತಿಹಾಸದಲ್ಲಿ ಚುನಾವಣಾ ಬಾಂಡ್ ಮೂಲಕ ಹಣ ಪಡೆದಿರುವುದು ಇದೇ ಮೊದಲಾಗಿದ್ದು, ದೊಡ್ಡ ಹಗರಣವಾಗಿದೆ. ಆದರೆ ಹಣದ ಮಾಹಿತಿಯನ್ನು ಬಿಜೆಪಿ ರಹಸ್ಯವಾಗಿಡಲು ಮುಂದಾಗಿದೆ ಎಂದು ಆರೋಪಿಸಿದರು.

ದಸರಾ ಚಲನಚಿತ್ರೋತ್ಸವ: ನಟ, ನಿರ್ದೇಶಕ ರಮೇಶ್ ಅರವಿಂದ್, ನಿರ್ಮಾಪಕ ಯೋಗೇಶ್ ದ್ವಾರಕೀಶ್, ನಟಿ ಅಕ್ಷಿತಾ ಬೋಪಯ್ಯರಿಗೆ ಅಧಿಕೃತ ಆಹ್ವಾನ



ಹಿರಿಯ ನಟ–ನಿರ್ದೇಶಕ ರಮೇಶ್ ಅರವಿಂದ್‌ಗೆ ಆಹ್ವಾನ



ಯೋಗೇಶ್ ದ್ವಾರಕೀಶ್‌ಗೆ ಆಮಂತ್ರಣ.

ಮೈಸೂರು, ಸೆ. 30–ದಸರಾ ಮಹೋತ್ಸವದ ಅಂಗವಾಗಿ ಅ.3ರಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ನಡೆಯಲಿರುವ ದಸರಾ ಚಲನಚಿತ್ರೋತ್ಸವದ ಉದ್ಘಾಟನಾ ಕಾರ್ಯಕ್ರಮಕ್ಕೆ ಚಲನಚಿತ್ರ ನಟ ಹಾಗೂ ನಿರ್ದೇಶಕ ರಮೇಶ್ ಅರವಿಂದ್, ನಟಿ ಅಕ್ಷಿತ ಬೋಪಯ್ಯ ಹಾಗೂ ನಿರ್ಮಾಪಕ ಯೋಗೇಶ್ ದ್ವಾರಕೀಶ್ ಅವರನ್ನು ಬೆಂಗಳೂರಿನ ನಿವಾಸಕ್ಕೆ ಭೇಟಿ ನೀಡಿ, ದಸರಾ ಚಲನಚಿತ್ರ ಉಪ ಸಮಿತಿಯ ವತಿಯಿಂದ ಸೋಮವಾರ ಅಧಿಕೃತವಾಗಿ ಆಮಂತ್ರಿಸಲಾಯಿತು.

ಈ ಸಂದರ್ಭದಲ್ಲಿ ದಸರಾ ಚಲನಚಿತ್ರೋತ್ಸವ ಉಪಸಮಿತಿಯ ವಿಶೇಷಾಧಿಕಾರಿ ಡಾ. ಬಸವರಾಜ ಕೆ.ಎನ್., ಕಾರ್ಯಾಧ್ಯಕ್ಷ ರಂಗೇಗೌಡ, ಸಮಿತಿಯ ಕಾರ್ಯದರ್ಶಿ ಟಿ.ಕೆ.ಹರೀಶ್ ಉಪಸ್ಥಿತರಿದ್ದರು.



ನಟಿ ಅಕ್ಷಿತ ಬೋಪಯ್ಯಗೂ ಆಹ್ವಾನ.

ದಸರಾ ವೇಳೆ ಸಂಚಾರಕ್ಕೆ ಅಡ್ಡಿಯಾಗದಂತೆ ಎಚ್ಚರ ವಹಿಸಿ

ಸಂಚಾರ ಪೊಲೀಸ್ ಅಧಿಕಾರಿಗಳಿಗೆ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಸೂಚನೆ



ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಸಂಚಾರ ವಿಭಾಗದ ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಡಿಸಿಪಿ ಜಾಹ್ನವಿ ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ಸೆ.30(ಆರ್‌ಕೆ)–ದಸರಾ ಮಹೋತ್ಸವ ಸಂದರ್ಭ ಗಣ್ಯರು, ಸಾರ್ವಜನಿಕ ವಾಹನಗಳ ಸಂಚಾರಕ್ಕೆ ಅಡ್ಡಿಯಾಗದಂತೆ ವ್ಯವಸ್ಥೆ ಮಾಡಿ ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಸಂಚಾರ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಜರ್‌ಬಾದ್‌ನ ತಮ್ಮ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿದ ಅವರು, ಅ.3ರಿಂದ 12ರವರೆಗೆ ನಡೆಯಲಿರುವ 2024ರ ದಸರಾ ಮಹೋತ್ಸವದಲ್ಲಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಿರುವುದರಿಂದ ಲಕ್ಷಾಂತರ ಮಂದಿ ಪಾಲ್ಗೊಳ್ಳುವ ನಿರೀಕ್ಷೆ ಇದ್ದು, ಆ ವೇಳೆ ಮೈಸೂರು ನಗರದಲ್ಲಿ ವಾಹನ ಸಂಚಾರ ಸಹಜವಾಗಿ ಹೆಚ್ಚಾಗಿರುತ್ತದೆ. ದೇಶ–ವಿದೇಶಗಳಿಂದ ಪ್ರವಾಸಿಗರು ಆಗಮಿಸಲಿದ್ದು, ಜಂಬೂಸವಾರಿ ಮೆರವಣಿಗೆ, ಯುವ ದಸರಾ, ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಂತಹ ಪ್ರಮುಖ ಕಾರ್ಯಕ್ರಮಗಳಲ್ಲಿ ಹೆಚ್ಚು ಮಂದಿ ಪಾಲ್ಗೊಳ್ಳುವುದರಿಂದ ವಾಹನ ಸಂಚಾರ ಸುಗಮಗೊಳಿಸುವುದು, ಪಾರ್ಕಿಂಗ್ ವ್ಯವಸ್ಥೆ, ಏಕಮುಖ ಸಂಚಾರ, ಸಂಚಾರ ನಿರ್ಬಂಧಗಳಂತಹ ವ್ಯವಸ್ಥೆ ಮಾಡಿ ಟ್ರಾಫಿಕ್ ಜಾಮ್ ಆಗದಂತೆ ರಸ್ತೆ, ಸರ್ಕಲ್‌ಗಳಲ್ಲಿ ಖುದ್ದು ಹಾಜರಿದ್ದು ಸುಗಮ ಸಂಚಾರ ಸೌಲಭ್ಯ ಕಲ್ಪಿಸಬೇಕೆಂದು ಸಲಹೆ ನೀಡಿದರು.

ಫಲಪುಷ್ಪ ಪ್ರದರ್ಶನ, ದಸರಾ ವಸ್ತುಪ್ರದರ್ಶನ, ಯುವ ದಸರಾ ಕಾರ್ಯಕ್ರಮಗಳು ಆರಂಭವಾಗುತ್ತಿದ್ದಂತೆಯೇ ಜನ ಸಂಚಾರ ಹೆಚ್ಚಾಗಲಿದೆ. ವಾಹನ ಸಂಚರಿಸುವ ಮಾರ್ಗಗಳಲ್ಲಿ ಗಣ್ಯರು, ಕಲಾವಿದರಿಗೆ ಅಡ್ಡಿಯಾಗದಂತೆ ಎಚ್ಚರ ವಹಿಸುವಂತೆ ನಿರ್ದೇಶನ ನೀಡಿದರು. ಹೊರಗಡೆಯಿಂದ ಬರುವ ಪ್ರವಾಸಿಗರಿಗೆ ಇಲ್ಲಿನ ಪ್ರವಾಸಿ ತಾಣಗಳು, ದಸರಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿ ಸ್ಥಳಕ್ಕೆ ತೆರಳುವ ಮಾರ್ಗದ ಬಗ್ಗೆಯೂ ತಿಳಿಸಿ ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸುವಂತೆ ಸೀಮಾ ಲಾಟ್ಕರ್ ಸಂಚಾರ ವಿಭಾಗದ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಅಪರಾಧ ಮತ್ತು ಸಂಚಾರ ಡಿಸಿಪಿ ಎಸ್. ಜಾಹ್ನವಿ, ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ ಎಲ್ಲಾ ಸಂಚಾರ ಠಾಣೆಗಳ ಇನ್‌ಸ್ಪೆಕ್ಟರ್, ಸಬ್‌ಇನ್‌ಸ್ಪೆಕ್ಟರ್‌ಗಳು ಸಭೆಯಲ್ಲಿ ಹಾಜರಿದ್ದರು.

ಅ.3ರಿಂದ 90 ದಿನ ಪ್ಲಾಸ್ಟಿಕ್ ಮುಕ್ತ ದಸರಾ ವಸ್ತುಪ್ರದರ್ಶನ

- ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್ ಮಾಹಿತಿ
- ಬ್ರಾಂಡ್ ಮೈಸೂರು ಮಳಿಗೆ, ಇ–ವಾಹನ ಸೌಲಭ್ಯ
- ಆಕರ್ಷಕ ಸೆಲ್ಫಿ ಪಾಯಿಂಟ್

ಮೈಸೂರು, ಸೆ.30 (ಎಂಟಿವೈ)–ದಸರಾ ಮಹೋತ್ಸವ ಅಂಗವಾಗಿ ಅ.3ರಿಂದ ಡಿ.31ರವರೆಗೆ 90 ದಿನಗಳ ಕಾಲ ನಡೆಯುವ ದಸರಾ ವಸ್ತುಪ್ರದರ್ಶನದಲ್ಲಿ ಈ ಬಾರಿ ಪ್ಲಾಸ್ಟಿಕ್ ಬಳಕೆ ಸಂಪೂರ್ಣವಾಗಿ ನಿಷೇಧಿಸಿರುವುದರೊಂದಿಗೆ ಸ್ವಚ್ಛತೆ ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ತಿಳಿಸಿದ್ದಾರೆ.



ದಸರಾ ವಸ್ತುಪ್ರದರ್ಶನದ ಪೋಸ್ಟರ್ ಅನ್ನು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಬಿಡುಗಡೆ ಮಾಡಿದರು.

ದಸರಾ ವಸ್ತುಪ್ರದರ್ಶನದ ಆವರಣದಲ್ಲಿರುವ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಸರಾ ವಸ್ತುಪ್ರದರ್ಶನವನ್ನು ಈ ಬಾರಿ ಅರ್ಥಪೂರ್ಣವಾಗಿ ನಡೆಸುವುದಕ್ಕಾಗಿ ಕ್ರಮ ಕೈಗೊಳ್ಳಲಾಗಿದ್ದು, ಹಲವು ವಿಶಿಷ್ಟವಾದ ಕಾರ್ಯಕ್ರಮ ರೂಪಿಸಲಾಗಿದೆ. ಅವುಗಳಲ್ಲಿ ಬ್ರಾಂಡ್ ಮೈಸೂರು ಕಾರ್ಯಕ್ರಮ ಒಂದಾಗಿದೆ. ದಸರಾ ವಸ್ತುಪ್ರದರ್ಶನ ವೀಕ್ಷಣೆಗೆ ಬರುವ ವೀಕ್ಷಕರು ಹಾಗೂ ಪ್ರವಾಸಿಗರಿಗೆ ಬ್ರ್ಯಾಂಡ್ ಮೈಸೂರು ಹೆಸರಿನಡಿ ನಿರ್ಮಾಣವಾಗಲಿರುವ ಅರಮನೆ ಮಾದರಿಯಲ್ಲಿ ಮಳಿಗೆಯಲ್ಲಿ ಮೈಸೂರು ಮಲ್ಲಿಗೆ, ಮೈಸೂರು ವಿಳ್ಳೆದೆಲೆ, ನಂಜನಗೂಡು ರಸಬಾಳೆ, ಮೈಸೂರು ಪಾಕ್, ಮೈಸೂರು ಸ್ಯಾಂಡಲ್ ಸೋಪ್, ಮೈಸೂರು ರೇಷ್ಮೆ, ಮೈಸೂರಿನ ಸಾಂಪ್ರದಾಯಿಕ ವರ್ಣ ಚಿತ್ರಕಲೆ ಸೇರಿದಂತೆ 20 ಬಗೆಯ ಬ್ರ್ಯಾಂಡ್ ಮೈಸೂರು ಉತ್ಪನ್ನಗಳ ಪ್ರದರ್ಶನ ಮತ್ತು ವೀಕ್ಷಣೆ ಅವಕಾಶ ಕಲ್ಪಿಸಲಾಗುತ್ತಿದೆ. ಅ.3 ರಂದು ಸಂಜೆ 8 ಗಂಟೆಗೆ ದಸರಾ ವಸ್ತು ಪ್ರದರ್ಶನ ಉದ್ಘಾನೆಗೊಳ್ಳಲಿದ್ದು, ಅಂದೇ ಸರ್ಕಾರದ ವಿವಿಧ ಇಲಾಖೆಗಳ 30 ಸ್ಟಾಲ್ ಹಾಗೂ 153 ಖಾಸಗಿ ಸ್ಟಾಲ್‌ಗಳು ಉದ್ಘಾಟನೆಗೊಳ್ಳಲಿವೆ ಎಂದರು.

ಮಕ್ಕಳಿಗಾಗಿ ವರ್ಚುವಲ್ ಪಾರ್ಕ್: ವಸ್ತುಪ್ರದರ್ಶನಕ್ಕೆ ಬಂದಂತಹ ಮಕ್ಕಳಿಗೆ ಮನರಂಜನೆ ನೀಡಲು ಇಂಟರಕ್ಟಿವ್ ಪಾರ್ಕ್ ಹಾಗೂ 3ಡಿ ತಂತ್ರಜ್ಞಾನವನ್ನು ಒಳಗೊಂಡಿರುವ ವರ್ಚುವಲ್ ಪಾರ್ಕ್ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಟಿಕೆಟ್ ದರ ಹೆಚ್ಚಳ: ವಸ್ತು ಪ್ರದರ್ಶನ ವೀಕ್ಷಣೆಗೆ ಬರುವವರಿಗೆ ಕಳೆದ ವರ್ಷಕ್ಕಿಂದ 5 ರೂ. ಹೆಚ್ಚಳ ಮಾಡಲಾಗಿದೆ. ಈ ಬಾರಿ ಮಕ್ಕಳಿಗೆ ಪ್ರವೇಶ ದರ 20 ರೂ. ಗಳಿದ್ದು, ವಯಸ್ಕರು ಹಾಗೂ ಇನ್ನಿತರರಿಗೆ 35 ರೂ. ಟಿಕೆಟ್ ದರ ನಿಗದಿ ಮಾಡಲಾಗಿದೆ ಎಂದು ಹೇಳಿದರು.

> **ಪ್ಲಾಸ್ಟಿಕ್ ಮುಕ್ತ**
>
> “ಈ ಬಾರಿಯ ವಸ್ತುಪ್ರದರ್ಶನವನ್ನು ಪ್ಲಾಸ್ಟಿಕ್ ಮುಕ್ತವಾಗಿ ಆಯೋಜಿಸಲು ಸಕಲ ಸಿದ್ಧತೆಯನ್ನು ಮಾಡಿಕೊಳ್ಳಲಾಗಿದೆ. ಸಾರ್ವಜನಿಕರು ಪ್ಲಾಸ್ಟಿಕ್ ಬ್ಯಾಗ್‌ಗಳ ಬದಲಾಗಿ ಬಟ್ಟೆ ಚೀಲಗಳನ್ನು ತಂದು ಪ್ಲಾಸ್ಟಿಕ್ ಮುಕ್ತ ವಸ್ತುಪ್ರದರ್ಶನಕ್ಕೆ ಸಹಕಾರ ನೀಡಬೇಕು. ಈ ನಿಟ್ಟಿನಲ್ಲಿ ವಸ್ತುಪ್ರದರ್ಶನದ ಮುಂಭಾಗದಲ್ಲಿಯೇ ಸಾರ್ವಜನಿಕರಿಗೆ ಉಚಿತ ಬಟ್ಟೆ ಚೀಲಗಳನ್ನು ವಿತರಿಸಲಾಗುತ್ತದೆ. ಅವಶ್ಯಕತೆ ಇರುವ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು.
>
> –ಅಯೂಬ್ ಖಾನ್

ಶುದ್ಧ ಕುಡಿಯುವ ನೀರು: ಗ್ರಾಹಕರು ನೀರು ಕುಡಿಯಲು ಅನುಕೂಲವಾಗುವಂತೆ ಏರ್ ಪೋರ್ಟ್ ಮಾದರಿಯ ವಾಟರ್ ಫೌಂಟೆನ್ ಪ್ಲಾಂಟ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ದೀಪಾಲಂಕಾರ: ಮುಖ್ಯದ್ವಾರ ಮುಂಭಾಗ ಹಾಗೂ ಪ್ರಾಧಿಕಾರದ ಪ್ರಮುಖ ರಸ್ತೆಗಳಲ್ಲಿ ಮತ್ತು ಪ್ರಾಧಿಕಾರದ ವೃತ್ತಗಳಿಗೆ ವಿಶೇಷ ಮಾದರಿಯ ವಿದ್ಯುತ್ ದೀಪ ಬಣ್ಣದ ದೀಪಾಲಂಕಾರ ಮಾಡಲಾಗಿದೆ.

ಸಾಂಸ್ಕೃತಿಕ ಕಾರ್ಯಕ್ರಮ: ಪ್ರತಿ ಭಾನುವಾರ ಚಲನಚಿತ್ರ ಕಲಾವಿದರಿಂದ ಮನರಂಜನಾತ್ಮಕ ಕಾರ್ಯಕ್ರಮ ಹಾಗೂ ಪ್ರತಿ ಶನಿವಾರ ಯುವ ಸಂಭ್ರಮದಲ್ಲಿ ಪ್ರದರ್ಶನ ನೀಡಿದ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಇ–ವಾಹನ ಸೌಲಭ್ಯ: ದಸರಾ ಪ್ರದರ್ಶನದ 80 ಎಕರೆ ಪ್ರದೇಶದಲ್ಲಿದ್ದು, ವಿವಿಧ ಸ್ಥಳಗಳಿಗೆ ಸಂಚರಿಸಲು ಪ್ರವಾಸಿಗರಿಗೆ ನೆರವಾಗಲು ಈ ಬಾರಿ ವಸ್ತುಪ್ರದರ್ಶನದಲ್ಲಿ 3 ಎಲೆಕ್ಟ್ರಾನಿಕ್ ವಾಹನಗಳ ಸೌಲಭ್ಯ ಒದಗಿಸಲಾಗಿದೆ. ಅಗತ್ಯವುಳ್ಳವರು ಇ–ವಾಹನದಲ್ಲಿ ಸಂಚರಿಸಬಹುದಾಗಿದೆ ಎಂದರು.

ಸೆಲ್ಫಿ ಪಾಯಿಂಟ್: ಪ್ರವಾಸಿಗರನ್ನು ಆಕರ್ಷಿಸಲು ಗುಲಾಬಿ ಹೂಗಳಿಂದ ಸೆಲ್ಫಿ ಪಾಯಿಂಟ್ ಅನ್ನು ನಿರ್ಮಿಸಲಾಗಿದೆ. ಅಲ್ಲದೆ ವಸ್ತುಪ್ರದರ್ಶನದ ಪಾರ್ಕ್‌ಗಳಲ್ಲಿ ಹೂಗಳಿಂದ ವಿವಿಧ ಆಕಾರದ ಹೂಗುಚ್ಛಗಳನ್ನು ಸ್ಥಾಪನೆ ಮಾಡಲಾಗಿದೆ. ಜನರನ್ನು ಆಕರ್ಷಿಸಲು 22 ಅಡಿ ಎತ್ತರದ ಪಾಂಡ ನಿರ್ಮಿಸಲಾಗಿದೆ. ಇದರೊಂದಿಗೆ ನಾಯಿ ಮರಿ, ಬೆಕ್ಕು, ಡಾಲ್ಫಿನ್, ಅಳಿಲು, ವಿವಿಧ ಪಕ್ಷಿಗಳ ಆಕೃತಿಯನ್ನು ನಿರ್ಮಿಸಿ ಪ್ರದರ್ಶನಕ್ಕಿಡಲಾಗಿದೆ ಎಂದು ತಿಳಿಸಿದರು.

ಫನ್‌ವರ್ಲ್ಡ್ ಸಂಸ್ಥೆಗೆ ಗುತ್ತಿಗೆ: ಈ ಬಾರಿ ದಸರಾ ವಸ್ತುಪ್ರದರ್ಶನದ ಗುತ್ತಿಗೆಯನ್ನು ಬೆಂಗಳೂರಿನ ಫನ್ ವರ್ಲ್ಡ್ ಸಂಸ್ಥೆ ಪಡೆದಿದೆ. ಪ್ರಾಧಿಕಾರ 9.77 ಕೋಟಿ ರೂ.ಹಣ ನಿಗದಿ ಮಾಡಿದ್ದು, ಫನ್ ವರ್ಲ್ಡ್ ಸಂಸ್ಥೆಯು 10.03 ಕೋಟಿ ರೂ. ಗೆ ಪ್ರದರ್ಶನದ ಗುತ್ತಿಗೆ ಪಡೆದಿದೆ ಎಂದು ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ತಿಳಿಸಿದರು.

ಈ ಸಂದರ್ಭದಲ್ಲಿ ದಸರಾ ವಸ್ತು ಪ್ರದರ್ಶನದ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು. ವಸ್ತುಪ್ರದರ್ಶನ ಪ್ರಾಧಿಕಾರದ ಸಿಇಓ ಕೆ.ರುದ್ರೇಶ್, ಸಿಬ್ಬಂದಿಗಳಾದ ನವೀನ್, ಶ್ರೀನಿಧಿ, ಉಮಾಪತಿ, ಫನ್ ವರ್ಲ್ಡ್ ಸಂಸ್ಥೆಯ ಮಲ್ಲಿಕಾರ್ಜುನ್ ಇದ್ದರು.

ಮೈಸೂರು ಮಿತ್ರ
ಮಂಗಳವಾರ 1 ಅಕ್ಟೋಬರ್ 2024

ನ್ಯಾಯಾಲಯದ ಆವರಣ ಸ್ವಚ್ಛಗೊಳಿಸಿ, ಸಸಿಗಳನ್ನು ನೆಟ್ಟು ನೀರೆರೆದ ನ್ಯಾಯಾಧೀಶರು

ಕೆ.ಆರ್.ಪೇಟೆ,ಸೆ.30– ಸ್ವಚ್ಛ ಭಾರತ ಅಭಿಯಾನ ಹಾಗೂ ಗಾಂಧಿ ಜಯಂತಿಯ ಹಿನ್ನೆಲೆಯಲ್ಲಿ ಕೆ.ಆರ್. ಪೇಟೆ ಪಟ್ಟಣದ ನ್ಯಾಯಾಲಯಗಳ ಸಂಕೀರ್ಣದ ಆವರಣದಲ್ಲಿ ನ್ಯಾಯಾಧೀಶರು ಹಾಗೂ ವಕೀಲರು ಕೈಯ್ಯಲ್ಲಿ ಪೊರಕೆ ಹಾಗೂ ಕುಡುಗೋಲು ಹಿಡಿದು ಕಸ ಗುಡಿಸಿ, ಗಿಡ ಗಂಟಿಗಳನ್ನು ಕತ್ತರಿಸಿ ಸ್ವಚ್ಛಗೊಳಿಸಿ ಶ್ರಮದಾನ ಮಾಡುವ ಮೂಲಕ ನ್ಯಾಯಾಲಯದ ಆವರಣವನ್ನು ಸ್ವಚ್ಛಗೊಳಿಸಿದರು.

ನ್ಯಾಯಾಲಯದ ಆವರಣದಲ್ಲಿ ಬಿದ್ದಿದ್ದ ಕಸವನ್ನು ಗುಡಿಸಿ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದ ಹಿರಿಯ ಶ್ರೇಣಿ ನ್ಯಾಯಾಧೀಶ ಸುಧೀರ್ ಮತ್ತು ಅಪರ ಸಿವಿಲ್ ನ್ಯಾಯಾಧೀಶರಾದ ದೇವರಾಜು, ಶಕುಂತಲಾ ಮತ್ತು ಅರ್ಪಿತ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಆದ್ದರಿಂದ ನಾವು ವಾಸ ಮಾಡುವ ಪ್ರದೇಶ ಸೇರಿದಂತೆ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಂಡು ರೋಗ ರುಜಿನಗಳು ಬರದಂತೆ ಎಚ್ಚರ ವಹಿಸಬೇಕು ಎಂದು ಮನವಿ ಮಾಡಿದರು.

ವಕೀಲರ ಸಂಘದ ಅಧ್ಯಕ್ಷ ರವಿಶಂಕರ್ ಮಾತನಾಡಿ, ಇಂದು ನ್ಯಾಯಾಲಯದ ಆವರಣದಲ್ಲಿ ಬೆಳೆದಿದ್ದ ಗಿಡ ಗಂಟಿಗಳು ಹಾಗೂ ಮುಳ್ಳಿನ ಪೊದೆಗಳನ್ನು ಕತ್ತರಿಸಿ ಸ್ವಚ್ಛಗೊಳಿಸುವ ಮೂಲಕ ಹೂವು ಮತ್ತು ಹಣ್ಣಿನ ಸಸಿಗಳನ್ನು ನೆಟ್ಟು ನೀರೆರೆಯಲಾಗಿದೆ. ನಮ್ಮ ಮಕ್ಕಳು ಸೇರಿದಂತೆ ವಿದ್ಯಾರ್ಥಿಗಳಿಗೆ ಬಾಲ್ಯದಿಂದಲೇ ಪರಿಸರ ಪ್ರೇಮ ಹಾಗೂ ಪರಿಸರ ಜಾಗೃತಿಯನ್ನು ಮೂಡಿಸುವ ಮೂಲಕ ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ರಾಜೇಗೌಡ, ಜಂಟಿ ಕಾರ್ಯದರ್ಶಿ ನಿರಂಜನ, ಉಪಾಧ್ಯಕ್ಷ ದಿನೇಶ್, ಹಾಗೂ ಪುರಸಭೆ ಮುಖ್ಯಾಧಿಕಾರಿ ರಾಜು ಕೆ.ವಠಾರ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ವಲಯ ಅರಣ್ಯಾಧಿಕಾರಿ ಅನಿತಾ ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕ ಅಶೋಕ್, ಪರಿಸರ ಇಂಜಿನಿಯರ್ ಅರ್ಚನಾ ಆರಾಧ್ಯ, ನ್ಯಾಯಾಲಯದ ಸಿಬ್ಬಂದಿಗಳು ಹಾಗೂ ಪೌರಕಾರ್ಮಿಕರು ಸ್ವಚ್ಛತಾ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ನ್ಯಾಯಾಲಯದ ಆವರಣವನ್ನು ಸ್ವಚ್ಛಗೊಳಿಸಿ ಗಿಡಮರಗಳನ್ನು ನೆಟ್ಟು ಸಂಭ್ರಮಿಸಿದರು.



ಪಟ್ಟಣದ ನ್ಯಾಯಾಲಯಗಳ ಸಂಕೀರ್ಣದ ಆವರಣದಲ್ಲಿ ನ್ಯಾಯಾಧೀಶರು ಹಾಗೂ ವಕೀಲರು ಕಸ ಗುಡಿಸಿ, ಗಿಡಗಂಟಿಗಳನ್ನು ಕತ್ತರಿಸಿ ಸ್ವಚ್ಛಗೊಳಿಸಿ, ಸಸಿಗಳನ್ನು ನೆಟ್ಟು ನೀರೆರೆದು ಶ್ರಮದಾನ ಮಾಡುವ ಮೂಲಕ ನ್ಯಾಯಾಲಯದ ಆವರಣವನ್ನು ಸ್ವಚ್ಛಗೊಳಿಸಿದರು. ಹಿರಿಯ ಶ್ರೇಣಿ ನ್ಯಾಯಾಧೀಶ ಸುಧೀರ್, ಅಪರ ಸಿವಿಲ್ ನ್ಯಾಯಾಧೀಶರಾದ ದೇವರಾಜು, ಶಕುಂತಲಾ ಮತ್ತು ಅರ್ಪಿತ, ವಕೀಲರ ಸಂಘದ ಅಧ್ಯಕ್ಷ ರವಿಶಂಕರ್ ಮತ್ತಿತರರು ಚಿತ್ರದಲ್ಲಿದ್ದಾರೆ.

ಎಡಿಜಿಪಿ ಚಂದ್ರಶೇಖರ್ ವಿರುದ್ಧ ತನಿಖೆಗೆ ರವೀಂದ್ರ ಶ್ರೀಕಂಠಯ್ಯ ಒತ್ತಾಯ

ಮಂಡ್ಯ,ಸೆ.30– ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಅವಹೇಳನಕಾರಿ ಪದ ಬಳಕೆ ಮಾಡಿರುವ ಹಾಗೂ ಭ್ರಷ್ಟಾಚಾರದ ಆರೋಪ ಹೊತ್ತಿರುವ ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ಅವರನ್ನು ಸೇವೆಯಿಂದ ಅಮಾನತು ಮಾಡಿ ಅವರ ವಿರುದ್ಧ ತನಿಖೆ ನಡೆಸಬೇಕೆಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಒತ್ತಾಯಿಸಿದರು.

ಸೋಮವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪೊಲೀಸ್ ಅಧಿಕಾರಿ ಒಬ್ಬರು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಬಳಸಿರುವ ಪದ ಸರಿಯಲ್ಲ. ಇದನ್ನು ಎಷ್ಟರ ಮಟ್ಟಿಗೆ ಸ್ವೀಕರಿಸಬೇಕು ಎನ್ನುವ ಬಗ್ಗೆ ಚರ್ಚಿಸುವ ವಿಚಾರವಾಗಿದೆ ಎಂದರು.

ಹೆಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಚಂದ್ರಶೇಖರ್ ಅವರು ಲಘುವಾಗಿ ಮಾತನಾಡಿದ್ದಾರೆ. ತಮ್ಮ ಸಿಬ್ಬಂದಿಗೆ ಬರೆದ ಪತ್ರವನ್ನು ವೈರಲ್ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಈ ಅಧಿಕಾರಿ ನೀಡಿರುವ ಹೇಳಿಕೆಯನ್ನು ಒಪ್ಪಿಕೊಳ್ಳುವುದಾದರೆ ಅದು ಆ ಸರ್ಕಾರಕ್ಕೆ ಒಂದು ಕಪ್ಪುಚುಕ್ಕೆಯಾಗುತ್ತದೆ ಎಂದರು.

ಮಾಜಿ ಶಾಸಕ ಕೆ.ಸುರೇಶ್‌ಗೌಡ ಮಾತನಾಡಿ, ಕುಮಾರಸ್ವಾಮಿ ಅವರ ಬಗ್ಗೆ ಅಧಿಕಾರಿ ನೀಡಿರುವ ಹೇಳಿಕೆಗೆ ರಾಜ್ಯಾದ್ಯಂತ ಖಂಡನೆ ವ್ಯಕ್ತವಾಗಿದೆ. ಎರಡು ಬಾರಿ ಮುಖ್ಯಮಂತ್ರಿಯಾಗಿ, ಈಗ ಕೇಂದ್ರ ಸಚಿವರಾಗಿ ಸೇವೆ ಮಾಡುತ್ತಿರುವ ಕುಮಾರಸ್ವಾಮಿ ಅವರಿಗೆ ಅವಮಾನ ಮಾಡಿದ್ದಾರೆ. ಇವರ ಹಿಂದೆ ಯಾರು ಇದ್ದಾರೆ. ಯಾವ ಕಚೇರಿಯಿಂದ ಪತ್ರ ಟೈಪ್ ಆಗಿದೆ ಎನ್ನುವುದು ಗೊತ್ತಿದೆ. ಎಡಿಜಿಪಿ ಚಂದ್ರಶೇಖರ್ ಪ್ರತಿಷ್ಠಿತ ಕುಟುಂಬದವರು ವಾಸಿಸುವ ಬಡಾವಣೆಯಲ್ಲಿ ಒಂದು ಎಕರೆಯಷ್ಟು ಜಾಗದಲ್ಲಿ ಮನೆ ನಿರ್ಮಿಸಿದ್ದು ಅದಕ್ಕೆ ಮೂರು ಕೋಟಿ ರೂಪಾಯಿ ವೆಚ್ಚವಾಗುತ್ತದೆ. ನಾನು ಎರಡು ಬಾರಿ ಶಾಸಕನಾಗಿದ್ದರೂ ಬೆಂಗಳೂ ರಿನಲ್ಲಿ ನನಗೆ ಮನೆ ಇಲ್ಲ. ಆದರೆ ನಾಗವಾರ ಮತ್ತು ರಾಚೇನಹಳ್ಳಿಯಲ್ಲಿ ಎಂಟು ಎಕರೆ ನಿವೇಶನದಲ್ಲಿ ಇವರ ಕುಟುಂಬದವರೇ ಇದ್ದು, ಇವರಿಗೆ ಆ ಸ್ಥಳಗಳನ್ನು ಖರೀದಿಸಲು ಹಣ ಎಲ್ಲಿಂದ ಬಂತು ಎಂದು ಪ್ರಶ್ನಿಸಿದರು.



ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ.

ಎಡಿಜಿಪಿ ಚಂದ್ರಶೇಖರ್ ಸರ್ಕಾರಿ ಹುದ್ದೆ ತ್ಯಜಿಸಿ ನನ್ನ ವಿರುದ್ಧ ಚುನಾವಣೆಗೆ ನಿಲ್ಲಲಿ

ಎಂಎಲ್‌ಸಿ ವಿವೇಕಾನಂದ ಸವಾಲು

ಮಂಡ್ಯ: ಎಡಿಜಿಪಿಯಂತಹ ಉನ್ನತ ಹುದ್ದೆಯಲ್ಲಿರುವವರು ತಮ್ಮ ಕಾನೂನು ಚೌಕಟ್ಟು ಮೀರಿ ಹೋಗಬಾರದು. ಆದರೆ ಒಬ್ಬ ರಾಜಕಾರಣಿಯಂತೆ ಕುಮಾರಸ್ವಾಮಿ ಅವರನ್ನು ಟೀಕಿಸಿದ್ದು, ಅವರಿಗೆ ರಾಜಕೀಯದ ಬಗ್ಗೆ ಅಷ್ಟೊಂದು ಆಸಕ್ತಿ ಇದ್ದರೆ, ಎಡಿಜಿಪಿ ಹುದ್ದೆ ತ್ಯಜಿಸಿ, ನನ್ನ ವಿರುದ್ಧ ಎಂಎಲ್‌ಸಿ ಚುನಾವಣೆಗೆ ಸ್ಪರ್ಧಿಸಲಿ. ನಾನು ನನ್ನ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಮತ್ತೊಮ್ಮೆ ಚುನಾವಣೆ ಎದುರಿಸಲು ಸಿದ್ಧ ಎಂದು ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಸವಾಲು ಹಾಕಿದರು.



ಕೆ.ವಿವೇಕಾನಂದ

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರವು ನಿರಂತರವಾಗಿ ಹೆಚ್.ಡಿ.ದೇವೇಗೌಡ ಮತ್ತು ಹೆಚ್.ಡಿ. ಕುಮಾರಸ್ವಾಮಿ ಅವರನ್ನು ಟಾರ್ಗೆಟ್ ಮಾಡುತ್ತಿದ್ದು, ಕುಮಾರಸ್ವಾಮಿ ವಿರುದ್ಧ ಇಲ್ಲಸಲ್ಲದ ದೂರುಗಳನ್ನು ಹಾಕಿ ಅಪಮಾನವೆಸಗಲು ಮುಂದಾಗಿದ್ದಾರೆ. ಎಡಿಜಿಪಿ ಚಂದ್ರಶೇಖರ್ ಹೇಳಿಕೆಯಲ್ಲೂ ಸರ್ಕಾರದ ಕುಮ್ಮಕ್ಕು ಇರಬಹುದೆಂದು ಆರೋಪಿಸಿದರು.

ಹೆಚ್.ಡಿ.ರೇವಣ್ಣ ತಪ್ಪು ಮಾಡದಿದ್ದರೂ ಅವರನ್ನು ದುರುದ್ದೇಶದಿಂದ ಬಂಧಿಸಲಾಗಿತ್ತು. ಇದೀಗ ಕುಮಾರಸ್ವಾಮಿ ಅವರನ್ನು ಟಾರ್ಗೆಟ್ ಮಾಡಿದ್ದಾರೆ. ಅವರ ಮೇಲೆ ಈ ಹಿಂದೆ ಇಲ್ಲದ ಆರೋಪ ಈಗ ಹೇಗೆ ಸೃಷ್ಟಿಯಾಯಿತು. ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣವನ್ನು ಬಿಡಬೇಕೆಂದರು.

ಕ್ಷುಲ್ಲಕ ರಾಜಕೀಯ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರವು ಮೈಸೂರಿನ ರಾಜಮನೆತನದ ಸುಪರ್ದಿಯಲ್ಲಿದ್ದ ಚಾಮುಂಡಿ ಬೆಟ್ಟವನ್ನು ಇದೀಗ ಪ್ರಾಧಿಕಾರ ಮಾಡಲು ಹೊರಟಿದೆ. ದೇವಾಲಯದ ಅಭಿವೃದ್ಧಿ ಮತ್ತು ಜೀರ್ಣೋದ್ಧಾರದ ಹೆಸರಲ್ಲಿ ಹಣ ಲೂಟಿಯಾಗುತ್ತಿದ್ದು, ಇದೀಗ ಸರ್ಕಾರದ ಕಣ್ಣು ಚಾಮುಂಡಿಬೆಟ್ಟದ ಮೇಲೆ ಬಿದ್ದಿದೆ ಎಂದು ಕಿಡಿಕಾರಿದರು.


ರೈತ ಉತ್ಪಾದಕರ ಕಚೇರಿ ಉದ್ಘಾಟನೆ



ಚಿನಕುರಳಿ ಗ್ರಾಮದಲ್ಲಿ ಹೊನ್ನೇರು ರೈತ ಉತ್ಪಾದಕರ ಕಚೇರಿಯನ್ನು ಸೋಮವಾರ ತಾಪಂ ಮಾಜಿ ಸದಸ್ಯ ಸಿ.ಎಸ್.ಗೋಪಾಲಗೌಡ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಗಾಯತ್ರಿ ಕುಮಾರ್, ಉಪಾಧ್ಯಕ್ಷ ಶ್ರೀನಿವಾಸ್, ವಿಎಸ್‌ಎಸ್‌ಎನ್ ಅಧ್ಯಕ್ಷ ಸಿ.ಎಸ್.ಮಂಜುನಾಥ್, ಮಾಜಿ ಅಧ್ಯಕ್ಷರಾದ ರಾಮಕೃಷ್ಣೇಗೌಡ, ಮೊಗ್ಗಣ್ಣಗೌಡ, ಸಂಸ್ಥೆಯ ಅಧ್ಯಕ್ಷ ಜಗದೀಶ್ ಬಾಬು, ಕೃಷಿ ಇಲಾಖೆ ಜಂಟಿ ನಿರ್ದೇಶಕ ವಿ.ಎಸ್.ಅಶೋಕ್, ವಿಕಸನ ಸಂಸ್ಥೆ ನಿರ್ದೇಶಕರಾದ ಮಹೇಶ್ ಚಂದ್ರಗುರು, ನಂಜುಂಡಸ್ವಾಮಿ, ಕೃಷಿ ಅಧಿಕಾರಿ ಯೋಗೇಶ್, ಸಿಇಓ ಬಿ.ಮುರಳಿ, ಗ್ರಾಪಂ ಸದಸ್ಯೆ ಸುಮಾ ಎಲ್.ಡಿ.ರಾಜು ಹಾಗೂ ನಿರ್ದೇಶಕರು ಪಾಲ್ಗೊಂಡಿದ್ದರು.

ಹುಟ್ಟುಹಬ್ಬದ ಸಿದ್ಧತೆ ಮಾಡಿಕೊಳ್ಳದಂತೆ ಸಿಎಸ್‌ಪಿ ಮನವಿ

ಪಾಂಡವಪುರ, ಸೆ.30– ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಅ.1 ಮತ್ತು 2 ರಂದು ಕಾರ್ಯ ನಿಮಿತ್ತ ಕ್ಷೇತ್ರದಲ್ಲಿ ಲಭ್ಯವಿಲ್ಲದ ಕಾರಣ ಪಕ್ಷದ ಕಾರ್ಯಕರ್ತರು, ಮುಖಂಡರು, ಹಿತೈಷಿಗಳು ಹಾಗೂ ಅಭಿಮಾನಿಗಳು ಅವರ ಹುಟ್ಟುಹಬ್ಬದ ಸಿದ್ಧತೆ ಮಾಡಿಕೊಳ್ಳಬಾರದು ಎಂದು ಸಿ.ಎಸ್.ಪುಟ್ಟರಾಜು ಅವರ ಸೂಚನೆ ಮೇರೆಗೆ ಆಪ್ತ ಸಹಾಯಕ ದೇವೇಗೌಡ ಮನವಿ ಮಾಡಿದ್ದಾರೆ.



ಚನ್ನಹಳ್ಳಿಯಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ

ಶ್ರೀರಂಗಪಟ್ಟಣ: ಭವ್ಯ ಭಾರತದ ಭವಿಷ್ಯಕ್ಕಾಗಿ ಬಿಜೆಪಿ ಸದಸ್ಯತ್ವ ಅಭಿಯಾನ ಮಾಡಲಾಗುತ್ತಿದೆ ಎಂದು ಬಿಜೆಪಿ ಮುಖಂಡ ಇಂಡುವಾಳು ಎಸ್.ಸಚ್ಚಿದಾನಂದ ಹೇಳಿದರು.

ತಾಲೂಕಿನ ಚನ್ನಹಳ್ಳಿ ಗ್ರಾಮದಲ್ಲಿ ಬಿಜೆಪಿ ಪ್ರಮುಖರು ಹಾಗೂ ಕಾರ್ಯಕರ್ತರ ಜೊತೆಗೂಡಿ ಸದಸ್ಯತ್ವ ಅಭಿಯಾನ ನಡೆಸಿ ಅವರು ಮಾತನಾಡಿದರು. ಸಮಾಜದ ಕಟ್ಟ ಕಡೆಯ ವ್ಯಕ್ತಿಯನ್ನೂ ಬಿಜೆಪಿ ಸದಸ್ಯರನ್ನಾಗಿ ಮಾಡುವ ನಿಟ್ಟಿನಲ್ಲಿ ಯುವಕರು, ಹಿರಿಯರು, ಕಾರ್ಮಿಕರು, ಸಣ್ಣ, ಸಣ್ಣ ವ್ಯಾಪಾರಸ್ಥರು ಸೇರಿದಂತೆ ಇತರರಿಗೆ ಸದಸ್ಯತ್ವ ನೀಡಲಾಗುತ್ತಿದೆ. ದೇಶದಲ್ಲಿ ಬಿಜೆಪಿ ಜನಪರವಾಗಿದ್ದು, ಬಹುತೇಕ ಮಂದಿ ಇಷ್ಟಪಡುವ ಪಕ್ಷವಾಗಿದೆ. ಹಾಗಾಗಿ ಅನೇಕರು ಸ್ವಯಂಪ್ರೇರಣೆಯಿಂದ ಪಕ್ಷದ ಸದಸ್ಯತ್ವ ಪಡೆಯುತ್ತಿದ್ದಾರೆ ಎಂದರು. ಈ ವೇಳೆ ಪಕ್ಷದ ಮುಖಂಡರಾದ ಸಿ.ವಿ.ನವೀನ್‌ಕುಮಾರ್, ಗೋವರ್ಧನ್, ಇತರರು ಜೊತೆಯಲ್ಲಿದ್ದರು.

ಇಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ

ಮಂಡ್ಯ,ಸೆ.30– ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಆಯುಷ್ ಇಲಾಖೆ ಹಾಗೂ ಜಿಲ್ಲೆಯಲ್ಲಿ ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ದುಡಿಯುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಹಿರಿಯ ನಾಗರೀಕರ ದಿನಾಚರಣೆಯನ್ನು ಅ.1 ರಂದು ಬೆಳಗ್ಗೆ 10.30ಕ್ಕೆ ಮಂಡ್ಯ ನಗರದ ಗಾಂಧಿ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಶ್ರೀರಂಗಪಟ್ಟಣ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ಉಪಸ್ಥಿತಿ ವಹಿಸಲಿದ್ದು, ಮಂಡ್ಯ ಶಾಸಕ ಪಿ ರವಿಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಕೆ.ವಿವೇಕಾನಂದ, ವಿಧಾನ ಸಭಾ ಕ್ಷೇತ್ರದ ಶಾಸಕರುಗಳಾದ ಪಿ.ಎಂ.ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ.ಮಂಜು, ಕೆ.ಎಂ.ಉದಯ, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ನಯೀಮ್, ಮಂಡ್ಯ ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್ (ನಾಗೇಶ್), ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ವಿ.ಅನ್ಬುಕುಮಾರ್, ಜಿಲ್ಲಾಧಿಕಾರಿ ಡಾ.ಕುಮಾರ, ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್.ನಾಗರಾಜು ಅವರುಗಳು ಭಾಗವಹಿಸಲಿದ್ದಾರೆ. ಮಂಡ್ಯ ಅಖಿಲ ಭಾರತ ವಕೀಲರ ಒಕ್ಕೂಟದ ಅಧ್ಯಕ್ಷ ಹಾಗೂ ಹಿರಿಯ ನ್ಯಾಯವಾದಿಗಳು ಜಿ.ಬಿ.ವಿಶ್ವನಾಥ್ ಅವರು ಕಾರ್ಯಕ್ರಮದಲ್ಲಿ ಹಿರಿಯ ನಾಗರೀಕರ ಪಾಲನೆ–ಪೋಷಣೆ, ಸಂರಕ್ಷಣೆ ಕಾಯ್ದೆ ಕುರಿತು ಉಪನ್ಯಾಸ ನೀಡಲಿದ್ದಾರೆ

ಅರ್ಜಿ ಆಹ್ವಾನ

ಮಂಡ್ಯ,ಸೆ.30– ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಫುಲ್ ಟೈಮ್ ಲೀಗಲ್ ಎಐಡಿ ಕೌನ್ಸಿಲ್ ಸಿಸ್ಟಮ್‌ಗೆ ಸಂಬಂಧಪಟ್ಟಂತೆ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಅರ್ಜಿಯನ್ನು ಅ.3ರೊಳಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಗೆ ಸಲ್ಲಿಸತಕ್ಕದ್ದು ಎಂದು ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶ ಆನಂದ.ಎಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜೀನಾಮೆಯೊಂದೇ ನಿಮಗೆ ಉಳಿದಿರುವ ದಾರಿ...


ಬೆಂಗಳೂರು: ಕೆಟ್ಟ ಮೇಲೆ ಬುದ್ಧಿ ಬಂತು... ಎಂಬ ಗಾದೆಮಾತು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅನ್ವಯಿಸುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಮುಡಾ ಮಂಜೂರು ಮಾಡಿದ್ದ ನಿವೇಶನಗಳನ್ನು ವಾಪಸು ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರು ಆಯುಕ್ತರಿಗೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಮನೆಯವರು ಎಂದರೆ ಬಿಟ್ಟುಬಿಡಬೇಕಾ. 62 ಕೋಟಿ ಕೊಟ್ಟರೆ ನಿವೇಶನಗಳನ್ನು ಹಿಂದಿರುಗಿಸುತ್ತೇನೆ. ಎಂದು ಅಂದು ಅರ್ಭಟಿಸಿದ್ದ ಮಾನ್ಯ ಸಿದ್ದರಾಮಯ್ಯನವರು ಇಂದು ಬೇಷರತ್ತಾಗಿ, ಅವರ ಪತ್ನಿಯವರಿಂದ ನಿವೇಶನ ಹಿಂದಿರುಗಿಸುವ ನಿರ್ಧಾರ ಪ್ರಕಟಿಸಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ. ಬಿಜೆಪಿ ಆರೋಪಗಳನ್ನು ಸಾರಾಸಗಟಾಗಿ ನಿರಾಕರಿಸಿದರು. ನಿಮಗೆ ದೊರೆತ 14 ಅಕ್ರಮ ನಿವೇಶನಗಳು 5 ಸಾವಿರಕ್ಕೂ ಹೆಚ್ಚು ನಿವೇಶನಗಳ ಲೂಟಿಕೋರತನಕ್ಕೆ ರಕ್ಷಣೆಯಾಗಿ ನಿಂತಿದೆ ಎಂದು ನಾವು ನಡೆಸಿದ 'ಮೈಸೂರು ಚಲೋ' ಪಾದಯಾತ್ರೆಗೆ ಪರ್ಯಾಯ ಸಮಾವೇಶ ಆಯೋಜಿಸಿ ಭಂಡತನತನದ ಸಮರ್ಥನೆಗಿಳಿದರು. ಸಾಮಾಜಿಕ ಕಾರ್ಯಕರ್ತರ ನ್ಯಾಯಾಲಯದ ಹೋರಾಟಕ್ಕೆ ಅಸ್ತು ಎಂದ ಘನತೆವೆತ್ತ ರಾಜ್ಯಪಾಲರನ್ನು ಅವಹೇಳನ ಮಾಡಿದರು. ಅವರು ನೀಡಿದ ಅನುಮತಿಯನ್ನು ಪ್ರಶ್ನಿಸಿ ಉಚ್ಚ ನ್ಯಾಯಾಲಯದಲ್ಲಿ ಹೋರಾಟ ಮಾಡಿದರು. ನ್ಯಾಯಾಲಯದಲ್ಲಿ ಜಯ ದೊರಕದ ಹಿನ್ನಲೆಯಲ್ಲಿ ಕಾನೂನಿನ ಕುಣಿಕೆ ಬಿಗಿತ ಹೆಚ್ಚಾದಂತೆ ಸಿಬಿಐ–ಇಡಿ ತನಿಖೆಗಳ ನಿರೀಕ್ಷೆಯಿಂದ ಬೆದರಿದ ಮುಖ್ಯಮಂತ್ರಿಗಳು ಏಕಾಏಕಿ ನಿವೇಶನಗಳನ್ನು ಹಿಂದಿರುಗಿಸುವ ನಿರ್ಧಾರಕ್ಕೆ ಬಂದಿರುವುದು ಅವರು ಕಾನೂನು ಹೋರಾಟಕ್ಕೆ ಮುನ್ನವೇ ಶಸ್ತ್ರ ತ್ಯಜಿಸಿ ಶರಣಾಗತಿ ಪ್ರಕಟಿಸಿದಂತಾಗಿದೆ. ಅಂದ ಮಾತ್ರಕ್ಕೆ ಶಿಕ್ಷೆಯಿಂದ ತಪ್ಪಿಸಿಕೊಳ್ಳಬಹುದು, ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರೆಯಬಹುದು ಎಂದಂದುಕೊಂಡಿದ್ದರೆ ಅದು ಅವರ ಅಜ್ಞಾನವನ್ನು ಪ್ರತಿಬಿಂಬಿಸುತ್ತದೆ. ನಿವೇಶನಗಳನ್ನು ಹಿಂದಿರುಗಿಸಿ ತಪ್ಪೊಪ್ಪಿಕೊಂಡಂತೆ ಮುಖ್ಯಮಂತ್ರಿ ಸ್ಥಾನಕ್ಕೂ ರಾಜೀನಾಮೆ ನೀಡಿದರೆ, ಮರೆತು ಹೋಗಿರುವ ತಮ್ಮ ನೈತಿಕತೆ ಪ್ರಜ್ಞೆ ಪ್ರದರ್ಶಿಸಿದಂತಾಗುತ್ತದೆ ಎಂದು ಆಗ್ರಹಿಸಿದ್ದಾರೆ.




ಪತ್ನಿ ನಿವೇಶನ ಕೊಟ್ಟಂತೆ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪತ್ನಿ ನಿವೇಶನಗಳನ್ನು ವಾಪಸ್ ನೀಡುವುದಾಗಿ ಪತ್ರ ಬರೆಯುವುದರ ಮೂಲಕ ತಪ್ಪು ನಡೆದಿರುವುದನ್ನು ಒಪ್ಪಿಕೊಂಡಿದ್ದಾರೆ. ಈ ಕೆಲಸವನ್ನು ಪ್ರಾರಂಭದಲ್ಲೇ ಮಾಡಬಹುದಿತ್ತು. ಆದರೆ ಆಗ ಸಿದ್ದರಾಮಯ್ಯ ತಾವು ತಪ್ಪೇ ಮಾಡಿಲ್ಲ. ನಿವೇಶನಗಳನ್ನು ವಾಪಸ್ ಕೊಡುವುದಿಲ್ಲ ಎಂದು ಹೇಳುತ್ತಾ ಬಂದಿದ್ದರು. ಈಗ ತಪ್ಪನ್ನು ಒಪ್ಪಿಕೊಂಡಿದ್ದಾರೆ. ಈ ಪ್ರಕರಣದಲ್ಲಿ ಶ್ರೀಮತಿ ಪಾರ್ವತಿಯವರ ಕೈವಾಡ ಇಲ್ಲದಿರಬಹುದು. ಆದರೆ ಎಲ್ಲವನ್ನು ಮಾಡಿರುವುದು ಅವರ ಪತಿ ಮುಖ್ಯಮಂತ್ರಿ ಸಿದ್ದರಾಮಯ್ಯ. ಈಗ ನಿವೇಶನ ವಾಪಸ್ ಕೊಡುತ್ತೇನೆ ಎಂದು ಪತ್ನಿ ಹೇಳಿರುವಂತೆ ಸಿದ್ದರಾಮಯ್ಯನವರು ಕೂಡ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ.

– ಆರ್.ಅಶೋಕ್, ವಿಪಕ್ಷ ನಾಯಕ.





ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಶ್ರೀಮತಿ ಪಾರ್ವತಿಯವರು ಪಡೆದಿರುವ 14 ನಿವೇಶಗಳನ್ನು ಮುಡಾಗೆ ವಾಪಸ್ ನೀಡುವುದರಿಂದ ಪ್ರಾಸಿಕ್ಯೂಷನ್ ಮೇಲೆ ಯಾವುದೇ ಪರಿಣಾಮ ಬೀರಲ್ಲ. – **ಓ ಶ್ಯಾಂ ಭಟ್, ಹಿರಿಯ ವಕೀಲರು.**

ನಾಳೆ ಸ್ವಚ್ಛತಾ ಮ್ಯಾರಥಾನ್

ಮೈಸೂರು, ಸೆ.30(ಎಂಕೆ)– ಮೈಸೂರನ್ನು ಸ್ವಚ್ಛ, ಹಸಿರು ಮತ್ತು ತ್ಯಾಜ್ಯ ಮುಕ್ತ ನಗರವನ್ನಾಗಿಸುವ ನಿಟ್ಟಿನಲ್ಲಿ ಮೈಸೂರು ನಗರಪಾಲಿಕೆ ವತಿಯಿಂದ ಅ.2 ರಂದು 'ಸ್ವಚ್ಛತಾ ಮ್ಯಾರಥಾನ್' ಹಮ್ಮಿಕೊಳ್ಳಲಾಗಿದೆ. ಅಂದು ಬೆಳಗ್ಗೆ 6 ಗಂಟೆಗೆ ನಗರದ ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಮ್ಯಾರಾಥಾನ್‌ಗೆ ಚಾಲನೆ ದೊರೆಯಲಿದ್ದು, ಸ್ವಚ್ಛ ಸರ್ವೇಕ್ಷಣ್–2024 ಅಂಗವಾಗಿ ನಡೆಯುವ ಸ್ವಚ್ಛತಾ ಮ್ಯಾರಥಾನ್‌ನಲ್ಲಿ ವಿಜೇತರಿಗೆ ಪ್ರಥಮ ಬಹುಮಾನ 25 ಸಾವಿರ ರೂ., ದ್ವಿತೀಯ ಬಹುಮಾನ 15 ಸಾವಿರ ರೂ. ಹಾಗೂ ತೃತೀಯ ಬಹುಮಾನ 10 ಸಾವಿರ ರೂ. ನೀಡಲಾಗುವುದು. ಆಸಕ್ತರು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಸ್ವಚ್ಛತಾ ಮ್ಯಾರಥಾನ್ ನೊಂದಣಿ ಮಾಡಿಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಹಿಂದೂ ಹೆಸರಲ್ಲಿ ಅಕ್ರಮವಾಗಿ ಬೆಂಗಳೂರಿನಲ್ಲಿ ನೆಲೆಸಿದ್ದ ಪಾಕ್ ಪ್ರಜೆ ಸೇರಿ ನಾಲ್ವರ ಬಂಧನ!

ಬೆಂಗಳೂರು: ಕಳೆದ ಆರು ವರ್ಷಗಳಿಂದ ನಕಲಿ ಗುರುತಿನೊಂದಿಗೆ ಅಕ್ರಮವಾಗಿ ನೆಲೆಸಿದ್ದ ಪಾಕಿಸ್ತಾನಿ ಪ್ರಜೆ ಆತನ ಪತ್ನಿ ಮತ್ತು ಇತರ ಇಬ್ಬರನ್ನು ಬಂಧಿಸಲಾಗಿದೆ. ಪ್ರಾಥಮಿಕ ವಿಚಾರಣೆಯ ಪ್ರಕಾರ, ಪಾಕ್ ಪ್ರಜೆ ಪತ್ನಿ ಬಾಂಗ್ಲಾದೇಶದವರಾಗಿದ್ದು ಢಾಕಾದಲ್ಲಿ ವಿವಾಹವಾಗಿದ್ದರು.

2014ರಲ್ಲಿ ದೆಹಲಿಗೆ ಬಂದಿದ್ದ ದಂಪತಿ ನಂತರ 2018ರಲ್ಲಿ ಬೆಂಗಳೂರಿಗೆ ಆಗಮಿಸಿದ್ದರು. ಬಂಧಿತ ಇನ್ನಿಬ್ಬರು ಆತನ ಸೋದರ ಅಳಿಯಂದಿರು ಎಂದು ತಿಳಿದುಬಂದಿದೆ. ಬೆಂಗಳೂರಿನ ಹೊರವಲಯದ ಜಿಗಣಿಯಲ್ಲಿ ಬೆಂಗಳೂರು ಪೊಲೀಸರು ಭಾನುವಾರ ದಾಳಿ ನಡೆಸಿ ಅವರನ್ನು ವಶಕ್ಕೆ ಪಡೆದಿದ್ದರು.

ಜಿಗಣಿ ಇನ್ಸ್‌ಪೆಕ್ಟರ್ ಈ ಬಗ್ಗೆ ತನಿಖೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಒಂದೇ ಕುಟುಂಬದ ನಾಲ್ವರು ಅಕ್ರಮ ದಾಖಲೆಗಳ ಸಹಾಯದಿಂದ ಇಲ್ಲಿ ವಾಸವಿದ್ದರು. ಇದೀಗ ಪ್ರಕರಣ ದಾಖಲಿಸಿಕೊಂಡು ಆ ನಾಲ್ವರನ್ನು ವಿಚಾರಣೆ ನಡೆಸಲಾಗುತ್ತಿದೆ. ಸಂಪೂರ್ಣ ವಿಚಾರಣೆ ನಂತರ ಮುಂದಿನ ಕ್ರಮ ಕೈಗೊಳ್ಳುತ್ತೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಈ ಕುಟುಂಬ ಕಳೆದ ಆರು ವರ್ಷಗಳಿಂದ ಜಿಗಣಿಯಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿತ್ತು. ಅವರೆಲ್ಲಾ ಹಿಂದೂ ಹೆಸರಿನೊಂದಿಗೆ ಗುರುತಿನ ದಾಖಲೆಗಳನ್ನು ಮಾಡಿಸಿಕೊಂಡಿದ್ದಾರೆ. ಪಾಕ್ ಪ್ರಜೆಯ ಜಾಲ ಮತ್ತು ಚಟುವಟಿಕೆಗಳ ಬಗ್ಗೆ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಬಂಧಿತರು ಪಾಕಿಸ್ತಾನ ಪ್ರಜೆ ರಷೀದ್ ಸಿದ್ದಿಕಿ ಅಲಿಯಾಸ್ ಶಂಕರ್ ಶರ್ಮಾ (48), ಆಯುಷಾ ಅನಿಫ್ ಅಲಿಯಾಸ್ ಆಶಾ ಶರ್ಮಾ (38), ಮೊಹಮ್ಮದ್ ಹನೀಫ್ ಅಲಿಯಾಸ್ ರಾಮ್ ಬಾಬಾ ಶರ್ಮಾ (73), ರುಬೀನಾ ಅಲಿಯಾಸ್ ರಾಣಿ ಶರ್ಮಾ (61) ಎಂದು ತಿಳಿದುಬಂದಿದೆ.

ಗೃಹ ಸಚಿವ ಡಾ. ಜಿ.ಪರಮೇಶ್ವರ ಪ್ರತಿಕ್ರಿಯೆ: ಬೆಂಗಳೂರಿನಲ್ಲಿ ಅಕ್ರಮ ವಿದೇಶಿಗರ ಬಂಧನ ಕುರಿತಂತೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ. ಪರಮೇಶ್ವರ, ಆರೋಪಿಗಳು 10 ವರ್ಷಗಳಿಂದ ಭಾರತದಲ್ಲಿ ನೆಲೆಸಿರುವ ಮಾಹಿತಿ ಲಭ್ಯವಾಗಿದ್ದು, ವರ್ಷಗಳ ಹಿಂದೆ ಬೆಂಗಳೂರಿಗೆ ಬಂದು ನೆಲೆಸಿದ್ದು, ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಬಂಧಿತರು ಬೆಂಗಳೂರಿಗೆ ಏಕೆ ಬಂದರು. ಅವರು ದಾಖಲೆಗಳನ್ನು ಹೇಗೆ ಪಡೆದರು ಎಂಬುದರ ಕುರಿತು ತನಿಖೆ ನಡೆಸಲಾಗುತ್ತದೆ.

ಬಾಂಗ್ಲಾದೇಶದಿಂದ ಅನೇಕರು ಭಾರತಕ್ಕೆ ಬಂದಿದ್ದಾರೆ. ಪ್ರತಿದಿನ ನಾವು ಬಾಂಗ್ಲಾದೇಶದಿಂದ ಅಕ್ರಮ ವಲಸಿಗರನ್ನು ಹಿಡಿದು ಅವರನ್ನು ವಾಪಸ್ ಕಳುಹಿಸುತ್ತಿದ್ದೇವೆ. ಅವರು ಬರುತ್ತಲೇ ಇರುತ್ತಾರೆ. ಬಾಂಗ್ಲಾದೇಶದಲ್ಲಿ ಗಡಿಗಳು ಸರಂಧ್ರವಾಗಿವೆ. ಗಡಿಯಲ್ಲಿ ಪರಿಸ್ಥಿತಿಯನ್ನು ಬಿಗಿಗೊಳಿಸಬೇಕು. ಕೇಂದ್ರ ಸರ್ಕಾರ ಮತ್ತು ಭಾರತೀಯ ಸೇನೆಗೆ ಈ ಬಗ್ಗೆ ಕಾಳಜಿ ಇದೆ ಎಂದು ಪರಮೇಶ್ವರ ಹೇಳಿದ್ದಾರೆ.

ತಿರುಪತಿ ಲಡ್ಡುಗೆ ಕಲಬೆರಕೆ ತುಪ್ಪ ಬಳಸಿದ್ದಾರೆ ಎನ್ನಲು ಸಾಕ್ಷ್ಯ ಏನು? ದೇವರನ್ನಾದರೂ ರಾಜಕಾರಣದಿಂದ ದೂರವಿರಿಸಿ: ಸುಪ್ರೀಂಕೋರ್ಟ್

ನವದೆಹಲಿ: ದೇವರನ್ನಾದರೂ ರಾಜಕಾರಣದಿಂದ ದೂರವಿರಿಸಿ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದೇ ವೇಳೆ ತಿರುಪತಿಯಲ್ಲಿ ಲಡ್ಡು ತಯಾರಿಕೆಗೆ ಕಲಬೆರಕೆ ತುಪ್ಪ ಬಳಸಿದ್ದಾರೆ ಎನ್ನುವುದಕ್ಕೆ ಸಾಕ್ಷ್ಯ ಏನಿದೆ ಎಂದು ಸುಪ್ರೀಂಕೋರ್ಟ್ ಪ್ರಶ್ನಿಸಿದೆ.

ಬಿಆರ್ ಗವಾಯಿ ಹಾಗೂ ಕೆ ವಿಶ್ವನಾಥನ್ ಅವರಿದ್ದ ಪೀಠ, ಈ ವಿಷಯವಾಗಿ ತನಿಖೆಗೆ ಆದೇಶಿಸಿರುವಾಗ ಸಾರ್ವಜನಿಕವಾಗಿ ಹೇಳಿಕೆ ನೀಡುವ ಅಗತ್ಯವೇನಿದೆ ಎಂದು ಪ್ರಶ್ನಿಸಿದೆ.

ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಇದು ನಂಬಿಕೆಯ ವಿಷಯವಾಗಿದೆ ಮತ್ತು ಲಡ್ಡುಗಳ ತಯಾರಿಕೆಯಲ್ಲಿ ಕಲುಷಿತ ತುಪ್ಪವನ್ನು ಬಳಸಿದರೆ ಅದನ್ನು ಸ್ವೀಕಾರಾರ್ಹವಲ್ಲ ಎಂದು ಹೇಳಿದರು. ಪ್ರಸಾದ ಲಡ್ಡು ತಯಾರಿಕೆಯಲ್ಲಿ ಕಲುಷಿತ ತುಪ್ಪವನ್ನು ಬಳಸಲಾಗಿದೆ ಎಂಬುದಕ್ಕೆ ಪುರಾವೆಗಳ ಬಗ್ಗೆ ನ್ಯಾಯಾಲಯ ಆಂಧ್ರ ಪ್ರದೇಶ ಸರ್ಕಾರವನ್ನು ಕೇಳಿದೆ.

ಟಿಡಿಪಿ ಪರ ವಾದ ಮಂಡಿಸಿದ ಹಿರಿಯ ವಕೀಲ ಸಿದ್ಧಾರ್ಥ ಲೂತ್ರಾ, ಲಡ್ಡುಗಳು ರುಚಿಯಾಗಿಲ್ಲ ಎಂದು ಜನರು ದೂರಿದ್ದಾರೆ ಎಂದು ಹೇಳಿದರೆ, ಸಾರ್ವಜನಿಕರಿಗೆ ಈ ಬಗ್ಗೆ ತಿಳಿದಿರಲಿಲ್ಲ, ನೀವು ಕೇವಲ ಹೇಳಿಕೆ ನೀಡಿದ್ದೀರಿ ಎಂದು ಸುಪ್ರೀಂಕೋರ್ಟ್ ಹೇಳಿದೆ. ಕಲುಷಿತ ತುಪ್ಪವನ್ನು ಪ್ರಸಾದಕ್ಕೆ ಬಳಸಲಾಗಿದೆ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ ಎಂದು ನ್ಯಾಯಾಲಯ ಹೇಳಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಸರ್ಕಾರ ಉತ್ತರ ನೀಡಿದೆ. ಹಾಗಾದರೆ ತಕ್ಷಣ ಪತ್ರಿಕಾಗೋಷ್ಠಿಗೆ ಹೋಗುವ ಅಗತ್ಯ ಏನಿತ್ತು ನೀವು ಧಾರ್ಮಿಕ ಭಾವನೆಗಳನ್ನು ಗೌರವಿಸಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ.

ಸುಬ್ರಮಣ್ಯಂ ಸ್ವಾಮಿಯ ಪರ ವಾದ ಮಂಡಿಸಿದ ಹಿರಿಯ ವಕೀಲ ರಾಜಶೇಖರ್ ರಾವ್ ಅವರು, ತಾವು ಇಲ್ಲಿ ಭಕ್ತನಾಗಿ ಬಂದಿದ್ದೇನೆ ಮತ್ತು ಪ್ರಸಾದದಲ್ಲಿನ ಮಾಲಿನ್ಯದ ಬಗ್ಗೆ ಪತ್ರಿಕೆಗಳಲ್ಲಿ ನೀಡಿರುವ ಹೇಳಿಕೆಯು ದೂರಗಾಮಿ ಪರಿಣಾಮಗಳನ್ನು ಹೊಂದಿದೆ ಮತ್ತು ಇತರ ಹಲವು ಸಮಸ್ಯೆಗಳನ್ನು ಹುಟ್ಟುಹಾಕಬಹುದು ಮತ್ತು ಕೋಮು ಸೌಹಾರ್ದತೆಗೆ ಭಂಗ ತರಬಹುದು ಎಂದು ಹೇಳಿದರು.

ಇವು ಕಾಳಜಿಯ ವಿಷಯಗಳು. ದೇವರ ಪ್ರಸಾದದ ಗುಣಮಟ್ಟದ ಬಗ್ಗೆ ಅನುಮಾನಗಳಿದ್ದರೆ ಅದನ್ನು ಪರಿಶೀಲಿಸಬೇಕು. ತಿರುಮಲದ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪ್ರಸಾದವಾಗಿ ನೀಡಲಾಗುವ ಲಡ್ಡುಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿದೆ ಎಂಬ ಆರೋಪದ ಕುರಿತು ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂಕೋರ್ಟ್ ನಡೆಸುತ್ತಿದೆ.

ಚುನಾವಣಾ ಬಾಂಡ್ ಅಕ್ರಮ: ನಿರ್ಮಲಾ ಸೀತಾರಾಮನ್ ತನಿಖೆಗೆ ಹೈಕೋರ್ಟ್ ತಡೆ

ಬೆಂಗಳೂರು: ಈಗ ರದ್ದಾಗಿರುವ ಚುನಾವಣಾ ಬಾಂಡ್‌ಗಳ ಮೂಲಕ ಹಣ ವಸೂಲಿ ಮಾಡಿದ ಆರೋಪದ ಮೇಲೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಇತರ ನಾಯಕರ ವಿರುದ್ಧ ತನಿಖೆಗೆ ಹೈಕೋರ್ಟ್ ಸೋಮವಾರ ತಡೆ ನೀಡಿದೆ. ಎಫ್‌ಐಆರ್‌ನಲ್ಲಿ ತನ್ನ ಹೆಸರಿರುವುದನ್ನು ಪ್ರಶ್ನಿಸಿ ಬಿಜೆಪಿ ನಾಯಕ ನಳಿನ್ ಕುಮಾರ್ ಕಟೀಲ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ಎಂ. ನಾಗಪ್ರಸನ್ನ ಅವರಿದ್ದ ನ್ಯಾಯಪೀಠ ಮಧ್ಯಂತರ ಆದೇಶ ಪ್ರಕಟಿಸಿದ್ದು, ಈ ಪ್ರಕರಣದ ಮುಂದಿನ ವಿಚಾರಣೆಯನ್ನು ಅಕ್ಟೋಬರ್ 22ಕ್ಕೆ ನಿಗದಿಪಡಿಸಿದೆ.



ಚುನಾವಣಾ ಬಾಂಡ್ ಅಕ್ರಮಕ್ಕೆ ಸಂಬಂಧಿಸಿದ ದೂರಿನ ನಂತರ ವಿಶೇಷ ನ್ಯಾಯಾಲಯವೊಂದರ ನಿರ್ದೇಶನದಂತೆ ನಿರ್ಮಲಾ ಸೀತಾರಾಮನ್ ಮತ್ತಿತರರ ವಿರುದ್ಧ ಶನಿವಾರ ಕೇಸ್ ದಾಖಲಾಗಿತ್ತು. ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 384(ಸುಲಿಗೆಗೆ ಶಿಕ್ಷೆ) 120 ಬಿ (ಕ್ರಿಮಿನಲ್ ಪಿತೂರಿ) 34 (ಸಾಮಾನ್ಯ ಉದ್ದೇಶದೊಂದಿಗೆ ಹಲವಾರು ವ್ಯಕ್ತಿಗಳು ಮಾಡಿದ ಕಾರ್ಯಗಳು) ಅಡಿಯಲ್ಲಿ ಸೀತಾರಾಮನ್, ಇಡಿ ಅಧಿಕಾರಿಗಳು ಮತ್ತು ರಾಜ್ಯ ಮತ್ತು ರಾಷ್ಟ್ರ ಮಟ್ಟದ ಬಿಜೆಪಿ ಪದಾಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿತ್ತು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೆಸರು ಕೂಡಾ ಎಫ್‌ಐಆರ್‌ನಲ್ಲಿತ್ತು.

ಆರೋಪಿಗಳು ಚುನಾವಣಾ ಬಾಂಡ್‌ಗಳ ಸೋಗಿನಲ್ಲಿ ಸುಲಿಗೆ ಮಾಡಿದ್ದು, 8,000 ಕೋಟಿ ರೂ.ಗೂ ಅಧಿಕ ಲಾಭ ಪಡೆದಿದ್ದಾರೆ ಎಂದು ಆರೋಪಿಸಿ 'ಜನಾಧಿಕಾರ ಸಂಘರ್ಷ ಪರಿಷತ್' (ಜೆಎಸ್‌ಪಿ) ಸಹ–ಸಂಸ್ಥಾಪಕ ಆದರ್ಶ್ ಆರ್. ಅಯ್ಯರ್ ದೂರು ದಾಖಲಿಸಿದ್ದರು.

ಇಡಿ ಅಧಿಕಾರಿಗಳ ನೆರವು ಮತ್ತು ಬೆಂಬಲದ ಮೂಲಕ ಸೀತಾರಾಮನ್, ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿನ ಇತರ ಪದಾಧಿಕಾರಿಗಳ ಅನುಕೂಲಕ್ಕಾಗಿ ಸಾವಿರಾರು ಕೋಟಿ ರೂಪಾಯಿ ಸುಲಿಗೆಗೆ ಅನುಕೂಲ ಮಾಡಿದ್ದಾರೆ ಎಂದು ದೂರುದಾರರು ಆರೋಪಿಸಿದ್ದಾರೆ.

ಫೆಬ್ರವರಿಯಲ್ಲಿ ಸುಪ್ರೀಂ ಕೋರ್ಟ್ ಈ ಯೋಜನೆಯನ್ನು ರದ್ದುಗೊಳಿಸಿತ್ತು. ಇದು ಸಂವಿಧಾನದ ಅಡಿಯ ಮಾಹಿತಿ ಮತ್ತು ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಉಲ್ಲಂಘಿಸುತ್ತದೆ ಎಂದು ಹೇಳಿತ್ತು.

ಸರ್ಕಾರ ಬೀಳಿಸಲು 1,200 ಕೋಟಿ ರೂ: ಯತ್ನಾಳ್ ಹೇಳಿಕೆ ಬಗ್ಗೆ ಐಟಿ, ಇಡಿ ತನಿಖೆಗೆ ಡಿಕೆಶಿ ಆಗ್ರಹ

ಬೆಂಗಳೂರು: ಬಿಜೆಪಿಯ ಹಿರಿಯ ಶಾಸಕರೊಬ್ಬರು ಕಾಂಗ್ರೆಸ್ ಸರ್ಕಾರ ಬೀಳಿಸಲು 1200 ಕೋಟಿ ರೂಪಾಯಿ ಮೀಸಲಿಟ್ಟಿದ್ದಾರೆ ಎಂದು ಹೇಳಿದ್ದು, ಈ ಬಗ್ಗೆ ಆದಾಯ ತೆರಿಗೆ ಇಲಾಖೆ ಮತ್ತು ಜಾರಿ ನಿರ್ದೇಶನಾಲಯದಿಂದ ತನಿಖೆಯಾಗಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೋಮವಾರ ಆಗ್ರಹಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವನ್ನು ಬೀಳಿಸಲು ಷಡ್ಯಂತ್ರ ರೂಪಿಸಲಾಗಿದೆ, ಇದಕ್ಕಾಗಿ 1,200 ಕೋಟಿ ರೂ. ಹಣ ಮೀಸಲು ಇಡಲಾಗಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದ್ದಾರೆ.

ಇಂದು ಯತ್ನಾಳ್ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ ಡಿಕೆಶಿ, ಈ ಬಗ್ಗೆ ಚರ್ಚಿಸಲು ಕಾಂಗ್ರೆಸ್ ಕಾನೂನು ತಂಡದ ಸಭೆ ಕರೆದಿದ್ದೇನೆ. 1,200 ಕೋಟಿ ರೂಪಾಯಿ ರೆಡಿಯಾಗಿದೆ ಎಂದು ಹೇಳಿಕೆ ಕೊಟ್ಟಿದ್ದಾರೆ.

ಕಾನೂನು ಹೋರಾಟಕ್ಕೂ ಸಿದ್ಧತೆ

ಬಿಜೆಪಿ ಕಡೆಯಿಂದ ಈ ಹಣ ರೆಡಿಯಾಗಿದೆ ಎಂಬ ಮಾಹಿತಿ ಇದೆ. ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ಈ ಮಾಹಿತಿಯನ್ನು ತಿಳಿಸಿದ್ದೇನೆ. ಇದು ತೆರಿಗೆ ಇಲಾಖೆ ಹಾಗೂ ಇಡಿ(ಜಾರಿ ನಿರ್ದೇಶನಾಲಯ) ತನಿಖೆಯ ವ್ಯಾಪ್ತಿಗೆ ಬರುವ ವಿಚಾರ. ದೂರು ನೀಡುವ ಸಂಬಂಧ ಇಂದು ಚರ್ಚೆ ಮಾಡುತ್ತೇವೆ ಎಂದರು.



ನಾನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ(ಕೆಪಿಸಿಸಿ) ಸಭೆಯನ್ನು ಕರೆದಿದ್ದೇನೆ. ಅವರು ನಮ್ಮ ಸರ್ಕಾರವನ್ನು ಉರುಳಿಸಲು 1,200 ಕೋಟಿ ರೂ. ಮೀಸಲಿಟ್ಟಿದ್ದಾರೆ. ನಾವು ನಮ್ಮ ಕಾನೂನು ತಂಡದೊಂದಿಗೆ ಚರ್ಚಿಸುತ್ತೇವೆ ಈ ವಿಷಯವನ್ನು ಪಕ್ಷದ ಹೈಕಮಾಂಡ್ ಗಮನಕ್ಕೂ ತಂದಿದ್ದೇನೆ ಎಂದು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಈ ವಿಷಯವನ್ನು ಆದಾಯ ತೆರಿಗೆ ಇಲಾಖೆಯಿಂದ ತನಿಖೆ ಮಾಡಬೇಕು. ಈ ಬಗ್ಗೆ ಕಾನೂನು ಏನು ಹೇಳುತ್ತದೆ ಎಂಬುದನ್ನು ತಿಳಿಯಲು ನಾನು ಕೆಪಿಸಿಸಿ ಯಲ್ಲಿ ಸಭೆ ಕರೆದಿದ್ದೇನೆ. ಅಲ್ಲದೆ ಗೃಹ ಸಚಿವ ಜಿ ಪರಮೇಶ್ವರ ಅವರನ್ನು ಭೇಟಿ ಮಾಡಿ, ಈ ಕುರಿತು ಕಾನೂನು ಆಯ್ಕೆಗಳ ಬಗ್ಗೆ ಚರ್ಚಿಸಿದ್ದೇನೆ ಎಂದರು.

ಸರ್ಕಾರ ಬೀಳಿಸುವ ಷಡ್ಯಂತ್ರದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಎರಡೂ ಪಕ್ಷಗಳ ನಾಯಕರು ಇದ್ದಾರೆ. ಬಿಜೆಪಿ ಹೈಕಮಾಂಡ್‌ಗೆ ಆಸಕ್ತಿಯಿಲ್ಲದಿದ್ದರೂ ಬಿಜೆಪಿಯೊಳಗಿನ ಕೆಲವು ವಿಭಾಗಗಳು ಆಪರೇಷನ್ ಕಮಲದ ಬಗ್ಗೆ ಯೋಚಿಸುತ್ತಿವೆ, "ಈ ಸಂಚಿನ ಬಗ್ಗೆ ನನಗೆ ಮಾಹಿತಿ ಇದೆ" ಎಂದು ಯತ್ನಾಳ್ ಹೇಳಿದ್ದರು.

ಪ್ರತಿಭಾವಂತ ವಿದ್ಯಾರ್ಥಿಗಳು ಕಾನೂನುಬಾಹಿರ ಚಟುವಟಿಕೆಯಲ್ಲಿ ತೊಡಗದಂತೆ ಎಚ್ಚರ ಅಗತ್ಯ

ನಿವೃತ್ತ ಪ್ರಾಧ್ಯಾಪಕ ಪ್ರೊ. ಬಾಲಸುಬ್ರಹ್ಮಣ್ಯನ್ ಅಭಿಮತ



ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಿ ನಿವೃತ್ತ ಪ್ರಾಧ್ಯಾಪಕ ಪ್ರೊ.ಎ.ಬಾಲಸುಬ್ರಹ್ಮಣ್ಯನ್ ಮಾತನಾಡುತ್ತಿರುವುದು.

ಮೈಸೂರು, ಸೆ.30(ಎಸ್‌ಪಿಎನ್)– ಪ್ರತಿಭಾವಂತ ವಿದ್ಯಾರ್ಥಿಗಳು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಎಚ್ಚರ ವಹಿಸುವುದು ಪೋಷಕರು ಮತ್ತು ಸಮುದಾಯದ ಹೊಣೆ ಎಂದು ಮೈಸೂರು ವಿವಿ ಭೂಗರ್ಭಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಪ್ರೊ.ಎ.ಬಾಲ ಸುಬ್ರಹ್ಮಣ್ಯನ್ ಅಭಿಪ್ರಾಯಪಟ್ಟರು.

ಮೈಸೂರು ಅಶೋಕಪುರಂ ಕೆ.ಶಿವರಾಂ ಕ್ರೀಡಾಂಗಣದ ಬುದ್ಧ ಧ್ಯಾನ ಮತ್ತು ಯೋಗ ಮಂದಿರದಲ್ಲಿ ವಿನಾಯಕ ಕ್ರೀಡಾ ಹಾಗೂ ಸಮಾಜ ಸೇವಾ ಸಂಸ್ಥೆ ವತಿಯಿಂದ ನಡೆದ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿ, ಮಾತನಾಡಿದರು.

ಪ್ರತಿಭಾವಂತ ವಿದ್ಯಾರ್ಥಿಗಳು ಜ್ಞಾನಾರ್ಜನೆ ಜೊತೆಗೆ ಸಾರ್ವಜನಿಕ ನಡವಳಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ವ್ಯಾಸಂಗದ ಅವಧಿಯಲ್ಲಿ ಶಿಸ್ತು, ಪ್ರಾಮಾಣಿಕತೆ ಹಾಗೂ ಆತ್ಮ ವಿಶ್ವಾಸಕ್ಕೆ ಹೆಚ್ಚು ಆದ್ಯತೆ ನೀಡಬೇಕು.

ಪೋಷಕರು ತಮ್ಮ ಮಕ್ಕಳು ವ್ಯಾಸಂಗದ ಅವಧಿ ಪೂರ್ಣಗೊಂಡು ಕೆಲಸಕ್ಕೆ ಸೇರುವವರೆಗೂ ಎಚ್ಚರಿಕೆಯಿಂದ ನೋಡಿಕೊಳ್ಳಬೇಕು. ಯಾವುದೇ ದುಶ್ಚಟಗಳಿಗೆ ಬಲಿಯಾಗದಂತೆ, ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಕಾಪಾಡಿಕೊಳ್ಳುವುದು ನಿಮ್ಮ ಹಾಗೂ ಸಮುದಾಯದ ಹೊಣೆ ಎಂದರು.

ಈ ವೇಳೆ ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಎಂ.ವೈಶಾಖ್, ಡಿ.ಮೋನಿಷ, ಎನ್.ಸಿಂಚನ, ಎಂ.ಎಸ್.ಸಿಂಚನ, ಆರ್.ಎಸ್.ಧನುಶ್ರೀ, ಎಸ್.ಶಿವರಂಜನ್, ಆರ್.ಚಾಣಕ್ಯ, ಎಸ್.ಪೂರ್ವಿತ, ಜಿ.ದರ್ಶಿವ್, ಆರ್.ಆಕಾಶ್, ಆರ್.ರಾಜೇಶ್ವರಿ, ಎನ್.ಉಲ್ಲಾಸ್, ಎಂ.ಪ್ರೀತಮ್, ಯು.ರಿತ್ವಿಕ್, ಎಂ.ಪಿ.ಪ್ರಾರ್ಥನ ಅವರನ್ನು ಸನ್ಮಾನಿಸಲಾಯಿತು. ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಬಿ.ದರ್ಶನ, ಭುವನಶ್ರೀ, ಎಸ್.ಸೃಜನ, ಎನ್.ಚಿರಾಗ್, ಡಿ.ಸೌಜನ್ಯ, ವೈ.ಐಶ್ವರ್ಯ, ಎನ್.ನಮಿತ, ಸಿ.ಎಂ.ಚೈತನ್ಯ, ವಿಜಯಲಕ್ಷ್ಮಿ, ಸಿ.ಸೌಜನ್ಯ, ಆರ್.ಜ್ಯೋತಿ, ಎಸ್.ಕಾವ್ಯ, ವಿ.ಚಿರಂತನ್, ಆರ್. ಭೂಮಿಕಾ, ಎಸ್.ಪೂಜಾ, ಸಿ.ಚಿನ್ಮಯ್, ಕೆ.ನಮ್ರತಾ, ಡಿ.ಅಭಿಷೇಕ್ ಅವರಿಗೆ ಪ್ರಮಾಣ ಪತ್ರ ವಿತರಿಸಿ, ಗೌರವಿಸಲಾಯಿತು. ವೇದಿಕೆಯಲ್ಲಿ ಮೈಸೂರು ವಿವಿ ಕಾನೂನು ವಿಭಾಗದ ಪ್ರಾಧ್ಯಾಪಕ ಪ್ರೊ.ರಮೇಶ್, ವಿನಾಯಕ ಕ್ರೀಡಾ ಹಾಗೂ ಸಮಾಜ ಸೇವಾ ಸಂಸ್ಥೆ ಅಧ್ಯಕ್ಷ ಆನಂದ ಮೂರ್ತಿ, ಕಾರ್ಯದರ್ಶಿ ರೇವಣ್ಣ, ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಂಘದ ಅಧ್ಯಕ್ಷ ಡಿ.ಚಂದ್ರಶೇಖರಯ್ಯ, ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ ಉಪಸ್ಥಿತರಿದ್ದರು.

ಹೆಚ್.ಡಿ.ಕುಮಾರಸ್ವಾಮಿ ರಾಜಕಾರಣ ಬಿಟ್ಟು ಲಕ್ಷ ಮಂದಿಗೆ ಉದ್ಯೋಗ ಕಲ್ಪಿಸುವ ಕೆಲಸ ಮಾಡಲಿ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಿವಿಮಾತು

ಬೆಂಗಳೂರು,ಸೆ.30(ಕೆಎಂಶಿ)–ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ರಾಜಕಾರಣ ಬಿಟ್ಟು ರಾಜ್ಯದಲ್ಲಿ ಒಂದು ಲಕ್ಷ ಜನರಿಗೆ ಉದ್ಯೋಗ ನೀಡುವ ಕೆಲಸ ಮಾಡಲಿ. ಕಾಂಗ್ರೆಸ್ ಸರ್ಕಾರ ಬೇಕಾದ ಸಹಕಾರ ನೀಡುತ್ತದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಿವಿಮಾತು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಉಕ್ಕು, ಕೈಗಾರಿಕೆಯಂತಹ ದೊಡ್ಡ ಖಾತೆ ಕೊಟ್ಟಿದ್ದಾರೆ. ಈ ಅವಕಾಶ ಬಳಸಿಕೊಳ್ಳಲಿ ಎಂದರು. ಯೋಗಕ್ಕಿಂತ ಯೋಗಕ್ಷೇಮ ಮುಖ್ಯವಾದುದು. ಹಾಸನ, ಬೆಂಗಳೂರು, ಮಂಡ್ಯ, ಬೀದರ್, ಕಲಬುರಗಿ ಸೇರಿದಂತೆ ಇತರೇ ಭಾಗಗಳಿಗೆ ಉತ್ತಮ ಕೆಲಸ ಮಾಡಿ, ಇತಿಹಾಸ ಬಿಟ್ಟು ಹೋಗಲಿ. ರಾಜಕೀಯ ಇದ್ದಿದ್ದೇ, ಒಳ್ಳೆ ಅವಕಾಶ ಏಕೆ ಕಳೆದುಕೊಳ್ಳುತ್ತಿದ್ದಾರೆ.

ಗೃಹ ಸಚಿವ ಡಾ.ಪರಮೇಶ್ವರ್ ಅವರೊಂದಿಗೆ ಪ್ರತಿದಿನ ರಾಜಕೀಯ ಮಾಡುತ್ತಲೇ ಇರುತ್ತೇವೆ. ಅಭಿವೃದ್ಧಿ ಇದ್ದರೆ ರಾಜಕೀಯ, ಐದು ಗ್ಯಾರಂಟಿ ಈಡೇರಿಸಿದ್ದೇವೆ. ಎತ್ತಿನಹೊಳೆ ಕೆಲಸ ಮುಗಿಸಬೇಕು, ಪ್ರಣಾಳಿಕೆಗಳಲ್ಲಿ ನೀಡಿರುವ



ಭರವಸೆಗಳನ್ನು ಈಡೇರಿಸಬೇಕು, ಸಮಯ ಓಡುತ್ತಿರುತ್ತದೆ. ಕಾಂಗ್ರೆಸ್‌ನ 136 ಶಾಸಕರು ಒಟ್ಟಿಗೆ ಇದ್ದೇವೆ. ನಾಯಕರ ಹಿಂದೆ ಅಧಿಕಾರಿಗಳು ಬೇಕಾಗಿಲ್ಲ, ಆಲೋಚಿಸುತ್ತೇವೆ, ಚರ್ಚೆ ಮಾಡುತ್ತೇವೆ, ಅಭಿಪ್ರಾಯ ಕೇಳುತ್ತೇವೆ, ಮಾತನಾಡುವವರು ಹಾಗೂ ತೀರ್ಮಾನಿಸುವವರು ಒಬ್ಬರೇ. ಎಡಿಜಿಪಿ ಚಂದ್ರಶೇಖರ್ ವಿರುದ್ಧದ ಭ್ರಷ್ಟಾಚಾರ ಆರೋಪದ ಬಗ್ಗೆ ತನಿಖೆ ಮಾಡುವವರು ಅವರು, ತನಿಖೆಗೆ ಒಳಗಾಗುವವರು ಅವರು, ಅದಕ್ಕೂ ನನಗೂ ಸಂಬಂಧವಿಲ್ಲ. ಸರ್ಕಾರ ಬೀಳಿಸಲು ಒಂದು ಸಾವಿರ ಕೋಟಿ ರೂ. ಮೀಸಲಿಡಲಾಗಿದೆ ಎನ್ನುವ ಯತ್ನಾಳ್ ಹೇಳಿಕೆ ಬಗ್ಗೆ ಈಗಾಗಲೇ ಕಾಂಗ್ರೆಸ್ ಹೈಕಮಾಂಡ್ ಗಮನಕ್ಕೆ ತರಲಾಗಿದೆ. ಪಕ್ಷ ಹಾಗೂ ಸರ್ಕಾರ ಉರುಳಿಸಲು ಈ ಕೆಲಸ ನಡೆಯುತ್ತಿದೆ. ಕಾನೂನು ಸಲಹೆಗಾರರ ಬಳಿ ಚರ್ಚಿಸಲಾಗುವುದು. ಈ ಕೃತ್ಯ ಆದಾಯ ತೆರಿಗೆ ಇಲಾಖೆಯಿಂದ ತನಿಖೆ ಆಗಬೇಕು ಎಂದರು.

2025ರ ವೇಳೆಗೆ ತುಮಕೂರಿಗೆ ಎತ್ತಿನಹೊಳೆ ನೀರು ಹರಿಸಲು ಪ್ರಯತ್ನ ಮಾಡಲಾಗುವುದು. ಈಗಾಗಲೇ ನೀರನ್ನು ಮೇಲಕ್ಕೆತ್ತಿ ಸಂಗ್ರಹ ಮಾಡಲಾಗಿದೆ, ತುಮಕೂರು ಹಾಗೂ ಹಾಸನ ಜಿಲ್ಲೆಯಲ್ಲಿ ಅರಣ್ಯ ಭೂಮಿ ಗುರುತಿಸಲಾಗಿದೆ, ನೀರಾವರಿ ಇಲಾಖೆಗೆ ವರ್ಗಾವಣೆ ಮಾಡಬೇಕು. ಈ ವಿಚಾರವಾಗಿ ಪ್ರತ್ಯೇಕ ಸಭೆ ನಡೆಸಲಾಗುವುದೆಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ಅರಣ್ಯ ಸಚಿವರ ಬಳಿಯೂ ಚರ್ಚಿಸಲಾಗುವುದು. ಮಳೆ ಕಡಿಮೆಯಾಗುತ್ತಿದೆ, ತುಮಕೂರು, ಬೆಂಗಳೂರು ಗ್ರಾಮಾಂತರ, ರಾಮನಗರ, ಮಂಡ್ಯ ಭಾಗದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗುತ್ತಿದೆ. ಬಿಜೆಪಿ ಆಡಳಿತಾವಧಿಯಲ್ಲಿ ಕೊರಟಗೆರೆ ಬಳಿ ಬೈರಗೊಂಡ್ಲು ಜಲಾಶಯ ನಿರ್ಮಾಣ ಯೋಜನೆ ಬದಲಾವಣೆ ಮಾಡಿದ್ದರು. ಈ ಕಾರಣಕ್ಕೆ ಸ್ಥಳ ವೀಕ್ಷಣೆ ಮಾಡಬೇಕು. ದೊಡ್ಡಬಳ್ಳಾಪುರದ ಒಂದಷ್ಟು ಭಾಗವೂ ಸೇರಿಕೊಂಡಿದೆ. ಪರಿಹಾರ ವಿಚಾರದಲ್ಲಿ ವ್ಯಾಜ್ಯಗಳಿವೆ. ರೈತರು ಒಂದೇ ರೀತಿ ಪರಿಹಾರ ನೀಡಿ ಎನ್ನುತ್ತಿದ್ದಾರೆ. ದಸರಾ ನಂತರ ಎತ್ತಿನಹೊಳೆಯಿಂದ ಬೈರಗೊಂಡ್ಲುವರೆಗೂ ಸ್ಥಳ ವೀಕ್ಷಣೆ ಮಾಡಲಾಗುವುದು ಎಂದರು.

ನಾನಾ ಆರೋಪಗಳ ಹಿನ್ನೆಲೆಯಲ್ಲಿ ಲೋಕಾಯುಕ್ತ ಎಸ್‌ಐಟಿ ಮುಖ್ಯಸ್ಥ ಎಡಿಜಿಪಿ ಚಂದ್ರಶೇಖರ್ ವಿರುದ್ಧ ಕ್ರಮಕ್ಕೆ ಸಿಎಸ್‌ಗೆ ಜೆಡಿಎಸ್ ದೂರು

ಬೆಂಗಳೂರು, ಸೆ. 30(ಕೆಎಂಶಿ)–ಭ್ರಷ್ಟಾಚಾರ, ದುರ್ನಡತೆ,



ಸುಲಿಗೆ ಮುಂತಾದ ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿರುವ ಕರ್ನಾಟಕ ಲೋಕಾಯುಕ್ತ ವಿಶೇಷ ತನಿಖಾ ದಳದ ಮುಖ್ಯಸ್ಥ ಎಡಿಜಿಪಿ ಎಂ.ಚಂದ್ರಶೇಖರ್ ಅವರನ್ನು ಕೂಡಲೇ ಸೇವೆಯಿಂದ ಅಮಾನತುಗೊಳಿಸಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ಜೆಡಿಎಸ್ ಶಾಸಕರು ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರನ್ನು ಒತ್ತಾಯಿಸಿದ್ದಾರೆ.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ವಿ.ಸುರೇಶ್ ಬಾಬು ನೇತೃತ್ವದಲ್ಲಿ ಮುಖ್ಯಕಾರ್ಯದರ್ಶಿ ಅವರನ್ನು ಭೇಟಿ ಮಾಡಿ, ಈ ಅಧಿಕಾರಿ ತಮ್ಮ ಸೇವಾವಧಿಯಲ್ಲಿ ನಡೆಸಿರುವ ಭ್ರಷ್ಟಾಚಾರ ಪ್ರಕರಣಗಳಿಗೆ ಸಂಬಂಧಿಸಿದ ದಾಖಲೆಗಳನ್ನು ನೀಡಿದ್ದಾರೆ. ಹಿಮಾಚಲ ಪ್ರದೇಶ ಕೇಡರ್‌ನ ಅಧಿಕಾರಿಯಾಗಿರುವ ಇವರು ಸಬೂಬುಗಳನ್ನು ಹೇಳಿಕೊಂಡು ಕರ್ನಾಟಕದಲ್ಲೇ ಹಲವು ವರ್ಷಗಳಿಂದ ಬಿಡಾರ ಹೂಡಿ ಮಾಡಬಾರದ ಭ್ರಷ್ಟಾಚಾರ ಕಾರ್ಯಗಳನ್ನು ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಪ್ರಮುಖ ಹುದ್ದೆಗಳಲ್ಲೇ ಇರುವ ಚಂದ್ರಶೇಖರ್, ಬೆಂಗಳೂರಿನಲ್ಲಿ ಲ್ಯಾಂಡ್ ಮಾಫಿಯಾ ಜೊತೆ ಕೈಜೋಡಿಸಿ ಭೂಮಾಲೀಕರನ್ನು ಹೆದರಿಸಿ, ಬೆದರಿಸಿ ಹಣ ವಸೂಲಿ ಮಾಡಿದ್ದಾರೆ. ಅಲ್ಲದೆ, ಕೆಲವು ಪ್ರಕರಣಗಳಲ್ಲಿ ದೊಡ್ಡ ದೊಡ್ಡ ಕಟ್ಟಡ ನಿರ್ಮಾಣಗಾರರಿಗೆ ಕಿರುಕುಳ ನೀಡಿದ್ದಾರೆ. ತಮ್ಮ ಕೆಳಹಂತದ ಅಧಿಕಾರಿಗಳನ್ನು ಹಣ ತಂದು ಕೊಡುವಂತೆ ಪೀಡಿಸಿದ್ದು, ಈ ಸಂಬಂಧ ದೂರುಗಳೂ ದಾಖಲಾಗಿವೆ. ಆದರೂ ಇದುವರೆಗೂ ಈ ಅಧಿಕಾರಿ ವಿರುದ್ಧ ಯಾವುದೇ ಕ್ರಮ ಇಲ್ಲ. ಕೇಂದ್ರ ಸಚಿವ ಕುಮಾರಸ್ವಾಮಿ ಅವರು ದಾಖಲೆಗಳನ್ನು ಇಟ್ಟುಕೊಂಡೇ ಅಧಿಕಾರಿ ವಿರುದ್ಧ ಆರೋಪ ಮಾಡಿದ್ದಾರೆಯೇ ಹೊರತು, ವೈಯಕ್ತಿಕ ಟೀಕೆ ಮಾಡಿಲ್ಲ. ಆದರೆ, ಚಂದ್ರಶೇಖರ್ ಎಲ್ಲೆ ಮೀರಿ ತಮ್ಮ ಸಹೋದ್ಯೋಗಿಗಳಿಗೆ ಪತ್ರ ಬರೆಯುವ ಮೂಲಕ ಉನ್ನತ ಹುದ್ದೆಯಲ್ಲಿರುವವರ ಅವಹೇಳನ ಮಾಡಿದ್ದಾರೆ. ನೀವು ಇವರ ವಿರುದ್ಧ ಕೇಂದ್ರ ಗೃಹ ಸಚಿವಾಲಯಕ್ಕೆ ದಾಖಲೆಸಹಿತ ಪತ್ರ ಬರೆದು ಕ್ರಮಕ್ಕೆ ಕೋರಿದ್ದಾರೆ.



ಸೈನಿಕ ಅಕಾಡೆಮಿ ವತಿಯಿಂದ ಭಗತ್ ಸಿಂಗ್ ಜನ್ಮದಿನಾಚರಣೆ

ಮೈಸೂರಿನ ಬೆಳವಾಡಿ ಗ್ರಾಮದ ಸಿಲಿಕಾನ್ ವ್ಯಾಲಿ ಬಡಾವಣೆಯ ಸೈನಿಕ ಅಕಾಡೆಮಿ ವತಿಯಿಂದ ಕ್ರಾಂತಿವೀರ ಭಗತ್ ಸಿಂಗ್ ಭಾವಚಿತ್ರಕ್ಕೆ ಪುಷ್ಪಾಂಜಲಿ, ಪ್ರಾರ್ಥನೆ ಮೂಲಕ 117ನೇ ಜನ್ಮದಿನ ಆಚರಿಸಲಾಯಿತು. ಮಾಜಿ ಕಮಾಂಡೋ ಸಿ.ಎಂ.ಶ್ರೀಧರ್, ಸಿಲಿಕಾನ್ ವ್ಯಾಲಿ ಬಡಾವಣೆಯ ಸದಸ್ಯರು, ಉಪನ್ಯಾಸಕರು ಉಪಸ್ಥಿತರಿದ್ದರು.

ರೇವ್ ಪಾರ್ಟಿ: ಇಲವಾಲ ಪೊಲೀಸರಿಂದ ತೀವ್ರ ತನಿಖೆ

ಮೈಸೂರು,ಸೆ.30(ಆರ್‌ಕೆ)– ಕೆಆರ್‌ಎಸ್ ಹಿನ್ನೀರಿನ ಬಳಿ ಜಮೀನೊಂದರಲ್ಲಿ ರೇವ್ ಪಾರ್ಟಿಯಲ್ಲಿ ಭಾಗಿಯಾಗಿ, ಸಿಕ್ಕಿ ಬಿದ್ದಿರುವ ಯುವಕ–ಯುವತಿಯರನ್ನು ತೀವ್ರ ವಿಚಾರಣೆಗೊಳಪಡಿಸಿರುವ ಇಲವಾಲ ಠಾಣೆ ಪೊಲೀಸರು, ಈ ಹಿಂದೆಯೂ ಈ ಮಾದರಿಯ ಪಾರ್ಟಿ ಆ ಸ್ಥಳದಲ್ಲಿ ಆಯೋಜಿಸಲಾಗಿತ್ತೆ ಎಂಬುದರ ಬಗ್ಗೆ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಮೀನಾಕ್ಷಿಪುರ–ಯಡಹಳ್ಳಿ ಗ್ರಾಮದ ನಡುವೆ ಶನಿವಾರ ರಾತ್ರಿ ಆಯೋಜಿಸಿದ್ದ ರೇವ್ ಪಾರ್ಟಿಯಲ್ಲಿ ಅಲ್ಲಿನ ಸ್ಥಳೀಯರಾದ ಶಂಕರ್ ಮತ್ತು ಅರ್ಜುನ್ ಪ್ರಮುಖ ಪಾತ್ರ ವಹಿಸಿದ್ದು, ಪಾರ್ಟಿಗಾಗಿ ಸ್ಥಳಕ್ಕೆ ಬುಲ್ಡೋಜರ್‌ನಿಂದ ಸಮತಟ್ಟು ಮಾಡಿ ಹೊಸದಾಗಿ ರಸ್ತೆ ಮಾಡಿದ್ದು, ಬುಲ್ಡೋಜರ್ ಯಾರದ್ದು, ಯಾರು ಅದನ್ನು ತರಿಸಿದ್ದರು, ಜನರೇಟರ್ ಮಾಲೀಕ ಯಾರು,



ಜರ್ಮನ್ ಟೆಂಟ್ ಅಳವಡಿಸಲು ಆರ್ಡರ್ ಕೊಟ್ಟಿದ್ದವರಾರು ಎಂಬ ಮಾಹಿತಿಗಳನ್ನು ಪೊಲೀಸರು ಪಡೆದುಕೊಳ್ಳುತ್ತಿದ್ದು, ಇಲವಾಲದ ಅಂಗಡಿಗಳಲ್ಲೂ ಇಂದು ಪರಿಶೀಲನೆ ನಡೆಸಿದರು.

ರೇವ್ ಪಾರ್ಟಿಗೆ ಬಂದಿದ್ದ ಯುವಕ–ಯುವತಿಯರನ್ನು ಕರೆತಂದಿದ್ದ ವಾಹನಗಳ ನೋಂದಣಿ ಸಂಖ್ಯೆ ಸಹಾಯದಿಂದ ಆರ್‌ಸಿ ಮಾಲೀಕರನ್ನು ಗುರುತಿಸಿ ವಿಚಾರಣೆ ನಡೆಸುತ್ತಿರುವ ತನಿಖಾಧಿಕಾರಿಗಳು, ಮದ್ಯದ ಬಾಟಲಿಗಳು, ತಂಬಾಕು ಉತ್ಪನ್ನಗಳು, ಮತ್ತು ಬರಿಸುವ ವಸ್ತುಗಳನ್ನು ಪೂರೈಸಿದವರಿಗಾಗಿ ಶೋಧ ನಡೆಸುತ್ತಿದ್ದಾರೆ.

ಸುತ್ತಮುತ್ತಲ ಗ್ರಾಮಗಳಿಗೂ ಭೇಟಿ ನೀಡಿ, ನಿವಾಸಿಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಶನಿವಾರ ರಾತ್ರಿ ಡಿಜೆ, ಧ್ವನಿವರ್ಧಕ ಅಥವಾ ಕೂಗಾಟ, ಕಿರುಚಾಟದ ಶಬ್ದ ಬರುತ್ತಿತ್ತೆ?. ಈ ಹಿಂದೆ ಇಂತಹ ಪಾರ್ಟಿ ನಡೆದಿದ್ದ ಬಗ್ಗೆ ಯಾರಾದರೂ ಮಾತನಾಡಿಕೊಳ್ಳುತ್ತಿದ್ದರೆ ಎಂಬಿತ್ಯಾದಿ ಮಾಹಿತಿಗಳನ್ನು ಇಲವಾಲ ಪೊಲೀಸರು ಪಡೆಯುತ್ತಿದ್ದಾರೆ.

ರೇವ್ ಪಾರ್ಟಿಯಲ್ಲಿ ನಾರ್ಕೋಟಿಕ್ ಡ್ರಗ್, ಮದ್ಯಪಾನ ಸೇವನೆ ಮಾಡಿ, ಅರೆಪ್ರಜ್ಞೆ ಸ್ಥಿತಿಯಲ್ಲಿ ಕುಣಿದು ಕುಪ್ಪಳಿಸಿ ಸಿಕ್ಕಿ ಬಿದ್ದಿರುವ ಎಲ್ಲಾ ಯುವಕ–ಯುವತಿಯರ ವಿರುದ್ಧ ಪ್ರಕರಣ ದಾಖಲಿಸಿ ವಿಚಾರಣೆ ನಡೆಸಲಾಗುತ್ತಿದ್ದು, ದಾಳಿ ಮಾಡಿದಾಗ ಪರಾರಿಯಾಗಿರುವವರ ಪತ್ತೆಗೂ ಪೊಲೀಸರು ವ್ಯಾಪಕ ಶೋಧ ನಡೆಸುತ್ತಿದ್ದಾರೆ.

ನ್ಯಾಷನಲ್ ಗ್ರೀನರಿ ಬಾಲ್ ಪುರಸ್ಕಾರ



ಮೈಸೂರಿನ ಪೊಲೀಸ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿ ಜಿ.ಪ್ರಣಮಿ, ವುಶು ಚಾಂಪಿಯನ್ ಶಿಪ್‌ನ ಮಾರ್ಷಲ್ ಆರ್ಟ್ಸ್ ಕ್ಷೇತ್ರದಲ್ಲಿನ ಸಾಧನೆಗೆ ಸಾಲುಮರದ ತಿಮ್ಮಕ್ಕ ಅಂತರ ರಾಷ್ಟ್ರೀಯ ಫೌಂಡೇಷನ್‌ನಿಂದ ಕೊಡಮಾಡುವ ನ್ಯಾಷನಲ್ ಗ್ರೀನರಿ ಬಾಲ್ ಪುರಸ್ಕಾರವನ್ನು ಸಚಿವ ಡಾ.ಜಿ.ಪರಮೇಶ್ವರ್‌ರಿಂದ ಸ್ವೀಕರಿಸಿದರು.

ದಸರಾ ಗೊಂಬೆ ಮನೆ ಪ್ರದರ್ಶನ...



ಮೈಸೂರಿನ 'ಕಿಡ್ಸ್ ಕೇರ್' ಪ್ಲೇ ಹೋಮ್‌ನಲ್ಲಿ ದಸರಾ ಗೊಂಬೆ ಮನೆ ಪ್ರದರ್ಶನ ಆಯೋಜಿಸಲಾಗಿತ್ತು. ಸುಮಾರು ಐವತ್ತು ಮಕ್ಕಳು ಭಾಗವಹಿಸಿದ್ದರು. ಶಾಲೆಯ ಮುಖ್ಯೋಪಾಧ್ಯಾಯಿನಿ ವರ್ಷಿಣಿ, ಶಿಕ್ಷಕಿ ಸೌಮ್ಯ, ಹರ್ಷಿತ ಮತ್ತಿತರರಿದ್ದರು.

ಮಿಸ್ಟರ್ ಏಷಿಯಾ ಐಕಾನ್ ಸೂಪರ್ ಮಾಡೆಲ್ ಆಫ್ ದಿ ಇಯರ್–2024 ಪ್ರಶಸ್ತಿ



ಶ್ರೀಲಂಕಾದ ಕೊಲಂಬೋದಲ್ಲಿ ನಡೆದ ಮಿಸ್ಟರ್ ಏಷಿಯಾ ಐಕಾನ್ ಸೂಪರ್ ಮಾಡೆಲ್ ಆಫ್ ದಿ ಇಯರ್ 2024 ಸ್ಪರ್ಧೆಯಲ್ಲಿ ಮೈಸೂರಿನ ರಾಜೀವ್‌ನಗರ ಬಡಾವಣೆಯ ಮೊಹಮ್ಮದ್ ಝಬಿ ಅವರ ಪುತ್ರ ಝಡ್.ಐ.ಫರ್ಮಾನ್ ಮಿಸ್ಟರ್ ಏಷಿಯಾ ಐಕಾನ್ ಸೂಪರ್ ಮಾಡೆಲ್ ಆಫ್ ದಿ ಇಯರ್–2024 ಪ್ರಶಸ್ತಿ ಪಡೆದುಕೊಂಡಿದ್ದಾರೆ. ಸ್ಪರ್ಧೆಯಲ್ಲಿ ಏಷ್ಯಾ ಖಂಡದ ವಿವಿಧ ದೇಶಗಳ ಸ್ಪರ್ಧಿಗಳು ಭಾಗವಹಿಸಿದ್ದರು.

ಮಹಾರಾಷ್ಟ್ರದ ಗುಡ್ಡಾಪುರದಲ್ಲಿ ಹೊರನಾಡ ಕನ್ನಡಿಗರ ಸಮಾವೇಶಕ್ಕೆ ಚಾಲನೆ



ಮಹಾರಾಷ್ಟ್ರ ರಾಜ್ಯದ ಸಾಂಗ್ಲಿ ಜಿಲ್ಲೆ ಜತ್ತ ತಾಲೂಕಿನ ಗುಡ್ಡಾಪುರ ಶ್ರೀ ದಾನಮ್ಮ ದೇವಿ ಕ್ಷೇತ್ರದಲ್ಲಿ ಕರ್ನಾಟಕ ಸುವರ್ಣ ಸಂಭ್ರಮದ ಅಂಗವಾಗಿ ಆಯೋಜಿಸಿರುವ ಹೊರನಾಡ ಕನ್ನಡಿಗರ ಸಮಾವೇಶ ಹಾಗೂ ಗಡಿನಾಡ ಚೇತನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಕಲಾ ತಂಡಗಳು.

ಗುಡ್ಡಾಪುರ (ಮಹಾರಾಷ್ಟ್ರ): ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿಜಯಪುರ ಜಿಲ್ಲಾಡಳಿತದ ಸಹಯೋಗದೊಂದಿಗೆ ಮಹಾರಾಷ್ಟ್ರ ರಾಜ್ಯದ ಸಾಂಗ್ಲಿ ಜಿಲ್ಲೆ ಜತ್ತ ತಾಲೂಕಿನ ಗುಡ್ಡಾಪುರ ಶ್ರೀ ದಾನಮ್ಮ ದೇವಿ ಸುಕ್ಷೇತ್ರದಲ್ಲಿ ಕರ್ನಾಟಕ ಸುವರ್ಣ ಸಂಭ್ರಮದ ಅಂಗವಾಗಿ ಆಯೋಜಿಸಿರುವ ಹೊರನಾಡ ಕನ್ನಡಿಗರ ಸಮಾವೇಶ ಹಾಗೂ ಗಡಿನಾಡ ಚೇತನ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಸೋಮವಾರ ಅದ್ದೂರಿ ಚಾಲನೆ ನೀಡಲಾಯಿತು.

ದಾನಮ್ಮ ದೇವಿ ದೇವಸ್ಥಾನದ ಆವರಣದಿಂದ ಕರ್ನಾಟಕ ಭವನದವರೆಗೆ ನಡೆದ ಕಲಾತಂಡಗಳ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ಜಗ್ಗಲಗಿ, ವೀರಗಾಸೆ, ಸುಗ್ಗಿ ಕುಣಿತ, ನಂದಿಕೋಲು, ಗೊಂಬೆ ಕುಣಿತ ಗಮನ ಸೆಳೆಯಿತು.

ಕನ್ನಡ–ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಪ್ರಾಧಿಕಾರದ ಕಾರ್ಯದರ್ಶಿ ಪ್ರಕಾಶ ಮತ್ತಿಹಳ್ಳಿ, ಕನ್ನಡ ಸಾಹಿತ್ಯ ಪರಿಷತ್ತಿನ ವಿಜಯಪುರ ಜಿಲ್ಲಾ ಘಟಕದ ಅಧ್ಯಕ್ಷ ಹಾಸಿಂಪೀರ ವಾಲಿಕಾರ, ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಡಿಸಿ ಭೂಬಾಲನ್ ಸೇರಿದಂತೆ ಸಾವಿರಾರು ಗಡಿನಾಡ ಕನ್ನಡಿಗರು ಪಾಲ್ಗೊಂಡಿದ್ದಾರೆ

ರೋಗಿಗಳಿಗೆ ಪ್ರೀತಿಯಿಂದ ಚಿಕಿತ್ಸೆ ನೀಡಿ

● ಬೇಬಿಮಠದ ಶ್ರೀ ತ್ರಿನೇತ್ರ ಮಹಾಂತ ಸ್ವಾಮೀಜಿ ಕರೆ ● ಸುಯೋಗ್ ಆಸ್ಪತ್ರೆಯಲ್ಲಿ ಉಚಿತ ಆಂಜಿಯೋಗ್ರಾಂ, ಆಂಜಿಯೋಪ್ಲಾಸ್ಟಿ ಶಿಬಿರಕ್ಕೆ ಚಾಲನೆ ● ರಾಮಕೃಷ್ಣನಗರ ಪ್ರಮುಖ ರಸ್ತೆಗಳಲ್ಲಿ ವಾಕಥಾನ್



ಮೈಸೂರಿನ ರಾಮಕೃಷ್ಣನಗರ ವೃತ್ತದಿಂದ ಬಡಾವಣೆಯ ಪ್ರಮುಖ ರಸ್ತೆಗಳಲ್ಲಿ ವಾಕಥಾನ್ ನಡೆಯಿತು.

ಮೈಸೂರು,ಸೆ.30–ಪ್ರೀತಿ ಇದ್ದಲ್ಲಿ ಐಶ್ವರ್ಯ, ಕೀರ್ತಿ ತಾನಾಗಿ ಬರುತ್ತದೆ. ಆಸ್ಪತ್ರೆಗೆ ಬರುವ ರೋಗಿಗಳಿಗೆ ಪ್ರೀತಿಯಿಂದ ಚಿಕಿತ್ಸೆ ನೀಡಿ ಎಂದು ಬೇಬಿಮಠದ ಶ್ರೀ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ ಕರೆ ನೀಡಿದರು.

ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯು ವಿಶ್ವ ಹೃದಯ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಉಚಿತ ಆಂಜಿಯೋಗ್ರಾಂ ಹಾಗೂ ಆಂಜಿಯೋ ಪ್ಲಾಸ್ಟಿ ಶಿಬಿರ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, 'ವೈದ್ಯೋ ನಾರಾಯಣೋ ಹರಿ' ಎಂದು ಹೇಳಲಾಗುತ್ತದೆ. ವೈದ್ಯರು ದೇವರಿಗೆ ಸಮಾನ ಎಂದು ಪರಿಗಣಿಸಲಾಗುತ್ತದೆ. ಆದ್ದರಿಂದ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಿ, ಪ್ರೀತಿಯಿಂದ ಮಾತನಾಡಿಸಿ ಎಂದು ಸಲಹೆ ನೀಡಿದರು.

ಕೆಲವರು ಐಶ್ವರ್ಯ, ಕೀರ್ತಿಗಾಗಿ ಕೆಲಸ ಮಾಡುತ್ತಾರೆ. ಆದ್ದರಿಂದ ಪ್ರೀತಿ ಇದ್ದಲ್ಲಿ ಇವೆರಡೂ ಬರುತ್ತವೆ ಎಂದು ಚಿಕ್ಕ ಕಥೆ ಮೂಲಕ ವಿವರಿಸಿದರು.

ವಿದೇಶಗಳಿಗೆ ಹೋಲಿಸಿದರೆ ನಮ್ಮಲ್ಲಿ ಆಸ್ಪತ್ರೆಗಳು, ಕ್ಲಿನಿಕ್‌ಗಳು ಹೆಚ್ಚಾಗಿವೆ. ಈ ಪರಿಸ್ಥಿತಿ ಏಕೆ? ಎಂಬ ಬಗ್ಗೆ ಪ್ರತಿಯೊಬ್ಬರೂ ಆಲೋಚಿಸಿ, ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದರು.

ಹಿರಿಯ ಹೃದ್ರೋಗತಜ್ಞ ಡಾ.ಸಿ.ಡಿ.ಶ್ರೀನಿವಾಸಮೂರ್ತಿ ಶಿಬಿರ ಉದ್ಘಾಟಿಸಿ ಮಾತನಾಡಿ, ಆಂಜಿಯೋಗ್ರಾಂ, ಆಂಜಿಯೋಪ್ಲಾಸ್ಟಿ ಮಾಡುವ ಸಲಕರಣೆಗಳು ದುಬಾರಿ. ಸುಯೋಗ್ ಆಸ್ಪತ್ರೆ ಮುಖ್ಯಸ್ಥ ಡಾ.ಎಸ್.ಪಿ.ಯೋಗಣ್ಣ ಅವರು ಪ್ರತಿ ವರ್ಷ ಬಡವರಿಗೆ ಉಚಿತವಾಗಿ ಈ ಚಿಕಿತ್ಸೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಹೃದಯ ಮಾನವ ದೇಹದ ಪ್ರಮುಖ ಅಂಗ. ಅದು ರಕ್ತವನ್ನು ಪಂಪ್ ಮಾಡುವ ಮೂಲಕ ದೇಹದ ಇತರೆ ಭಾಗಗಳಿಗೆ ಒದಗಿಸುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ನಿತ್ಯ ದೈಹಿಕ ಕಸರತ್ತು ಮಾಡಬೇಕು ಎಂದು ಸಲಹೆ ನೀಡಿದರು.

ಸುಯೋಗ್ ಆಸ್ಪತ್ರೆ ಸಂಸ್ಥಾಪಕ ಡಾ.ಎಸ್.ಪಿ.ಯೋಗಣ್ಣ ಮಾತನಾಡಿ, ಸಮಾಜದ ಋಣ ನಮ್ಮ ಮೇಲಿದೆ. ಅದನ್ನು ತೀರಿಸಲು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದೇನೆ. ಬಡವರಿಗೆ ನೆರವಾಗಲು ಬೇರೆ ಬೇರೆ ರೀತಿಯ ಶಿಬಿರಗಳನ್ನು ಮಾಡುತ್ತಿದ್ದೇವೆ ಎಂದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿದರು. ಆಸ್ಪತ್ರೆಯ ಹೃದ್ರೋಗ ವಿಭಾಗದ ಮುಖ್ಯಸ್ಥ ಡಾ.ಪಿ.ಜಯಕುಮಾರ್ ಸ್ವಾಗತಿಸಿದರು. ಹಿಮಾಲಯ ಫೌಂಡೇಷನ್ ಮುಖ್ಯಸ್ಥ ಎನ್. ಅನಂತ ನಿರೂಪಿಸಿ, ವಂದಿಸಿದರು. ಡಾ.ಸುಯೋಗ್ ಯೋಗಣ್ಣ, ಸುಧಾ ಯೋಗಣ್ಣ, ಶಾಂತ ಶ್ರೀನಿವಾಸಮೂರ್ತಿ ಮೊದಲಾದವರು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಹೃದ್ರೋಗದ ಬಗ್ಗೆ ಅರಿವು ಮೂಡಿಸಲು ರಾಮಕೃಷ್ಣನಗರ ವೃತ್ತದಿಂದ ಪ್ರಮುಖ ರಸ್ತೆಗಳಲ್ಲಿ ವಾಕಥಾನ್ ನಡೆಯಿತು. ಸುಯೋಗ್ ಆಸ್ಪತ್ರೆ, ಸುಯೋಗ್ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಸಮೂಹ, ಸುಯೋಗ್ ಡಯಾಬಿಟಿಕ್ಸ್ ಹೆಲ್ತ್ ಕ್ಲಬ್, ಸುಯೋಗ್ ವುಮೆನ್ಸ್ ಹೆಲ್ತ್ ಕ್ಲಬ್, ಶ್ರೀ ರಾಮಕೃಷ್ಣ ಸೇವಾ ಪ್ರತಿಷ್ಠಾನದ ಸದಸ್ಯರು ವಾಕಥಾನ್‌ನಲ್ಲಿ ಸಾಗಿದರು.

ಈಗ ಕೀಳು ಮಟ್ಟದ ರಾಜಕೀಯ ನಡೆಯುತ್ತಿದೆ...!

ಬೆಂಗಳೂರು,ಸೆ.30(ಕೆಎಂಶಿ)–ಕರ್ನಾ



ಟಕದಲ್ಲಿ ಕೀಳುಮಟ್ಟದ ರಾಜಕಾರಣ ನಡೆಯುತ್ತಿದೆ. ಹಿರಿಯ ಅಧಿಕಾರಿಗಳನ್ನು ದುರುಪಯೋಗ ಮಾಡಿಕೊಂಡು ವಿರೋಧ ಪಕ್ಷಗಳ ದಮನಕ್ಕೆ ಸುಳ್ಳು ಮೊಕದ್ದಮೆ ಹಾಕಲಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸ್ವಜನ ಪಕ್ಷಪಾತದ ರಾಜಕೀಯ ನಡೆಯುತ್ತಿದೆ. ಅಧಿಕಾರಿಗಳಿಂದ ಕೀಳುಮಟ್ಟದ ಮಾತುಗಳು ಕೇಳಿ ಬರುತ್ತಿವೆ. ಇಂತಹ ಕೆಳಮಟ್ಟದ ರಾಜಕೀಯ ಹಿಂದೆಂದೂ ನಡೆದಿರಲಿಲ್ಲ ಎಂದರು.

ತಮ್ಮ ಮೇಲೆ ಆರೋಪದ ಕಪ್ಪು ಚುಕ್ಕೆ ಬಂದರೆ, ಎಲ್ಲರಿಗೂ ಮಸಿ ಬಳಿಯುವ ಪ್ರಯತ್ನ ಆಗುತ್ತಿದೆ. ಇದು ಬಹಳಷ್ಟು ದಿನ ನಡೆಯುವುದಿಲ್ಲ, ಅಂತಿಮವಾಗಿ ಕಾನೂನು ತನ್ನ ಕೆಲಸ ಮಾಡುತ್ತದೆ. ಮುಖ್ಯಮಂತ್ರಿ ಆಗಲು ಕೆಲವರು ಹಣ ಇಟ್ಟುಕೊಂಡು ಕಾಯುತ್ತಿದ್ದಾರೆ ಎಂಬ ಶಾಸಕ ಯತ್ನಾಳ್ ಹೇಳಿಕೆ ಬಗ್ಗೆ ಅವರನ್ನೇ ಕೇಳಬೇಕು, ನನಗೆ ಯಾವುದೇ ಮಾಹಿತಿ ಇಲ್ಲ. ಅದರ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ, ಮುಡಾ ಹಗರಣದಲ್ಲಿ ಏನು ಆಗುತ್ತದೆಯೋ ಕಾದು ನೋಡೋಣ ಎಂದರು.

ದೇಶ – ವಿದೇಶ

ಇಸ್ರೇಲ್ ವಾಯುದಾಳಿ; ಏಕಕಾಲದಲ್ಲಿ ನಾಲ್ಕು ಶತ್ರುಗಳೊಂದಿಗೆ ಯುದ್ಧ

ಟೆಲ್ ಅವೀವ್: ಗಾಜಾದಲ್ಲಿ ಹಮಾಸ್, ಲೆಬನಾನ್‌ನಲ್ಲಿ



ಹಿಜ್ಬುಲ್ಲಾ ಮತ್ತು ಸಿರಿಯಾ ಸೇನೆಯೊಂದಿಗೆ ಯುದ್ಧ ನಡೆಸುತ್ತಿರುವ ಇಸ್ರೇಲ್ ಸೇನೆ ಇದೀಗ ಯೆಮೆನ್ ಮೇಲೂ ವಾಯುದಾಳಿ ಆರಂಭಿಸಿದೆ. ಇಸ್ರೇಲಿ ಏರ್‌ಫೋರ್ಸ್ ಯೆಮೆನ್‌ನಲ್ಲಿನ ಮಿಲಿಟರಿ ಘಟಕಗಳನ್ನು ಗುರಿಯಾಗಿಸಿಕೊಂಡು ವೈಮಾನಿಕ ದಾಳಿ ಪ್ರಾರಂಭಿಸಿದ್ದು, ನಿರ್ದಿಷ್ಟವಾಗಿ ವಿದ್ಯುತ್ ಸ್ಥಾವರಗಳು ಮತ್ತು ಬಂದರು ಸೇರಿದಂತೆ ಹೌತಿ ಬಂಡುಕೋರರ ನಿಯಂತ್ರಿತ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ತೀವ್ರ ದಾಳಿ ನಡೆಸಿದೆ.

ಈ ಕುರಿತು ಸ್ವತಃ ಇಸ್ರೇಲ್ ಸೇನೆ ಎಕ್ಸ್‌ನಲ್ಲಿ ಮಾಹಿತಿ ನೀಡಿದ್ದು, ಇಸ್ರೇಲಿ ಸೇನಾಪಡೆಗಳು ಐಎಎಫ್ ಇಸ್ರೇಲ್ ವಿರುದ್ಧದ ಇತ್ತೀಚಿನ ದಾಳಿಗಳಿಗೆ ಪ್ರತಿಕ್ರಿಯೆಯಾಗಿ ಯೆಮೆನ್‌ನಲ್ಲಿ ಹೌತಿ ಭಯೋತ್ಪಾದಕ ಆಡಳಿತಕ್ಕೆ ಸೇರಿದ ಮಿಲಿಟರಿ ಗುರಿಗಳನ್ನು ಹೊಡೆದುರುಳಿಸಿದೆ ಎಂದು ಹೇಳಿದೆ. ತನ್ನ ಈ ನಿರ್ದಿಷ್ಟ ಗುರಿಗಳಲ್ಲಿ ವಿದ್ಯುತ್ ಸ್ಥಾವರಗಳು ಮತ್ತು ಬಂದರು ಸೇರಿದ್ದು, ಮಿಲಿಟರಿ ಸರಬರಾಜು ಮತ್ತು ತೈಲದ ಜೊತೆಗೆ ಇರಾನ್ ಶಸ್ತ್ರಾಸ್ತ್ರಗಳನ್ನು ಪ್ರದೇಶಕ್ಕೆ ವರ್ಗಾಯಿಸಲು ಹೌತಿಗಳು ಬಳಸುತ್ತಿದ್ದರು ಎಂದು ಆರೋಪಿಸಿದೆ.

ಕುಕಿ ಬಂಡುಕೋರರಿಂದ ಮೈತೇಯಿ ಯುವಕರ ಅಪಹರಣ

ಗುವಾಹಟಿ: ಕುಕಿ ಉಗ್ರರಿಂದ ಅಪಹರಣಕ್ಕೊಳಗಾಗಿ



ರುವ ತಮ್ಮನ್ನು ರಕ್ಷಿಸುವಂತೆ ಮಣಿಪುರ ಮುಖ್ಯಮಂತ್ರಿ ಎನ್.ಬಿರೇನ್‌ಸಿಂಗ್ ಅವರಿಗೆ ಮೈತೇಯಿ ಯುವಕರಿಬ್ಬರು ಮನವಿ ಮಾಡಿದ್ದಾರೆ. ಇಂದು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡ ವಿಡಿಯೋ ಮೂಲಕ ಮನವಿ ಮಾಡಲಾಗಿದೆ. ಅಪಹರಣಕ್ಕೊಳಗಾದವರಲ್ಲಿ ಒಬ್ಬ ತಮ್ಮ ಅಪಹರಣಕಾರರ ಬೇಡಿಕೆಗಳನ್ನು ಈಡೇರಿಸುವ ಮೂಲಕ ತಮ್ಮ ಜೀವಗಳನ್ನು ಉಳಿಸುವಂತೆ ಸಿಂಗ್‌ಗೆ ತೀವ್ರ ಮನವಿ ಮಾಡಿದರು. ಆದರೆ ಕುಕಿಗಳ ಬೇಡಿಕೆಗಳು ಏನೆಂದು ತಿಳಿದುಬಂದಿಲ್ಲ.

ವಿಡಿಯೋ ಹೊರಬಿದ್ದ ಕೆಲವೇ ಗಂಟೆಗಳ ನಂತರ ಬಿರೇನ್ ಸಿಂಗ್ ಅವರು ವಿವಿಧ ಪಕ್ಷಗಳ ಶಾಸಕರೊಂದಿಗೆ ಸಭೆ ನಡೆಸಿದರು. ಅಪಹರಣಕ್ಕೀಡಾಗಿರುವವರ ಸುರಕ್ಷಿತ ಬಿಡುಗಡೆಗೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದರು. ಇಂದು ನನ್ನ ಸೆಕ್ರೆಟರಿಯೇಟ್‌ನಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳ ಎಲ್ಲಾ ಶಾಸಕರೊಂದಿಗೆ ಸಭೆ ನಡೆಸಿದ್ದೇನೆ. ರಾಜ್ಯದ ಪ್ರಸ್ತುತ ಪರಿಸ್ಥಿತಿಯನ್ನು ಉದ್ದೇಶಿಸಿ, ವಿಶೇಷವಾಗಿ ಕುಕಿ ಉಗ್ರಗಾಮಿಗಳು ಇಬ್ಬರು ಅಮಾಯಕ ಯುವಕರ ಅಪಹರಣದ ರಕ್ಷಣೆಯ ಮೇಲೆ ಕೇಂದ್ರೀಕರಿಸಲಾಗಿತ್ತು ಎಂದು ಸಿಂಗ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ತನ್ನನ್ನು ತಾನೇ ಮದುವೆಯಾಗಿದ್ದ ಟಿಕ್‌ಟಾಕ್ ಇನ್‌ಫ್ಲೂಯೆನ್ಸರ್ ಆತ್ಮಹತ್ಯೆ

ಇಸ್ತಾನ್‌ಬುಲ್: ತನ್ನನ್ನು ತಾನೇ ಮದುವೆಯಾಗುವ



ಮೂಲಕ ಸುದ್ದಿಯಾಗಿದ್ದ ಟರ್ಕಿಶ್ ಟಿಕ್‌ಟಾಕ್ ಇನ್‌ಫ್ಲೂಯೆನ್ಸರ್ ಕುಬ್ರಾ ಆಯ್ಕುತ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 26ರ ಹರೆಯದ ಈ ಯುವತಿ ಇಸ್ತಾನ್‌ಬುಲ್‌ನ ಸುಲ್ತಾನ್‌ಬೇಲಿ ಜಿಲ್ಲೆಯ ಐಷಾರಾಮಿ ಅಪಾರ್ಟ್‌ಮೆಂಟ್ ಕಟ್ಟಡದ 5ನೇ ಮಹಡಿಯಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಟರ್ಕಿಶ್ ಮಾಧ್ಯಮದ ವರದಿಗಳು ತಿಳಿಸಿವೆ. ಆಕೆಯ ಆತ್ಮಹತ್ಯೆಗೆ ಮುಂಚಿನ ದಿನಗಳಲ್ಲಿ ಕುಬ್ರಾ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳ ಬಗ್ಗೆ ಅನೇಕ ಅಭಿಮಾನಿಗಳು ಕಳವಳ ವ್ಯಕ್ತಪಡಿಸಿದ್ದರು. ಅವಳ ಸಾವಿಗೆ ಕೆಲವೇ ಗಂಟೆಗಳ ಮೊದಲು ಆಕೆ ತನ್ನ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ತನ್ನ ತೂಕ ಕಡಿಮೆ ಆಗುತ್ತಿರುವ ಬಗ್ಗೆ, ಅದನ್ನು ನಿಯಂತ್ರಿಸಲು ತಾನು ಯಾವ ರೀತಿ ಕಷ್ಟಪಡುತ್ತಿದ್ದೇನೆ ಎಂಬುದರ ಬಗ್ಗೆ ಪೋಸ್ಟ್ ಮಾಡಿದ್ದಾರೆ. ನಾನು ನನ್ನಿಂದಾದ ಶಕ್ತಿ ಒಗ್ಗೂಡಿಸಲು ಪ್ರಯತ್ನಿಸುತ್ತಿದ್ದೇನೆ. ಆದರೆ ತೂಕ ಹೆಚ್ಚಾಗಿಸಲು ನನ್ನಿಂದ ಸಾಧ್ಯವಾಗುತ್ತಿಲ್ಲ. ನಾನು ಪ್ರತಿದಿನ ಒಂದು ಕೆಜಿ ಕಳೆದುಕೊಳ್ಳುತ್ತಿದ್ದೇನೆ. ನನಗೆ ಏನು ಮಾಡಬೇಕೆಂದು ತಿಳಿದಿಲ್ಲ. ನಾನು ತುರ್ತಾಗಿ ತೂಕವನ್ನು ಹೆಚ್ಚಿಸಬೇಕಾಗಿದೆ ಎಂದು ತಮ್ಮ ಕೊನೇ ಪೋಸ್ಟ್‌ನಲ್ಲಿ ಹೇಳಿದ್ದರು.

ತಾಂತ್ರಿಕ ದೋಷ: ಕೆಜಿಎಫ್‌ನಲ್ಲಿ ವಾಯುಪಡೆ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶ

ಕೋಲಾರ: ಬೆಂಗಳೂರಿನ ಯಲಹಂಕ ವಾಯು



ನೆಲೆಯಿಂದ ಚೆನ್ನೈನ ತಂಬರಂ ವಾಯುನೆಲೆಗೆ ತೆರಳುತ್ತಿದ್ದ ಭಾರತೀಯ ವಾಯುಪಡೆಗೆ ಸೇರಿದ ಚೇತಕ್ ಹೆಲಿಕಾಪ್ಟರ್ ತಾಂತ್ರಿಕ ದೋಷದಿಂದ ಕೆಜಿಎಫ್ ತಾಲೂಕಿನ ದೊಡ್ಡೂರು ಕರಪನಹಳ್ಳಿಯಲ್ಲಿ ತುರ್ತು ಭೂಸ್ಪರ್ಶ ಮಾಡಿದೆ.

ಮೂಲಗಳ ಪ್ರಕಾರ ಹೆಲಿಕಾಪ್ಟರ್‌ನಲ್ಲಿ ಮೂವರು ಪೈಲಟ್‌ಗಳಿದ್ದರು. ಡಿಕೆ ಹಳ್ಳಿಯಲ್ಲಿ ಹೆಲಿಕಾಪ್ಟರ್ ಬಂದಿಳಿದ ಬಗ್ಗೆ ಹೊಲದಲ್ಲಿ ಕೆಲಸ ಮಾಡುತ್ತಿದ್ದ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸ್ ತಂಡವು ಕೂಡಲೇ ಸ್ಥಳಕ್ಕೆ ಧಾವಿಸಿತು. ಹೆಲಿಕಾಪ್ಟರ್ ತಾಂತ್ರಿಕ ಸಮಸ್ಯೆಗಳಿಂದ ಕೂಡಿದ್ದರಿಂದ ಸಿಬ್ಬಂದಿ ತುರ್ತು ಭೂಸ್ಪರ್ಶ ಮಾಡಿದ್ದಾರೆ. ಹೆಲಿಕಾಪ್ಟರ್ ಸಹಿತ ಅದರಲ್ಲಿದ್ದವರೆಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ಕೆಜಿಎಫ್ ಎಸ್‌ಪಿ ಕೆ.ಎಂ.ಶಾಂತರಾಜು ತಿಳಿಸಿದ್ದಾರೆ. ಬೆಂಗಳೂರಿನಲ್ಲಿರುವ ಐಎಎಫ್‌ನ ಹಿರಿಯ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಪ್ರೊಟೋಕಾಲ್‌ಗೆ ಬದ್ಧವಾಗಿ, ಎಲ್ಲಾ ಮೂವರು ಪೈಲಟ್‌ಗಳಿಗೆ ಬಿಇಎಂಎಲ್ ಅತಿಥಿಗೃಹದಲ್ಲಿ ವಸತಿ ಕಲ್ಪಿಸಿದ್ದು, ಹೆಲಿಕಾಪ್ಟರ್ ಸುತ್ತಲೂ ಭದ್ರತಾ ಪರಿಧಿ ಸ್ಥಾಪಿಸಲು ಹೆಚ್ಚುವರಿ ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ಶಾಂತರಾಜು ತಿಳಿಸಿದ್ದಾರೆ.

ಒಂದೂವರೆ ಲಕ್ಷ ಸರ್ಕಾರಿ ಉದ್ಯೋಗಗಳನ್ನು ರದ್ದುಗೊಳಿಸಲು ನಿರ್ಧರಿಸಿದ ಪಾಕಿಸ್ತಾನ

ಇಸ್ಲಾಮಾಬಾದ್: ಪಾಕಿಸ್ತಾನದ ಆರ್ಥಿಕ ಪರಿಸ್ಥಿತಿ ದಿಕ್ಕೆಟ್ಟು ಹೋಗಿ ಅಲ್ಲಿನ ಸರ್ಕಾರ ಕಂಗಾಲಾಗಿದೆ. ಈ ದೇಶದಲ್ಲಿ ಶೀಘ್ರದಲ್ಲೇ 1,50,000 ಸರ್ಕಾರಿ ಹುದ್ದೆಗಳನ್ನು ರದ್ದುಪಡಿಸಲಾಗುವುದು ಎಂಬ ಸುದ್ದಿ ಭಾರಿ ಸದ್ದು ಮಾಡಿದ್ದು, ಇದಕ್ಕಾಗಿ ಪಾಕ್ ಸರ್ಕಾರವು 6 ಸಚಿವಾಲಯಗಳನ್ನು ಮುಚ್ಚಿ 2 ಸಚಿವಾಲಯವನ್ನು ಪರಸ್ಪರ ವಿಲೀನಗೊಳಿಸಲು ಹೊರಟಿದೆ. ಸರ್ಕಾರದ ಈ ನಿರ್ಧಾರದಿಂದ ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿ ಸಿಲುಕಿರುವ ದೇಶದ ಜನತೆಗೆ ಮತ್ತಷ್ಟು ಸಂಕಷ್ಟ ಎದುರಾಗಿದ್ದು, ಉದ್ಯೋಗ ಹುಡುಕುತ್ತಿರುವ ಯುವಕರಿಗೆ ಈ ಘೋಷಣೆಯು ಸಮಸ್ಯೆಗಳನ್ನು ಹೆಚ್ಚಿಸಲಿದೆ.

ಕಳೆದ ಭಾನುವಾರ (ಸೆ.29) ಪಾಕಿಸ್ತಾನದ ಹಣಕಾಸು ಸಚಿವ ಮೊಹಮ್ಮದ್ ಔರಂಗಜೇಬ್, ಸರ್ಕಾರಿ ಉದ್ಯೋಗಗಳನ್ನು ಕಡಿತಗೊಳಿಸುವುದಾಗಿ ಘೋಷಿಸಿದ್ದರು. ಐಎಂಎಫ್‌ನಿಂದ ಪಡೆದ 7 ಬಿಲಿಯನ್ ಯುಎಸ್ ಡಾಲರ್‌ಗಳ ಸಾಲದ ಒಪ್ಪಂದದಿಂದಾಗಿ ಇದನ್ನು ಮಾಡಲಾಗುತ್ತಿದೆ ಎಂದು ಹೇಳಿದ್ದರು. ಸೆ.26ರಂದು, IMF ಪಾಕಿಸ್ತಾನಕ್ಕೆ 7 ಬಿಲಿಯನ್ ಡಾಲರ್‌ಗಳ ಸಹಾಯ ಪ್ಯಾಕೇಜ್ ಅನ್ನು ಅನುಮೋದಿಸಿತ್ತು. ಈ ಅವಧಿಯಲ್ಲಿ, IMF ಪಾಕಿಸ್ತಾನಕ್ಕೆ ಸಾಲದ ಮೊದಲ ಕಂತಾಗಿ 1 ಬಿಲಿಯನ್ ಡಾಲರ್‌ಗಳನ್ನು ಬಿಡುಗಡೆ ಮಾಡಿದೆ. ಕೃಷಿ ಮತ್ತು ರಿಯಲ್ ಎಸ್ಟೇಟ್ ಕ್ಷೇತ್ರಗಳಲ್ಲಿ ವೆಚ್ಚದಲ್ಲಿ ಕಡಿತ, ತೆರಿಗೆಗಳಲ್ಲಿ ಕಡಿತದ ಘೋಷಣೆ ಸೇರಿದಂತೆ ಹಲವು ಭರವಸೆಗಳನ್ನು ನೀಡಿದೆ.

ಮೈಸೂರು ಮಿತ್ರ ಮಂಗಳವಾರ 1 ಅಕ್ಟೋಬರ್ 2024

ಡಿಸೆಂಬರ್ ಒಳಗೆ ಜಿಲ್ಲಾ ಪ್ರವಾಸೋದ್ಯಮ ವೆಬ್‌ಸೈಟ್ ಬಿಡುಗಡೆ

ವಿಶ್ವ ಪ್ರವಾಸೋದ್ಯಮ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾಹಿತಿ



ಮಡಿಕೇರಿ ಖಾಸಗಿ ಹೋಟೆಲ್‌ನಲ್ಲಿ ನಡೆದ ವಿಶ್ವ ಪ್ರವಾಸೋದ್ಯಮ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಪ್ರವಾಸೋದ್ಯಮ ಕುರಿತ ಬಿತ್ತಿಪತ್ರ ಬಿಡುಗಡೆಗೊಳಿಸಿದರು.

> ಕೊಡಗು ಜಿಲ್ಲೆಯ ವಿಶೇಷತೆ ಬಗ್ಗೆ 'ಕಾಫಿ ಟೇಬಲ್ ಬುಕ್'ಹೊರ ತರುವಂತಾಗಬೇಕು. ಇಲ್ಲಿನ ನದಿ, ಜಲಾಶಯ, ದುಬಾರೆ ಆನೆ ಶಿಬಿರ, ರಿವರ್ ರ್‍ಯಾಪ್ಟಿಂಗ್ ಹೀಗೆ ಹಲವು ವಿಶೇಷತೆ ಬಗ್ಗೆ ಪ್ರವಾಸಿಗರಿಗೆ ಮಾಹಿತಿ ದೊರೆಯುವಂತಾಗಬೇಕು.
> –ವೆಂಕಟ್ ರಾಜಾ, ಜಿಲ್ಲಾಧಿಕಾರಿ

ಮಡಿಕೇರಿ, ಸೆ.30–ಕೊಡಗು ಜಿಲ್ಲಾ ಪ್ರವಾಸೋದ್ಯಮ ಮಾರ್ಗದರ್ಶಿ ವೆಬ್‌ಸೈಟ್ ಅನ್ನು ಡಿಸೆಂಬರ್ ಒಳಗೆ ಬಿಡುಗಡೆಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದರು.

ನಗರದ ಹೊರವಲಯದ ಖಾಸಗಿ ಹೋಟೆಲ್‌ನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ ಹಾಗೂ ಪ್ರವಾಸೋದ್ಯಮ ಪಾಲುದಾರರ ಸಹಕಾರದಲ್ಲಿ ನಡೆದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯ ಪವಿತ್ರ ಸ್ಥಳವಾದ ತಲಕಾವೇರಿ, ಭಾಗಮಂಡಲ ಹಾಗೂ ಪ್ರಸಿದ್ಧ ಪ್ರವಾಸಿ ಸ್ಥಳವಾದ ಜಲಾಶಯ, ಜಲಪಾತಗಳು, ಪ್ರೇಕ್ಷಣೀಯ ಸ್ಥಳ, ಹೋಟೆಲ್‌ಗಳು, ರೆಸಾರ್ಟ್‌ಗಳು ಸೇರಿದಂತೆ ವಿವಿಧ ಸ್ಥಳಗಳ ಬಗ್ಗೆ ಮಾಹಿತಿ ನೀಡುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ಡಿಸೆಂಬರ್ ಒಳಗೆ ಪ್ರವಾಸಿ ಮಾರ್ಗದರ್ಶಿ ವೆಬ್‌ಸೈಟ್‌ಗೆ ಚಾಲನೆ ನೀಡಲಾಗುವುದು ಎಂದು ಹೇಳಿದರು.

ಕೊಡಗಿಗೆ ಹೊರ ಜಿಲ್ಲೆ ಹಾಗೂ ರಾಜ್ಯದಿಂದ ಹೆಚ್ಚು ಪ್ರವಾಸಿಗರು ಆಗಮಿಸುತ್ತಾರೆ. ಅವರಿಗೆ ಸರಿಯಾದ ಮಾಹಿತಿ ನೀಡಿದಲ್ಲಿ ಅವರು ಮತ್ತೊಬ್ಬರಿಗೆ ತಿಳಿಸುತ್ತಾರೆ. ಈ ಬಗ್ಗೆ ಅಂತರ್ಜಾಲ ಮೂಲಕ ಮಾಹಿತಿ ಒದಗಿಸಲಾಗುವುದು. ಕೊಡಗು ಪ್ರವಾಸಿ ಸ್ಥಳಗಳಲ್ಲಿ ಸ್ವಚ್ಛತೆ ಹಾಗೂ ಪರಿಸರ ಶುಚಿತ್ವ ಕಾಪಾಡುವ ನಿಟ್ಟಿನಲ್ಲಿ ಪ್ರವಾಸಿಗರಲ್ಲಿ ಅರಿವು ಮೂಡಿಸಬೇಕು. ಇದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯ ಎಲ್ಲೆಡೆ ಪರಿಸರ ಪ್ರವಾಸೋದ್ಯಮ ನಿರ್ಮಾಣ ಮಾಡಬೇಕು. ಪ್ಲಾಸ್ಟಿಕ್ ಬಳಸದಂತೆ ಸಲಹೆ ನೀಡಬೇಕು. ಪವಿತ್ರ ಸ್ಥಳ ಸೇರಿದಂತೆ ಪ್ರವಾಸಿ ಸ್ಥಳಗಳಲ್ಲಿ ಯಾವ ರೀತಿ ನಡೆದುಕೊಳ್ಳಬೇಕು ಎಂಬ ಬಗ್ಗೆ ಮಾಹಿತಿ ಇರಬೇಕು. ಊಟಿ ಹಾಗೂ ತಿರುಪತಿಯಲ್ಲಿ ಪ್ರವಾಸಿ ಹಾಗೂ ಪವಿತ್ರ ಸ್ಥಳದಲ್ಲಿನ ನಿರ್ವಹಣೆ ಬಗ್ಗೆ ತಿಳಿದುಕೊಳ್ಳಬೇಕು. ಈ ಸಂಬಂಧ ಆಗಾಗ ಶಿಬಿರ ಏರ್ಪಡಿಸುವ ಮೂಲಕ ಮಾಹಿತಿ ನೀಡುವಂತಾಗಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಬಿ.ಆರ್.ನಾಗೇಂದ್ರ ಪ್ರಸಾದ್ ಮಾತನಾಡಿ, ವಾರಾಂತ್ಯದಲ್ಲಿ ಜಿಲ್ಲೆಗೆ 1 ಲಕ್ಷ ಜನರು ಭೇಟಿ ನೀಡುತ್ತಾರೆ. ಆದ್ದರಿಂದ ಪರಿಸರ ಶುಚಿತ್ವಕ್ಕೆ ಹೆಚ್ಚಿನ ಒತ್ತು ನೀಡಬೇಕು. ಈ ಸಂಬಂಧ ಸ್ಥಳೀಯ ಸಂಸ್ಥೆಗಳು ಹೆಚ್ಚಿನ ಗಮನಹರಿಸಬೇಕು ಎಂದರು.

ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಅನಿತಾ ಭಾಸ್ಕರ್ ಮಾತನಾಡಿ, ಕೊಡಗಿಗೆ ಪ್ರತಿವರ್ಷ ಸುಮಾರು 47 ರಿಂದ 50 ಲಕ್ಷ ಪ್ರವಾಸಿಗರು ಭೇಟಿ ನೀಡುತ್ತಿದ್ದಾರೆ. ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಾವಿರಾರು ಮಂದಿಗೆ ಉದ್ಯೋಗ ಸೃಷ್ಟಿಸಿದೆ ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾಧಿಕಾರಿ ಪ್ರವಾಸೋದ್ಯಮ ಕುರಿತ ಬಿತ್ತಿಪತ್ರ ಬಿಡುಗಡೆಗೊಳಿಸಿ, ಶೂನ್ಯ ತ್ಯಾಜ್ಯ ಪ್ರವಾಸ ಜಾಗೃತಿಗೆ ಚಾಲನೆ ನೀಡಿದರು. ಮೈಸೂರಿನ ಫುಡ್ ಕ್ರಾಫ್ಟ್ ಸಂಸ್ಥೆ ಪ್ರಾಂಶುಪಾಲ ಡಾ.ಎಸ್.ಕಣ್ಣನ್, ಗ್ರೀನ್ ಪಾರ್ಕ್ ಸಂಸ್ಥೆ ಎಚ್.ಆರ್.ಜಯರಾಮ್, ಟೂರ್ಸ್ ಮತ್ತು ಟ್ರಾವೆಲ್ ಅಸೋಷಿಯೇಷನ್ ಅಧ್ಯಕ್ಷ ಕುಪ್ಪಂಡ ವಸಂತ, ಕೊಡಗು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಉಪಾಧ್ಯಕ್ಷ ಅಂಬೆಕಲ್ಲು ನವೀನ್, ಪ್ರಧಾನ ಕಾರ್ಯದರ್ಶಿ ಮೋಂತಿ ಗಣೇಶ್, ಪ್ರಮುಖರಾದ ಜಿ.ಚಿದ್ವಿಲಾಸ್, ಬಿ.ಜಿ.ಅನಂತಶಯನ, ಎಚ್.ಟಿ.ಅನಿಲ್, ಸಿ.ಜಿ.ಕುಶಾಲಪ್ಪ, ಸೋಮವಾರಪೇಟೆ ಹೋಂ ಸ್ಟೇ ಅಸೋಷಿಯೇಷನ್ ಅಧ್ಯಕ್ಷ ಸಿ.ಕೆ.ರೋಹಿತ್, ಹೋಂ ಸ್ಟೇ, ರೆಸಾರ್ಟ್ ಹಾಗೂ ಟ್ರಾವೆಲ್ ಅಸೋಷಿಯೇಷನ್ ಸದಸ್ಯರು ಹಾಜರಿದ್ದರು.

ವಿರಾಜಪೇಟೆ ಪಪಂ ಕಾಂಗ್ರೆಸ್ ತೆಕ್ಕೆಗೆ

ಅಧ್ಯಕ್ಷರಾಗಿ ಮನೆಯಪಂಡ ದೇಚಮ್ಮ, ಉಪಾಧ್ಯಕ್ಷರಾಗಿ ಫಸಿಹಾ ತಬ್ಸಂ ಆಯ್ಕೆ



ವಿರಾಜಪೇಟೆ ಪಪಂ ಅಧ್ಯಕ್ಷೆ ಮನೆಯಪಂಡ ದೇಚಮ್ಮ ಹಾಗೂ ಉಪಾಧ್ಯಕ್ಷೆ ಫಸಿಹಾ ತಬ್ಸಂ ಅವರನ್ನು ಶಾಸಕ ಎ.ಎಸ್.ಪೊನ್ನಣ್ಣ ಅಭಿನಂದಿಸಿದರು.

ವಿರಾಜಪೇಟೆ, ಸೆ.30–ಇಲ್ಲಿನ ಪಟ್ಟಣ ಪಂಚಾಯಿತಿ ಅಧಿಕಾರವನ್ನು ಕಾಂಗ್ರೆಸ್ ತನ್ನ ತೆಕ್ಕೆಗೆ ಪಡೆಯುವಲ್ಲಿ ಯಶಸ್ವಿಯಾಗಿದ್ದು, ಅಧ್ಯಕ್ಷರಾಗಿ ಮನೆಯಪಂಡ ದೇಚಮ್ಮ ಹಾಗೂ ಉಪಾಧ್ಯಕ್ಷರಾಗಿ ಫಸಿಹಾ ತಬ್ಸಂ ಆಯ್ಕೆಯಾಗಿದ್ದಾರೆ.

ಬಿಸಿಎಂಬಿ ವರ್ಗಕ್ಕೆ ಮೀಸಲಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್‌ನಿಂದ ಮನೆಯಪಂಡ ದೇಚಮ್ಮ, ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಫಸಿಹಾ ತಬ್ಸಂ ಹಾಗೂ ಬಿಜೆಪಿಯಿಂದ ಅಧ್ಯಕ್ಷ ಸ್ಥಾನಕ್ಕೆ ಸುನೀತಾ(ಜೂನ) ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಆಶಾ ಸುಬ್ಬಯ್ಯ ನಾಮಪತ್ರ ಸಲ್ಲಿಸಿದರು. ಮನೆಯಪಂಡ ದೇಚಮ್ಮ ಹಾಗೂ ಫಸಿಹಾ ತಬ್ಸಂ ಅವರು ತಲಾ 15 ಮತಗಳಿಸಿ ಆಯ್ಕೆಯಾದರೆ, ಬಿಜೆಪಿಯ ಸುನೀತಾ ಮತ್ತು ಆಶಾ ಸುಬ್ಬಯ್ಯ ತಲಾ 6 ಮತ ಪಡೆದು ಪರಾಭಗೊಂಡರು.

ಬಿಜೆಪಿಯ ಪೂರ್ಣಿಮಾ, ಸುಸ್ಮಿತಾ, ಜೆಡಿಎಸ್‌ನ ಎಸ್.ಹೆಚ್.ಮತ್ತೀನ್ ಹಾಗೂ ಮೂವರು ಪಕ್ಷೇತರ ಸದಸ್ಯರು ಕಾಂಗ್ರೆಸ್‌ಗೆ ಮತ ಚಲಾಯಿಸುವ ಮೂಲಕ ಬೆಂಬಲಿಸಿದರು. ನಂತರ ಕಾಂಗ್ರೆಸ್ ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಚುನಾವಣಾಧಿಕಾರಿಯಾಗಿ ತಹಸೀಲ್ದಾರ್ ರಾಮಚಂದ್ರ ಕಾರ್ಯನಿರ್ವಹಿಸಿದರು.

ಇದೇ ವೇಳೆ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, 15 ವರ್ಷದ ಬಳಿಕ ಕಾಂಗ್ರೆಸ್ ಪಪಂ ಅಧಿಕಾರ ಪಡೆದಿದೆ. ಇಂದು ನಡೆದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಕಾಂಗ್ರೆಸ್ ಐತಿಹಾಸಿಕ ಗೆಲುವು ಸಾಧಿಸಿದೆ. ಪಟ್ಟಣದಲ್ಲಿ ಅನೇಕ ಸಮಸ್ಯೆಗಳಿದ್ದು, ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಅಭಿವೃದ್ಧಿಗೆ ಶ್ರಮಿಸುವ ಮೂಲಕ ಸಮಸ್ಯೆಗಳಿಗೆ ಮುಕ್ತಿ ಹಾಡಲಿದ್ದಾರೆ. ಇಂದಿನ ಚುನಾವಣೆ ಬದಲಾವಣೆಯ ಸಂಕೇತವಾಗಿದ್ದು, ಪಟ್ಟಣ ಪಂಚಾಯಿತಿ ಆಡಳಿತಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ಹೇಳಿದರು.

ಅಧ್ಯಕ್ಷೆ ಮನೆಯಪಂಡ ದೇಚಮ್ಮ ಮಾತನಾಡಿ, ನನಗೆ ಹಿಂದೆ ಅಧ್ಯಕ್ಷರಾಗಿ ಉತ್ತಮ ಕೆಲಸ ಮಾಡಿದ ಅನುಭವ ಇದೆ. ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಈ ಬಾರಿಯೂ ಉತ್ತಮ ಕೆಲಸ ಮಾಡುತ್ತೇನೆ. ಪಟ್ಟಣದ ಅಭಿವೃದ್ಧಿಗೆ ಶಾಸಕರ ಒತ್ತಾಸೆ ಸದಾ ಇದ್ದು, ಸಾಮಾಜಿಕ ನ್ಯಾಯ ಪರಿಕಲ್ಪನೆಯಲ್ಲಿ ಉತ್ತಮ ಆಡಳಿತ ನೀಡುವುದಾಗಿ ಭರವಸೆ ನೀಡಿದರು.

ವಿದ್ಯುತ್ ತಂತಿಗೆ ಪೈಪ್ ತಗುಲಿ ಕಾರ್ಮಿಕ ಸಾವು

ಸುಂಟಿಕೊಪ್ಪ, ಸೆ.30– ಕಾಫಿ ತೋಟಕ್ಕೆ ವಾಹನದಲ್ಲಿ ತೆಗೆದುಕೊಂಡು ಹೋಗುತ್ತಿದ್ದ ಅಲ್ಯೂಮಿನಿಯಂ ಪೈಪ್ ವಿದ್ಯುತ್ ತಂತಿಗೆ ತಗುಲಿ ಕೂಲಿ ಕಾರ್ಮಿಕ ಮೃತಪಟ್ಟಿರುವ ಘಟನೆ ನಾಕೂರು ಶಿರಂಗಾಲ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಳ್ಳೂರು ಗ್ರಾಮದಲ್ಲಿ ಸೋಮವಾರ ನಡೆದಿದೆ.

ಹಾವೇರಿ ಜಿಲ್ಲೆಯ ಹಾನಗಲ್ಲು ತಾಲೂಕಿನ ಅಜೆಗುಂಡಿ ಕೊಪ್ಪ ಗ್ರಾಮ ಯಲ್ಲಪ್ಪ(57) ಮೃತ ಕಾರ್ಮಿಕ. ಈತ ಮಳ್ಳೂರು ಗ್ರಾಮದ ಶಶಿಕಾಂತ್ ಅವರ ತೋಟದಲ್ಲಿ ಕೂಲಿ ಕೆಲಸ ಮಾಡುತ್ತಿದ್ದರು. ಸೋಮವಾರ ಬೆಳಗ್ಗೆ ಎಂದಿನಂತೆ ತೋಟದಲ್ಲಿ ಕೆಲಸ ನಿರ್ವಹಿಸುತ್ತಿದ್ದರು. ಈ ವೇಳೆ ತೋಟದ ಮಾಲೀಕರೊಂದಿಗೆ ಒಂದು ತೋಟದಿಂದ ಮತ್ತೊಂದು ತೋಟಕ್ಕೆ ವಾಹನದಲ್ಲಿ ಅಲ್ಯೂಮಿನಿಯಂ ಪೈಪ್‌ಗಳನ್ನು ಕೊಂಡೊಯ್ಯುವಾಗ ಆಕಸ್ಮಿಕವಾಗಿ ಪೈಪ್ ವಿದ್ಯುತ್ ತಂತಿಗೆ ತಗುಲಿದೆ. ಪರಿಣಾಮ ಯಲ್ಲಪ್ಪ ಕುಸಿದು ಬಿದ್ದಿದ್ದಾರೆ. ಕೂಡಲೇ ಅವರನ್ನು ಕುಶಾಲನಗರ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಈ ಸಂಬಂಧ ಸುಂಟಿಕೊಪ್ಪ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮಡಿಕೇರಿ ಜನೋತ್ಸವ ದಸರಾ ಕಾಫಿ ಟೇಬಲ್ ಬಿಡುಗಡೆ



ಮಡಿಕೇರಿ ಜನೋತ್ಸವ ದಸರಾ ಕಾಫಿ ಟೇಬಲ್ ಪುಸ್ತಕವನ್ನು ಅನಾವರಣಗೊಳಿಸಲಾಯಿತು.

ಮಡಿಕೇರಿ: ಐತಿಹಾಸಿಕ ಮಡಿಕೇರಿ ದಸರಾ ಉತ್ಸವ ಒಂದೂವರೆ ಶತಮಾನದ ಉದ್ದಕ್ಕೂ ನಡೆದು ಬಂದ ಹಾದಿಯ ಪಥ ಗುರುತಿಸುವ ನಿಟ್ಟಿನಲ್ಲಿ ಹಿರಿಯ ಪತ್ರಕರ್ತ ಹೆಚ್.ಟಿ.ಅನಿಲ್ ರಚಿಸಿರುವ 'ಮಡಿಕೇರಿ ಜನೋತ್ಸವ ದಸರಾ ಕಾಫಿ ಟೇಬಲ್' ಪುಸ್ತಕವನ್ನು ನಗರದಲ್ಲಿ ಸೋಮವಾರ ಅನಾವರಣಗೊಳಿಸಲಾಯಿತು.

ನಗರದ ಖಾಸಗಿ ಹೋಟೆಲ್‌ನ ಸತ್ಕಾರ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಮಡಿಕೇರಿ ದಸರಾ ಉತ್ಸವ ಅಧ್ಯಕ್ಷ ವೆಂಕಟ್‌ರಾಜಾ, ಪುಸ್ತಕ ಅನಾವರಣಗೊಳಿಸಿದರು. ನಂತರ ಮಾತನಾಡಿದ ಜಿಲ್ಲಾಧಿಕಾರಿ, ಒಂದೂವರೆ ಶತಮಾನದ ಮಡಿಕೇರಿ ದಸರಾ ಉತ್ಸವ ನಡೆದು ಬಂದ ಹಾದಿಯ ಬಗ್ಗೆ ಸ್ಪಷ್ಟ ಮಾಹಿತಿ ಮತ್ತು ಅಧಿಕೃತ ದಾಖಲೆಗಳಿಲ್ಲ. ಇಂತಹ ಸಂದರ್ಭ ಅನಿಲ್ ಅವರು ದಸರಾ ಇತಿಹಾಸದ ಮೇಲೆ ಬೆಳಕು ಚೆಲ್ಲುವ ನಿಟ್ಟಿನಲ್ಲಿ ಪುಸ್ತಕ ಹೊರ ತಂದಿರುವುದು ಶ್ಲಾಘನೀಯ. ಮುಂಬರುವ ದಿನಗಳಲ್ಲಿ ಮಡಿಕೇರಿ ದಸರಾ ನಡೆಸಿರುವ ಬಗ್ಗೆ ಸಮಗ್ರ 'ದಾಖಲೀಕರಣ' ಮಾಡಲಾಗುವುದು ಎಂದು ತಿಳಿಸಿದರು.

ಮಡಿಕೇರಿ ಮತ್ತು ಮೈಸೂರು ದಸರಾ ಉತ್ಸವ ಆಚರಣೆಗೆ ಸಾಕಷ್ಟು ವ್ಯತ್ಯಾಸಗಳಿದೆ. ಆದರೆ, ಮಡಿಕೇರಿ ದಸರಾ ಯಾವ ರೀತಿ ಆರಂಭವಾಯಿತು. ಬದಲಾವಣೆ ಹೇಗೆ ತೆರೆದುಕೊಂಡಿತು ಎನ್ನುವ ಬಗ್ಗೆ ದಾಖಲೆಗಳಿಲ್ಲ. ಈ ಹಿನ್ನೆಲೆಯಲ್ಲಿ ಮಡಿಕೇರಿ ದಸರಾ ಯಾವ ರೀತಿ ನಡೆದಿದೆ. ಶೋಭಾಯಾತ್ರೆಯ ಮಂಟಪಗಳಲ್ಲಿ ಪ್ರದರ್ಶಿಸಲ್ಪಡುವ ಪೌರಾಣಿಕ ವಿಷಯ, ಸ್ಥಳೀಯ ಸಂಸ್ಕೃತಿ ಪ್ರತಿಬಿಂಬಿಸುವ ವಿಚಾರಗಳನ್ನು ದಾಖಲಿಸುವುದು ಅವಶ್ಯ. ಈ ಪುಸ್ತಕ ಮುಂದೆ ದಸರಾ ಉತ್ಸವ ಆಚರಿಸುವವರಿಗೆ ಮಾರ್ಗದರ್ಶಕವಾಗಲಿದೆ ಎಂದು ಅಭಿಪ್ರಾಯಪಟ್ಟರು.

ದಸರಾ ಪ್ರಚಾರದಲ್ಲಿ ಸೋತಿದ್ದೇವೆ: ಪತ್ರಕರ್ತ ಹೆಚ್.ಟಿ.ಅನಿಲ್ ಮಾತನಾಡಿ, ಮಡಿಕೇರಿ ದಸರಾ ಉತ್ಸವವನ್ನು ಸಮರ್ಪಕವಾಗಿ ಹೊರ ಜಿಲ್ಲೆ ಹಾಗೂ ರಾಜ್ಯಗಳಲ್ಲಿ ಪ್ರಚಾರಪಡಿಸುವಲ್ಲಿ ನಾವಿಂದು ಸೋತಿದ್ದೇವೆ. ವಿಶಿಷ್ಟವಾದ ಮಡಿಕೇರಿ ದಸರಾವನ್ನು ಬೆಂಗಳೂರು, ಚೆನ್ನೈ, ಮುಂಬೈಗಳಲ್ಲಿ ಪ್ರಚಾರ ಪಡಿಸುವ ಅಗತ್ಯವಿದೆ ಎಂದು ತಿಳಿಸಿದರು.

ಸನ್ಮಾನ: ಇದೇ ವೇಳೆ ಮಡಿಕೇರಿ ದಸರಾಕ್ಕೆ ಮಂಟಪಗಳ ಶೋಭಾಯಾತ್ರೆ ರೂಪುರೇಷೆ ನೀಡಿದ್ದ ದಿ.ಭೀಮ್ ಸಿಂಗ್ ಅವರ ಪುತ್ರಿ ಶಾರದಾ ಬಾಯಿ ಪರವಾಗಿ ಅವರ ಮಕ್ಕಳಾದ ರವಿ ಕುಮಾರ್ ಮತ್ತು ವಾಸಂತಿ ಅವರನ್ನು ಹಾಗೂ ದಸರಾ ಮಂಟಪಗಳಿಗೆ ವಿನೂತನ ವಿನ್ಯಾಸ ನೀಡಿದ್ದ ನಗರದ ಹಿರಿಯ ಶಿವರಾಮ್ ಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ಮಾಜಿ ಶಾಸಕ ಕೆ.ಜಿ.ಬೋಪಯ್ಯ, ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್, ಎಎಸ್‌ಪಿ ಕೆ.ಎಸ್.ಸುಂದರರಾಜ್, ಮಡಿಕೇರಿ ದಸರಾ ಸಮಿತಿ ಗೌರವಾಧ್ಯಕ್ಷ ಜಿ.ಚಿದ್ವಿಲಾಸ್, ಕಾರ್ಯಾಧ್ಯಕ್ಷ ಪ್ರಕಾಶ್ ಆಚಾರ್ಯ, ಪ್ರಧಾನ ಕಾರ್ಯದರ್ಶಿ ರಾಜೇಶ್ ಯಲ್ಲಪ್ಪ ಇತರರಿದ್ದರು.

ಟಿ.ಪಿ.ರಮೇಶ್‌ಗೆ ಪ್ರಶಸ್ತಿ ಪ್ರದಾನ



ಮಡಿಕೇರಿ, ಸೆ.30– ಕೊಡಗು ಜಿಲ್ಲಾ ಅಹಿಂದ ಒಕ್ಕೂಟದ ಸ್ಥಾಪಕಾಧ್ಯಕ್ಷ ಟಿ.ಪಿ.ರಮೇಶ್ ಅವರಿಗೆ ಮೈಸೂರಿನ ಅನ್ವೇಷಣಾ ಸೇವಾ ಟ್ರಸ್ಟ್ ವತಿಯಿಂದ 'ಧ್ವನಿ ಕೊಟ್ಟ ಧಣಿ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೈಸೂರಿನ ದಿ ಇನ್ಸಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಮಾಜಿ ಗೃಹ ಸಚಿವ ಪಿ.ಜಿ.ಆರ್.ಸಿಂಧ್ಯಾ, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಕುವೆಂಪು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಡಾ.ಕೆ.ಚಿದಾನಂದಗೌಡ ಹಾಗೂ ಅನ್ವೇಷಣಾ ಸೇವಾ ಟ್ರಸ್ಟ್‌ನ ಅಧ್ಯಕ್ಷ ಡಾ.ಎಂ.ಜಿ.ಆರ್.ಅರಸ್ ಪ್ರಶಸ್ತಿ ಪ್ರದಾನ ಮಾಡಿದರು.

ಕಾರ್ಯಕ್ರಮದಲ್ಲಿ ಅರಸು ಜಾಗೃತಿ ಅಕಾಡೆಮಿ ಚಾರಿಟಬಲ್ ಟ್ರಸ್ಟ್ ಉಪಾಧ್ಯಕ್ಷ ಹೆಚ್.ಎ.ವೆಂಕಟೇಶ್, ಮೈಸೂರಿನ ಕಾವೇರಿ ಬಳಗದ ಎನ್.ಕೆ.ಕಾವೇರಮ್ಮ ಮತ್ತಿತರರು ಹಾಜರಿದ್ದರು.

ರಾಜಯೋಗ ವಿದ್ಯಾರ್ಥಿಗಳಿಗೆ ಸನ್ಮಾನ...



ಚಾಮರಾಜನಗರದ ಪ್ರಕಾಶ ಭವನದಲ್ಲಿ ಏರ್ಪಡಿಸಿದ್ದ ಸ್ನೇಹ ಮಿಲನದ ವ್ಯಕ್ತಿತ್ವ ವಿಕಸನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ರಾಜಯೋಗ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜಿ, ಓಂ ಶಾಂತಿ ನ್ಯೂಸ್ ಸರ್ವೀಸ್‌ನ ಬಿ.ಕೆ.ಆರಾಧ್ಯ, ಪುಟ್ಟಶೇಖರ, ಮೂರ್ತಿ, ನಾಗರಾಜು, ಗೀತಾ, ಶಶಿ, ಶ್ರೀನಿವಾಸ್, ನಿರ್ಮಲಾ ಇದ್ದರು.

ಸ್ವಚ್ಛತೆಗೆ ಆದ್ಯತೆ ನೀಡುವುದು ಎಲ್ಲರ ಕರ್ತವ್ಯ



ಚಾಮರಾಜನಗರ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ರಾಷ್ಟ್ರೀಯ ಸ್ವಚ್ಛತಾ ಅಭಿಯಾನಕ್ಕೆ ನ್ಯಾಯಾಧೀಶೆ ಬಿ.ಎಸ್.ಭಾರತಿ ಚಾಲನೆ ನೀಡಿದರು.

ಚಾಮರಾಜನಗರ, ಸೆ.30–ಸ್ವಚ್ಛತೆಗೆ ಆದ್ಯತೆ ನೀಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ತಮ್ಮ ಸುತ್ತಲಿನ ಪರಿಸರ ಸ್ವಚ್ಛತೆ ಕಾಪಾಡಲು ಮುಂದಾಗಬೇಕು ಎಂದು ಜಿಲ್ಲಾ ಸೆಷನ್ಸ್ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶೆ ಬಿ.ಎಸ್.ಭಾರತಿ ತಿಳಿಸಿದರು.

ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ನಗರಸಭೆಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ವಚ್ಛತೆ ಎಂಬುದು ಮೊದಲು ಮನೆಯಿಂದಲೇ ಆಗಬೇಕು. ಹಸಿ ಮತ್ತು ಒಣ ಕಸವನ್ನು ವಿಂಗಡಿಸಿ, ಸ್ಥಳೀಯ ಸಂಸ್ಥೆಗಳ ವಾಹನಗಳಿಗೆ ನೀಡಬೇಕು. ಪೌರ ಕಾರ್ಮಿಕರು ಕೂಡ ಪ್ರತಿನಿತ್ಯ ಮನೆಗಳಿಗೆ ತೆರಳಿ ಸಾರ್ವಜನಿಕರಿಂದ ಕಸ ಸಂಗ್ರಹಣೆಯನ್ನು ಸಮರ್ಪಕವಾಗಿ ಮಾಡಬೇಕು ಎಂದರು.

ಇದೇ ವೇಳೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಈಶ್ವರ್, ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಿದರು. ನ್ಯಾಯಾಧೀಶ ಎಸ್.ಜೆ.ಕೃಷ್ಣ ಮಾತನಾಡಿದರು. ನ್ಯಾಯಾಧೀಶರಾದ ಬಿ.ಎಸ್.ಹೊನ್ನಸ್ವಾಮಿ, ಸುನೀಲ್, ಎನ್.ವೆಂಕಟೇಶ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಸ್.ನಂಜಯ್ಯ, ಪ್ರಧಾನ ಕಾರ್ಯದರ್ಶಿ ರಂಗಸ್ವಾಮಿ, ನಿಕಟ ಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್, ನ್ಯಾಯಾಲಯ ಸಿಬ್ಬಂದಿ, ವಕೀಲರು ಹಾಗೂ ನಗರಸಭೆ ಅಧಿಕಾರಿಗಳು, ಪೌರಕಾರ್ಮಿಕರು ಪಾಲ್ಗೊಂಡಿದ್ದರು.

ಮಹದೇಶ್ವರಬೆಟ್ಟದಲ್ಲಿ ವಿಶೇಷ ದಿನ ಕೊಠಡಿ ಖಾಲಿ ಇಲ್ಲ



ಎ.ಇ.ರಘು

ಹನೂರು: ಮಲೆಮಹದೇಶ್ವರಬೆಟ್ಟದಲ್ಲಿ ನಡೆಯಲ್ಲಿರುವ ಮಹಾಲಯ ಅಮಾವಾಸ್ಯೆ, ದಸರಾ ವಿಶೇಷ ದಿನ, ದೀಪಾವಳಿ ಜಾತ್ರಾ ಮಹೋತ್ಸವ ಮತ್ತು ಕಾರ್ತಿಕ ಸೋಮವಾರದ ವಿಶೇಷ ಪೂಜಾ ದಿನಗಳಂದು ಮಹದೇಶ್ವರಬೆಟ್ಟ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕೊಠಡಿಗಳು ಕಾಯ್ದಿರಿಸಲಾಗಿದ್ದು, ಯಾವುದೇ ಕೊಠಡಿಗಳು ಖಾಲಿ ಇರುವುದಿಲ್ಲ.

ರಾಜ್ಯ, ತಮಿಳುನಾಡು ಸೇರಿದಂತೆ ವಿವಿಧೆಡೆಯಿಂದ ಲಕ್ಷಾಂತರ ಭಕ್ತರು ಧಾರ್ಮಿಕ ಶ್ರೀಕ್ಷೇತ್ರಕ್ಕೆ ವಿಶೇಷ ದಿನ ಪೊಲೀಸ್, ಆರೋಗ್ಯ, ಸಾರಿಗೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸ್ವಚ್ಛತೆಗೆ ಆಗಮಿಸುವ ಸಿಬ್ಬಂದಿಗೆ ಮತ್ತು ಗಣ್ಯರಿಗೆ ಶಿಫಾರಸು ಮೇರೆಗೆ ಕೊಠಡಿಗಳನ್ನು ಕಾಯ್ದಿರಿಸಲಾಗಿದೆ. ಆದ್ದರಿಂದ ಕೊಠಡಿಗಳು ಖಾಲಿ ಇರುವುದಿಲ್ಲ.

ಮಹಾಲಯ ಅಮಾವಾಸ್ಯೆ ಅ.1 ರಿಂದ 3ರ ವರೆಗೆ, ದಸರಾ ವಿಶೇಷ ದಿನಗಳಾದ ಅ.10 ರಿಂದ 13ರವರೆಗೆ, ದೀಪಾವಳಿ ಜಾತ್ರೆ ಅ.29ರಿಂದ ನ.2ರ ವರೆಗೆ ಹಾಗೂ ಒಂದನೇ ಕಾರ್ತಿಕ ಸೋಮವಾರ ನ.3 ಮತ್ತು 4ರವರೆಗೆ, 2ನೇ ಕಾರ್ತಿಕ ಸೋಮವಾರ 10 ಮತ್ತು 11ರವರೆಗೆ, 3ನೇ ಕಾರ್ತಿಕ ಸೋಮವಾರ 17 ಮತ್ತು 18ರವರೆಗೆ, 4ನೇ ಕಾರ್ತಿಕ ಸೋಮವಾರ 24 ಮತ್ತು 25ರವರೆಗೆ, ಎಣ್ಣೆ ಮಜ್ಜನ ಸೇವೆ ಹಾಗೂ ಅಮಾವಾಸ್ಯೆ ದಿನವಾದ ನ.29 ರಿಂದ ಡಿ.2ರವರೆಗೆ ನಡೆಯುವ ಜಾತ್ರೆ, ವಿಶೇಷ ದಿನಗಳಲ್ಲಿ ಶ್ರೀಕ್ಷೇತ್ರದಲ್ಲಿ ಕೊಠಡಿಗಳನ್ನು ಈಗಾಗಲೇ ಕಾಯ್ದಿರಿಸಲಾಗಿದೆ. ಆದ್ದರಿಂದ ಯಾವುದೇ ಕೊಠಡಿಗಳು ಖಾಲಿ ಇರುವುದಿಲ್ಲ ಎಂದು ಕ್ಷೇತ್ರಾಭಿವೃದ್ಧಿ ಪ್ರಾಧಿಕಾರ ಕಾರ್ಯದರ್ಶಿ ಎ.ಇ.ರಘು ತಿಳಿಸಿದ್ದಾರೆ.

ಶುಲ್ಕ ವಂಚನೆ ತಡೆಗೆ ವಿಚಕ್ಷಣ ದಳ ಸ್ಥಾಪಿಸಿ

● ಎಪಿಎಂಸಿ ಅಧಿಕಾರಿಗಳಿಗೆ ಸಚಿವ ಶಿವಾನಂದ ಪಾಟೀಲ ಸೂಚನೆ ● ಚಾ.ನಗರ ಎಪಿಎಂಸಿಗೆ ದಿಢೀರ್ ಭೇಟಿ



ಸಂತೆಮರಹಳ್ಳಿ ಉಪಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿದ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರನ್ನು ಶಾಸಕ ಕೃಷ್ಣಮೂರ್ತಿ ಸನ್ಮಾನಿಸಿದರು.

ಚಾಮರಾಜನಗರ, ಸೆ.30–ಜಿಲ್ಲೆಯಿಂದ ಹೊರ ರಾಜ್ಯಗಳ ಮಾರುಕಟ್ಟೆಗೆ ಎಷ್ಟು ಪ್ರಮಾಣದಲ್ಲಿ ಎಳನೀರು ಮತ್ತು ಬಾಳೆಕಾಯಿ ರವಾನೆಯಾಗುತ್ತಿದೆ ಎಂಬ ಮಾಹಿತಿ ಸಂಗ್ರಹಿಸಲು ಹಾಗೂ ಶುಲ್ಕ ವಂಚನೆ ತಡೆಗೆ ಜಿಲ್ಲೆಯಲ್ಲಿ ವಿಚಕ್ಷಣ ದಳ ಸ್ಥಾಪಿಸಿ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಚಾಮರಜನಗರ ಎಪಿಎಂಸಿ ಮತ್ತು ಸಂತೆಮರಹಳ್ಳಿ ಉಪಮಾರುಕಟ್ಟೆ ಪ್ರಾಂಗಣಕ್ಕೆ ದಿಢೀರ್ ಭೇಟಿ ನೀಡಿ, ಎಪಿಎಂಸಿ ಸದಸ್ಯರು, ರೈತ ಸಂಘದ ಮುಖಂಡರು ಹಾಗೂ ವರ್ತಕರ ಅಹವಾಲು ಸ್ವೀಕರಿಸಿ ಮಾತನಾಡಿದ ಸಚಿವರು, ಪ್ರತಿದಿನ ಜಿಲ್ಲೆಯಿಂದ ಸುಮಾರು 40 ಲಾರಿ ಎಳನೀರು, ಹಾಗೆಯೇ ಬಾಳೆಕಾಯಿ ಹೊರ ರಾಜ್ಯಗಳಿಗೆ ಹೋಗುತ್ತಿದೆ ಎಂಬ ಮಾಹಿತಿ ಇದೆ. ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡಿದರೆ ಎಪಿಎಂಸಿಗೆ ವಂಚನೆಯಾಗುತ್ತಿರುವ ಶುಲ್ಕ ಸಂಗ್ರಹ ಮಾಡಬಹುದು. ಬಾಳೆಕಾಯಿ ಸೇರಿದಂತೆ ಎಲ್ಲಾ ತೋಟಗಾರಿಕೆ ಉತ್ಪನ್ನ, ತರಕಾರಿ ಖರೀದಿ ಚಟುವಟಿಕೆಗಳು ಎಪಿಎಂಸಿ ಆವರಣದಲ್ಲೇ ನಡೆಯುವಂತೆ ಪ್ರಯತ್ನಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಿಂದ ಎಳನೀರು ಮತ್ತು ಬಾಳೆಕಾಯಿ ಗರಿಷ್ಠ ಪ್ರಮಾಣದಲ್ಲಿ ಹೊರ ರಾಜ್ಯಗಳ ಮಾರುಕಟ್ಟೆಗೆ ಹೋಗುತ್ತಿದೆ ಎಂದು ಗಮನಕ್ಕೆ ಬಂದಿದೆ. ರೈತರು ಗರಿಷ್ಠ ಪ್ರಮಾಣದಲ್ಲಿ ತಮ್ಮ ಉತ್ಪನ್ನಗಳನ್ನು ಎಪಿಎಂಸಿ ಆವರಣದಲ್ಲೇ ಮಾರಾಟ ಮಾಡುವಂತೆ ನೋಡಿಕೊಳ್ಳಬೇಕು. ರೈತರ ಹಿತದೃಷ್ಟಿಯಿಂದ ಎಪಿಎಂಸಿ ಕಾಯ್ದೆ ಮರುಸ್ಥಾಪಿಸಲಾಗಿದೆ. ರೈತರು, ಖರೀದಿದಾರರಿಗೆ ಶೋಷಣೆಯಾಗದಂತೆ ಕಾಯ್ದೆ ಜಾರಿಗೊಳಿಸಲಾಗಿದೆ ಎಂದು ಹೇಳಿದರು.

ಮಾರ್ಚ್‌ನಲ್ಲೇ ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಾಗಿದೆ. ಆದರೆ, ಚಾಮರಾಜನಗರ ಎಪಿಎಂಸಿ ನಿರೀಕ್ಷಿತ ಪ್ರಮಾಣದಲ್ಲಿ ಪ್ರಗತಿ ಸಾಧಿಸಿಲ್ಲ. ಮಾರುಕಟ್ಟೆಗೆ ಕೃಷಿ ಉತ್ಪನ್ನಗಳು ಬರುತ್ತಿಲ್ಲ. ಕಾಯ್ದೆ ಮರುಸ್ಥಾಪನೆ ಉದ್ದೇಶ ಅರ್ಥ ಮಾಡಿಕೊಂಡು ಕೆಲಸ ಮಾಡಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಇದೇ ವೇಳೆ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ಎಪಿಎಂಸಿಯಲ್ಲಿನ ನ್ಯೂನತೆಗಳನ್ನು ಸಚಿವರ ಗಮನಕ್ಕೆ ತಂದರು. ಎಳನೀರು ಮತ್ತು ಬಾಳೆಕಾಯಿ ಗರಿಷ್ಠ ಪ್ರಮಾಣದಲ್ಲಿ ಹೊರ ರಾಜ್ಯಗಳಿಗೆ ಹೋಗುತ್ತಿರುವುದು ನಿಜ. ಈ ಬಗ್ಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಎಂದು ಹೇಳಿದರು.

ಸಂತೇಮರಹಳ್ಳಿ ಉಪಪ್ರಾಂಗಣದಲ್ಲಿ ಪ್ರತಿ ಮಂಗಳವಾರ ಸಂತೆ ನಡೆಯುವುದು ಬಿಟ್ಟರೆ, ಇತರೆ ದಿನಗಳಲ್ಲಿ ಖರೀದಿ ಚಟುವಟಿಕೆಗಳು ಇರುವುದಿಲ್ಲ ಎಂದು ರೈತ ಸಂಘದ ಮುಖಂಡರು ಸಚಿವರ ಗಮನಕ್ಕೆ ತಂದರು. ಗರಿಷ್ಠ ಪ್ರಮಾಣದಲ್ಲಿ ಬೆಲ್ಲ ಮತ್ತು ಎಳನೀರು ಬೇರೆ ಮಾರುಕಟ್ಟೆಗೆ ಹೋಗುತ್ತಿವೆ. ವಾರದಲ್ಲಿ ಮೂರು ದಿನ ಬೆಲ್ಲ ಮತ್ತು ಎಳನೀರು ವಹಿವಾಟಿಗೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ನಂತರ ಸ್ಥಳದಲ್ಲೇ ಇದ್ದ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಸಚಿವರು, ಬೆಲ್ಲ ಮತ್ತು ಎಳನೀರು ವಹಿವಾಟು ಆರಂಭಿಸಿ, ಆರಂಭದಲ್ಲಿ ನಿರೀಕ್ಷಿತ ಮಟ್ಟದಲ್ಲಿ ವಹಿವಾಟು ನಡೆಯದಿದ್ದರೂ ಕ್ರಮೇಣ ಸುಧಾರಣೆಯಾಗಲಿದೆ ಎಂದು ಹೇಳಿದರು.

2023–24ನೇ ಸಾಲಿನಲ್ಲಿ 17.44 ಲಕ್ಷ ರೂ. ಮಾರುಕಟ್ಟೆ ಶುಲ್ಕ ಸಂಗ್ರಹವಾಗಿತ್ತು. ಈ ಬಾರಿ ಏಪ್ರಿಲ್‌ನಿಂದ ಇದುವರೆಗೆ 33.49 ಲಕ್ಷ ರೂ. ಸಂಗ್ರಹವಾಗಿದೆ ಎಂದು ಎಪಿಎಂಸಿ ಕಾರ್ಯದರ್ಶಿ ಟಿ.ವಿ.ಪ್ರಕಾಶ್ ಕುಮಾರ್ ಮಾಹಿತಿ ನೀಡಿದರು.

ಎಪಿಎಂಸಿ ಅಧ್ಯಕ್ಷ ಎಚ್.ಎನ್. ಮಹದೇವಸ್ವಾಮಿ, ಉಪಾಧ್ಯಕ್ಷ ರಾಮಚಂದ್ರ, ಗ್ಯಾರಂಟಿ ಯೋಜನೆ ಅನುಷ್ಠಾನ ಜಿಲ್ಲಾಧ್ಯಕ್ಷ ಎಚ್.ವಿ.ಚಂದ್ರು, ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು.

10 ಕೋಟಿ ಅನುದಾನ ಬಿಡುಗಡೆ

ಸಂತೆಮರಹಳ್ಳಿ ಉಪಮಾರುಕಟ್ಟೆ ಪ್ರಾಂಗಣದ ಅಭಿವೃದ್ಧಿಗೆ 10 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದರು.

ಉಪಪ್ರಾಂಗಣದಲ್ಲಿ ಹಲವಾರು ಸಮಸ್ಯೆಗಳಿವೆ. ಕೃಷಿ ಉತ್ಪನ್ನಗಳ ದಾಸ್ತಾನಿಗೆ ಸೌಲಭ್ಯ ಇಲ್ಲ. ಮೂಲಸೌಕರ್ಯದ ಕೊರತೆ ಇದೆ. ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿ ಎಂದು ಶಾಸಕ ಕೃಷ್ಣಮೂರ್ತಿ ಸದನದಲ್ಲಿ ಮನವಿ ಮಾಡಿದ್ದರು. ಉಪಮಾರುಕಟ್ಟೆ ಪ್ರಾಂಗಣಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು, ರಸ್ತೆ ಅಭಿವೃದ್ಧಿ, ಕುಡಿಯುವ ನೀರು, ವಿದ್ಯುತ್ ದೀಪ ಸೌಲಭ್ಯ ಗೋದಾಮುಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಇದೇ ವೇಳೆ ಪ್ರಾಂಗಣದಲ್ಲಿ ಖಾಲಿ ಇರುವ ಮಳಿಗೆಗಳನ್ನು ತಕ್ಷಣ ಹಂಚಿಕೆ ಮಾಡಿ ಎಂದು ಕಾರ್ಯದರ್ಶಿಗೆ ಸೂಚಿಸಿದರು. ಸಚಿವರು ಚಾಮರಾಜನಗರ ಎಪಿಎಂಸಿಯಿಂದ ಸಂತೇಮರಹಳ್ಳಿ ಉಪಪ್ರಾಂಗಣಕ್ಕೆ ಭೇಟಿ ನೀಡಲು ತೆರಳುತ್ತಿರುವ ವೇಳೆ ಲಾರಿಗಳಲ್ಲಿ ಹೊರ ರಾಜ್ಯಗಳಿಗೆ ಎಳನೀರು ಸಾಗಿಸುತ್ತಿರುವುದು ಗಮನಕ್ಕೆ ಬಂತು. ತಕ್ಷಣ ಅಧಿಕಾರಿಗಳಿಗೆ ಕರೆ ಮಾಡಿದ ಸಚಿವರು, ಎಲ್ಲಿಗೆ ಪೂರೈಕೆಯಾಗುತ್ತಿದೆ. ಮಾರುಕಟ್ಟೆ ಶುಲ್ಕ ಪಾವತಿ ಆಗಿದೆಯಾ? ಪರಿಶೀಲಿಸಿ ಮಾಹಿತಿ ಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಪ್ರತಿದಿನ ಜಿಲ್ಲೆಯಿಂದ ಎಷ್ಟು ಎಳನೀರು ಮತ್ತು ಬಾಳೆಕಾಯಿ ಹೋಗುತ್ತಿದೆ ಎಂಬ ಮಾಹಿತಿಯೂ ಬೇಕು ಎಂದು ಹೇಳಿದರು.

ಹೃದಯಾಘಾತದಿಂದ ವ್ಯಕ್ತಿ ಸಾವು



ಚಾಮರಾಜನಗರ: ದೇವರ ಮೆರವಣಿಗೆಯಲ್ಲಿ ಡಿಜೆ ಸೌಂಡ್‌ಗೆ ಕುಣಿಯುತ್ತಿದ್ದ ವ್ಯಕ್ತಿ ಹೃದಯಾಘಾತದಿಂದ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಮೂಡ್ನಾ ಕೂಡು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಬಾಬು (42) ಮೃತಪಟ್ಟ ವ್ಯಕ್ತಿ. ಗ್ರಾಮದಲ್ಲಿ ಗೌರಿ ವಿಸರ್ಜನೆ ಅಂಗವಾಗಿ ನಡೆಯುತ್ತಿದ್ದ ಬಸವೇಶ್ವರ ದೇವರ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ಬಾಬು ಜಾನಪದ ಕಲಾತಂಡಗಳೊಂದಿಗೆ ಡಿಜೆ ಸೌಂಡ್‌ಗೆ ಕುಣಿಯುತ್ತಿದ್ದರು. ಈ ವೇಳೆ ಏಕಾಏಕಿ ಹೃದಯಾಘಾತದಿಂದ ಸ್ಥಳದಲ್ಲೇ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ.

ಸಮಾಜಕ್ಕೆ ಡಾ.ಶಿವರಾತ್ರಿ ರಾಜೇಂದ್ರ ಶ್ರೀಗಳ ಕೊಡುಗೆ ಅಪಾರ



ಗುಂಡ್ಲುಪೇಟೆ ಜೆಎಸ್‌ಎಸ್ ಅನುಭವ ಮಂಟಪದಲ್ಲಿ ಆಯೋಜಿಸಿದ್ದ ರಾಜೇಂದ್ರಶ್ರೀಗಳ ಜಯಂತಿ ಕಾರ್ಯಕ್ರಮವನ್ನು ಮಾಜಿ ಶಾಸಕ ಸಿ.ಎಸ್.ನಿರಂಜನಕುಮಾರ್ ಉದ್ಘಾಟಿಸಿದರು.

ಗುಂಡ್ಲುಪೇಟೆ, ಸೆ.30–ಡಾ.ರಾಜೇಂದ್ರಶ್ರೀಗಳು ಸಮಾಜಕ್ಕೆ ನೀಡಿದ ಕೊಡುಗೆ ಅಪಾರ ಎಂದು ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಸ್ಮರಿಸಿದರು.

ಪಟ್ಟಣದ ಜೆಎಸ್‌ಎಸ್ ಅನುಭವ ಮಂಟಪದಲ್ಲಿ ಆಯೋಜಿಸಿದ್ದ ರಾಜೇಂದ್ರ ಶ್ರೀ ಜಯಂತಿ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜೆಎಸ್‌ಎಸ್ ಸಂಸ್ಥೆಗೆ ಗುಂಡ್ಲುಪೇಟೆ ಬಗ್ಗೆ ವಿಶೇಷ ಕಾಳಜಿಯಿದೆ. ತಾಲೂಕಿನ ಸಾವಿರಾರು ಯುವಕರಿಗೆ ಸಂಸ್ಥೆಯಲ್ಲಿ ಉದ್ಯೋಗ ನೀಡಿದ್ದಾರೆ. ದೇಶ–ವಿದೇಶಗಳಲ್ಲೂ ಜೆಎಸ್‌ಎಸ್ ಸಂಸ್ಥೆ ಶಿಕ್ಷಣ ಹಾಗೂ ಆರೋಗ್ಯಕ್ಕೆ ಆಶ್ರಮಿಸುತ್ತಿದೆ. ಅಂದಿನಕಾಲದಲ್ಲೇ ರಾಜೇಂದ್ರಶ್ರೀಗಳು ಅನ್ನದಾಸೋಹ ಜೊತೆಗೆ ಜ್ಞಾನ ಹಾಗೂ ಆರೋಗ್ಯ ದಾಸೋಹ ನೀಡುವ ಮೂಲಕ ಸಮಾಜಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಮಾಜಿ ಶಾಸಕ ಸಿ.ಎಸ್.ನಿರಂಜನಕುಮಾರ್ ಮಾತನಾಡಿ, ರಾಜೇಂದ್ರಶ್ರೀಗಳ ದೂರದೃಷ್ಟಿ ಪರಿಣಾಮ ಗ್ರಾಮಾಂತರ ಪ್ರದೇಶಗಳಲ್ಲಿ ಶಾಲಾ–ಕಾಲೇಜು ತೆರೆದು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ, ಉದ್ಯೋಗ ದೊರಕುವಂತಾಗಿದೆ. ಆಸ್ಪತ್ರೆಗಳ ಮೂಲಕ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ದೊರಕಿಸಿದ್ದಾರೆ ಎಂದು ಹೇಳಿದರು.

ಜೆಎಸ್‌ಎಸ್ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಪಿ.ಮಂಜುನಾಥ್ ಮಾತನಾಡಿದರು. ಚಿಕ್ಕತುಪ್ಪೂರು ಶಿವಪೂಜಾ ಮಠದ ಶ್ರೀ ಚನ್ನವೀರಸ್ವಾಮೀಜಿ, ಗೋಪಾಲಪುರ ಕಬ್ಬಿನ ಕೋಲೇಶ್ವರ ಮಠದ ಶ್ರೀ ಗಂಗಾಧರ ಸ್ವಾಮೀಜಿ, ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಮೂಡ್ಲುಪುರ ನಂದೀಶ್, ತಾಲೂಕು ಅಧ್ಯಕ್ಷ ಕಮರಹಳ್ಳಿ ರವಿ, ಪ್ರಾಂಶುಪಾಲೆ ಡಾ.ಮಹದೇವಮ್ಮ, ಕಾಡಾ ಮಾಜಿ ಅಧ್ಯಕ್ಷ ಹೆಚ್.ಎಸ್.ನಂಜಪ್ಪ, ಕೆ.ಎಸ್.ಮಹೇಶ್, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶರಣ ಪ್ರಕಾಶ್ ಮತ್ತಿತರರಿದ್ದರು.

ಇದೇ ವೇಳೆ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಅಂಬಾರಿ ಆನೆ ಸಾಹಸಿ ಅರ್ಜುನ ಸ್ಮರಣೆ; ಮಾದಪ್ಪನಿಗೆ ಉಘೇ; ಕಾಂತಾರ ದೈವ ನರ್ತನಕ್ಕೆ ಯುವ ಸಂಭ್ರಮದಲ್ಲಿ ಭರ್ಜರಿ ರೆಸ್ಪಾನ್ಸ್...



ಬೆಂಗಳೂರಿನ ವಿವಿಎನ್ ಪದವಿ ಕಾಲೇಜು ವಿದ್ಯಾರ್ಥಿಗಳಿಂದ ಕಾಂತಾರ ದೈವ ನರ್ತನ

ಇಂದು ಯುವ ಸಂಭ್ರಮಕ್ಕೆ ತೆರೆ

ಮೈಸೂರು, ಸೆ.30(ಎಂಕೆ)– ಅಂಬಾರಿ ಆನೆ ಅರ್ಜುನಾಗೆ ಬಹುಪರಾಕ್... ಏಳು ಮಲೆ ಮಾಯಾಕಾರ ಮಾದಪ್ಪನಿಗೆ ಉಘೇ... ಎಂದ ವಿದ್ಯಾರ್ಥಿಗಳ ಕಾಂತಾರ ದೈವ ನರ್ತನ ಯುವ ಸಂಭ್ರಮದಲ್ಲಿ ಮಿಂಚು ಹರಿಸಿತು...!

ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಮೈಸೂರು ವಿವಿ ಮಾನಸ ಗಂಗೋತ್ರಿ ಬಯಲು ರಂಗಮಂದಿರ ಸಾಂಸ್ಕೃತಿಕ ವೇದಿಕೆಯಲ್ಲಿ ನಡೆಯುತ್ತಿರುವ ದಸರಾ ಯುವ ಸಂಭ್ರಮದ 7ನೇ ದಿನವಾದ ಸೋಮವಾರ 9 ಬಾರಿ ಚಿನ್ನದ ಅಂಬಾರಿ ಹೊತ್ತು ಕನ್ನಡಿಗರ ಮನಗೆದ್ದ ಅರ್ಜುನ ಆನೆಗೆ ನೃತ್ಯ ಸಮರ್ಪಣೆ ಮಾಡಿದ ವಿವಿಧ ಕಾಲೇಜು ತಂಡದ ವಿದ್ಯಾರ್ಥಿಗಳು, ಮಲೈ ಮಹದೇಶ್ವರನ ಸ್ಮರಿಸುತ್ತಾ ಕಾಲಿಗೆ ಕಟ್ಟಿದ್ದ ಗೆಜ್ಜೆಯನ್ನು ಗಲ್ ಗಲ್ ಎನಿಸಿದರು.

ದೇವ ಶ್ರೀ ಗಣೇಶ ಎನ್ನುತ್ತಲೇ ರಾಮ, ರಾವಣ, ಹನುಮಂತ, ಭದ್ರಕಾಳಿ ನೃತ್ಯದ ನಡುವೆ ಪರಿಸರ ಜಾಗೃತಿ ಹಾಗೂ ವಿವಿಧತೆಯಲ್ಲಿ ಏಕತೆ ಸಾರುವ ಮೇರಾ ಭಾರತ್ ಮಹಾನ್ ಪ್ರತಿಧ್ವನಿಯೊಂದಿಗೆ ಸ್ವಾತಂತ್ರ್ಯ ವೀರ ವನಿತೆಯರ ಸಾಹಸ, ಶೌರ್ಯವನ್ನು ಸ್ಮರಿಸಲಾಯಿತು.

ಮಳವಳ್ಳಿಯ ಶಾಂತಿ ಕಲಾ ಮತ್ತು ವಾಣಿಜ್ಯ ಕಾಲೇಜು, ಕೆ.ಆರ್.ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಹೆಚ್.ಡಿ.ಕೋಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ದಸರಾ ಅಂಬಾರಿ ಆನೆ ಅರ್ಜುನ ಸಾಧನೆ ಸ್ಮರಣೆಯೊಂದಿಗೆ ತಮ್ಮ ಅಮೋಘ ನೃತ್ಯವನ್ನು ಅರ್ಜುನನಿಗೆ ಸಮರ್ಪಣೆ ಮಾಡಿದರು.

ಹೆಚ್.ಡಿ.ಕೋಟೆಯ ಮಾದಾಪುರ ಎಸ್‌ಸಿಎಂಎಸ್ ಪದವಿ ಪೂರ್ವ ಕಾಲೇಜು, ವಿದ್ಯಾ ಸಿಂಚನ ಕಾಲೇಜು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಸತಿ ಕಾಲೇಜು ಹಾಗೂ ಚಾ.ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು, ಮಹದೇಶ್ವರ ಬೆಟ್ಟದ ಮಹದೇಶ್ವರನಿಗೆ ಶರಣು ಶರಣಯ್ಯ ಎನ್ನುತ್ತಲೇ ಏಳು ಮಲೆ ಮಾಯಾಕಾರನಿಗೆ ಉಘೇ ಎಂದರು. ನೆಲ ಮೂಲ ಜಾನಪದ ಕಲೆಗಳನ್ನು ಅನಾವರಣಗೊಳಿಸಿ ಯುವ ಸಮೂಹ ತಮಟೆ ಸದ್ದಿಗೆ ಕುಣಿಯುವಂತೆ ಮಾಡಿದರು.

ದೈವ ನರ್ತನ: ಬೆಂಗಳೂರಿನ ವಿವಿಎನ್ ಪದವಿ ಕಾಲೇಜು ವಿದ್ಯಾರ್ಥಿಗಳು 'ಕಾಂತಾರ' ಚಿತ್ರ ದೈವ ನರ್ತನದ ಮೂಲಕ ವರಾಹ ಆರಾಧನೆ ಮಾಡಿದರು. ಹಾಗೆಯೇ ಕೊಪ್ಪ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮೈಸೂರಿನ ಎಟಿಎಂಇ ಇಂಜಿನಿಯರಿಂಗ್ ಕಾಲೇಜು, ಜೆಎಸ್‌ಎಸ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ ಫಾರ್ ವುಮೆನ್ ಹಾಗೂ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಕಾಲೇಜು ವಿದ್ಯಾರ್ಥಿಗಳು ದುರ್ಗೆ, ಕಾಳಿ, ಗಣಪತಿ, ರಾಮ, ರಾವಣ ಹಾಗೂ ಆಂಜನೇಯ ಕುರಿತ ನೃತ್ಯ ರೂಪಕಗಳನ್ನು ಪ್ರಸ್ತುತಪಡಿಸಿ ಸೈ ಎನಿಸಿಕೊಂಡರು.

ವೀರ ವನಿತೆಯರ ಸ್ಮರಣೆ: ಸ್ವಾತಂತ್ರ್ಯ ವೀರ ವನಿತೆಯರಾದ ಕಿತ್ತೂರು ರಾಣಿ ಚೆನ್ನಮ್ಮ, ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಹಾಗೂ ಒನಕೆ ಓಬವ್ವರ ಸಾಹಸ, ಶೌರ್ಯವನ್ನು ಹೆಚ್.ಡಿ.ಕೋಟೆಯ ಎಂಎಂಕೆ ಇಂಡಿಪೆಂಡೆಂಟ್ ಕಾಲೇಜು ವಿದ್ಯಾರ್ಥಿಗಳು ಅನಾವರಣಗೊಳಿಸಿದರು. ಶ್ರೀಕಂಠೇಶ್ವರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಕನ್ನಡ ಕಂಪು ಪಸರಿಸಿದರೆ, ಮೇಲುಕೋಟೆ ಎಸ್‌ಐಟಿ ಪಾಲಿಟೆಕ್ನಿಕ್ ಕಾಲೇಜು ಹಾಗೂ ಮೈಸೂರಿನ ಪೊಲೀಸ್ ಪಬ್ಲಿಕ್ ಸ್ಕೂಲ್ ವಿದ್ಯಾರ್ಥಿಗಳು ಮೇರಾ ಭಾರತ್ ಮಹಾನ್ ಮಂತ್ರದೊಂದಿಗೆ ರಾಷ್ಟ್ರೀಯ ಭಾವೈಕ್ಯತೆ ಮೆರೆದರು.

ಹಸಿರು ಶಾಲು: ಮೈಸೂರಿನ ರಾಜೀವ್ ನಗರದ ಸಂಬುದ್ಧ ಸ್ವತಂತ್ರ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು, ರೈತ ಅನ್ನ ಕೊಡುವ ದಾತ ಎನ್ನುತ್ತಾ ರೈತ ಸಂಕೇತ ಹಸಿರು ಶಾಲನ್ನು ಗಾಳಿಯಲ್ಲಿ ಬೀಸುತ್ತಾ ನೃತ್ಯಾಭಿನಯ ಪ್ರದರ್ಶನ ನೀಡಿದರೆ, ಕೆ.ಆರ್.ಪೇಟೆ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿನಿಯರು ಡಾ.ಬಿ.ಆರ್.ಅಂಬೇಡ್ಕರ್ ಯಶೋಗಾಥೆ ಸ್ಮರಿಸಿದರು. ಯುವ ಸಂಭ್ರಮಕ್ಕೆ ನಾಳೆ(ಅ.1) ತೆರೆ ಬೀಳಲಿದೆ.



ಎಟಿಎಂಇ ಇಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿಗಳ ಭಜರಂಗಿ ನೃತ್ಯ

ಯುವ ಸಂಭ್ರಮ ವಿಸ್ತರಣೆ...!

ಮೈಸೂರು ದಸರಾ ಮಹೋತ್ಸವ ಸಾಂಸ್ಕೃತಿಕ ಮುನ್ನುಡಿ ಯುವ ಸಂಭ್ರಮ ನೃತ್ಯ–ಸಂಗೀತ ಕಾರ್ಯಕ್ರಮವನ್ನು ಒಂದು ದಿನ ವಿಸ್ತರಿಸಲಾಗಿದೆ. ಸೋಮವಾರಕ್ಕೆ ಮುಕ್ತಾಯವಾಗಬೇಕಿದ್ದ ಯುವ ಸಂಭ್ರಮ ನಾಳೆ(ಅ.1) ರಂದು ತೆರೆಕಾಣಲಿದೆ. 400ಕ್ಕೂ ಹೆಚ್ಚು ಕಾಲೇಜುಗಳು ಯುವ ಸಂಭ್ರಮದಲ್ಲಿ ಭಾಗವಹಿಸಿದ್ದರಿಂದ ಒಂದು ದಿನ ಹೆಚ್ಚುವರಿಯಾಗಿ ಕಾರ್ಯಕ್ರಮ ನಡೆಯಲಿದೆ. ಕಡೆಯ ದಿನವೂ 60 ಕ್ಕೂ ಹೆಚ್ಚು ಕಾಲೇಜು ತಂಡಗಳು ನೃತ್ಯ ಪ್ರದರ್ಶನ ನೀಡಲಿವೆ ಎಂದು ದಸರಾ ಯುವ ಸಂಭ್ರಮ ಉಪಸಮಿತಿ ಅಧ್ಯಕ್ಷ ಡಾ.ಗುರುಮೂರ್ತಿ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಪರಿಸರ ಉಳಿಸಿ...

ಮೈಸೂರಿನ ಬನುಮಯ್ಯ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಪ್ರಕೃತಿಗೆ ನಮಿಸುತ್ತಾ ಪರಿಸರ, ವನ್ಯಜೀವಿ ಉಳಿವಿಗೆ ಅರಣ್ಯ ಸಂಪತ್ತನ್ನು ನಾಶಪಡಿಸಬೇಡಿ. ಕಡ್ಡಾಯವಾಗಿ ಪ್ಲಾಸ್ಟಿಕ್ ಬಳಸಬೇಡಿ ಎಂಬ ಸಂದೇಶವನ್ನು ಅಮೋಘ ನೃತ್ಯ ಸಂಯೋಜನೆ ಮೂಲಕ ಪ್ರಸ್ತುತಪಡಿಸಿ, ಅಪಾರ ಮೆಚ್ಚುಗೆ ಪಡೆದರು.



ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಯಶೋಗಾಥೆ ಸ್ಮರಿಸಿದ ಕೆ.ಆರ್.ಪೇಟೆ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಂಡ



ಪರಿಸರ ಉಳಿಸಿ ಅರಿವು ನೃತ್ಯ ಪ್ರದರ್ಶಿಸಿದ ಬನುಮಯ್ಯ ಪದವಿ ಪೂರ್ವ ಕಾಲೇಜು ತಂಡ

ಭಾರತೀಯ ಹಾಕಿ ತಂಡದ ನಾಯಕ ಹರ್ಮನ್‌ಪ್ರಿತ್‌ಸಿಂಗ್ ದಸರಾ ಸಿಎಂ ಕಪ್ ಕ್ರೀಡಾಕೂಟದ ಮುಖ್ಯ ಅತಿಥಿ

64 ಲಕ್ಷ ರೂ. ನಗದು ಬಹುಮಾನ ಘೋಷಣೆ



ದಸರಾ ಸಿಎಂ ಕಪ್ ಕ್ರೀಡಾಕೂಟ ಕುರಿತು ನಡೆದ ಸುದ್ದಿಗೋಷ್ಠಿಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಂಟಿ ನಿರ್ದೇಶಕ ಡಾ.ಜಿತೇಂದ್ರ ಶೆಟ್ಟಿ, ಸಹಾಯಕ ನಿರ್ದೇಶಕ ಭಾಸ್ಕರ ನಾಯಕ, ವಸಂತ್ ಕುಮಾರ್ ಇದ್ದರು.

ಮೈಸೂರು, ಸೆ.30(ಎಂಕೆ)– ದಸರಾ ಸಿಎಂ ಕಪ್ ಕ್ರೀಡಾಕೂಟದ ಮುಖ್ಯ ಅತಿಥಿಯಾಗಿ ಭಾರತೀಯ ಹಾಕಿ ತಂಡದ ನಾಯಕ ಹರ್ಮನ್‌ಪ್ರಿತ್ ಸಿಂಗ್ ಭಾಗವಹಿಸಲಿದ್ದು, ವಿಜೇತ ಕ್ರೀಡಾಪಟುಗಳಿಗೆ ನೀಡಲು ಸುಮಾರು 64 ಲಕ್ಷ ರೂ. ನಗದು ಬಹುಮಾನ ನೀಡುವುದಾಗಿ ಭರವಸೆ ದೊರೆತಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಂಟಿ ನಿರ್ದೇಶಕ ಹಾಗೂ ದಸರಾ ಕ್ರೀಡಾಕೂಟ ಉಪಸಮಿತಿಯ ಕಾರ್ಯಾಧ್ಯಕ್ಷ ಡಾ.ಜಿತೇಂದ್ರ ಶೆಟ್ಟಿ ತಿಳಿಸಿದರು.

ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿರುವ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.3ರಿಂದ 6ರವರೆಗೆ ದಸರಾ ಸಿಎಂ ಕಪ್ ಕ್ರೀಡಾಕೂಟ ಆಯೋಜಿಸಲಾಗಿದ್ದು, ಅ.3 ರಂದು ಸಂಜೆ 4.30ಕ್ಕೆ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರೀಡಾಕೂಟ ಉದ್ಘಾಟಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು, ಕ್ರೀಡಾ ಸಚಿವರು ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದರು.

ಕ್ರೀಡಾಪಟುಗಳಿಗೆ ನಗದು ಬಹುಮಾನ ನೀಡುವ ವಿಚಾರದಲ್ಲಿ ಕ್ರೀಡಾ ಇಲಾಖೆ ರಾಜ್ಯ ಸರಕಾರದೊಂದಿಗೆ ನಡೆಸಿದ ಸಂವಹನ ಫಲಪ್ರದವಾಗಿದ್ದು, ನಗದು ಬಹುಮಾನ ನೀಡಲು 64 ಲಕ್ಷ ರೂ. ನೀಡುವ ಭರವಸೆ ದೊರೆತಿದೆ. ಇದಲ್ಲದೇ ಕ್ರೀಡಾಕೂಟದ ಖರ್ಚು ವೆಚ್ಚಕ್ಕೆ ಈಗಾಗಲೇ 3 ಕೋಟಿ ರೂ. ಅನುದಾನ ಮಂಜೂರಾಗಲಿದೆ ಎಂದು ಮಾಹಿತಿ ನೀಡಿದರು.

ಈ ಬಾರಿ ಪ್ಯಾರಿಸ್ ಒಲಂಪಿಕ್ಸ್ ಕಂಚಿನ ಪದಕ ವಿಜೇತ ಭಾರತ ಹಾಕಿ ತಂಡದ ನಾಯಕ ಹರ್ಮನ್ ಪ್ರೀತ್ ಸಿಂಗ್ ಮುಖ್ಯ ಅತಿಥಿಯಾಗಿ ಭಾಗಿಯಾಗಲಿದ್ದಾರೆ. ಕರ್ನಾಟಕ ರಾಜ್ಯದ ಬೆಳಗಾಂ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಕಲಬುರ್ಗಿ ಮತ್ತು ಮೈಸೂರು ವಿಭಾಗ(ಪ್ರತಿ ವಿಭಾಗಕ್ಕೆ ತಲಾ 7 ಅಥವಾ 8 ಜಿಲ್ಲೆಗಳನ್ನು ಸೇರಿಸಲಾಗಿದೆ)ಗಳಿಂದ ಸುಮಾರು 3000 ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳು ಹಾಗೂ 800 ತಾಂತ್ರಿಕ ಅಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ವಿಭಾಗ ಮಟ್ಟದಲ್ಲಿ ವೈಯಕ್ತಿಕ ಕ್ರೀಡೆಯಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ತಂಡ ದಸರಾ ಸಿ.ಎಂ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ. ನಂಜರಾಜ ಬಹದ್ದೂರ್ ಛತ್ರದಲ್ಲಿ ಊಟ ವ್ಯವಸ್ಥೆ ಹಾಗೂ ಕ್ರೀಡಾಪಟುಗಳಿಗಾಗಿ ವಿವಿಧ ಹೋಟೆಲ್‌ಗಳಲ್ಲಿ 4000 ವಿವಿಧ ದರ್ಜೆ ವಸತಿ ವ್ಯವಸ್ಥೆ ಮಾಡಲಾಗುತ್ತದೆ.



ಹರ್ಮನ್‌ಪ್ರಿತ್

26 ಕ್ರೀಡೆ: ಚಾಮುಂಡಿ ವಿಹಾರ ಕ್ರೀಡಾಂಗಣ, ಡಿ.ದೇವರಾಜ ಅರಸು ಕುಸ್ತಿ ಅಖಾಡ, ಮೈಸೂರು ವಿವಿ ಪೆವಿಲಿಯನ್ ಮೈದಾನ ಸೇರಿದಂತೆ ವಿವಿಧ ಕ್ರೀಡಾಂಗಣಗಳಲ್ಲಿ ಅಥ್ಲೆಟಿಕ್ಸ್, ಬಾಸ್ಕೆಟ್ ಬಾಲ್, ಹಾಕಿ, ಕಬಡ್ಡಿ, ಖೋ–ಖೋ, ಈಜು, ಟೇಬಲ್ ಟೆನಿಸ್ ಸೇರಿದಂತೆ 26 ಕ್ರೀಡೆಗಳು ನಡೆಯಲಿವೆ. ಭೂ ಸಾಹಸ ಕ್ರೀಡೆಗಳಿಗೂ ಅವಕಾಶ ನೀಡುವಂತೆ ಪ್ರಸ್ತಾವನೆ ಸಲ್ಲಿಸಿದ್ದು, ಅನುಮತಿ ಸಿಕ್ಕಿಲ್ಲ ಎಂದರು.

ಮಾಹಿತಿ ತಂತ್ರಜ್ಞಾನ ವ್ಯವಸ್ಥೆ: ಕ್ರೀಡಾಕೂಟದ ಫಲಿತಾಂಶ, ನೋಂದಣಿ, ಗುರುತಿನ ಚೀಟಿ ಹಾಗೂ ಇನ್ನಿತರೆ ಮಾಹಿತಿಗಳ ನೀಡಲು ಸ್ಕೋರ್‌ಅಪ್ (ScoreUp) ಮಾಹಿತಿ ತಂತ್ರಜ್ಞಾನ ತಂಡವು ಕಾರ್ಯನಿರ್ವಹಿಸಲಿದೆ. ಹಾಗೆಯೇ https://www.dasaracmcup.com ವೆಬ್‌ಸೈಟ್‌ನಲ್ಲಿ ದಸರಾ ಕ್ರೀಡಾಕೂಟದ ಸಮಗ್ರ ಮಾಹಿತಿ ಲಭ್ಯವಿರಲಿದೆ ಎಂದರು.

ಕಿಟ್ ವಿತರಣೆ: ಅ.3 ರಂದು ಬೆಳಗ್ಗೆಯಿಂದಲೇ ರಿಜಿಸ್ಟ್ರೇಷನ್ ಪ್ರಾರಂಭವಾಗಲಿದ್ದು, ಟಿ–ಶರ್ಟ್ ಮತ್ತು ಟ್ರ್ಯಾಕ್ ಪ್ಯಾಂಟ್ ಇರುವ ಕಿಟ್ ಬ್ಯಾಗ್ ಅನ್ನು ಕ್ರೀಡಾಪಟುಗಳಿಗೆ ನೀಡಲಾಗುವುದು ಎಂದು ವಿವರಿಸಿದರು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಹಾಗೂ ದಸರಾ ಕ್ರೀಡಾಕೂಟ ಉಪಸಮಿತಿಯ ಕಾರ್ಯದರ್ಶಿ ಭಾಸ್ಕರ ನಾಯಕ, ತರಬೇತುದಾರರಾದ ವಸಂತ್ ಕುಮಾರ್, ಸುಂದರೇಶ್, ಗಿರೀಶ್ ಮತ್ತಿತರರು ಉಪಸ್ಥಿತರಿದ್ದರು.

ಪಶ್ಚಿಮಘಟ್ಟದಲ್ಲಿ ಪರಿಸರ ಸೂಕ್ಷ್ಮ ಪ್ರದೇಶ

ಕಸ್ತೂರಿ ರಂಗನ್ ವರದಿ ತಿರಸ್ಕಾರ: ಕೇಂದ್ರಕ್ಕೆ ರಾಜ್ಯದಿಂದ ಪತ್ರ

ನವದೆಹಲಿ, ಸೆ.30– ಪಶ್ಚಿಮಘಟ್ಟದಲ್ಲಿ ಪರಿಸರ ಸೂಕ್ಷ್ಮ ಪ್ರದೇಶವನ್ನು ಘೋಷಿಸುವ ಬಗ್ಗೆ ಡಾ. ಕಸ್ತೂರಿ ರಂಗನ್ ವರದಿ ಆಧರಿಸಿದ ಕರಡು ಅಧಿಸೂಚನೆಯನ್ನು ತಿರಸ್ಕರಿಸಿರುವ ತೀರ್ಮಾನವನ್ನು ಕರ್ನಾಟಕ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಸೋಮವಾರ ತಿಳಿಸಿದೆ.

ಈ ಸಂಬಂಧ ಅರಣ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎನ್. ಮಂಜುನಾಥ ಪ್ರಸಾದ್ ಅವರು ಕೇಂದ್ರ ಅರಣ್ಯ, ಪರಿಸರ ಹಾಗೂ ತಾಪಮಾನ ಬದಲಾವಣೆ ಸಚಿವಾಲಯದ ಕಾರ್ಯದರ್ಶಿ ಲೀನಾ ನಂದನ್ ಅವರಿಗೆ ಪತ್ರ ಬರೆದು ವರದಿ ಬಗ್ಗೆ ರಾಜ್ಯದ ಆಕ್ಷೇಪಣೆಯನ್ನು ತಿಳಿಸಿದ್ದಾರೆ. ಸಚಿವಾಲಯವು ಜುಲೈ 31ರಂದು ಹೊರಡಿಸಿರುವ ಆರನೇ ಅಧಿಸೂಚನೆಯನ್ನು ವಾಪಸ್ ಪಡೆಯಬೇಕು ಎಂದು ಕೋರಿದ್ದಾರೆ.

ಕಸ್ತೂರಿರಂಗನ್ ವರದಿಯು ರಾಜ್ಯದ 20,668 ಚ.ಕಿ.ಮೀ ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಗುರುತಿಸಿತ್ತು. ಪರಿಸರ ಸೂಕ್ಷ್ಮ ಪ್ರದೇಶವೆಂದು ಗುರುತಿಸಿದರೆ 10 ಜಿಲ್ಲೆಗಳ 33 ತಾಲೂಕುಗಳ 1,499 ಗ್ರಾಮಗಳ ಲಕ್ಷಾಂತರ ಜನರಿಗೆ ಭಾರಿ ತೊಂದರೆ ಆಗಲಿದೆ. ಈ ವರದಿ ಬಗ್ಗೆ ಜನರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಜನಪ್ರತಿನಿಧಿಗಳು ಧ್ವನಿ ಎತ್ತಿದ್ದಾರೆ. ಇದಲ್ಲದೆ, ವರದಿಯಲ್ಲಿ ಗುರುತಿಸಿರುವ ಬಹುತೇಕ ಪ್ರದೇಶವನ್ನು ಅರಣ್ಯ ಸಂರಕ್ಷಣಾ ಕಾಯ್ದೆಯಡಿ ಈಗಾಗಲೇ ಸಂರಕ್ಷಣೆ ಮಾಡಲಾಗುತ್ತಿದೆ ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.

ಸಚಿವಾಲಯ ಹೊರಡಿಸಿದ್ದ ನಾಲ್ಕು ಹಾಗೂ ಐದನೇ ಅಧಿಸೂಚನೆಯನ್ನು ರಾಜ್ಯ ತಿರಸ್ಕರಿಸಿತ್ತು. ಮುಖ್ಯಮಂತ್ರಿ ನೇತೃತ್ವದ ನಿಯೋಗವು ಕೇಂದ್ರ ಸಚಿವರನ್ನು ಭೇಟಿ ಮಾಡಿ ಸ್ಥಳೀಯ ಜನರಿಗೆ ಉಂಟಾಗುವ ತೊಂದರೆಗಳ ಬಗ್ಗೆ ಮನವರಿಕೆ ಮಾಡಿಕೊಟ್ಟಿತ್ತು ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣ

ಜಾಮೀನು ಸಿಕ್ಕಿ 5 ದಿನವಾದರೂ ಬಿಡುಗಡೆಯಾಗದ ಕಾರ್ತಿಕ್: ಯಾರಾದರೂ ಸಹಾಯಮಾಡಿ ಎಂದು ತಂದೆ ಕಣ್ಣೀರು

ಬೆಂಗಳೂರು: ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ15 ಆರೋಪಿ ಕಾರ್ತಿಕ್‌ಗೆ ಜಾಮೀನು ಮಂಜೂರಾಗಿ 5 ದಿನ ಕಳೆದರೂ ಬಿಡುಗಡೆಯಾಗಿಲ್ಲ. ಯಾರಾದರೂ ಸಹಾಯಮಾಡಿ ಎಂದು ಕಾರ್ತಿಕ್ ತಂದೆ ಕಣ್ಣೀರು ಹಾಕಿದ್ದಾರೆ.

ಈ ಬಗ್ಗೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಾವು ಬಡವರು. ಹೇಗೆ ನಮ್ಮ ಮಗನನ್ನ ಕರೆತರೋದು ಎಂದು ಗೊತ್ತಾಗುತ್ತಿಲ್ಲ. ದುಡಿಯುವ ಮಗನನ್ನ ಬಿಡಿಸಿಕೊಳ್ಳಲು ಆಗುತ್ತಿಲ್ಲ. ಜಾಮೀನು ಸಿಕ್ಕಿ 5 ದಿನವಾದರೂ ಬಿಡುಗಡೆಯಾಗಲಿಲ್ಲ. ದಯವಿಟ್ಟು ನಮಗೆ ಯಾರಾದರೂ ಸಹಾಯ ಮಾಡಿ ಎಂದು ಕಣ್ಣೀರು ಹಾಕಿದ್ದಾರೆ. ಶ್ಯೂರಿಟಿ ನೀಡಲು ನಮಗೆ ಶಕ್ತಿ ಇಲ್ಲ. ಆಕ್ಸಿಡೆಂಟ್ ಆಗಿ ಕಾಲು ಮುರಿದಿತ್ತು. ಆಗ ನನಗೆ ಎಂದು ನಾಲ್ಕೈದು ಲಕ್ಷ ಸಾಲ ಮಾಡಿದ್ದ. ಅದನ್ನ ತೀರಿಸಲು ಅವರ ಜೊತೆ ಹೋಗಿದ್ದಾನೆ. ನನ್ನ ಮಗ ಇಂತಹ ಕೆಲಸ ಮಾಡುವವನಲ್ಲ ಎಂದರು. ದರ್ಶನ್ ಕುಟುಂಬದವರು ನಮಗೆ ಯಾರೂ ಗೊತ್ತಿಲ್ಲ ದರ್ಶನ್ ಅಭಿಮಾನಿಗಳು ನಮ್ಮನ್ನ ಯಾರೂ ಸಂಪರ್ಕಿಸಿಲ್ಲ. ಯಾರಾದರೂ ನಮಗೆ ಸಹಾಯ ಮಾಡಿ ಎಂದು ಕಾರ್ತಿಕ್ ತಂದೆ ವೆಂಕಟೇಶ್ ಅಳಲು ತೋಡಿಕೊಂಡಿದ್ದಾರೆ.


ದಸರಾ ಜಂಬೂಸವಾರಿ ಮೆರವಣಿಗೆ

ಹಳೆಯ ಕಟ್ಟಡಗಳ ಮೇಲೆ ನಿಂತು ವೀಕ್ಷಣೆಗೆ ನಿರ್ಬಂಧ

ಮೈಸೂರು,ಸೆ.30–ಮೈಸೂರು ಜಿಲ್ಲಾಡಳಿತದ ವತಿಯಿಂದ ಅ.3ರಿಂದ 12ರವರೆಗೆ ದಸರಾ ಮಹೋತ್ಸವ ನಡೆಯಲಿದ್ದು, ಅ.12ರಂದು ಜಂಬೂಸವಾರಿ ಮೆರವಣಿಗೆಯ ವೀಕ್ಷಣೆಗೆಂದು ಸ್ಥಳೀಯ, ದೇಶ, ವಿದೇಶಗಳಿಂದ ಜನರು ಆಗಮಿಸುವ ಕಾರಣ ಅತಿಯಾದ ಜನದಟ್ಟಣೆಯನ್ನು ನಿರೀಕ್ಷಿಸಲಾಗಿದೆ. ಈ ವೇಳೆಯಲ್ಲಿ ಸಯ್ಯಜಿರಾವ್ ರಸ್ತೆಯ ಎರಡೂ ಬದಿಯಲ್ಲಿರುವ ಹಳೆಯ, ಶಿಥಿಲ ಕಟ್ಟಡಗಳ ಮೇಲೆ ಅಗತ್ಯಕ್ಕಿಂತ ಹೆಚ್ಚು ಜನರು ನಿಂತು ದಸರಾ ಮೆರವಣಿಗೆಯನ್ನು ವೀಕ್ಷಿಸುವುದರಿಂದ ಜನದಟ್ಟಣೆ ಹೆಚ್ಚಾಗಿ ಅನಾಹುತಗಳು ಸಂಭವಿಸಿರುವ ಸಾಧ್ಯತೆ ಇದ್ದು, ಹಳೆಯ ಕಟ್ಟಡ ಮೇಲೆ ನಿಂತು ಜನರು ದಸರಾ ಮೆರವಣಿಗೆ ವೀಕ್ಷಣೆ ನಿರ್ಬಂಧಿಸಲಾಗಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಅದ್ವೈತದಲ್ಲಿ ಭೌತವಿಜ್ಞಾನದೊಂದಿಗೆ ಆಧುನಿಕ ವಿಜ್ಞಾನವೂ ಅಡಕ

ಡಾ.ಹಾ.ಮಾ.ನಾಯಕ ಸ್ಮಾರಕ ಉಪನ್ಯಾಸ ಕಾರ್ಯಕ್ರಮದಲ್ಲಿ ಖ್ಯಾತ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ ಅಭಿಮತ



ಮೈಸೂರಿನ ಮಾನಸ ಗಂಗೋತ್ರಿಯ ಭೌತವಿಜ್ಞಾನ ವಿಭಾಗದ ಐನ್‌ಸ್ಟೈನ್ ಸಭಾಂಗಣದಲ್ಲಿ ಸೋಮವಾರ ಡಾ.ಹಾ.ಮಾ.ನಾಯಕ ಸ್ಮಾರಕ ಉಪನ್ಯಾಸ ಕಾರ್ಯಕ್ರಮ ನಡೆಯಿತು. ಚಿತ್ರದಲ್ಲಿ (ಎಡದಿಂದ) ಹಾ.ಮಾ.ನಾ ಪ್ರತಿಷ್ಠಾನದ ಕಾರ್ಯದರ್ಶಿ ಪ್ರೊ.ಪಿ.ವೆಂಕಟರಾಮಯ್ಯ, ಖ್ಯಾತ ವಿಜ್ಞಾನಿ ಡಾ.ಕೆ.ಜೆ.ರಾವ್, ಹಾ.ಮಾ.ನಾ ಪ್ರತಿಷ್ಠಾನದ ಅಧ್ಯಕ್ಷರೂ ಆದ ಖ್ಯಾತ ಕಾದಂಬರಿಕಾರ ಡಾ.ಎಸ್.ಎಲ್. ಭೈರಪ್ಪ ಹಾ.ಮಾ.ನಾ ಪ್ರತಿಷ್ಠಾನದ ಕೋಶಾಧ್ಯಕ್ಷ ಡಾ.ಕೆ.ಮಹದೇವ್ ಅವರನ್ನು ಕಾಣಬಹುದು.

ಮೈಸೂರು,ಸೆ.30(ಪಿಎಂ)– ಭೌತಶಾಸ್ತ್ರ ಒಂದು ಮಹತ್ವದ ವಿಜ್ಞಾನವಾಗಿದ್ದು, ಭಾರತೀಯ ತತ್ವಶಾಸ್ತ್ರದಲ್ಲಿ, ಅದರಲ್ಲಿಯೂ ಅದ್ವೈತದಲ್ಲಿ ಭೌತವಿಜ್ಞಾನ ಅಡಕವಾಗಿದೆ. ಜೊತೆಗೆ ಅದ್ವೈತದಲ್ಲಿ ಆಧುನಿಕ ವಿಜ್ಞಾನವನ್ನೂ ಕಾಣಬಹುದು ಎಂದು ಹಿರಿಯ ಸಾಹಿತಿ, ಖ್ಯಾತ ಕಾದಂಬರಿಕಾರರೂ ಆದ ಹಾ.ಮಾ.ನಾ. ಪ್ರತಿಷ್ಠಾನದ ಅಧ್ಯಕ್ಷ ಡಾ.ಎಸ್.ಎಲ್.ಭೈರಪ್ಪ ಅಭಿಪ್ರಾಯಪಟ್ಟರು.

ಮೈಸೂರಿನ ಮಾನಸ ಗಂಗೋತ್ರಿಯ ಭೌತವಿಜ್ಞಾನ ವಿಭಾಗದ ಐನ್‌ಸ್ಟೈನ್ ಸಭಾಂಗಣದಲ್ಲಿ ಹಾ.ಮಾ.ನಾ ಪ್ರತಿಷ್ಠಾನ ಹಾಗೂ ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಜಂಟಿ ಆಶ್ರಯದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 'ಮೆದುಳೇ ಮಾನವನ ಸರ್ವಸ್ವ' ಕುರಿತ ಡಾ.ಹಾ.ಮಾ.ನಾಯಕ ಸ್ಮಾರಕ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನನ್ನ ಪ್ರಕಾರ ವಿಜ್ಞಾನದಲ್ಲಿ ಬೇಕಾದಷ್ಟು ವಿಧಗಳು ಇವೆ. ಆದರೆ ವಿಸ್ತಾರವಾದ ವಿಜ್ಞಾನ ಎಂದರೆ ಅದು ಭೌತಶಾಸ್ತ್ರ. ಅಷ್ಟೇಯಲ್ಲ, ಗಣಿತಶಾಸ್ತ್ರ ಕೂಡ ಈ ಭೌತಶಾಸ್ತ್ರದ ಮೇಲೆ ಅವಲಂಬಿತವಾಗಿದೆ. ಐನ್‌ಸ್ಟೈನ್ ಭೌತಶಾಸ್ತ್ರದಲ್ಲಿ ವ್ಯಾಪಕವಾದ ಸಂಶೋಧನೆ ಮಾಡಿದ್ದಾರೆ. ನಮ್ಮ ಭಾರತೀಯ ತತ್ವಶಾಸ್ತ್ರದಲ್ಲಿ, ಅದರಲ್ಲಿಯೂ ಅದ್ವೈತದಲ್ಲಿ ಭೌತಶಾಸ್ತ್ರ ಅಡಕವಾಗಿದೆ ಎಂದರು.

ಅದ್ವೈತದೊಳಗೆ ಉನ್ನತ ಹಂತಕ್ಕೆ ತಲುಪಿದರೆ ದೇವರ ಪೂಜೆ ಸಹ ಅಗತ್ಯವಿಲ್ಲ ಎಂಬ ಅಂಶವೂ ಇದೆ. ಶಂಕರಾಚಾರ್ಯರು ಇದನ್ನೇ ಹೇಳಿದ್ದಾರೆ. ಆದರೆ ಬ್ರಾಹ್ಮಣರಲ್ಲಿನ ಅದ್ವೈತರು ತಪ್ಪು ತಿಳಿದುಕೊಂಡಿದ್ದಾರೆ. ನಾನು ಅದ್ವೈತಕ್ಕೆ ಸೇರಿದವನೇ. ನಮ್ಮ ಅದ್ವೈತರಲ್ಲಿ ಹಲವರು ಅದ್ವೈತರಾದ ಕಾರಣ ದೇವರ ಪೂಜೆ ಮಾಡುವ ಅಗತ್ಯವಿಲ್ಲ ಎಂದುಕೊಂಡಿದ್ದಾರೆ. ಇದು ಸರಿಯಲ್ಲ. ದೇವರ ಪೂಜೆ ಮಾಡುವ ಅಗತ್ಯವಿಲ್ಲವೆಂಬುದಕ್ಕೆ ಉನ್ನತ ಮಟ್ಟದ ಹಂತ ತಲುಪಬೇಕಾಗುತ್ತದೆ. ಶ್ರೀ ರಾಮಕೃಷ್ಣ ಪರಮಹಂಸರು, ರಮಣಮಹರ್ಷಿಗಳು ಸೇರಿದಂತೆ ಮೊದಲಾದ ಮಹನೀಯರು ಅಂತಹ ಉನ್ನತ ಹಂತ ತಲುಪಿದವರಾಗಿದ್ದಾರೆ ಎಂದು ವಿವರಿಸಿದರು.

ಭೌತಶಾಸ್ತ್ರದಲ್ಲಿ ಹಿಂದೂ ಧರ್ಮದ ಸಾಧನೆ ಇದ್ದು, ಅದರಲ್ಲಿಯೂ ಅದ್ವೈತ ಧರ್ಮದ್ದೇ ಆಗಿದೆ. ಆದರೆ ಅನ್ಯ ಧರ್ಮೀಯರಲ್ಲಿ ದೇವರ ಪೂಜಾ ವಿಧಿವಿಧಾನಕ್ಕೆ ಹೆಚ್ಚಿನ ಆದ್ಯತೆ ಕೊಡುವುದನ್ನು ಕಾಣಬಹುದು. ನಾನು ಅರ್ಥ ಮಾಡಿಕೊಂಡಂತೆ ಭಾರತೀಯ ತತ್ವಶಾಸ್ತ್ರದಲ್ಲಿ ಅದರಲ್ಲಿಯೂ ಅದ್ವೈತದಲ್ಲಿ ಮಾಡರ್ನ್ ಸೈನ್ಸ್ ಕೂಡ ಇದೆ. ಭಾರತೀಯ ತತ್ವಶಾಸ್ತ್ರ ಅಂದರೆ ಅದು ಅದ್ವೈತವೇ ಆಗಿದೆ. ಅದು ವಿವೇಕಾನಂದರ ಮೂಲಕ ಹೆಚ್ಚು ಪ್ರಚಾರಕ್ಕೂ ಬಂದಿದೆ. ನಾನೊಬ್ಬ ಲೇಖಕನಾಗಿ ನನ್ನ ಬರವಣಿಗೆಗೆ ಒಂದು ಆಳವಾದ ಜ್ಞಾನ ಬಂದಿದ್ದರೆ ಇಂತಹ ತತ್ವಶಾಸ್ತ್ರ ನನ್ನೊಳಗೆ ಅಡಕವಾಗಿರುವುದೇ ಕಾರಣ ಎಂದು ಹೇಳಿದರು.

ಸತ್ಯ ಕಂಡುಕೊಳ್ಳುವುದೇ ದೇವರು ಎನ್ನುತ್ತದೆ ಅದ್ವೈತ. ಭೌತವಿಜ್ಞಾನವೂ ಸತ್ಯದ ಹುಡುಕಾಟವಾಗಿದೆ. ಪರಮ ಸತ್ಯವೇನೆಂಬುದು ದೇವರಿಗೂ ಗೊತ್ತಿಲ್ಲ ಎನ್ನುತ್ತದೆ. ವಿಜ್ಞಾನ ಹಾಗೂ ಅದ್ವೈತ ವಿಸ್ತಾರವಾಗಿ ಬೆಳೆಯುತ್ತಲೇ ಹೋಗುತ್ತದೆ. ಭೌತವಿಜ್ಞಾನ ಹಾಗೂ ಅದ್ವೈತ ಎರಡೂ ಅನಂತದೆಡೆಗಿನ ಪಯಣವೇ ಆಗಿದೆ ಎಂದರು.

ಇಂದಿನ ಉಪನ್ಯಾಸದಲ್ಲಿ ಮನುಷ್ಯರ ಮೆದುಳು ಹಾಗೂ ಅದರಲ್ಲಿನ ನರಕೋಶದ ಬಗ್ಗೆ ಭೌತಶಾಸ್ತ್ರದ ಹಿನ್ನೆಲೆಯಲ್ಲಿ ವಿಜ್ಞಾನಿಗಳಾದ ಡಾ.ಕೆ.ಜೆ.ರಾವ್ ಸುದೀರ್ಘವಾಗಿ ವಿವರಿಸಿದ್ದಾರೆ. ಈ ಉಪನ್ಯಾಸ ಒಂದು ರೀತಿಯಲ್ಲಿ ಮೆಡಿಕಲ್ ಸೈನ್ಸ್ ಎನ್ನುವಂತೆ ಕಾಣುತ್ತದೆ. ಆದರೆ ಅದು ಭೌತಶಾಸ್ತ್ರಕ್ಕೆ ಸಂಬಂಧಿಸಿದ್ದಾಗಿದೆ. ಇಂತಹ ಉಪನ್ಯಾಸ ನಾನು ಕೇಳಿರಲಿಲ್ಲ. ಪ್ರಾಯಶಃ ಇಲ್ಲಿ ನೆರೆದಿರುವ ಸಭಿಕರಿಗೆ ಭೌತಶಾಸ್ತ್ರ ಗೊತ್ತಿರಬಹುದು. ಆದರೆ ಅದರ ಹಿನ್ನೆಲೆಯಲ್ಲಿ ಮೆದುಳು ಹೇಗೆ ಕೆಲಸ ಮಾಡುತ್ತದೆ ಎಂದು ಗೊತ್ತಿರಲಿಲ್ಲವೆಂದೇ ಭಾವಿಸಿದ್ದೇನೆ ಇಂದು ಅದ್ಭುತ ಉಪನ್ಯಾಸ ನೀಡಿದ ಡಾ.ಕೆ.ಜೆ.ರಾವ್ ಅವರಿಗೆ ಧನ್ಯವಾದ ಹೇಳುವುದಾಗಿ ಅವರು ತಿಳಿಸಿದರು.

ಸಂಸ್ಕೃತದ ಹಿರಿಯ ಮಗಳು ಕನ್ನಡ: ಇದಕ್ಕೂ ಮುನ್ನ 'ಮೆದುಳೇ ಮಾನವನ ಸರ್ವಸ್ವ' ಕುರಿತು ಉಪನ್ಯಾಸ ನೀಡಿದ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಘನಸ್ಥಿತಿ ಮತ್ತು ರಚನಾತ್ಮಕ ರಸಾಯನಶಾಸ್ತ್ರದ ಘಟಕದ ಖ್ಯಾತ ವಿಜ್ಞಾನಿ ಡಾ.ಕೆ.ಜೆ.ರಾವ್, ಹಾ.ಮಾ. ನಾಯಕರು ಶ್ರೇಷ್ಠ ಪ್ರಾಧ್ಯಾಪಕರು. 60ಕ್ಕೂ ಹೆಚ್ಚು ಪುಸ್ತಕಗಳನ್ನು ಬರೆದವರು. ವಿವಿಯ ಕುಲಪತಿಯಾಗಿಯೂ ಕಾರ್ಯ ನಿರ್ವಹಿಸಿದವರು. ಅವರ ಕೊಡುಗೆಯನ್ನು ಎಷ್ಟು ಸ್ಮರಣೆ ಮಾಡಿದರೂ ಸಾಲದು. ಮೈಸೂರು ವಿವಿಗೆ ಅವರ ಸೇವೆ ಅನನ್ಯ ಎಂದು ಸ್ಮರಿಸಿದರು.

ವಿಜ್ಞಾನವನ್ನು ಕನ್ನಡದಲ್ಲೂ ಕಲಿಸಲು ಸಾಧ್ಯವಿದ್ದು, ಅದು ಸಾಧ್ಯವಿಲ್ಲ ಎನ್ನುವುದು ಸೋಮಾರಿತನವೇ ಆಗಿದೆ. ಕನ್ನಡ ಭಾಷೆಯು ಸಂಸ್ಕೃತದ ಹಿರಿಯ ಮಗಳು. ಕನ್ನಡದ ಎಲ್ಲಾ ಕ್ರಿಯಾಪದಗಳಲ್ಲಿ ಸಂಸ್ಕೃತದ ಪ್ರಭಾವವಿದೆ. ಕನ್ನಡ ವರ್ಣಮಾಲೆಯ ಅಕ್ಷರಗಳು ವೈಜ್ಞಾನಿಕವಾಗಿ ರೂಪುಗೊಂಡಿವೆ. ಹೀಗಿರುವಾಗ ವಿಜ್ಞಾನವನ್ನು ಕನ್ನಡದಲ್ಲಿ ಕಲಿಸಲು ಸಾಧ್ಯವಿಲ್ಲ ಎನ್ನುವುದು ಸರಿಯಲ್ಲ ಎಂದರು.

ಅಲ್ಲದೆ, ಮೆದುಳಿನ ಪ್ರಮುಖ ಭಾಗಗಳು, ಪ್ರಮುಖ ಲಕ್ಷಣಗಳು, ನರಕೋಶಗಳ ವಿವರ, ಮೆದುಳಿನ ರಚನೆ, ಮೆದುಳಿನ ದ್ರವ್ಯರಾಶಿ ಸೇರಿದಂತೆ ವಿಸ್ತಾರವಾಗಿ ಮನುಷ್ಯನ ಮೆದುಳಿನ ಹಲವು ಆಯಾಮಗಳ ಬಗ್ಗೆ ಮಾಹಿತಿ ನೀಡಿದರು. ಹಾ.ಮಾ.ನಾ ಪ್ರತಿಷ್ಠಾನದ ಕಾರ್ಯದರ್ಶಿ ಪ್ರೊ.ಪಿ.ವೆಂಕಟರಾಮಯ್ಯ, ಕೋಶಾಧ್ಯಕ್ಷ ಡಾ.ಕೆ.ಮಹದೇವ್, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಪ್ರಧಾನ್ ಗುರುದತ್ ಸೇರಿದಂತೆ ಮತ್ತಿತರರು ಹಾಜರಿದ್ದರು.

ಡಾರ್ಮೆಟರಿ, ಶೌಚಾಲಯ ನಿರ್ಮಾಣಕ್ಕೆ ಭೂಮಿಪೂಜೆ


ಡಾರ್ಮೆಟರಿ, ಶೌಚಾಲಯ ನಿರ್ಮಾಣಕ್ಕೆ ಶಾಸಕ ದರ್ಶನ್ ಭೂಮಿ ಪೂಜೆ ನಡೆಸಿದರು.

ನಂಜನಗೂಡು, ಸೆ.30–ನಗರದ ಕಸ್ತೂರಿ ಬಾ ಗಾಂಧಿ ವಸತಿ ಶಾಲೆಯಲ್ಲಿ 84 ಲಕ್ಷ ರೂ. ವೆಚ್ಚದಲ್ಲಿ ಡಾರ್ಮೆಟರಿ ಕಟ್ಟಡ ಹಾಗೂ ಶೌಚಾಲಯ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲಾಗಿದ್ದು, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ನಡೆಸಿ ಕಾಲಮಿತಿಯಲ್ಲಿ ಸೇವೆಗೆ ಒದಗಿಸಬೇಕು ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ಜೂನಿಯರ್ ಕಾಲೇಜು ಸಮೀಪದ ಕಸ್ತೂರಿ ಬಾ ಗಾಂಧಿ ಹೆಣ್ಣು ಮಕ್ಕಳ ವಸತಿ ಶಾಲೆ ಆವರಣದಲ್ಲಿ ಸೋಮವಾರ ಡಾರ್ಮೆಟರಿ ಕಟ್ಟಡ, ಶೌಚಾಲಯ ನಿರ್ಮಾಣಕ್ಕೆ ಭೂಮಿಪೂಜೆ ನಡೆಸಿ ಮಾತನಾಡಿದ ಅವರು, ಹೆಣ್ಣು ಮಕ್ಕಳು ವಿದ್ಯಾವಂತರಾದಾಗ ಮಾತ್ರ ಸಮಾಜ ಅಭಿವೃದ್ಧಿ ಹೊಂದಲು ಸಾಧ್ಯ. ಹೆಣ್ಣು ಮಕ್ಕಳ ಉನ್ನತ ವಿದ್ಯಾಭ್ಯಾಸ ಹಾಗೂ ಅವರಿಗೆ ಗುಣಮಟ್ಟದ ಶಿಕ್ಷಣ ನೀಡುವ ಸಲುವಾಗಿ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ. ವಸತಿ ಶಾಲೆ ನಿವೇಶನದ ವಿಚಾರವಾಗಿ ಉಂಟಾಗಿದ್ದ ಸಮಸ್ಯೆ ಬಗೆಹರಿಸಲಾಗಿದೆ. ಶಾಲೆಯ ಕಾಂಪೌಂಡ್ ಎತ್ತರಿಸಲು ಮುಂದಿನ ದಿನಗಳಲ್ಲಿ ಅನುದಾನ ನೀಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕೇಶವಮೂರ್ತಿ, ನಗರಸಭೆ ಅಧ್ಯಕ್ಷ ಶ್ರೀಕಂಠಸ್ವಾಮಿ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್, ನಗರಸಭಾ ಸದಸ್ಯ ಎನ್.ಎಸ್.ಯೋಗೀಶ್, ಹಾಡ್ಯ ಗ್ರಾಪಂ ಅಧ್ಯಕ್ಷ ಹರೀಶ್, ಮುಖಂಡರಾದ ದೇಬೂರು ಅಶೋಕ್, ಹಾಡ್ಯ ಜಯರಾಮ್, ಬಸವಣ್ಣ, ಗುತ್ತಿಗೆದಾರ ಜಯಶಂಕರ್, ಮಹದೇವು, ಬಿಇಓ ಮಹೇಶ್, ಎಇಇ ಸತ್ಯನಾರಾಯಣ, ಬಸವರಾಜ್, ರೇವಣ್ಣ ಉಪಸ್ಥಿತರಿದ್ದರು.

ಭಾರೀ ಗಾಳಿ ಮಳೆಗೆ ಬಾಳೆ ಫಸಲು ನಾಶ


ಭಾರೀ ಗಾಳಿ ಮಳೆಗೆ ಬಾಳೆ ನಾಶವಾಗಿರುವುದು.

ಹೆಚ್.ಡಿ.ಕೋಟೆ, ಸೆ.30– ಭಾರೀ ಗಾಳಿ ಮಳೆಗೆ ಕಟಾವಿಗೆ ಬಂದಿದ್ದ ಬಾಳೆ ಫಸಲು ನಾಶವಾಗಿರುವ ಘಟನೆ ತಾಲೂಕಿನ ಹಿರೇಹಳ್ಳಿ ಎ ಕಾಲೋನಿ ಗ್ರಾಮದಲ್ಲಿ ಭಾನುವಾರ ಸಂಜೆ ನಡೆದಿದೆ.

ಗ್ರಾಮದ ನಿವಾಸಿ ಬಸವಲಿಂಗನಾಯಕ ಎಂಬುವರಿಗೆ ಸೇರಿದ ಬಾಳೆ ಫಸಲು ನಾಶವಾಗಿದ್ದು, ಲಕ್ಷಾಂತರ ರೂ. ನಷ್ಟ ಸಂಭವಿಸಿದೆ ಎನ್ನಲಾಗಿದೆ.

ರೈತ ಬಸವಲಿಂಗ ನಾಯಕ ಮಾತನಾಡಿ, ಇನ್ನೊಂದು ವಾರದಲ್ಲಿ ಬಾಳೆ ಫಸಲನ್ನು ಕಟಾವು ಮಾಡಬೇಕಿತ್ತು. ಆದರೆ ಭಾನುವಾರ ಸಂಜೆ ಸುರಿದ ಗಾಳಿ ಮಳೆಗೆ 2 ಎಕರೆಯಲ್ಲಿ ಬೆಳೆದಿದ್ದ ಬಾಳೆ ಫಸಲು ನಾಶವಾಗಿದೆ. ಇದರಿಂದ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ. ಬಾಳೆ ವ್ಯವಸಾಯಕ್ಕಾಗಿ ಸಾಕಷ್ಟು ಸಾಲ ಮಾಡಿದ್ದು, ಇದೀಗ ಬೆಳೆ ನಾಶವಾಗಿರುವುದರಿಂದ ದಿಕ್ಕೆ ತೋಚದಂತಾಗಿದೆ ಎಂದು ಅಳಲು ತೋಡಿಕೊಂಡ ಅವರು, ಕಳೆದ ಬಾರಿಯೂ ಇದೇ ರೀತಿ ನಷ್ಟ ಸಂಭವಿಸಿತ್ತು. ಈ ಸಂಬಂಧ ಸೂಕ್ತ ಪರಿಹಾರ ಕಲ್ಪಿಸುವಂತೆ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಮನವಿ ಮಾಡಲಾಗಿತ್ತಾದರೂ ಯಾವುದೇ ಪ್ರಯೋಜನವಾಗಲಿಲ್ಲ. ಇದೀಗ ಮತ್ತೆ ಬಾಳೆ ಫಸಲು ನಾಶವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿಗಳು ಸೂಕ್ತ ಪರಿಹಾರ ಕೊಡಿಸಬೇಕು ಎಂದು ಒತ್ತಾಯಿಸಿದರು.

— ಮುಂಬರುವ ದಿನಗಳಲ್ಲಿ ಹಾಲು ಉತ್ಪಾದಕರಿಗೆ —

5 ರೂ. ಹೆಚ್ಚಳಕ್ಕೆ ಸಂಪುಟ ಸಭೆಯಲ್ಲಿ ಚರ್ಚೆ

ಪಶುಸಂಗೋಪನೆ ಹಾಗೂ ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್


ಮೇಗಳಕೊಪ್ಪಲು ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘವನ್ನು ಸಚಿವ ಕೆ.ವೆಂಕಟೇಶ್ ಉದ್ಘಾಟಿಸಿದರು.

ಬೆಟ್ಟದಪುರ, ಸೆ.30– ಮುಂಬರುವ ದಿನಗಳಲ್ಲಿ ಹಾಲು ಉತ್ಪಾದಕರಿಗೆ 5 ರೂಪಾಯಿ ಹೆಚ್ಚಳಕ್ಕೆ ಸಚಿವ ಸಂಪುಟ ಸಭೆ ಯಲ್ಲಿ ಚರ್ಚಿಸಲಾಗುವುದು ಎಂದು ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್ ತಿಳಿಸಿದರು.

ಸಮೀಪದ ಮೇಗಳಕೊಪ್ಪಲು ಗ್ರಾಮದಲ್ಲಿ ಸೋಮವಾರ ಹಾಲು ಉತ್ಪಾದಕರ ಸಹಕಾರ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಈ ಹಿಂದೆ ರೈತರ ಅನುಕೂಲಕ್ಕಾಗಿ 3 ರೂ. ಹಾಲಿನ ದರ ಹೆಚ್ಚಳ ಮಾಡಿತ್ತು. ಮುಂದಿನ ದಿನಗಳಲ್ಲಿ ಐದು ರೂ.ಗಳನ್ನು ಹೆಚ್ಚುವರಿಯಾಗಿ ರೈತರಿಗೆ ನೀಡಬೇಕೆಂಬ ಚಿಂತನೆ ಇದ್ದು, ದಸರಾ ಮಗಿದ ಬಳಿಕ ಸಂಪುಟ ಸಭೆಯಲ್ಲಿ ಈ ಸಂಬಂಧ ಚರ್ಚೆ ನಡೆಸಿ ನಿಗದಿತ ಮೊತ್ತವನ್ನು ಘೋಷಿಸಲಾಗುವುದು ಎಂದರು.

ಮೈಮುಲ್ ಈ ಬಾರಿ ಸಾಕಷ್ಟು ನಷ್ಟ ಅನುಭವಿಸಿದೆ. ಹಾಲು ಉತ್ಪಾದಕರು ಹೆಚ್ಚಾದಂತೆ ಬೇರೆ ರೀತಿಯ ಆದಾಯ ತರುವ ಉತ್ಪನ್ನಗಳನ್ನು ಪ್ರಾರಂಭ ಮಾಡಿದಾಗ ಮಾತ್ರ ಒಕ್ಕೂಟದ ಆದಾಯ ದ್ವಿಗುಣಗೊಳಿಸಬಹುದು. ಸಹಕಾರ ಸಂಘಗಳು ರೈತರಿಗೆ ನೆರವಾಗುತ್ತಿರುವುದರಿಂದ ಸರ್ಕಾರದಿಂದಲೂ ಸಾಕಷ್ಟು ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ರೈತರ ಬೆನ್ನೆಲುಬಾಗಿ ನಾವು ಕೆಲಸ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಮೈಮುಲ್ ನಿರ್ದೇಶಕ ಪ್ರಕಾಶ್ ಮಾತನಾಡಿ, ಸರ್ಕಾರ ರೈತರಿಗೆ ಸಾಕಷ್ಟು ಸೌಲಭ್ಯಗಳನ್ನು ನೀಡುತ್ತಾ ಬಂದಿದೆ. ಉತ್ಪಾದಕರು ಗುಣಮಟ್ಟದ ಹಾಲು ಸರಬರಾಜು ಮಾಡಿದರೆ ಮಾತ್ರ ನಷ್ಟವಿರುವ ಒಕ್ಕೂಟ ಆದಾಯದ ಕಡೆ ಮುಖ ಮಾಡಲು ಸಾಧ್ಯ. ಹಾಲು ಉತ್ಪಾದಕತೆ ದಿನೇ ದಿನೆ ಹೆಚ್ಚಾಗುತ್ತಿದೆ. ಸಾಕಷ್ಟು ಹಾಲು ಮಾರಾಟವಾಗದೆ ನಷ್ಟಕ್ಕೆ ಮತ್ತೊಂದು ಕಾರಣವಾಗಿದೆ. ಮುಂದಿನ ದಿನಗಳಲ್ಲಿ ಒಟ್ಟಾಗಿ ಒಕ್ಕೂಟ ಆದಾಯ ಗಳಿಸುವ ಮೂಲಗಳ ಬಗ್ಗೆ ಹೆಚ್ಚು ಆಸಕ್ತಿ ವಹಿಸುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಗ್ರಾಮಸ್ಥರು ಸಚಿವರಿಗೆ ಬೆಟ್ಟದ ತುಂಗ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾಯಂ ವೈದ್ಯಾಧಿಕಾರಿಗಳ ನೇಮಕ ಹಾಗೂ ಬೆಟ್ಟಕ್ಕೆ ರಸ್ತೆ ಮಾಡಿಸುವಂತೆ, ನೀರಿನ ಟ್ಯಾಂಕ್, ನೂತನ ಪಡಿತರ ಕೇಂದ್ರ ಮತ್ತು ರಸ್ತೆಗಳ ಅಭಿವೃದ್ಧಿ ಮಾಡಿಸಿ ಕೊಡಬೇಕೆಂದು ಮನವಿ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಸಂಘದ ಅಧ್ಯಕ್ಷ ಚಿಕ್ಕೇಗೌಡ, ಮುಖಂಡರಾದ ಡಿ.ಟಿ.ಸ್ವಾಮಿ, ರಹಮದ್ ಜಾನ್‌ಬಾಬು, ಲೋಕೇಶ್, ಕೃಷ್ಣೇಗೌಡ, ಯಶೋಧರ, ಪುಟ್ಟರಾಜು, ನಂದೀಶ್, ಮಲ್ಲಿಕಾರ್ಜುನ, ಸರಸ್ವತಿ, ಅನಿತಾ, ತಹಸೀಲ್ದಾರ್ ನಿಸರ್ಗ ಪ್ರಿಯ, ಸಿಪಿಐ ದೀಪಕ್, ಇಓ ಸುನೀಲ್, ಎಸ್‌ಐ ಶಿವಶಂಕರ್, ಸಹಾಯಕ ವ್ಯವಸ್ಥಾಪಕ ಡಾ.ಸತೀಶ್, ವಿಸ್ತರಣಾಧಿಕಾರಿ ನಿಶ್ಚಿತ್, ನಿರ್ದೇಶಕ ಜಯರಾಮೇಗೌಡ, ಸ್ವಾಮಿಗೌಡ, ಸಾವಿತ್ರಮ್ಮ, ಸರೋಜಮ್ಮ, ಬಸವರಾಜು, ಹೊನ್ನೇಗೌಡ ಭಾಗವಹಿಸಿದ್ದರು.

ಕುರುಬೂರು ಪಿಎಸಿಎಸ್‌ಗೆ 4.58 ಲಕ್ಷ ನಿವ್ವಳ ಲಾಭ


ವಾರ್ಷಿಕ ಮಹಾಸಭೆಯನ್ನು ಅಧ್ಯಕ್ಷ ಗುರುಬಸಪ್ಪ ಉದ್ಘಾಟಿಸಿದರು.

ತಿ.ನರಸೀಪುರ, ಸೆ.30– ಕುರುಬೂರು ಕೃಷಿ ಪತ್ತಿನ ಸಹಕಾರ ಸಂಘ 2023–24ನೇ ಸಾಲಿನಲ್ಲಿ 4,58,671 ಲಕ್ಷ ರೂ. ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಗುರುಬಸಪ್ಪ ತಿಳಿಸಿದರು.

ಗ್ರಾಮದ ಸಹಕಾರ ಸಂಘದ ಆವರಣದಲ್ಲಿ ನಡೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘವು ಸಹಕಾರಿಗಳ ಸಹಕಾರದಿಂದ ಉತ್ತಮ ಲಾಭ ಗಳಿಸಲು ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಸಂಘವನ್ನು ಮತ್ತಷ್ಟು ಅಭಿವೃದ್ಧಿಯತ್ತ ಕೊಂಡೊಯ್ಯುವ ಕೆಲಸವನ್ನು ತಮ್ಮೆಲ್ಲರ ಸಹಕಾರದೊಂದಿಗೆ ಮಾಡಲಾಗುವುದು ಎಂದರು. ಸಹಕಾರ ಸಂಘದ ಸಹಕಾರಿಗಳು ಸಂಘದ ಅಭಿವೃದ್ಧಿಯ ಕಣ್ಣುಗಳಿದ್ದಂತೆ. ತಾವು ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿಸಿದಾಗ ಮಾತ್ರ ಸಂಘ ಅಸ್ತಿತ್ವದಲ್ಲಿರಲು ಸಾಧ್ಯ. ಸಾಲ ಪಡೆದ ರೈತರು ಸುಸ್ತಿಯಾಗದೆ ಮರುಪಾವತಿಸಿ ಸಂಘದ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆ ನೀಡಲು ಮುಂದಾಗುವಂತೆ ಮನವಿ ಮಾಡಿದರು.

ಸಂಘವು ಸುಸ್ತಿದಾರರಾಗದೇ ಸಕಾಲಕ್ಕೆ ಸಾಲ ಮರುಪಾವತಿ ಮಾಡಿದವರಿಗೆ ಹೆಚ್ಚಿನ ಸಾಲ ನೀಡುತ್ತದೆ. ಸಹಕಾರ ಸಂಘವು ಕೊಡು–ಕೊಳ್ಳುವ ಸಂಸ್ಥೆಯಾಗಿದ್ದು, ಷೇರುದಾರರ ಹಣ ಪೋಲಾಗಲು ಸಂಘದಲ್ಲಿ ಅವಕಾಶಗಳಿಲ್ಲ. ಸರ್ಕಾರದಿಂದ ಹೆಚ್ಚಿನ ಅನುದಾನ ತರಲು ಪ್ರಯತ್ನ ಮಾಡಲಾಗುವುದೆಂದು ತಿಳಿಸಿದರು.

ಸಂಘದ ಸಿಇಓ ಶ್ರೀನಿವಾಸ್ ಮೂರ್ತಿ ವಾರ್ಷಿಕ ವರದಿ ಸೇರಿದಂತೆ ಲಾಭ ನಷ್ಟದ ವಿವರ ಮಂಡಿಸಿದರು. ಸಭೆಯಲ್ಲಿ ಉಪಾಧ್ಯಕ್ಷ ಕು.ಶಿ.ಬ್ಯಂಗೇಶ್, ಚಿನ್ನಸ್ವಾಮಿ, ಎಂ.ರವಿ, ಕೆ.ಜಿ.ವೀರಣ್ಣ, ಶಿವಣ್ಣ, ಬಸವರಾಜು, ನಂಜುಂಡಯ್ಯ, ಶಿವರುದ್ರಮ್ಮ, ಭವ್ಯ, ಸೋಮಶೇಖರ್, ಗುಮಾಸ್ತೆ ಅರುಣ ಕುಮಾರಿ ಸೇರಿದಂತೆ ಸಂಘದ ವ್ಯಾಪ್ತಿಯ ಸದಸ್ಯರು, ಮುಖಂಡರು ಹಾಜರಿದ್ದರು.

ಬುಡಕಟ್ಟು ನಮ್ಮ ಮಾನವ ಕುಲದ ಮೂಲ ನೆಲೆ

——— ಹಿರಿಯ ಪತ್ರಕರ್ತ ಬನ್ನೂರು ಕೆ.ರಾಜು ಅಭಿಮತ ———


ಕಾರ್ಯಕ್ರಮದಲ್ಲಿ ಬುಡಕಟ್ಟು ಸಮುದಾಯದವರನ್ನು ಸನ್ಮಾನಿಸಲಾಯಿತು.

ಹುಣಸೂರು, ಸೆ.30– ಬುಡಕಟ್ಟು ನಮ್ಮ ಮಾನವ ಕುಲದ ಮೂಲ ನೆಲೆ ಎಂದು ಸಾಹಿತಿ, ಹಿರಿಯ ಪತ್ರಕರ್ತ ಬನ್ನೂರು ಕೆ.ರಾಜು ತಿಳಿಸಿದರು.

ನಗರದ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಕನ್ನಡ ಜಾನಪದ ಪರಿಷತ್ ತಾಲೂಕು ಘಟಕ ಹುಣಸೂರು ಹಾಗೂ ಕನ್ನಡ ವಿಭಾಗ ವತಿಯಿಂದ ನಡೆದ ವಿಶ್ವ ಬುಡಕಟ್ಟು ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಬುಡಕಟ್ಟು ಒಗ್ಗಟ್ಟು, ಸಂಸ್ಕಾರ, ಸಂಸ್ಕೃತಿಯ ಪ್ರತೀಕ. ಇದೊಂದು ವಿಶಿಷ್ಟ ಮಾನವ ಜನಾಂಗ. ಮಾನವ ಕುಲದ ಅಸ್ಮಿತೆ. ಒಂದೇ ದೇವರು ಒಂದೇ ಧರ್ಮವುಳ್ಳ ನಾಗರಿಕತೆ ಕೊಟ್ಟ ಸಂಸ್ಕೃತಿಯಲ್ಲಿ ನಾವು ಬದುಕುತ್ತಿದ್ದೇವೆ. ಕಲೆ, ಸಾಹಿತ್ಯ, ಸಂಸ್ಕೃತಿ ಎಲ್ಲದರಲ್ಲೂ ಬುಡಕಟ್ಟುವಿನ ಕೊಡುಗೆ ಇದೆ. ನೈತಿಕತೆ ಇಟ್ಟುಕೊಂಡು ಬಾಳುತ್ತಿರುವ ವಿಶಿಷ್ಟ ಸಮುದಾಯ ಎಂದರು.

ಬುಡಕಟ್ಟು ಸಮುದಾಯ ಕೂಡಿ ಬಾಳುವ ಸಂಸ್ಕೃತಿ ಮನುಷ್ಯತ್ವದ ಪಾಠ ಹೇಳುವ ಜನಾಂಗ. ಇವರು ಸಮಾಜದ ಮುಖ್ಯವಾಹಿನಿಗೆ ಬರಬೇಕು. ಸರ್ಕಾರ ಹೆಚ್ಚಿನ ಸೌಲಭ್ಯ ನೀಡುವ ಮೂಲಕ ಅವರ ಬದುಕನ್ನು ಸುಧಾರಿಸಬೇಕು ಎಂದರು.

ಜಿಲ್ಲಾ ಕನ್ನಡ ಜಾನಪದ ಪರಿಷತ್ ಅಧ್ಯಕ್ಷ ಪ್ರಕಾಶ್ ಮಾತನಾಡಿ, ಆದಿವಾಸಿ ಒಂದು ವಿಶಿಷ್ಟವಾದ ಬುಡಕಟ್ಟು, 1994ರ ಆ.9ರಂದು ವಿಶ್ವ ಬುಡಕಟ್ಟು ದಿನಾಚರಣೆ ಘೋಷಣೆ ಮಾಡಿದ ನಂತರ ಇಂತಹ ಕಾರ್ಯಕ್ರಮಗಳು ನಡೆಯುತ್ತಿವೆ. ಗಡಿನಾಡಿನ ಸೋಲಿಗರನ್ನು ಜಾಗೃತಿಗೊಳಿಸುವ ಮೂಲಕ ಅವರಲ್ಲಿ ಬದಲಾವಣೆ ತಂದವರು ಡಾ.ಸುದರ್ಶನ್. ಕಾಡಂಚಿನಲ್ಲಿ ಮರಗಿಡ, ಪಕ್ಷಿ ಪ್ರಾಣಿಗಳೊಂದಿಗೆ ಜೀವನ ನಡೆಸುವ ಒಂದು ವಿಶಿಷ್ಟವಾದ ಜನ ಬುಡಕಟ್ಟು ಸಮುದಾಯ. ಇತ್ತೀಚೆಗೆ ರಾಜ್ಯ ಸರ್ಕಾರ 62 ಗ್ರಾಮಗಳನ್ನು ದತ್ತು ತೆಗೆದುಕೊಂಡು ಅವರಿಗೆ ಮೂಲ ಸೌಕರ್ಯಗಳನ್ನು ಒದಗಿಸುವ ಮೂಲಕ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಈ ವೇಳೆ ಬುಡಕಟ್ಟು ಸಮುದಾಯದ ತೋಲಯ್ಯ, ಜಯಪ್ಪ, ಕಿರುಮಿದಿ, ಗೌರಮ್ಮ ಅವರನ್ನು ಸನ್ಮಾನಿಸಲಾಯಿತು. ಬುಡಕಟ್ಟು ಜನ ಸಮುದಾಯಕ್ಕೆ ಸೇವೆ ಮಾಡುತ್ತಿರುವ ಡಾ.ಎಸ್.ಶ್ರೀಕಾಂತ್ ಅವರನ್ನು ಗೌರವಿಸಲಾಯಿತು. ಸಿಂಗೇಶ್, ಮಹೇಶ್ ಚಿಲ್ಕುಂದ, ಡಾ.ಸೋಮಶೇಖರ ಮಲರಾ ಹಾಗೂ ಪ್ರವೀಣ್ ತಂಡ ಜಾನಪದ ಗೀತಗಾಯನ ನಡೆಸಿಕೊಟ್ಟರು. ಕುಮಾರಿ ಇಂಚರ ಭರತನಾಟ್ಯ ಪ್ರದರ್ಶನ ನೀಡಿದರು. ಪ್ರಾಂಶುಪಾಲ ಪುಟ್ಟಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ರವಿಗೌಡ, ಬಸವಲಿಂಗಸ್ವಾಮಿ, ಡಾ.ನಂಜುಂಡಸ್ವಾಮಿ, ಬಿ.ಡಾ.ವಿಶ್ವನಾಥ್, ಡಾ.ಕರುಣಾಕರ್, ಡಾ.ಪ್ರಸನ್ನ, ಕೆ.ಪಿ, ಲಕ್ಷ್ಮಯ್ಯ ಇತರರಿದ್ದರು.

ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅಪಾರ

ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಪಿ.ಪ್ರಶಾಂತ್‌ಗೌಡ


ಕಾರ್ಯಕ್ರಮದಲ್ಲಿ ಶಿಕ್ಷಕರಿಗೆ ನಾಡಪ್ರಭು ಕೆಂಪೇಗೌಡ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪಿರಿಯಾಪಟ್ಟಣ, ಸೆ.30– ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅಪಾರ ಎಂದು ತಾಲೂಕು ಒಕ್ಕಲಿಗರ ಸಂಘದ ಗೌರವಾಧ್ಯಕ್ಷ ಪಿ.ಪ್ರಶಾಂತ್ ಗೌಡ ತಿಳಿಸಿದರು.

ತಾಲೂಕು ಒಕ್ಕಲಿಗರ ಸಂಘದಿಂದ ಏರ್ಪಡಿಸಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಶಿಕ್ಷಣ ನಿರಂತರ ಕಲಿಕೆಯ ಕ್ರಮವಾಗಿದೆ. ವಿದ್ಯಾರ್ಥಿಗಳ ಸರ್ವೋತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ತಂದೆ ತಾಯಿ ಜನ್ಮ ನೀಡುತ್ತಾರೆ. ಆದರೆ ಜೀವನದ ಮೌಲ್ಯಗಳನ್ನು ಗುರುಗಳು ಕಲಿಸುತ್ತಾರೆ. ಅವರ ಸೇವೆ ಅನನ್ಯ. ಆದ್ದರಿಂದ ಶಿಕ್ಷಕರನ್ನು ಸದಾ ಸ್ಮರಿಸಬೇಕು. ಮೊದಲೆಲ್ಲಾ ನಗರ ಪ್ರದೇಶಗಳಲ್ಲಿ ಮಾತ್ರ ಶಿಕ್ಷಣ ಸಂಸ್ಥೆಗಳು ಇದ್ದವು. ಗ್ರಾಮೀಣ ವಿದ್ಯಾರ್ಥಿಗಳು ನಗರ ಪ್ರದೇಶಗಳಿಗೆ ಹೋಗಬೇಕಾದ ಅನಿವಾರ್ಯತೆ ಇತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿಯೂ ಕೂಡ ಶಿಕ್ಷಣ ಸಂಸ್ಥೆಗಳು ಪ್ರಾರಂಭವಾದ ಪರಿಣಾಮ ಹಳ್ಳಿಯ ಮಕ್ಕಳು ಉತ್ತಮ ಶಿಕ್ಷಣ ಪಡೆಯುವಂತಾಗಿದೆ ಎಂದರು.

ಸಮಾರಂಭದಲ್ಲಿ ಅತ್ತಿಗೋಡು ಸರ್ಕಾರಿ ಪ್ರೌಢಶಾಲೆ ಮುಖ್ಯಶಿಕ್ಷಕ ನಾಗಶೆಟ್ಟಿ, ಕೋಗಿಲವಾಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕ ರವಿಕುಮಾರ್, ಅಕ್ಷರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಧನಂಜಯ್, ವಡ್ಡರ ಬೈಲಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಕ್ಷಕಿ ತನುಜಾ, ಕೋಮಲಾಪುರ ಶ್ರೀರಾಮ ಪ್ರೌಢಶಾಲೆ ಶಿಕ್ಷಕ ಕೀರ್ತಿ ಪ್ರಸಾದ್, ಬೂದಿತಿಟ್ಟು ವಿವೇಕಾನಂದ ಶಾಲೆಯ ಆನಂದ್ ರವರಿಗೆ ನಾಡಪ್ರಭು ಕೆಂಪೇಗೌಡ ಶಿಕ್ಷಕ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು. ಈ ವೇಳೆ ಸಂಘದ ಅಧ್ಯಕ್ಷ ಆನಂದ್, ಉಪಾಧ್ಯಕ್ಷ ಚಂದ್ರೇಗೌಡ, ಕಾನೂನು ಸಲಹೆಗಾರ ಕೆ.ಡಿ. ಸಂದೀಪ್, ಕಾರ್ಯದರ್ಶಿ ಮೋಹನ್, ಖಜಾಂಚಿ ಮನು, ನಿರ್ದೇಶಕರಾದ ಮಧು, ಕುಮಾರ್, ರವಿ, ಅರುಣ್, ಕಿರಣ್ ರಾಜು, ಸದಸ್ಯರಾದ ಪ್ರಭಾ, ರವಿ, ಗೋವಿಂದೇಗೌಡ ಸೇರಿದಂತೆ ಇತರರು ಇದ್ದರು.

ಗೋಣಹಳ್ಳಿ ಡೈರಿ ವಾರ್ಷಿಕ ಮಹಾಸಭೆ



ನಂಜನಗೂಡು ತಾಲೂಕು ಗೋಣಹಳ್ಳಿ ಡೈರಿ ವಾರ್ಷಿಕ ಮಹಾಸಭೆ ಸಂಘದ ಆವರಣದಲ್ಲಿ ನಡೆಯಿತು. ಈ ವೇಳೆ ಅಧ್ಯಕ್ಷ ಎಸ್.ದೊಡ್ಡಸ್ವಾಮಿ, ಉಪಾಧ್ಯಕ್ಷ ಜಿ.ಎನ್. ಮಹೇಶ್, ನಿರ್ದೇಶಕರಾದ ದೊಡ್ಡನಾಯಕ, ಮಹದೇವನಾಯಕ, ಚಿಕ್ಕಮಾರ ನಾಯಕ, ಬಿ.ಮಂಜುನಾಥ್, ರಾಜೇಶ್, ಡಿ.ಕುಮಾರ್, ರಾಜಮ್ಮ, ಲೋಕಮ್ಮ ರಾಜಮ್ಮ, ಸಿಇಓ ಜಿ.ಎಂ.ಮಹೇಶ್, ಹಾಲುಪರೀಕ್ಷಕ ಸಿ.ರಾಘವೇಂದ್ರ ಇತರರಿದ್ದರು.

ಸಕಾಲಕ್ಕೆ ಸಾಲ ಮರು ಪಾವತಿಸಲು ಮನವಿ

ಮಲ್ಲುಂಡಿ, ಸೆ.30– ಸಂಘದಿಂದ ಸಾಲ ಪಡೆದ ರೈತರು ಸಕಾಲಕ್ಕೆ ಮರುಪಾವತಿಸಿದರೆ ಮಾತ್ರ ಸಂಘ ಅಭಿವೃದ್ಧಿ ಕಾಣಲು ಸಾಧ್ಯ ಎಂದು ನೆಲ್ಲಿತಾಳಪುರ ಪಿಎಸಿಎಸ್ ಅಧ್ಯಕ್ಷ ಹೆಚ್.ಎಂ.ಕೆಂಡಗಣ್ಣಪ್ಪ ತಿಳಿಸಿದರು.

ನಂಜನಗೂಡು ತಾಲೂಕಿನ ನೆಲ್ಲಿತಾಳಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘ ಷೇರುದಾರರ ಸಹಕಾರದಿಂದ ಉತ್ತಮವಾಗಿ ನಡೆಯುತ್ತಿದೆ. ಸಂಘದಲ್ಲಿ ಸಾಲ ಪಡೆದ ರೈತರು ಸಕಾಲಕ್ಕೆ ಸಾಲ ಮರುಪಾವತಿಸಿದರೆ ಸಂಘವು ಮತ್ತಷ್ಟು ಅಭಿವೃದ್ಧಿ ಹೊಂದಲಿದೆ. ಇದಕ್ಕೆ ಸಂಘದ ಎಲ್ಲಾ ಸದಸ್ಯರು ಸಹಕರಿಸಬೇಕು ಎಂದು ಮನವಿ ಮಾಡಿದರು. ಸಂಘದ ಉಪಾಧ್ಯಕ್ಷ ಕೂಸೇಗೌಡ, ನಿರ್ದೇಶಕರಾದ ರವೀಂದ್ರ, ವೀರಭದ್ರಪ್ಪ, ಮಲ್ಲಿಗಮ್ಮ, ಚಿಕ್ಕವೆಂಕಟಶೆಟ್ಟಿ, ಹನುಮೇಶ, ಸುಧಾಮಣಿ, ರಾಮದಾಸಯ್ಯ, ಸಣ್ಣಪ್ಪ, ಮಹದೇವಯ್ಯ, ಪುಟ್ಟಸ್ವಾಮಿ, ಸಿಇಓ ಎ.ಭಾರತಿಬಾಯಿ, ವಿನುತಬಾಯಿ ಸೇರಿದಂತೆ ಇನ್ನಿತರರಿದ್ದರು.


ವಾರ್ಷಿಕ ಮಹಾಸಭೆಯನ್ನು ಅಧ್ಯಕ್ಷ ಕೆಂಡಗಣ್ಣಪ್ಪ ಉದ್ಘಾಟಿಸಿದರು.

ಬಿಜೆಪಿ ತೆಕ್ಕೆಗೆ ಸರಗೂರು ಪಟ್ಟಣ ಪಂಚಾಯಿತಿ

ರಾಧಿಕಾ ಶ್ರೀನಾಥ್ ಅಧ್ಯಕ್ಷೆ, ಶಿವಕುಮಾರ್ ಉಪಾಧ್ಯಕ್ಷರಾಗಿ ಆಯ್ಕೆ


ಸರಗೂರು ಪಪಂ ಅಧ್ಯಕ್ಷೆಯಾಗಿ ರಾಧಿಕಾ, ಉಪಾಧ್ಯಕ್ಷರಾಗಿ ಶಿವಕುಮಾರ್ ಆಯ್ಕೆಯಾದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಸರಗೂರು, ಸೆ.30– ಇಲ್ಲಿನ ಪಟ್ಟಣ ಪಂಚಾಯಿತಿ ಅಧಿಕಾರವನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳುವಲ್ಲಿ ಬಿಜೆಪಿ ಯಶಸ್ವಿಯಾಗಿದ್ದು, ನೂತನ ಅಧ್ಯಕ್ಷೆಯಾಗಿ ರಾಧಿಕಾ ಶ್ರೀನಾಥ್, ಉಪಾಧ್ಯಕ್ಷರಾಗಿ ಶಿವಕುಮಾರ್ ಆಯ್ಕೆಯಾಗಿದ್ದಾರೆ.

ಬಿಜೆಪಿ 6, ಕಾಂಗ್ರೆಸ್ 2, ಜೆಡಿಎಸ್ 3, ಓರ್ವ ಪಕ್ಷೇತರ ಸದಸ್ಯ ಸೇರಿದಂತೆ ಒಟ್ಟು 12 ಸದಸ್ಯ ಬಲದ ಪಟ್ಟಣ ಪಂಚಾಯಿತಿ ಅಧ್ಯಕ್ಷ ಸ್ಥಾನ ಬಿಸಿಎಂ 'ಎ', ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿತ್ತು. ಪಪಂ ಸಭಾಂಗಣದಲ್ಲಿ ನಡೆದ ಚುನಾಚವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿಯಿಂದ ರಾಧಿಕಾ ಶ್ರೀನಾಥ್, ಜೆಡಿಎಸ್‌ನಿಂದ ಚೈತ್ರ ಸ್ವಾಮಿ ನಾಮಪತ್ರ ಸಲ್ಲಿಸಿದ್ದರು. ನಂತರ ನಡೆದ ಚುನಾವಣೆಯಲ್ಲಿ 6 ಮತಗಳನ್ನು ಪಡೆದ ರಾಧಿಕಾ ಶ್ರೀನಾಥ್ ಅಧ್ಯಕ್ಷರಾಗಿ ಆಯ್ಕೆಯಾದರೇ, 2 ಮತ ಪಡೆದ ಚೈತ್ರಸ್ವಾಮಿ ಪರಾಭವಗೊಂಡರು. ಇನ್ನು ಉಪಾಧ್ಯಕ್ಷ ಸ್ಥಾನಕ್ಕೆ ಬಿಜೆಪಿಯ ಶಿವಕುಮಾರ್ ಅವರನ್ನು ಹೊರತು ಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯಾದರು. ನೂತನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯನ್ನು ಚುನಾವಣಾಧಿಕಾರಿಯೂ ಆದ ತಹಸೀಲ್ದಾರ್ ರುಕಿಯಾ ಬೇಗಂ ಘೋಷಿಸಿದರು. ಸಹ ಚುನಾವಣಾಧಿಕಾರಿಗಳಾಗಿ ಉಪ ತಹಸೀಲ್ದಾರ್ ಸುನೀಲ್, ರವೀಂದ್ರ, ಮಿಥುನ್, ಮುಖ್ಯಾಧಿಕಾರಿ ಮಂಜುನಾಥ್ ಕಾರ್ಯನಿರ್ವಹಿಸಿದರು.

ನೂತನ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆಯೇ ಪಟ್ಟಣ ಪಂಚಾಯಿತಿ ಆವರಣದಲ್ಲಿ ಜಮಾಯಿಸಿದ್ದ ಬಿಜೆಪಿ ಕಾರ್ಯಕರ್ತರು ಹಾಗೂ ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಚುನಾವಣೆಯಲ್ಲಿ ಬಿಜೆಪಿಯ 6, ಜೆಡಿಎಸ್‌ನ ಮೂವರು ಸದಸ್ಯರ ಪೈಕಿ 4ನೇ ವಾರ್ಡ್ ಸದಸ್ಯ ಎಸ್.ಎಲ್.ರಾಜಣ್ಣ ನಿಧನರಾಗಿರುವುದರಿಂದ ಇಬ್ಬರು ಭಾಗವಹಿಸಿದ್ದರೇ, ಕಾಂಗ್ರೆಸ್‌ನ ಇಬ್ಬರು, ಓರ್ವ ಪಕ್ಷೇತರ ಸದಸ್ಯ ಗೈರಾಗಿದ್ದರು.

ರಾಜ್ಯ ಎಸ್‌ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕೆ.ಎಂ.ಕೃಷ್ಣನಾಯಕ ಮಾತನಾಡಿ, ಸರಗೂರು ಪಟ್ಟಣ ಪಂಚಾಯಿತಿಯ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನವನ್ನು ತಮ್ಮದಾಗಿಸಿಕೊಳ್ಳುವ ಮೂಲಕ ಅಧಿಕಾರದ ಗದ್ದುಗೆ ಏರಿದ್ದೇವೆ. ಪ್ರಸ್ತುತ ತಾಲೂಕಿನಲ್ಲಿ ಮೈತ್ರಿ ಮುಂದುವರೆಯಬೇಕಿತ್ತು. ಆದರೆ ಕಾರಣಾಂತರದಿಂದ ಪಾಲಿಸಲು ಸಾಧ್ಯವಾಗಿಲ್ಲ. ಮುಂದಿನ ದಿನಗಳಲ್ಲಿ ಮೈತ್ರಿ ಧರ್ಮ ಪಾಲಿಸುತ್ತೇವೆ. ಇದೀಗ ಇಲ್ಲಿನ ಪಪಂನಲ್ಲಿ ಒಳ್ಳೆಯ ವಾತಾವರಣ ಸೃಷ್ಟಿಯಾಗಿದೆ. ತಾಲೂಕು ಬಿಜೆಪಿ ಅಧ್ಯಕ್ಷರು, ಘಟಕದ ಎಲ್ಲಾ ಮುಖಂಡರು ಶ್ರಮ ವಹಿಸಿ ಕೆಲಸ ಮಾಡಿದ್ದಾರೆ. ಇದೇ ವೇಳೆ ಬಿಜೆಪಿ, ಜೆಡಿಎಸ್ ಪಕ್ಷದ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಚುನಾವಣೆಯಲ್ಲಿ ಪಪಂ ಸದಸ್ಯರಾದ ವಿನಾಯಕ ಪ್ರಸಾದ್, ನೂರಾಳಸ್ವಾಮಿ, ದಿವ್ಯ, ಉಮಾ, ಚೈತ್ರ, ಸಣ್ಣತಾಯಮ್ಮ, ತಾಲೂಕು ಬಿಜೆಪಿ ಅಧ್ಯಕ್ಷರಾದ ಗುರುಸ್ವಾಮಿ, ಶಂಭೇಗೌಡ, ಜಿಲ್ಲಾ ಕಾರ್ಯದರ್ಶಿ ಎಂ.ಪಿ.ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಲೋಕೇಶ್, ಪ್ರಕಾಶ್, ಮೊತ್ತ ಬಸವರಾಜು, ಜಿಪಂ ಮಾಜಿ ಸದಸ್ಯ ವೆಂಕಟಸ್ವಾಮಿ, ವಕೀಲರಾದ ಪ್ರಶಾಂತ್, ಪ್ರಸನ್ನ, ಲೇಖನ್, ತಾಲೂಕು ಮಾಜಿ ಮಂಡಲ ಅಧ್ಯಕ್ಷ ಗುರುಸ್ವಾಮಿ, ಗಿರೀಶ್, ನಟರಾಜು, ಗಣಪತಿ, ನಂದೀಶ್, ಎಂ.ನಾಗರಾಜು, ರಮೇಶ್, ದೊಡ್ಡಯ್ಯ, ರಾಜು, ಗೋಪಾಲಸ್ವಾಮಿ, ಸೈಯದ್, ರವಿ, ಚನ್ನಪ್ಪ, ಅನಿಲ್ ಇನ್ನಿತರರಿದ್ದರು.

> **ಸರಗೂರು ಪಟ್ಟಣ ಪಂಚಾಯಿತಿ ಬಿಜೆಪಿ ಪಾಲಾಗಿದ್ದು, ಅಧ್ಯಕ್ಷೆಯಾಗಿ ರಾಧಿಕಾ, ಉಪಾಧ್ಯಕ್ಷರಾಗಿ ಶಿವಕುಮಾರ್ ಆಯ್ಕೆಯಾಗಿದ್ದು, ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಇಂದಿನ ಗೆಲುವು ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗೆ ದಿಕ್ಸೂಚಿಯಾಗಿದೆ. ಬಿಜೆಪಿ ರಾಜ್ಯಾಧ್ಯಕ್ಷರು ನೂತನ ವರಿಷ್ಠರಿಗೆ ಶುಭ ಕೋರಿದ್ದಾರೆ. ಮುಂದಿನ ದಿನಗಳಲ್ಲಿ ಈ ಭಾಗದಲ್ಲಿ ಬಿಜೆಪಿ ಬಾವುಟ ಹಾರಿಸುತ್ತೇವೆ. ಮಾಜಿ ಶಾಸಕ ಚಿಕ್ಕಣ್ಣ ಅವರ ಸಲಹೆ ಪಡೆಯುತ್ತೇವೆ.**
>
> -ಎಲ್.ಆರ್.ಮಹದೇವಸ್ವಾಮಿ,
> *ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ.*

ನಿಧನ



ಅವಿನಾಶ್‌ಗೌಡ

ನಂಜನಗೂಡು, ಸೆ.30– ಪಟ್ಟಣದ ಒಕ್ಕಲಗೇರಿ ಬಡಾವಣೆ ನಿವಾಸಿ ಅವಿನಾಶ್‌ಗೌಡ (45) ಸೋಮವಾರ ನಿಧನರಾದರು. ಮೃತರು ತಂದೆ, ತಾಯಿ, ಪತ್ನಿ, ಪುತ್ರ, ಸೋದರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಪರಶುರಾಮ ದೇವಸ್ಥಾನದ ಹತ್ತಿರದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಂಕರಪ್ಪ




ನಂಜನಗೂಡು, ಸೆ.30– ಜಿಪಂ ಮಾಜಿ ಉಪಾಧ್ಯಕ್ಷ, ಮಡುವಿನಹಳ್ಳಿ ಗ್ರಾಮದ ನಿವಾಸಿ ಶಂಕರಪ್ಪ (77) ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ; ಸಿಬಿಐ ತನಿಖೆಯೇ ಸೂಕ್ತ

●ವಿಧಾನಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಆಗ್ರಹ ●ಲೋಕಾಯುಕ್ತ ಎಡಿಜಿಪಿ ಚಂದ್ರಶೇಖರ್ ಅವರನ್ನು ಬದಲಾಯಿಸಬೇಕು ●ಸಿದ್ದರಾಮಯ್ಯರಿಗೆ ಅಧಿಕಾರಿಗಳ ಮುಂದೆ ಕೈಕಟ್ಟಿ ನಿಲ್ಲುವ ದುಸ್ಥಿತಿ; ದಾರಿ ತಪ್ಪಿಸಿದ ಸಚಿವ ●ಕೋರ್ಟ್, ಮುಡಾ ವಿಷಯದಲ್ಲಿ ಸಿಎಂ ವಿರುದ್ಧ ನೀಡಿರುವ ತೀರ್ಪು ಸರಿಯಾಗಿದೆ



ಮೈಸೂರು,ಸೆ.30(ಎಂಟಿವೈ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಹಗರಣದಲ್ಲಿ ಮುಖ್ಯಮಂತ್ರಿಗಳ ಹೆಸರು ಸೇರಿರುವ ಕಾರಣ ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಲೋಕಾಯುಕ್ತ ಹಾಲಿ ಎಡಿಜಿಪಿ ಚಂದ್ರಶೇಖರ್ ಅವರನ್ನು ಬದಲಾಯಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾ ಪ್ರಕರಣ ಗಂಭೀರ ಸ್ವರೂಪ ಪಡೆದುಕೊಂಡಿದೆ. ದೇಶಾದ್ಯಂತ ಸದ್ದು ಮಾಡುತ್ತಿದೆ. ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿಯಾಗಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಮುಡಾ ನಿವೇಶನ ಹಂಚಿಕೆ ಹಗರಣದ ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಆಗ ಮಾತ್ರ ಸತ್ಯಾಸತ್ಯತೆ ತಿಳಿಯಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಲೋಕಾಯುಕ್ತ ಎಡಿಜಿಪಿ ಬದಲಾಯಿಸಿ: ದಕ್ಷತೆಗೆ ಕರ್ನಾಟಕ ಪೊಲೀಸರು ಹೆಸರುವಾಸಿಯಾಗಿದ್ದಾರೆ. ಆ ಪ್ರಾಮಾಣಿಕತೆ ಮತ್ತು ದಕ್ಷತೆ ಹೆಸರು ಕಾಪಾಡಿಕೊಳ್ಳಬೇಕಾದರೆ ಲೋಕಾಯುಕ್ತ ಎಡಿಜಿಪಿಯನ್ನು ಬದಲಿಸಬೇಕು. ಪೊಲೀಸರು ಆಮಿಷಕ್ಕೆ ಒಳಗಾಗದೆ ಪ್ರಾಮಾಣಿಕವಾಗಿ ಮುಡಾ ಪ್ರಕರಣದ ತನಿಖೆ ನಡೆಸಬೇಕು. ಮೈಸೂರಿನ ಲೋಕಾಯುಕ್ತ ಎಸ್ಪಿ ಬಗ್ಗೆ ಗೌರವ ಇದೆ. ಆದರೆ, ಎಡಿಜಿಪಿ ಚಂದ್ರ ಶೇಖರ್ ಬಗ್ಗೆ ನನಗೆ ಅನುಮಾನ ಇದೆ. ಅವರು ನಿವೃತ್ತ ಪೊಲೀಸ್ ಅಧಿಕಾರಿ ಕೆಂಪಯ್ಯನ ಶಿಷ್ಯ. ಅವರನ್ನು ಬದಲಾಯಿಸಿ ಖಡಕ್ ಅಧಿಕಾರಿಯನ್ನು ನಿಯೋಜಿಸಬೇಕು ಎಂದು ಒತ್ತಾಯಿಸಿದರು.

ಕೈಕಟ್ಟಿ ನಿಲ್ಲಬೇಕಾದ ದುಸ್ಥಿತಿ: ಮುಡಾ ಹಗರಣದಿಂದಾಗಿ ಸಿಎಂ ಸಿದ್ದ ರಾಮಯ್ಯ ತಮ್ಮ ಅಧೀನದ ಅಧಿಕಾರಿಗಳ ಮುಂದೆ ಕೈ ಕಟ್ಟಿ ನಿಲ್ಲುವ ದುಸ್ಥಿತಿಗೆ ಬಂದು ನಿಂತಿದ್ದಾರೆ. ಅವರ ಇಂದಿನ ಪರಿಸ್ಥಿತಿ ನೋಡಿದರೆ ಮನಸ್ಸಿಗೆ ವೇದನೆ ಆಗುತ್ತದೆ. ಈ ಬಗ್ಗೆ ಸಿದ್ದರಾಮಯ್ಯ ಮತ್ತೆ ಯೋಚಿಸಬೇಕು.

ದಾರಿ ತಪ್ಪಿಸಿದ ಸಚಿವ: ಈ ಹಿಂದೆ ಮುಡಾ ಗೇಟ್ ಮುಂಭಾಗ ಸುದ್ದಿಗೋಷ್ಠಿ ನಡೆಸಿ ಮುಡಾದಿಂದ ಪಡೆದಿರುವ 14 ಸೈಟ್‌ಗಳನ್ನು ಹಿಂದಿರುಗಿಸಿ ಎಂದು ಸಲಹೆ ನೀಡಿದ್ದೆ. ಈ ಸಂಬಂಧ ನಗರಾಭಿವೃದ್ಧಿ ಸಚಿವ ನಿಮ್ಮನ್ನು ದಾರಿ ತಪ್ಪಿಸಿದ್ದಾನೆ ಎಂದು ಎಚ್ಚರಿಕೆ ನೀಡಿದ್ದೆ. ಬೇರೆಯವರನ್ನು ರಕ್ಷಣೆ ಮಾಡಲು ಹೋಗಿ ನಿಮಗೆ ಈ ಸ್ಥಿತಿ ಬಂದಿದೆ ಸಿಎಂ ವಿರುದ್ಧದ ಮುಡಾ ಪ್ರಕರಣ ರಾಜಭವನ, ರಾಜ್ಯಪಾಲ, ಹೈಕೋರ್ಟ್, ಜನಪ್ರತಿನಿಧಿಗಳ ಸಭೆ ದಾಟಿ ಇದೀಗ ಲೋಕಾಯುಕ್ತ ತನಿಖೆಗೆ ಬಂದು ನಿಂತಿದೆ. ಕಾನೂನು ಸಲಹೆಗಾರ, ಸ್ನೇಹಿತರು, ಮಂತ್ರಿ ಮಂಡಲ, ಆಪ್ತವಲಯ ಎಲ್ಲರೂ ಸೇರಿ ಸಿದ್ದರಾಮಯ್ಯ ಅವರನ್ನು ದಿಕ್ಕು ತಪ್ಪಿಸಿದ್ದಾರೆ ಎಂದರು.

ಮಹದೇವಪ್ಪ ನ್ಯಾಯಾಧೀಶರಲ್ಲ...!

ಮೈಸೂರು,ಸೆ.30(ಎಂಟಿವೈ)–ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಏನೂ ತಪ್ಪೇ ಮಾಡಿಲ್ಲ ಎನ್ನುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಬೊಗಳೆದಾಸನಂತೆ ವರ್ತಿಸುತ್ತಿದ್ದಾರೆ ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಕಿಡಿಕಾರಿದ್ದಾರೆ.

ಯಾವಾಗಲೂ ಸಂವಿಧಾನ, ಪ್ರಜಾಪ್ರಭುತ್ವ, ಡಾ.ಅಂಬೇಡ್ಕರ್, ನ್ಯಾಯದ ಬಗ್ಗೆ ಬೊಗಳೆ ಮಾತನಾಡುವ ಸಚಿವ ಹೆಚ್.ಸಿ.ಮಹದೇವಪ್ಪ ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಏನೂ ತಪ್ಪು ಮಾಡಿಲ್ಲ ಎಂದು ಚಮಚ ರೀತಿ ಮಾತನಾಡುತ್ತಿದ್ದಾರೆ. ಸಿದ್ದರಾಮಯ್ಯ ಏನೂ ತಪ್ಪು ಮಾಡಿಲ್ಲ ಎಂದು ಕೋರ್ಟ್ ಹೇಳಬೇಕೇ ಹೊರತು ಮಹದೇವಪ್ಪ ಅಲ್ಲ. ಮಹದೇವಪ್ಪ ನ್ಯಾಯಾಧೀಶರಲ್ಲ. ಆದರೆ, ಯಾಕೆ ಚಮಚಾಗಿರಿ ಮಾಡುತ್ತಿದ್ದಾರೆ ಎಂದು ತಿಳಿಯುತ್ತಿಲ್ಲ ಎಂದು ಟೀಕಿಸಿದರು.

ದಸರಾದಲ್ಲಿ ಕಿಕ್ ಬ್ಯಾಕ್: ಈ ಸಾಲಿನ ದಸರಾ ಮಹೋತ್ಸವಕ್ಕೆ ಸರ್ಕಾರ 45 ಕೋಟಿ ಅನುದಾನ ನೀಡಿದ್ದರೂ ಟಿಕೆಟ್ ದರ ಹೆಚ್ಚಿಸಲಾಗಿದೆ. ಇದರಿಂದ ಯಾರಿಗೆ ಎಷ್ಟು ಕಿಕ್ ಬ್ಯಾಕ್ ಬರುತ್ತದೆಯೋ ಗೊತ್ತಿಲ್ಲ. ದಸರಾವನ್ನು ಹಾಳು ಮಾಡುತ್ತಿದ್ದಾರೆ. ಸಚಿವ ಮಹದೇವಪ್ಪನಿಗೆ ನಾಚಿಕೆ ಆಗಬೇಕು. ಶಾಸಕರ ನೇತೃತ್ವದ ಒಂದು ಕಮಿಟಿಯನ್ನೂ ರಚಿಸಿಲ್ಲ. ಎಲ್ಲರಿಗೂ ಕಣ್ಣುಕಟ್ಟಿ ಎಲ್ಲ ಹಣವನ್ನು ಹೊತ್ತು ಕೊಂಡು ಹೋಗುತ್ತಿಯಾ? ಎಂದು ಪ್ರಶ್ನಿಸಿದರು.

ಬೇರೆ ಕಡೆಯೂ ಹಗರಣ ಆಗಿರಬಹುದು: ನಗರಾಭಿವೃದ್ಧಿ ಇಲಾಖೆಯ ಸಚಿವ ಒಬ್ಬ ಹುಚ್ಚ, ಹುಂಬ, ಅನುಭವ ಇಲ್ಲದವ, ರಿಯಲ್ ಎಸ್ಟೇಟ್ ಉದ್ಯಮಿಯಾಗಿದ್ದಾನೆ. ಆತನ ಬೇಜವಾಬ್ದಾರಿಯಿಂದಾಗಿಯೇ ಮುಡಾದಲ್ಲಿ ಇಷ್ಟೊಂದು ಹಗರಣ ಹೊರಗೆ ಬಂದಿದೆ. ಇನ್ನು ಬೇರೆ ಕಡೆ ಹುಡುಕಿದರೆ ಎಷ್ಟೋ ಹಗರಣ ಹೊರ ಬರಬಹುದು ಎಂದು ಸಂಶಯ ವ್ಯಕ್ತಪಡಿಸಿದರು.

ಸಮರ್ಥವಾಗಿ ತೀರ್ಪು ನೀಡಿದ್ದಾರೆ: ನಾನು ವಕೀಲನಾಗಿದ್ದೆ. ಸಿದ್ದರಾಮಯ್ಯ ವಕೀಲರಾಗಿ ಕೆಲಸ ಮಾಡಿದ್ದಾರೆ. ಕಾನೂನು ನಮಗೆ ಚೆನ್ನಾಗಿ ತಿಳಿದಿದೆ. ನೀವು ನ್ಯಾಯಾಲಯಕ್ಕೆ ಸಲ್ಲಿಸಿದ ಅರ್ಜಿಯ ಆಧಾರದ ಮೇಲೆ ನ್ಯಾಯಮೂರ್ತಿಗಳು ತೀರ್ಪು ನೀಡಿದ್ದಾರೆ. ಆದರೆ, ನೀವು ಮತ್ತು ನಿಮ್ಮ ಆಪ್ತರು ನ್ಯಾಯಾಲಯ ಮತ್ತು ನ್ಯಾಯಾಧೀಶರ ಬಗ್ಗೆ ನಂಬಿಕೆ ಕಳೆದುಕೊಂಡ ರೀತಿ ಮಾತನಾಡುತ್ತಿದ್ದೀರಿ. ತೀರ್ಪನ್ನು ನಾನು ಓದಿದ್ದೇನೆ. ಎಲ್ಲ ಆಯಾಮಗಳನ್ನು ಚರ್ಚೆ ಮಾಡಿ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ. ಇದನ್ನು ನೀವು ಅರ್ಥ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಡಾ ಪ್ರಕರಣದಿಂದ ಸಿದ್ದರಾಮಯ್ಯ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ರೀಡೂ ಪ್ರಕರಣ ಬೆಳಕಿಗೆ ಬಂದಾಗ ಲೋಕಾಯುಕ್ತ ಸಂಸ್ಥೆಯನ್ನು ಮುಚ್ಚುವ ಪ್ರಯತ್ನ ನಡೆಯಿತು. ನೀವು ಯಾವ ಸೀಮೆ ಸತ್ಯವಂತ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಹರಿಹಾಯ್ದರು.

ನಿವೇಶನ ಪಡೆದ ಪ್ರಕರಣದ ವಿರುದ್ಧ ದೂರು ನೀಡಿರುವ ಸ್ನೇಹಮಯಿ ಕೃಷ್ಣನನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಅವನ ಮೇಲೆ ಹಳೆಯ ಪ್ರಕರಣವನ್ನು ತೆಗೆದು ಫಿಕ್ಸ್ ಮಾಡಲು ಮುಂದಾಗಿದ್ದೀರಿ. ಸ್ನೇಹ ಮಯಿ ಕೃಷ್ಣ ಜತೆ ನಾವಿದ್ದೇವೆ. ಅವರು ಯಾರಿಗೂ ಹೆದರುವ ಅವಶ್ಯಕತೆ ಇಲ್ಲ ಎಂದರು.

ಬಿಜೆಪಿಯಲ್ಲಿ 'ಸಿದ್ದರಾಮಯ್ಯ ಮೋರ್ಚಾ' ಅಸ್ತಿತ್ವಕ್ಕೆ!

ಬಿಜೆಪಿಯಲ್ಲಿ ಇದೀಗ ಹೊಸ ಮೋರ್ಚಾ ಅಸ್ತಿತ್ವಕ್ಕೆ ಬಂದಿದೆ. ಅದರ ಹೆಸರು 'ಸಿದ್ದರಾಮಯ್ಯ ಮೋರ್ಚಾ' ಎಂದು. ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಪ್ರತಾಪ್ ಸಿಂಹ ಅದರ ಸದಸ್ಯರಾಗಿದ್ದಾರೆ. ಯತ್ನಾಳ್ ಇದೀಗ ಸಿದ್ದರಾಮಯ್ಯ ಪರ ಮಾತ ನಾಡುತ್ತಿದ್ದಾರೆ. ಅವರಿಗೆ ಮಾನ ಮರ್ಯಾದೆ ಇಲ್ಲ. ಮುಡಾ ವಿಷಯವನ್ನು ಬೇರೆ ಕಡೆ ತಿರುಗಿಸಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪೆಟ್ಟಾರಾಪ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕೃಷ್ಣಂ ಪ್ರಣಯ ಸಖಿ (ಕ) ದೇವರ (ಕ)	2+2 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ದೇವರ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಉಪೇಂದ್ರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ದೇವರ (ತೆ)	4 ಪ್ರದರ್ಶನಗಳು
ರಾಜಕಮಲ್	
ಹಿಟ್ಲರ್ (ತ)	4 ಪ್ರದರ್ಶನಗಳು
ಸಂಗಂ	
ಮೆಯ್ಯಝಗನ್ (ತ)	4 ಪ್ರದರ್ಶನಗಳು
ಲಿಡೋ	
ಹಗ್ಗ (ಕ)	2 ಪ್ರದರ್ಶನಗಳು
ಉಪೇಂದ್ರ (ಕ)	2 ಪ್ರದರ್ಶನಗಳು
ತಿಬ್ಬಾದೇವಿ	
ಪೆಟ್ಟಾರಾಪ್ (ತ)	4 ಪ್ರದರ್ಶನಗಳು
ಪ್ರಭಾ	
ಸಂಜು (ಕ)	2 ಪ್ರದರ್ಶನಗಳು
ನೈಟ್ ರೋಡ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಲುಕ್ ಬ್ಯಾಕ್ ಬಿಯಾಂಡ್ ದಿ ಬ್ಲೇಡ್ಸ್ (ಇಂ): ಬೆ.10.20ಕ್ಕೆ, ಮೆಯ್ಯಝಗನ್ (ತ): ಮ.12.45ಕ್ಕೆ, ಸಂ.4.15ಕ್ಕೆ, ದೇವರ 1 (ತೆ): ರಾ.7.45ಕ್ಕೆ.
ಸ್ಕ್ರೀನ್ 2	ಸ್ತ್ರೀ 2 (ಹಿಂ): ಬೆ.10.10ಕ್ಕೆ, ಪೆಟ್ಟಾರಾಪ್ (ತ): ಮ.1.15ಕ್ಕೆ, ಹಿಟ್ಲರ್ (ತ): ಸಂ.4.15ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ರಾ.7ಕ್ಕೆ, ಮೆಯ್ಯಝಗನ್ (ತ): ರಾ.10.05ಕ್ಕೆ.
ಸ್ಕ್ರೀನ್ 3	ಕೇದಾರ್‌ನಾಥ್ ಕುರಿ ಫಾರಂ (ಕ): ಬೆ.10.40ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.1.10ಕ್ಕೆ, ಸಂಜು (ಕ): ಸಂ.4.25ಕ್ಕೆ, ಅನ್ನ (ಕ): ರಾ.7ಕ್ಕೆ, ಕೃಷಂ ಪ್ರಣಯ ಸಖಿ (ಕ): ರಾ.9.40ಕ್ಕೆ.
ಸ್ಕ್ರೀನ್ 4	ದೇವರ 1 (ತೆ): ಬೆ.8ಕ್ಕೆ, ಬೆ.11.45ಕ್ಕೆ, ಮ.3.15ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821-2973519

ಸ್ಕ್ರೀನ್ 1	ಕೃಷ್ಣಂ ಪ್ರಣಯ ಸಖಿ (ಕ): ಮ.1.15ಕ್ಕೆ, ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಸಂ.6.25ಕ್ಕೆ, ಹಿಟ್ಲರ್ (ತ): ರಾ.9.45ಕ್ಕೆ.
ಸ್ಕ್ರೀನ್ 2	ದೇವರ 1 (ತೆ): ಬೆ.8ಕ್ಕೆ, ಬೆ.11.20ಕ್ಕೆ, ಮ.2.40ಕ್ಕೆ, ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ದೇವರ 1 (ಕ): ಬೆ.10ಕ್ಕೆ, ಮ.1.20ಕ್ಕೆ, ಸಂ.4.40ಕ್ಕೆ, ದೇವರ 1 (ತೆ): ರಾ.8ಕ್ಕೆ.
ಸ್ಕ್ರೀನ್ 4	ಇಬ್ಬನಿ ತಬ್ಬಿದ ಇಳೆಯಲಿ (ಕ): ಬೆ.10.30ಕ್ಕೆ, ಮ.1.30ಕ್ಕೆ, ಹಿಟ್ಲರ್ (ತ): ಸಂ.4.35ಕ್ಕೆ, ದೇವರ 1 (ತೆ): ರಾ.7.15ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ರೇವ್ ಪಾರ್ಟಿ ನಡೆಯಲು ಪೊಲೀಸ್, ಅಬಕಾರಿ ಇಲಾಖೆ ವೈಫಲ್ಯ ಕಾರಣ

ರೈತ ಮುಖಂಡ ಕೃಷ್ಣೇಗೌಡ ಇಂಗಲಗುಪ್ಪೆ ಆರೋಪ

ಮೈಸೂರು,ಸೆ.30(ಎಂಟಿವೈ)– ನಾಡಹಬ್ಬ ದಸರಾ ಸಂದರ್ಭದಲ್ಲಿ ಕೆಆರ್‌ಎಸ್ ಹಿನ್ನೀರಿನ ಮೀನಾಕ್ಷಿಪುರ ಬಳಿ ರೇವ್ ಪಾರ್ಟಿ ನಡೆಯಲು ಅಬಕಾರಿ, ಪೊಲೀಸ್ ಇಲಾಖೆಯ ವೈಫಲ್ಯವೇ ಕಾರಣವಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ರೈತ ಬಣದ ರಾಜ್ಯಾಧ್ಯಕ್ಷ ಇ.ಎನ್. ಕೃಷ್ಣೇಗೌಡ ಇಂಗಲಗುಪ್ಪೆ ಆರೋಪಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಡಹಬ್ಬ ದಸರಾ ಪ್ರಯುಕ್ತ ಲಕ್ಷಾಂತರ ಮಂದಿ ನಗರಕ್ಕೆ ಆಗಮಿಸುತ್ತಿದ್ದಾರೆ. ಆದರೆ ಇದರ ನಡುವೆ ಈ ರೇವ್ ಪಾರ್ಟಿ ನಡೆದಿರುವುದು ಎಲ್ಲರೂ ತಲೆ ತಗ್ಗಿಸುವ ವಿಷಯವಾಗಿದೆ. ಈ ರೀತಿಯ ಪಾರ್ಟಿಗಳು ನಡೆಯಲು ವಿವಿಧ ಇಲಾಖೆಗಳ ಸಹಕಾರ ಕಾರಣ ಎಂಬ ಆರೋಪ ತಾವು ಮಾಡುತ್ತಿದ್ದು, ಗುಪ್ತಚರ ಇಲಾಖೆ ಏನು ಮಾಡು ತ್ತಿತ್ತು? ಎಂದು ಪ್ರಶ್ನಿಸಿದರು. ಈ ಸರ್ಕಾರ, ಜಿಲ್ಲಾಡಳಿತ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಸಣ್ಣಪ್ಪ, ಕೆಂಪರಾಜು, ಧರ್ಮೇಶ್, ಸಂಜಯ್ ಇದ್ದರು.

ಕರ್ನಾಟಕ ವಾಣಿಜ್ಯ, ಕೈಗಾರಿಕಾ ಸಂಸ್ಥೆಗೆ ಲಿಂಗರಾಜು, ಪ್ರಭಾಕರ್ ಆಯ್ಕೆ



ಕೆ.ಬಿ.ಲಿಂಗರಾಜು



ಕೆ. ಪ್ರಭಾಕರ್

ಮೈಸೂರು, ಸೆ.30(ಎಸ್‌ಪಿಎನ್)– ಬೆಂಗಳೂರಿನ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಕಾರ್ಯಕಾರಿ ಸಮಿತಿಗೆ ಸೆ.28 ರಂದು ನಡೆದ ಚುನಾವಣೆಯಲ್ಲಿ ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಬಿ.ಲಿಂಗರಾಜು (ಸಂಘ ಸಂಸ್ಥೆಗಳ ವಿಭಾಗ) ಹಾಗೂ ಮಂಡ್ಯ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಕೆ.ಪ್ರಭಾಕರ್ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ವಿಭಾಗ ಮೈಸೂರು ವಲಯ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ ಎಂದು ಗೌರವ ಕಾರ್ಯದರ್ಶಿ ಎ.ಕೆ.ಶಿವಾಜಿರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಸ್ವಚ್ಛತಾ ಮ್ಯಾರಥಾನ್

ಮೈಸೂರು,ಸೆ.30– ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಅ.2 ರಂದು ಬೆಳಗ್ಗೆ 6 ಗಂಟೆಯಿಂದ 8 ಗಂಟೆಯವರೆಗೆ ಅರಮನೆ ಮುಂಭಾಗದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ 'ಸ್ವಭಾವ ಸ್ವಚ್ಛತೆ ಸಂಸ್ಕಾರ ಸ್ವಚ್ಛತೆ' ಕಾರ್ಯಕ್ರಮದಡಿಯಲ್ಲಿ ಸ್ವಚ್ಛತಾ ಮ್ಯಾರಥಾನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿಂದಿ–ಕನ್ನಡ ಚಲನಚಿತ್ರ ಗೀತೆ ಗಾಯನ ಕಾರ್ಯಕ್ರಮ



ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಅವರನ್ನು ಹಳೇ ಬೇರು ಹೊಸ ಚಿಗುರು ಕಲ್ಚರಲ್ ಟ್ರಸ್ಟ್‌ನ ಕಲಾವಿದರು ಅಭಿನಂದಿಸಿದರು.

ಮೈಸೂರು, ಸೆ.30(ಎಸ್‌ಪಿಎನ್)– ಮೈಸೂರು ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಂಗೀತ ಸಭಾಂಗಣದಲ್ಲಿ ಹಳೇ ಬೇರು ಹೊಸ ಚಿಗುರು ಕಲ್ಚರಲ್ ಟ್ರಸ್ಟ್ ವತಿಯಿಂದ 'SOMಗೀತಾ ಸಮ್ಮಿಲನ' ಶೀರ್ಷಿಕೆಯಡಿ ಏರ್ಪಡಿಸಿದ್ದ ಹಿಂದಿ ಮತ್ತು ಕನ್ನಡ ಚಲನಚಿತ್ರಗೀತೆ ಗಾಯನ ಕಾರ್ಯಕ್ರಮವನ್ನು ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾಜ ಸ್ವಾಸ್ಥ್ಯವನ್ನು ಹೆಚ್ಚಿಸುತ್ತವೆ. ಹಳೇ ಬೇರು ಹೊಸ ಚಿಗುರು ಕಲ್ಚರಲ್ ಟ್ರಸ್ಟ್‌ನ ಕಲಾವಿದರು, ಹಳೆಯ ಮತ್ತು ಹೊಸ ಹಾಡುಗಳನ್ನು ಕಲಾವಿದ ರೇವಣ್ಣ ಅವರ ನೇತೃತ್ವದಲ್ಲಿ ಹಾಡಿ, ಪ್ರೇಕ್ಷಕರ ಮನಸ್ಸಿಗೆ ಮುದ ನೀಡುತ್ತಿದ್ದಾರೆ. ಇಂತಹ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿ ಮೈಸೂರಿನ ಕೀರ್ತಿ ಸಾಂಸ್ಕೃತಿಕವಾಗಿ ಹೆಚ್ಚಿಸಬೇಕು ಎಂದರು.

ವೇದಿಕೆ ಕಾರ್ಯಕ್ರಮದ ನಂತರ ಗಜಮುಖನೇ ಗಣಪತಿಯೇ ಭಕ್ತಿಗೀತೆಯೊಂದಿಗೆ ಆರಂಭವಾದ ಗಾಯನ ಕಾರ್ಯಕ್ರಮ ನಂತರ 'ಬಂಗಾರದ ಮನುಷ್ಯ' ಚಿತ್ರದ ನಗುನಗುತ ನಲಿ, 'ಮಹಾಕ್ಷತ್ರಿಯ' ಚಿತ್ರದ ಬಣ್ಣದಬುಗುರಿ, 'ಎರಡು ಕನಸು' ಚಿತ್ರದ ತಮ್ ನಮ್ ತಮ್ ನಮ್, 'ಶೃಂಗಾರ ಕಾವ್ಯ' ಚಿತ್ರದ ಓ ಮೇಘವೇ –ಮೇಘವೆ, 'ಕಟಿಪತಂಗ್' ಚಿತ್ರದ ಪ್ಯಾರ್ ದಿವಾನ್ ಓತಾ ಹೆ, 'ಹೊಂಬಿಸಿಲು' ಚಿತ್ರದ ಹೂವಿಂದ ಹೂವಿಗೆ ಹಾರುವ ದುಂಬಿ, 'ಮೈನೆ ಪ್ಯಾರ್‌ಕಿಯಾ' ಚಿತ್ರದ ಮೆರೆ ರಂಗಮೇ, 'ಎರಡು ರೇಖೆಗಳು' ಚಿತ್ರದ ನವರಾತ್ರಿ ಸಂಜೆಯಲಿ, 'ದೇವತಾ ಮನುಷ್ಯ' ಚಿತ್ರದ ಹೃದಯದಲಿ ಇದೇನಿದು, 'ಬ್ಲಾಕ್ ಮೇಲ್' ಚಿತ್ರದ ಪಲ್‌ಪಲ್ ದಿಲ್ ಕೆ ಪಾಸ್, 'ಆಟೋರಾಜ' ಚಿತ್ರದ ನಲಿವಾ ಗುಲಾಬಿ ಹೂವೆ, 'ಸಿಂಗಪೂರ್‌ನಲ್ಲಿ ರಾಜ ಕುಳ್ಳ' ಚಿತ್ರದ 'ಚಿನ್ನದ ರಾಣಿ ಬಾರೆ' ಹಾಡುಗಳನ್ನು ಸುಶ್ರಾವ್ಯವಾಗಿ ಹಾಡಿದರು.

ಬಯಲು ದಾರಿ' ಚಿತ್ರದ ಕನಸಲು ನೀನೇ, 'ಆರಾಧನಾ' ಚಿತ್ರದ ಕೊರಾ ಕಾಗರ್ ತಾ, 'ಆಪ್ತರಕ್ಷಕ' ಚಿತ್ರದ ಗರಗರನೇ, 'ಅಪ್ಪು' ಚಿತ್ರದ ಆ ದೇವರ ಹಾಡಿದು, 'ರಂಗ ಎಸ್‌ಎಸ್‌ಎಲ್‌ಸಿ' ಚಿತ್ರದ ಮನಸೇ ಓ ಮನಸೆ, 'ನಾಗರಹಾವು' ಚಿತ್ರದ ಬಾರೇ ಬಾರೇ, 'ಗುಣನೋಡಿ ಹೆಣ್ಣು ಕೊಡು' ಚಿತ್ರದ ಮೊದಲನೆ ದಿನವೇ, 'ಬೆಂಕಿಯ ಬಲೆ' ಚಿತ್ರದ ನಿನ್ನ ನಗುವು ಹೂವಂತೆ, 'ಹಮ್ ಕಿಸೀಸೆ ಕಮ್ ನಹೀ' ಚಿತ್ರದ ಪೆಹೆಲಾ ಪೆಹಲಾ ಪ್ಯಾರ್ ಹೇ, 'ರಾಮ್ ತೇರಾ ಗಂಗಾ ಮೇರಿ' ಚಿತ್ರದ ಸುನ್ ಸಾಹೇಬಾ ಸುನ್, 'ಧರ್ಮಸೆರೆ' ಚಿತ್ರದ ಮಾನಸ ಸರೋವರ, 'ಕರ್ಣ' ಚಿತ್ರದ ಆ ಕರ್ಣನಂತೆ, 'ಸಹೋದರರ ಸವಾಲ್' ಚಿತ್ರದ ಓ ನಲ್ಲನೆ ಸವಿಮಾತೊಂದ, 'ನೀ ಬರೆದ ಕಾದಂಬರಿ' ಚಿತ್ರದ ನೀ ಮಿಟಿದ ನೆನಪೆಲ್ಲ, 'ಕಟಿಪತಂಗ್' ಚಿತ್ರದ ಹೇ ಶ್ಯಾಮ್ ಮಸ್‌ತಾನಿ ಹಾಡುಗಳನ್ನು ಗಾಯಕರಾದ ಬಿ.ಎಸ್.ರಾವ್, ರೇವಣ್ಣ, ಮಂಜು, ಅಶ್ವಿನಿ, ರಾಣಿ ಅವರ ಸಿರಿಕಂಠದಲ್ಲಿ ಮೂಡಿ ಬಂದವು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಕರ್ತವ್ಯ ನಿರ್ವಹಿಸಲು ಅರ್ಜಿ ಆಹ್ವಾನ

ಮೈಸೂರು,ಸೆ.30– ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಲಯ ಕಚೇರಿ–3 ಮತ್ತು ವಲಯ ಕಚೇರಿ–9 ರಲ್ಲಿ ಖಾಲಿ ಇರುವ ನಗರ ಪುನರ್ವಸತಿ ಕಾರ್ಯಕರ್ತರಾಗಿ ಗೌರವಧನದ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಅಂಗವಿಕಲರು ಅರ್ಜಿಯನ್ನು ಅ.10 ರೊಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಅ.15 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2490333 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಡಿಜಿಪಿ ಚಂದ್ರಶೇಖರ್ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳದಿದ್ದರೆ ಕಾನೂನು ಹೋರಾಟ

ಮಾಜಿ ಸಚಿವ ಸಾ.ರಾ. ಮಹೇಶ್ ಎಚ್ಚರಿಕೆ



ಮೈಸೂರು,ಸೆ.30(ಎಂಟಿವೈ)– ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಪರೋಕ್ಷವಾಗಿ ಹಂದಿ ಶಬ್ದ ಬಳಸಿ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಲೋಕಾಯುಕ್ತ ಎಡಿಜಿಪಿ ಎಂ. ಚಂದ್ರಶೇಖರ್ ವಿರುದ್ಧ ಸರ್ಕಾರ ಕ್ರಮಕೈಗೊಳ್ಳದಿದ್ದರೆ ಕಾನೂನು ಹೋರಾಟ ನಡೆಸುವುದಾಗಿ ಮಾಜಿ ಸಚಿವರೂ ಆದ ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷ ಸಾ.ರಾ. ಮಹೇಶ್ ಎಚ್ಚರಿಸಿದ್ದಾರೆ.


ಮೈಸೂರಿನಲ್ಲಿ ಸೋಮವಾರ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ಅವರ ಕುರಿತಾದ ಅನಾಮಧೇಯ ಪತ್ರವೊಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಇದನ್ನು ಅಧಿಕಾರಿ ಬರೆದಿರುವುದೇ ಅಥವಾ ಕಿಡಿಗೇಡಿಗಳು ಬರೆದಿದ್ದಾರೆಯೇ ಎಂದು ಸ್ಪಷ್ಟವಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕೆಲ ನೌಕರರಿಗೆ ಆಯಕಟ್ಟಿನ ಹುದ್ದೆ ಕೊಡುವ ಆಸೆ, ಆಮಿಷ ತೋರಿಸಿ ಅವರಿಂದ ವಿರೋಧ ಪಕ್ಷದ ನಾಯಕರ ವಿರುದ್ಧ ಮನ ಬಂದಂತೆ ಮಾತನಾಡಿಸಿ, ತೇಜೋವಧೆ ಮಾಡಿಸುತ್ತಿದ್ದಾರೆ. ಈ ಬಗ್ಗೆ ಕಾನೂನು ಹೋರಾಟ ಮಾಡುತ್ತೇವೆ ಎಂದು ತಿಳಿಸಿದರು.

ಲೋಕಾಯುಕ್ತ ಎಡಿಜಿಪಿ ಎಂ.ಚಂದ್ರಶೇಖರ್ ಅವರ ಕರ್ತವ್ಯಕ್ಕೆ ಅಡ್ಡಿಯಾಗಿದ್ದರೆ ಹಿರಿಯ ಅಧಿಕಾರಿಗೆ ದೂರು ನೀಡಬೇಕು. ನ್ಯಾಯಾಲಯದ ಮೂಲಕ ಮಾನನಷ್ಟ ಮೊಕದ್ದಮೆ ದಾಖಲಿಸಬೇಕು. ಅದನ್ನು ಬಿಟ್ಟು ಶಿಷ್ಟಾಚಾರವನ್ನು ಉಲ್ಲಂಘಿಸಿ ಕೇಂದ್ರ ಸಚಿವರ ವಿರುದ್ಧ ಮನ ಬಂದಂತೆ ಪತ್ರ ಬರೆದಿರುವುದು ಸರಿಯಲ್ಲ. ಈ ಬಗ್ಗೆ ಕ್ರಮ ಕೈಗೊಳ್ಳದಿರುವುದನ್ನು ಗಮನಿಸಿದರೆ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸತ್ತಿದೆಯೇ? ಸರ್ಕಾರದ ಮುಖ್ಯ ಕಾರ್ಯದರ್ಶಿ, ಡಿಜಿ, ಐಜಿ ಈ ಅಧಿಕಾರಿ ಮೇಲೆ ಏಕೆ ಕ್ರಮ ಕೈಗೊಂಡಿಲ್ಲ ಎಂದು ಕಿಡಿಕಾರಿದರು.

ಎಡಿಜಿಪಿ ಚಂದ್ರಶೇಖರ್ ಅವರ ಮೇಲೆ ರಿಯಲ್ ಎಸ್ಟೇಟ್ ಆರೋಪವಿದೆ ಇವರದೇ ಇಲಾಖೆಯ ಇನ್ಸ್‌ಪೆಕ್ಟರ್‌ರೊಬ್ಬರು ಚಂದ್ರಶೇಖರ್ ಅವರ ಮೇಲೆ ದೂರು ದಾಖಲಿಸಿದ್ದಾರೆ. ಅಲ್ಲದೇ ಇವರು ತಮ್ಮ ಅವಧಿ ಮುಗಿದು ಆರು ವರ್ಷ ಕಳೆದರೂ ಹಿಮಾಚಲ ಪ್ರದೇಶಕ್ಕೆ ಹಿಂತಿರುಗದೇ ಪ್ರಭಾವ ಬಳಕೆ ಮಾಡಿಕೊಂಡು ರಾಜ್ಯದಲ್ಲಿ ಅಧಿಕಾರದಲ್ಲಿ ಮುಂದುವರಿದಿದ್ದಾರೆ. ಈ ಎಲ್ಲಾ ಆರೋಪಗಳಿರುವ ಕಾರಣ ಈ ಅಧಿಕಾರಿಯನ್ನು ಕುಮಾರಸ್ವಾಮಿ ಅವರು ಅಪ್ರಾಮಾಣಿಕ ಎಂದು ಹೇಳಿರುವುದರಲ್ಲಿ ತಪ್ಪೇನಿದೆ? ಎಂದು ಪ್ರಶ್ನಿಸಿದರು.


ಚಂದ್ರಶೇಖರ್ ತಮ್ಮ ಅವಧಿ ಮುಗಿದರೂ ರಾಜ್ಯದಲ್ಲಿ ಹಂದಿಯಂತೆ ಉಳಿದುಕೊಂಡಿದ್ದಾರೆಯೇ? ಹೀಗೆ ಜನರ ತೆರಿಗೆ ಹಣವನ್ನು ಮೇಯುತ್ತಿರುವ ನೀವು ನಿಮ್ಮ ಆಸ್ತಿ ವಿವರವನ್ನು ಕೂಡಲೇ ಬಹಿರಂಗ ಪಡಿಸಬೇಕು. ಅಧಿಕಾರಿಯಾಗಿ ಈ ರೀತಿ ಆರೋಪ ಮಾಡುವ ಬದಲಿಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ರಾಜಕೀಯಕ್ಕೆ ಬರಲಿ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಅಶ್ವಿನ್ ಕುಮಾರ್, ಜೆಡಿಎಸ್ ಮುಖಂಡರಾದ ಎಸ್‌ಬಿಎಂ ಮಂಜು, ಪ್ರೇಮ ಶಂಕರೇಗೌಡ, ಪ್ರಿಯದರ್ಶಿನಿ ಪ್ರಕಾಶ್ ಹಾಗೂ ಇತರರು ಇದ್ದರು.

ಮೈಸೂರು ಸ್ವಚ್ಛತೆಗೆ ವರ್ತಕರ ಅಸಹಕಾರ; ರಸ್ತೆ ಬದಿ ಕಂಡ ಕಂಡಲ್ಲಿ ಕಸ ಸುರಿಯುತ್ತಿರುವ ವ್ಯಾಪಾರಿಗಳು!





ಮೈಸೂರಿನ ವಿನೋಬಾ ರಸ್ತೆಯಲ್ಲಿ ಹಲವು ಕಡೆ ಹೀಗೆ ಕಸ ಹಾಕಲಾಗಿದೆ.



ಸಂತೆಪೇಟೆ ರಸ್ತೆಯಲ್ಲಿ ತ್ಯಾಜ್ಯ

ಮೈಸೂರು, ಸೆ.30(ಎಸ್‌ಬಿಡಿ)– ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಸಂಭ್ರಮ ಕಳೆಗಟ್ಟಿದೆ. ಆದರೆ ಸ್ವಚ್ಛತೆ ನಿರ್ವಹಣೆಗೆ ಕೆಲ ವರ್ತಕರು ಸಹಕಾರ ನೀಡುತ್ತಿಲ್ಲ ಎನ್ನುವುದಕ್ಕೆ ರಸ್ತೆ ಬದಿ ಚೆಲ್ಲಾಪಿಲ್ಲಿಯಾಗಿ ಬಿದ್ದಿರುವ ತ್ಯಾಜ್ಯವೇ ಸಾಕ್ಷಿ.

ಇನ್ನೆರಡು ದಿನ ಕಳೆದರೆ ನವರಾತ್ರಿ ಉತ್ಸವಕ್ಕೆ ಚಾಲನೆ ದೊರಕಲಿದೆ ಅತ್ಯಾಕರ್ಷಕ ವಿದ್ಯುತ್ ದೀಪಾಲಂಕಾರ ಪ್ರಜ್ವಲಿಸಲು ಸಿದ್ಧವಾಗಿದೆ. ವೈವಿಧ್ಯಮಯ ಕಾರ್ಯಕ್ರಮಗಳ ಸಿದ್ಧತೆ ಬಹುತೇಕ ಪೂರ್ಣಗೊಂಡಿದೆ. ದಸರಾದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕೆಂಬ ಜಿಲ್ಲಾಡಳಿತದ ಸೂಚನೆ ಮೇರೆಗೆ ಮೈಸೂರು ನಗರ ಪಾಲಿಕೆ ಸಜ್ಜಾಗಿದೆ. ನಿರಂತರ ಸ್ವಚ್ಛತೆ ನಿರ್ವಹಣೆಗೆ ಕಾರ್ಮಿಕರ ತಂಡಗಳನ್ನು ನಿಯೋಜಿಸಲು ಕ್ರಮ ವಹಿಸಲಾಗಿದೆ. ಆದರೂ ಎಲ್ಲರ ಸಹಕಾರದಿಂದ ಮಾತ್ರ ನಿರೀಕ್ಷಿತ ರೀತಿಯಲ್ಲಿ ಸ್ವಚ್ಛತೆ ನಿರ್ವಹಣೆ ಸಾಧ್ಯ. ಆದರೆ ಕೆಲ ವರ್ತಕರು ಎಲ್ಲೆಂದರಲ್ಲಿ ಕಸ ಬಿಸಾಡುವ ಪ್ರವೃತ್ತಿ ನಿಲ್ಲಿಸಿದಂತಿಲ್ಲ.

ಕಸದ ರಾಶಿ ನಿರ್ಮಾಣವಾಗದಂತೆ ಪಾಲಿಕೆ ವತಿಯಿಂದ ವಿಲೇವಾರಿ ಮಾಡಲಾಗುತ್ತಿದೆ. ಹೋಟೆಲ್, ಟೀ ಅಂಗಡಿಗಳು ಸೇರಿದಂತೆ ಹೆಚ್ಚು ತ್ಯಾಜ್ಯ ಉತ್ಪಾದನೆಯಾಗುವ ಮಳಿಗೆಗಳಿಂದ ದಿನಕ್ಕೆ ಎರಡು ಬಾರಿ ಕಸ ಸಂಗ್ರಹಿಸಲಾಗುತ್ತಿದೆ ಆದರೂ ಹಲವೆಡೆ ಸಣ್ಣ ಪ್ರಮಾಣದ ಕಸ ಕಣ್ಣಿಗೆ ರಾಚುತ್ತದೆ. ವಿನೋಬಾ ರಸ್ತೆ, ಹಳೇ ಸಂತೆಪೇಟೆ, ಸಯ್ಯಾಜಿರಾವ್ ರಸ್ತೆ, ಚಾಮರಾಜ ಜೋಡಿ ರಸ್ತೆ ಸೇರಿದಂತೆ ಪ್ರಮುಖ ವಾಣಿಜ್ಯ ರಸ್ತೆಗಳಲ್ಲಿ ಅಲ್ಲಲ್ಲಿ ಪ್ಲಾಸ್ಟಿಕ್ ಕವರ್, ರಟ್ಟು ಹಾಗೂ ಕಾಗದದ ಚೂರುಗಳು, ಥರ್ಮಾಕೋಲ್ ತುಂಡುಗಳು, ರಟ್ಟಿನ ಡಬ್ಬಕ್ಕೆ ಕಟ್ಟುವ ಪ್ಲಾಸ್ಟಿಕ್ ದಾರಗಳು, ಬಳಸಿದ ಟೀ ಲೋಟಗಳು, ಒಡೆದ ಗಾಜಿನ ಚೂರುಗಳು ಹೀಗೆ ಎಲ್ಲಾ ರೀತಿಯ ತ್ಯಾಜ್ಯವನ್ನು ಬಿಸಾಡಲಾಗುತ್ತಿದೆ ಕೆಲ ವರ್ತಕರು ತಮ್ಮ ಅಂಗಡಿಯನ್ನು ಆಗಾಗ್ಗೆ ಸ್ವಚ್ಛ ಮಾಡಿಕೊಳ್ಳುವಾಗ ಈ ರೀತಿಯ ತ್ಯಾಜ್ಯವನ್ನು ರಸ್ತೆ ಬದಿಯಲ್ಲಿ ಹಾಕಿ ಕೈ ತೊಳೆದುಕೊಳ್ಳುತ್ತಾರೆ. ಆ ಪ್ಲಾಸ್ಟಿಕ್ ಹಾಗೂ ಕಾಗದದ ಚೂರುಗಳು ಗಾಳಿಯಲ್ಲಿ ಹಾರಿ ರಸ್ತೆ ಸೇರುತ್ತವೆ. ವಾಹನಗಳ ಓಡಾಟದಿಂದ ಎಲ್ಲೆಂದರಲ್ಲಿ ಚೆಲ್ಲಾಪಿಲ್ಲಿಯಾಗಿ ಹರಡುತ್ತವೆ. ಹೀಗಾದರೆ ಸ್ವಚ್ಛತೆ ನಿರ್ವಹಣೆ ಹೇಗೆ ಸಾಧ್ಯ?. ದಸರಾಗೆ ಬರುವ ಪ್ರವಾಸಿಗರಲ್ಲಿ ಯಾವ ರೀತಿಯ ಭಾವನೆ ಮೂಡಬಹುದು. ಸ್ವಚ್ಛತೆಯೇ ಇಲ್ಲವಾದರೆ ವೈಭವದ ಅಲಂಕಾರದಿಂದ ಪ್ರಯೋಜನ ವೇನು? ಎಂದು ಜನ ಪ್ರಶ್ನಿಸಿದ್ದಾರೆ.

ರಸ್ತೆ ಬದಿಯಲ್ಲಿ ಸ್ವಲ್ಪ ಕಸ ಬಿದ್ದಿದ್ದರೆ ದಾರಿ ಹೋಕರೂ ತಮಗೆ ಬೇಡವಾದ ವಸ್ತುಗಳನ್ನು ಅಲ್ಲಿಯೇ ಬಿಸಾಡುತ್ತಾರೆ. ಅದರಿಂದ ತ್ಯಾಜ್ಯದ ರಾಶಿ ನಿರ್ಮಾಣವಾಗುತ್ತದೆ ಎಂಬ ಪರಿಜ್ಞಾನ ಎಲ್ಲರಲ್ಲೂ ಇರಬೇಕು. ವರ್ತಕರು ಅಂಗಡಿಯಿಂದ ಒಂದು ಚೂರು ಕಸವನ್ನೂ ರಸ್ತೆಗೆ ಹಾಕಬಾರದು. ಕಡ್ಡಾಯವಾಗಿ ಡಬ್ಬದಲ್ಲಿ ಸಂಗ್ರಹಿಸಿ, ಕಸದ ವಾಹನಕ್ಕೆ ಹಾಕಬೇಕು. ಬೀದಿಬದಿ ವ್ಯಾಪಾರಿಗಳೂ ನಗರದ ಸ್ವಚ್ಛತೆಗೆ ಸಹಕಾರ ನೀಡಬೇಕು. ಸಾರ್ವಜನಿಕರೂ ಉಢಾಫೆಯಿಂದ ಎಲ್ಲೆಂದರಲ್ಲಿ ಕಸ ಎಸೆಯಬಾರದು. ಸ್ವಚ್ಛತೆ ಬಗ್ಗೆ ಪಾಲಿಕೆ ಅಧಿಕಾರಿಗಳು ವರ್ತಕರಿಗೆ ಸೂಚನೆ ನೀಡಬೇಕು. ರಸ್ತೆ ಬದಿ ಕಸ ಬಿಸಾಡುವವರಿಗೆ ಅಕ್ಕಪಕ್ಕದ ಅಂಗಡಿಯವರು ತಿಳಿಹೇಳಬೇಕು ಎಂದು ಪ್ರಜ್ಞಾವಂತ ನಾಗರಿಕರು ಮನವಿ ಮಾಡಿದ್ದಾರೆ.

ಎಂಜಿ ರಸ್ತೆ ತರಕಾರಿ ಮಾರುಕಟ್ಟೆ ಬಳಿಯ ರಾಜಕಾಲುವೆ ಸೇರುತ್ತಿದೆ ತ್ಯಾಜ್ಯ



ಮೈಸೂರು: ನಗರದ ಮಹಾತ್ಮಗಾಂಧಿ(ಎಂಜಿ) ರಸ್ತೆ ತರಕಾರಿ ಮಾರುಕಟ್ಟೆ ಬಳಿಯ ರಾಜಕಾಲುವೆ ತ್ಯಾಜ್ಯ ಸುರಿಯುವ ಗುಂಡಿಯಾಗಿ ಮಾರ್ಪಟ್ಟಿದೆ.

ಇಲ್ಲಿನ ಸೇತುವೆ ಬಳಿಯ ರಾಜಕಾಲುವೆಯಲ್ಲಿ ಗಿಡಗಂಟಿಗಳು ಆಳೆತ್ತರಕ್ಕೆ ಬೆಳೆದಿದ್ದು, ತ್ಯಾಜ್ಯವನ್ನು ತುಂಬಿ ಬಿಸಾಡಿರುವ ಪ್ಲಾಸ್ಟಿಕ್ ಚೀಲಗಳು, ಪ್ಲಾಸ್ಟಿಕ್ ಕವರ್‌ಗಳು, ಪ್ಲಾಸ್ಟಿಕ್ ಬಾಟಲ್‌ಗಳು, ಮುರಿದ ಮರದ ರೆಂಬೆಗಳು, ಥರ್ಮಾಕೋಲ್ ರಾಶಿ ಬಿದ್ದಿವೆ. ತರಕಾರಿ ಮಾರುಕಟ್ಟೆಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹೀಗೆ ಅತ್ಯಂತ ಸುಲಭ ರೀತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ. ಸೊಪ್ಪು–ತರಕಾರಿ ತ್ಯಾಜ್ಯವನ್ನು ಹಳೆಯ ಪ್ಲಾಸ್ಟಿಕ್ ಚೀಲ ಹಾಗೂ ಪ್ಲಾಸ್ಟಿಕ್ ಕವರ್‌ಗಳಲ್ಲಿ ತುಂಬಿ ರಾಜಕಾಲುವೆಗೆ ಬಿಸಾಡಲಾಗುತ್ತಿದೆ ನೀರು ಖಾಲಿಯಾದ ಬಳಿಕ ಪ್ಲಾಸ್ಟಿಕ್ ಬಾಟಲ್‌ಗಳನ್ನು ಇಲ್ಲಿಗೆ ತಂದು ಸುರಿಯಲಾಗುತ್ತಿದೆ. ಮದ್ಯದ ಖಾಲಿ ಪೊಟ್ಟಣ, ಪ್ಲಾಸ್ಟಿಕ್ ಲೋಟಗಳು, ಸಿಗರೇಟ್ ಪ್ಯಾಕ್‌ಗಳೂ ರಾಶಿ ಬಿದ್ದಿವೆ. ಹೀಗೆ ಮುಂದುವರೆದರೆ ಕೆಲವು ದಿನಗಳಲ್ಲೇ ರಾಜಕಾಲುವೆಯೇ ತ್ಯಾಜ್ಯದಿಂದ ಮುಚ್ಚಿಹೋಗಬಹುದು. ಹಾಗಾದರೆ ಮಳೆ ಬಂದಾಗ ಜನ ಕಷ್ಟ ಅನುಭವಿಸಬೇಕಾಗುತ್ತದೆ. ತ್ಯಾಜ್ಯ ನೀರಿನಲ್ಲಿ ಕೊಳೆತು ದುರ್ವಾಸನೆ ಬೀರುವುದರ ಜೊತೆಗೆ ಸೊಳ್ಳೆ ಹೆಚ್ಚಾಗುವುದರಿಂದ ವ್ಯಾಪಾರಿಗಳು ಹಾಗೂ ಗ್ರಾಹಕರ ಆರೋಗ್ಯಕ್ಕೂ ತೊಂದರೆಯಾಗಲಿದೆ. ಈ ಬಗ್ಗೆ ನಗರ ಪಾಲಿಕೆ ಅಧಿಕಾರಿಗಳು ಕೂಡಲೇ ಕ್ರಮ ವಹಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯರ ಇಂದಿನ ಸ್ಥಿತಿಗೆ ನಾನಲ್ಲ; ಬಿಜೆಪಿ ಕಾರಣ

● ಮುಡಾ ಅಧ್ಯಕ್ಷ ಮರೀಗೌಡ ಸ್ಪಷ್ಟನೆ ● ಸಿದ್ದರಾಮಯ್ಯ ನನ್ನ ಮನೆ ದೇವರು ● ನಾನು ಉನ್ನತ ಸ್ಥಾನಮಾನ ವಂಚಿತನಾಗಿದ್ದೇನೆ ● ಸಿದ್ದರಾಮಯ್ಯರ ಇಂದಿನ ಸ್ಥಿತಿಗೆ ನೀವೇ ಕಾರಣ ಎಂದು ಹೇಳಿ ಹಲ್ಲೆಗೆ ಮುಂದಾದದ್ದು ನೋವು ತಂದಿದೆ


ಮುಡಾ ಅಧ್ಯಕ್ಷ ಕೆ.ಮರೀಗೌಡ

ಮೈಸೂರು,ಸೆ.30(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಇಂದಿನ ಪರಿಸ್ಥಿತಿಗೆ ನಾನಲ್ಲ, ಬಿಜೆಪಿ ಒಳಸಂಚು ಕಾರಣ ಎಂದು ಮುಡಾ ಅಧ್ಯಕ್ಷ ಕೆ.ಮರೀಗೌಡ ಸ್ಪಷ್ಟಪಡಿಸಿದ್ದಾರೆ.

ಮುಡಾದಲ್ಲಿರುವ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಇಂದಿನ ಪರಿಸ್ಥಿತಿಗೆ ನಾನೇ ಕಾರಣವೆಂಬಂತೆ ಬಿಂಬಿಸಿ ಸಾರ್ವಜನಿಕವಾಗಿ ಕಾಂಗ್ರೆಸ್ ಕಾರ್ಯಕರ್ತರೇ ನನ್ನ ವಿರುದ್ಧ ಪ್ರತಿಭಟನೆ ನಡೆಸಿರುವುದು ನನಗೆ ನೋವು ತಂದಿದೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ವೇಳೆ ಪಕ್ಷದ ಜಿಲ್ಲಾಧ್ಯಕ್ಷ ಡಾ. ಬಿ.ಜೆ. ವಿಜಯಕುಮಾರ್ ಅವರ ಆಹ್ವಾನದ ಮೇರೆಗೆ ನಾನು ಅಲ್ಲಿಗೆ ಹೋಗಿದ್ದೆ. ಆ ಸಂದರ್ಭದಲ್ಲಿ ನಿನ್ನಿಂದಲೇ ಮುಖ್ಯಮಂತ್ರಿಗಳಿಗೆ ಈ ಗತಿ ಬಂತು ಎಂದು ಕಾರ್ಯಕರ್ತ ಭಾಸ್ಕರ್ ಕೂಗಾಡಿದ್ದರು. ನನ್ನನ್ನು ಅವರು ಹೊಡೆಯಲು ಬಂದಿದ್ದು, ನೋವು ತಂದಿದೆ. ಸ್ವಪಕ್ಷದವರೇ ಇಷ್ಟೆಲ್ಲಾ ಮಾಡುತ್ತಿದ್ದರೂ ಪಕ್ಷದ ಜಿಲ್ಲಾಧ್ಯಕ್ಷರು ಅವರ ವಿರುದ್ಧ ಯಾವುದೇ ರೀತಿಯ ಕ್ರಮ ಕೈಗೊಳ್ಳದೇ ಇರುವುದು ಬೇಸರ ತಂದಿದೆ ಎಂದು ನೋವು ತೋಡಿಕೊಂಡರು.

ಸಿದ್ದರಾಮಯ್ಯ ಮನೆ ದೇವರು: ಸಿದ್ದರಾಮಯ್ಯ ನನ್ನ ಮನೆ ದೇವರು. ಅವರಿಗೆ ದ್ರೋಹ ಮಾಡುವ ಯಾವ ಕೆಲಸವನ್ನೂ ನಾನು ಮಾಡಿಲ್ಲ. ನನಗೆ ಮಕ್ಕಳಿಲ್ಲ. ಮನೆಯಲ್ಲಿ ನಾನು ಮತ್ತು ನನ್ನ ಪತ್ನಿ ಮಾತ್ರ ಇದ್ದೇವೆ. ನನ್ನ ಮೇಲೆ ಇಲ್ಲಸಲ್ಲದ ಆರೋಪ ಯಾಕೆ ಮಾಡುತ್ತೀರಿ? ಆರೋಪ ಮಾಡುವ ಮುಂಚೆ ಸ್ವಲ್ಪ ಯೋಚನೆ ಮಾಡಿ ಎಂದು ಭಾವುಕರಾದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ ತಿಂಗಳಿನಲ್ಲಿ ನನ್ನನ್ನು ಮುಡಾ ಅಧ್ಯಕ್ಷರನ್ನಾಗಿ ನೇಮಿಸಿದರು. ಅಧಿಕಾರ ವಹಿಸಿಕೊಂಡ ಬಳಿಕ ಮುಡಾದಲ್ಲಿ ಶೇ.50:50 ಅನುಪಾತ ಹಾಗೂ ಪ್ರೋತ್ಸಾಹಕ ಯೋಜನೆಯಲ್ಲಿ ಪ್ರಾಧಿಕಾರದ ಅನುಮೋದನೆ ಪಡೆಯದೆ ನಿವೇಶನ ಹಂಚಿಕೆ ಮಾಡಿರುವ ಬಗ್ಗೆ ದೂರುಗಳು ಬಂದಿತ್ತು. ಈ ಹಿನ್ನೆಲೆ ಪ್ರಾಧಿಕಾರದ ಸಭೆಯ ಅನುಮೋದನೆ ಪಡೆಯದೆ ಯಾವುದೇ ನಿವೇಶನಗಳನ್ನು ಹಂಚಿಕೆ ಮಾಡಬಾರದು ಎಂದು ಟಿಪ್ಪಣಿ ಮುಖೇನ ಸೂಚನೆ ನೀಡಿದ್ದೇನೆ. ಮುಡಾ ಅಧ್ಯಕ್ಷನಾಗಿ ಪ್ರಾಧಿಕಾರದ ಹಿತಾಸಕ್ತಿ ಕಾಪಾಡಲು ಈ ಕ್ರಮ ಕೈಗೊಂಡಿದ್ದು, ಬೇರೆ ಉದ್ದೇಶ ಇರಲಿಲ್ಲ. ಆದರೆ ಶಾಸಕ ಕೆ. ಹರೀಶ್‌ಗೌಡರ ಸೂಚನೆ ಮೇರೆಗೆ ಮಾರಗೌಡನಹಳ್ಳಿ ಸರ್ವೆ ನಂ.77, 57ರ 8 ಎಕರೆ ಹಾಗೂ ಕಸಬಾ ಹೋಬಳಿ ಸರ್ವೆ ನಂ.86 ಭೂಮಿಯನ್ನು ಮಂಜೂರು ಮಾಡಲಾಗಿದೆ. ಇದರಲ್ಲಿ ನನ್ನದೇನೂ ತಪ್ಪಿಲ್ಲ. ಇದನ್ನೆ ಕೆಲವರು ತಪ್ಪಾಗಿ ಅರ್ಥೈಸಿಕೊಂಡು ನನ್ನ ವಿರುದ್ಧ ಆಧಾರರಹಿತ ಆರೋಪ ಮಾಡುತ್ತಿದ್ದಾರೆ. ಆದರೆ ನಾನು ಯಾವುದೇ ತಪ್ಪು ಮಾಡಿಲ್ಲ, ಜೊತೆಗೆ ಸಿದ್ದರಾಮಯ್ಯ ಅವರ ಇವತ್ತಿನ ಪರಿಸ್ಥಿತಿಗೆ ನಾನು ಕಾರಣನಲ್ಲ ಎಂದು ಪುನರುಚ್ಚರಿಸಿದರು.

ಉನ್ನತ ಸ್ಥಾನಮಾನ ವಂಚಿತ: ನನ್ನ 40 ವರ್ಷಗಳ ರಾಜಕಾರಣದಲ್ಲಿ ಸಾಕಷ್ಟು ಉನ್ನತ ಸ್ಥಾನಮಾನಗಳಿಂದ ವಂಚಿತನಾಗಿದ್ದೇನೆ. ನನ್ನ ಹಿಂದೆ ರಾಜಕೀಯಕ್ಕೆ ಬಂದ ಬಹಳಷ್ಟು ಜನರು ಎಂಎಲ್‌ಎ, ಎಂಎಲ್‌ಸಿಗಳಾಗಿದ್ದಾರೆ. ಆದರೆ ನಾನು ಮಾತ್ರ ನನ್ನ ಮನೆ ದೇವರೆಂದೇ ನಂಬಿರುವ ಸಿದ್ದರಾಮಯ್ಯ ಆಣತಿಯಂತೆ ಕೆಲಸ ಮಾಡುತ್ತಿದ್ದು, ಅವರ ಜೊತೆಗೆ ರಾಜಕೀಯ ಜೀವನದಲ್ಲಿ ನಡೆದುಕೊಂಡು ಬಂದಿದ್ದೇನೆ ಎಂದು ಮರೀಗೌಡ ತಿಳಿಸಿದರು.

ಇಷ್ಟಕ್ಕೆ ಬಿಜೆಪಿ ಒಳಸಂಚೇ ಕಾರಣ: ನನ್ನ ಪತ್ನಿ 30 ವರ್ಷಕ್ಕೂ ಹೆಚ್ಚು ಕಾಲ ಸರ್ಕಾರಿ ಸೇವೆಯಲ್ಲಿದ್ದರು. ಅವರು ನಿವೃತ್ತಿಯಾದಾಗ 82 ಲಕ್ಷ ರೂ. ಬಂದಿತ್ತು ಅದನ್ನು ಎಫ್‌ಡಿ ಇಟ್ಟಿದ್ದೇವೆ. 50 ಲಕ್ಷ ರೂ. ಸಾಲ ಮಾಡಿ 2 ಕೋಟಿ ರೂ.ಗಳಿಗೆ ಮನೆ ಖರೀದಿಸಿದ್ದೇವೆ. ನನ್ನ ಆರೋಗ್ಯ ಸರಿ ಇಲ್ಲದ ಕಾರಣ ವಿಶ್ರಾಂತಿಯಲ್ಲಿದ್ದು, ಸಿದ್ದರಾಮಯ್ಯ ಅವರ ಮೈಸೂರಿನ ಯಾವುದೇ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಾಧ್ಯವಾಗಿಲ್ಲ. ನಾನು ಮಾನಸಿಕವಾಗಿ ಬಹಳ ನೊಂದಿದ್ದೇನೆ. ಸಿದ್ದರಾಮಯ್ಯ ಅವರ ಇಂದಿನ ಪರಿಸ್ಥಿತಿಗೆ ಬಿಜೆಪಿ ಒಳಸಂಚು ಕಾರಣವೇ ಹೊರತು, ನಾನು ಕಾರಣವಲ್ಲ. ನನ್ನಿಂದ ಯಾವುದೇ ರೀತಿಯಲ್ಲೂ ತಪ್ಪಾಗಿಲ್ಲ. ಆದಕಾರಣ ನನ್ನ ಸಮಾಜದ ಬಂಧುಗಳು ಹಾಗೂ ಪಕ್ಷದ ಕಾರ್ಯಕರ್ತರು ಇದನ್ನು ಅರಿತುಕೊಳ್ಳಬೇಕು ಎಂದು ಮನವಿ ಮಾಡಿಕೊಂಡರು.

ಸಿದ್ದರಾಮಯ್ಯನವರೇ ನನಗೆ ಹೈಕಮಾಂಡ್: ಮುಡಾದಲ್ಲಿ ಶೇ.50:50 ಅನುಪಾತವು 2020 ರಿಂದಲೂ ಜಾರಿಯಲ್ಲಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಯಾವ ಆರ್‌ಟಿಐ ಕಾರ್ಯಕರ್ತರೂ ಯಾಕೆ ಪ್ರಶ್ನೆ ಮಾಡಿಲ್ಲ? ಎಂದ ಅವರು, ಸಿದ್ದರಾಮಯ್ಯ 40 ವರ್ಷಗಳಿಂದಲೂ ಸ್ವಚ್ಛ ಮತ್ತು ಪ್ರಾಮಾಣಿಕ ರಾಜಕಾರಣ ಮಾಡುತ್ತಿದ್ದಾರೆ. ನಾನು ಮುಡಾ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಕೊಡುವ ಯೋಚನೆ ಮಾಡಿಲ್ಲ. ಸಿದ್ದರಾಮಯ್ಯನವರೇ ನನ್ನ ಹೈಕಮಾಂಡ್. ಅವರು ಹೇಳಿದರೆ ರಾಜೀನಾಮೆ ಕೊಡಲು ಸಿದ್ಧವಾಗಿದ್ದೇನೆ. ಈ ವಿಚಾರದ ಬಗ್ಗೆ ತಲೆ ಕೆಡಿಸಿಕೊಳ್ಳಬೇಡ ಎಂದು ಸಿದ್ದರಾಮಯ್ಯ ಅವರೇ ನನಗೆ ಹೇಳಿದ್ದಾರೆ. ಆದರೆ ನಮ್ಮ ಕಾರ್ಯಕರ್ತರೇ ನನ್ನ ವಿರುದ್ಧ ಸುಳ್ಳು ಆರೋಪ ಮಾಡುತ್ತಿರುವುದು ನೋವು ತಂದಿದೆ ಎಂದು ಮರೀಗೌಡ ಹೇಳಿದರು.

ಭಾಸ್ಕರ್ ಸ್ಪಷ್ಟನೆ : ಸಿದ್ದರಾಮಯ್ಯನವರು ಸೆ.27 ರಂದು ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸುವ ವೇಳೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಮುಖ್ಯಮಂತ್ರಿಗಳ ಈ ಸಂಕಷ್ಟಕ್ಕೆ ಮರೀಗೌಡರೇ ಕಾರಣ ಎಂದು ಪ್ರತಿಭಟಿಸುತ್ತಿದ್ದರು. ಆ ಸಂದರ್ಭದಲ್ಲಿ ನಾನು ಮರೀಗೌಡರಿಗೆ ಮುಜುಗರವಾಗಬಾರದು ಎಂಬ ಕಾರಣಕ್ಕಾಗಿ ಈ ಸ್ಥಳದಿಂದ ನಿರ್ಗಮಿಸಿ ಎಂದು ಹೇಳುವ ಮೂಲಕ ಅವರಿಗೆ ಸಹಕಾರ ನೀಡಿದ್ದೇನೆ. ಆದರೆ ಇಂದು ಸುದ್ದಿಗೋಷ್ಠಿಯಲ್ಲಿ ಅವರು ನಾನು ಅವರ ಮೇಲೆ ಹಲ್ಲೆ ಮಾಡಲು ಮುಂದಾಗಿದ್ದೆ ಎಂದು ತಿಳಿಸಿರುವುದು ಸತ್ಯಕ್ಕೆ ದೂರವಾದ ವಿಚಾರ. ಅದಕ್ಕಾಗಿ ಮರೀಗೌಡರು ತಮ್ಮ ಹೇಳಿಕೆ ಹಿಂಪಡೆಯದಿದ್ದರೆ ಅಥವಾ ಕ್ಷಮೆ ಕೇಳದಿದ್ದರೆ ಅವರ ವಿರುದ್ಧ ಕೆಪಿಸಿಸಿಗೆ ದೂರು ನೀಡಲು ಮುಂದಾಗಬೇಕಾಗುತ್ತದೆ ಎಂದು ಕೆಪಿಸಿಸಿ ಸದಸ್ಯ ಎನ್.ಭಾಸ್ಕರ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪಿಪಿಎಫ್, ಸುಕನ್ಯಾ ಸಮೃದ್ಧಿ, ಎನ್‌ಎಸ್‌ಎಸ್ ಯೋಜನೆಗಳಲ್ಲಿ ಇಂದಿನಿಂದ ಹೊಸ ನಿಯಮಗಳು

ನವದೆಹಲಿ, ಸೆ.30– ಅಂಚೆ ಕಚೇರಿಗಳ ಮೂಲಕ ನಡೆಸಲಾಗುವ ನ್ಯಾಷನಲ್ ಸ್ಮಾಲ್ ಸೇವಿಂಗ್ಸ್ ಯೋಜನೆಗಳ ಅಡಿಯಲ್ಲಿ ತೆರೆಯಲಾದ ವಿವಿಧ ಖಾತೆಗಳಿಗೆ ಸಂಬಂಧಿಸಿದಂತೆ ಕೆಲ ಬದಲಾವಣೆಗಳನ್ನು ಮಾಡಲಾಗುತ್ತಿದೆ ಬಡ್ಡಿದರದಲ್ಲಿ ಅಲ್ಲ, ನಿಯಮ ಪ್ರಕಾರ ಇಲ್ಲದ ಖಾತೆಗಳನ್ನು ರೆಗ್ಯುಲರೈಸ್ ಮಾಡುವ ದೃಷ್ಟಿಯಿಂದ ಕೇಂದ್ರ ಆರ್ಥಿಕ ವ್ಯವಹಾರಗಳ ಇಲಾಖೆ ಕೆಲ ನಿಯಮ ಬದಲಾವಣೆ ಮಾಡಿ ಆಗಸ್ಟ್ ತಿಂಗಳಲ್ಲಿ ಸುತ್ತೋಲೆ ಹೊರಡಿಸಿದೆ. ಅದರ ಪ್ರಕಾರ, ಅ.1ರಿಂದ ಹೊಸ ನಿಯಮಗಳು ಜಾರಿಗೆ ಬರಲಿವೆ.

ಅನಿಯಮಿತ ಎನ್‌ಎಸ್‌ಎಸ್ ಖಾತೆಗಳು: ನ್ಯಾಷನಲ್ ಸೇವಿಂಗ್ಸ್ ಸ್ಕೀಮ್‌ನಲ್ಲಿ ಒಬ್ಬರೇ ವ್ಯಕ್ತಿಯಿಂದ ಎರಡು ಖಾತೆಗಳನ್ನು ಶುರು ಮಾಡಲಾಗಿದ್ದರೆ ಮೊದಲು ತೆರೆದ ಖಾತೆಯನ್ನು ಮಾನ್ಯ ಮಾಡಲಾಗುತ್ತದೆ. ಎರಡನೇ ಖಾತೆಗೆ ಪೋಸ್ಟ್ ಆಫೀಸ್ ಸೇವಿಂಗ್ಸ್ ಅಕೌಂಟ್‌ನ ದರದ ಪ್ರಕಾರ ಬಡ್ಡಿ ಹಾಗೂ ಶೇ. 2ರಷ್ಟು ಹೆಚ್ಚುವರಿ ಬಡ್ಡಿಯನ್ನು ಕೊಡಲಾಗುತ್ತದೆ.

ಇಲ್ಲಿ ಎನ್‌ಎಸ್‌ಎಸ್ ಖಾತೆಗೆ ನಿಗದಿ ಮಾಡಲಾಗಿರುವ ವಾರ್ಷಿಕ ಠೇವಣಿ ಮಿತಿಯೊಳಗೆ ಇರುವ ಹಣಕ್ಕೆ ಮಾತ್ರವೇ ಬಡ್ಡಿ ಸಿಗುತ್ತದೆ. ಹೆಚ್ಚುವರಿ ಹಣವಿದ್ದರೆ ಬಡ್ಡಿ ಇಲ್ಲದೇ ಕೇವಲ ಅಸಲು ಹಣವನ್ನು ಹೂಡಿಕೆದಾರರಿಗೆ ಮರಳಿಸಲಾಗುತ್ತದೆ.

ಅಪ್ರಾಪ್ತರ ಹೆಸರಲ್ಲಿ ಪಿಪಿಎಫ್ ಖಾತೆ ತೆರೆದಿದ್ದರೆ: ಅಪ್ರಾಪ್ತರ ಹೆಸರಿನಲ್ಲಿ ಪಬ್ಲಿಕ್ ಪ್ರಾವಿಡೆಂಟ್ ಫಂಡ್ ತೆರೆದಿದ್ದರೆ ಅದಕ್ಕೆ ರೆಗ್ಯುಲರ್ ಸ್ಕೀಮ್ ಪ್ರಕಾರ ಬಡ್ಡಿ ಸಿಗುವುದಿಲ್ಲ. ಇದನ್ನು ಇರೆಗ್ಯುಲರ್ ಅಕೌಂಟ್ ಎಂದು ಪರಿಗಣಿಸಲಾಗುತ್ತದೆ. ಸೇವಿಂಗ್ಸ್ ಅಕೌಂಟ್‌ನ ಬಡ್ಡಿದರ ಮಾತ್ರವೇ ಅನ್ವಯ ಆಗುತ್ತದೆ. ಮಗುವಿನ ವಯಸ್ಸು 18 ವರ್ಷ ಆದ ಬಳಿಕ ಆ ಖಾತೆಯು ರೆಗ್ಯುಲರ್ ಆಗುತ್ತದೆ. ಸರಿಯಾದ ಬಡ್ಡಿದರ ಅನ್ವಯ ಆಗುತ್ತದೆ. 18 ವರ್ಷ ವಯಸ್ಸಿನಿಂದಲೇ ಮೆಚ್ಯೂರಿಟಿ ಅವಧಿಯ ಲೆಕ್ಕ ಶುರುವಾಗುತ್ತದೆ.

ಒಂದಕ್ಕಿಂತ ಹೆಚ್ಚು ಪಿಪಿಎಫ್ ಖಾತೆಗಳಿದ್ದರೆ: ಒಬ್ಬ ವ್ಯಕ್ತಿಯ ಹೆಸರಿನಲ್ಲಿ ಒಂದೇ ಪಿಪಿಎಫ್ ಖಾತೆ ತೆರೆಯಲು ಅವಕಾಶ ಇದೆ. ಒಂದು ವೇಳೆ ಒಂದಕ್ಕಿಂತ ಹೆಚ್ಚು ಅಕೌಂಟ್‌ಗಳನ್ನು ಶುರು ಮಾಡಿದ್ದರೆ ಆಗ ಪ್ರಾಥಮಿಕ ಅಕೌಂಟ್‌ಗೆ ರೆಗ್ಯುಲರ್ ಇಂಟರೆಸ್ಟ್ ಸಿಗುತ್ತದೆ ಇತರ ಖಾತೆಗಳನ್ನು ಪ್ರೈಮರಿ ಅಕೌಂಟ್‌ನೊಂದಿಗೆ ವಿಲೀನ ಮಾಡಲಾಗುತ್ತದೆ. ಇಲ್ಲಿ ನೀವು ಪಿಪಿಎಫ್‌ಗೆ ವಾರ್ಷಿಕ ಹೂಡಿಕೆ ಮಿತಿ ಒಂದೂವರೆ ಲಕ್ಷ ರೂ ಇದೆ. ಬಹುಖಾತೆಗಳಿದ್ದು ಎಲ್ಲೆಡೆ ಮಾಡಲಾಗಿರುವ ಒಟ್ಟಾರೆ ಹೂಡಿಕೆಯು ಈ ಮಿತಿಗಿಂತ ಹೆಚ್ಚು ಇದ್ದಲ್ಲಿ, ಹೆಚ್ಚುವರಿ ಹಣವನ್ನು ಬಡ್ಡಿರಹಿತವಾಗಿ ಮರಳಿಸಲಾಗುತ್ತದೆ.

ಎನ್‌ಆರ್‌ಐಗೆ ಪಿಪಿಎಫ್ ಖಾತೆ: ಅನಿವಾಸಿ ಭಾರತೀಯರಿಗೆ ಈಗ ಪಿಪಿಎಫ್ ಸ್ಕೀಮ್ ಲಭ್ಯ ಇಲ್ಲ. ಆದರೆ, 1968ರ ಪಿಪಿಎಫ್ ಸ್ಕೀಮ್ ಅಡಿಯಲ್ಲಿ ಫಾರ್ಮ್ ಎಚ್‌ನಲ್ಲಿ ವಾಸಸ್ಥಳವನ್ನು ಕೇಳಲಾಗುತ್ತಿರಲಿಲ್ಲ. ಆಗ ಎನ್‌ಆರ್‌ಐಗಳೂ ಪಿಪಿಎಫ್ ಅಕೌಂಟ್ ತೆರೆಯಬಹುದಿತ್ತು. ಅಂಥ ಸಂದರ್ಭದಲ್ಲಿ ಎನ್‌ಆರ್‌ಐಗಳು ಪಿಪಿಎಫ್ ಖಾತೆ ತೆರೆದಿದ್ದರೂ ಅದನ್ನು ರೆಗ್ಯುಲರ್ ಅಕೌಂಟ್ ಎಂದು ಮಾನ್ಯ ಮಾಡಲಾಗುವುದಿಲ್ಲ. ಈಗಲೂ ಆ ಖಾತೆ ಸಕ್ರಿಯವಾಗಿದ್ದರೆ ಸೇವಿಂಗ್ಸ್ ಅಕೌಂಟ್‌ನ ಬಡ್ಡಿದರ ಮಾತ್ರವೇ ನೀಡಲಾಗುತ್ತದೆ. ಅ.1ರಿಂದ ಅದೂ ಕೂಡ ಸಿಗುವುದಿಲ್ಲ.

ಅಜ್ಜ ಅಥವಾ ಅಜ್ಜಿಯಿಂದ ಸುಕನ್ಯಾ ಸಮೃದ್ಧಿ ಅಕೌಂಟ್ ತೆರೆಯಲಾಗಿದ್ದರೆ: ಸುಕನ್ಯಾ ಸಮೃದ್ಧಿ ಯೋಜನೆಯನ್ನು ಅಪ್ರಾಪ್ತ ವಯಸ್ಸಿನ ಹೆಣ್ಮಕ್ಕಳ ಹೆಸರಿನಲ್ಲಿ ಅವರ ಪಾಲಕರು ಆರಂಭಿಸಬಹುದು. ಆದರೆ, ಹೆಣ್ಮಗುವಿನ ತಂದೆ ಅಥವಾ ತಾಯಿಯನ್ನು ಸಹಜ ಪಾಲಕರೆಂದು ಪರಿಗಣಿಸಲಾಗುತ್ತದೆ. ಅಜ್ಜ ಅಥವಾ ಅಜ್ಜಿಯನ್ನು ನ್ಯಾಚುರಲ್ ಗಾರ್ಡಿಯನ್ ಎಂದು ಪರಿಗಣಿಸಲಾಗುವುದಿಲ್ಲ. ಒಂದು ವೇಳೆ ಇವರ ಹೆಸರಿನಲ್ಲಿ ಸುಕನ್ಯ ಸಮೃದ್ಧಿ ಅಕೌಂಟ್ ತೆರೆಯಲಾಗಿದ್ದರೆ ಅದನ್ನು ನ್ಯಾಚುರಲ್ ಗಾರ್ಡಿಯನ್ ಅಥವಾ ಲೀಗಲ್ ಗಾರ್ಡಿಯನ್‌ಗೆ ವರ್ಗಾಯಿಸಲಾಗುತ್ತದೆ.

ಟೆಸ್ಟ್ ಕ್ರಿಕೆಟ್‌ನಲ್ಲಿ ವೇಗದ 50, 100, 200 ರನ್ ಸಿಡಿಸಿದ ಟೀಂ ಇಂಡಿಯಾ

ಟೆಸ್ಟ್ ಇತಿಹಾಸದಲ್ಲೇ ಅಮೋಘ ದಾಖಲೆ

ಕಾನ್ಪುರ್: ಬಾಂಗ್ಲಾದೇಶ ವಿರುದ್ಧದ ಎರಡನೇ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾ ಬ್ಯಾಟರ್‌ಗಳು ಅಬ್ಬರ ಪ್ರದರ್ಶನ ನೀಡುತ್ತಿದ್ದು ಟೆಸ್ಟ್ ಪಂದ್ಯವನ್ನು ಟಿ20 ಪಂದ್ಯದಂತೆ ಆಡುತ್ತಿದ್ದಾರೆ. ಹೌದು ಬಾಂಗ್ಲಾದೇಶ ಮೊದಲ ಇನ್ನಿಂಗ್ಸ್‌ನಲ್ಲಿ 74 ಓವರ್‌ಗಳಲ್ಲಿ 233 ರನ್‌ಗೆ ಆಲೌಟ್ ಆಯಿತು.



ನಂತರ ಇನ್ನಿಂಗ್ಸ್ ಆರಂಭಿಸಿದ ಟೀಂ ಇಂಡಿಯಾ ಸ್ಫೋಟಕ ಬ್ಯಾಟಿಂಗ್ ನಡೆಸಿತು. ಹೌದು 30 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 249 ರನ್ ಪೇರಿಸಿದೆ. ಈ ಮೂಲಕ ಟೆಸ್ಟ್ ಇತಿಹಾಸದಲ್ಲೇ ಐತಿಹಾಸಿಕ ದಾಖಲೆ ಬರೆದಿದೆ. 24.2 ಓವರ್‌ಗಳಲ್ಲಿ ಭಾರತ 200 ರನ್ ಪೇರಿಸಿದೆ. ಇದು ಟೆಸ್ಟ್ ಕ್ರಿಕೆಟ್‌ನಲ್ಲಿ ವೇಗದ ರನ್ ದಾಖಲೆಯಾಗಿದೆ. ಇನ್ನು ಆಸ್ಟ್ರೇಲಿಯಾ ಪಾಕಿಸ್ತಾನ ವಿರುದ್ಧದ ಟೆಸ್ಟ್ ಪಂದ್ಯದಲ್ಲಿ 28.1 ಓವರ್‌ನಲ್ಲಿ 200 ರನ್ ಪೇರಿಸಿತ್ತು. ಪಾಕಿಸ್ತಾನದ ವಿರುದ್ಧದ ಪಂದ್ಯದಲ್ಲಿ ನ್ಯೂಜಿಲ್ಯಾಂಡ್ 29.4 ಓವರ್‌ಗಳಲ್ಲಿ 200 ರನ್ ಪೇರಿಸಿ ಮೂರನೇ ಸ್ಥಾನದಲ್ಲಿದೆ.

ಭಾರತ ಪರ ಯಶಸ್ವಿ ಜೈಸ್ವಾಲ್ 51 ಎಸೆತಗಳಲ್ಲಿ 72 ರನ್ ಸಿಡಿಸಿದರೆ, ರೋಹಿತ್ ಶರ್ಮಾ 11 ಎಸೆತಗಳಲ್ಲಿ 23 ರನ್ ಬಾರಿಸಿ ಔಟಾದರು. ನಂತರ ಬಂದ ಶುಭ್ಮನ್ ಗಿಲ್ 36 ಎಸೆತಗಳಲ್ಲಿ 39 ರನ್ ಪೇರಿಸಿದರೆ, ವಿರಾಟ್ ಕೊಹ್ಲಿ 35 ಎಸೆತಗಳಲ್ಲಿ 47 ರನ್‌ಗೆ ಔಟಾಗಿದ್ದು ಅರ್ಧಶತಕ ವಂಚಿತರಾದರು. ಇನ್ನು ಸ್ಫೋಟಕ ಬ್ಯಾಟಿಂಗ್ ಮಾಡಿದ ಕೆಎಲ್ ರಾಹುಲ್ 38 ಎಸೆತಗಳಲ್ಲಿ 2 ಸಿಕ್ಸರ್ ಮತ್ತು 7 ಬೌಂಡರಿ ಸೇರಿದಂತೆ 65 ರನ್ ಬಾರಿಸಿದರು. ಬಾಂಗ್ಲಾ ಪರ ಬೌಲಿಂಗ್‌ನಲ್ಲಿ ಶಕೀಬ್ ಅಲ್ ಹಸನ್ 3 ವಿಕೆಟ್ ಪಡೆದರೆ, ಹಸನ್ ಮಿರಾಜ್ ಮತ್ತು ಹಸನ್ ಮಹ್ಮುದ್ ತಲಾ 1 ವಿಕೆಟ್ ಪಡೆದಿದ್ದಾರೆ. ಚೆನ್ನೈನಲ್ಲಿ ನಡೆದ ಮೊದಲ ಪಂದ್ಯದಲ್ಲಿ ಟೀಂ ಇಂಡಿಯಾ ಗೆಲುವು ಸಾಧಿಸಿದೆ. ಮಳೆಯಿಂದಾಗಿ ಎರಡು ಹಾಗೂ ಮೂರನೇ ದಿನ ಪಂದ್ಯಗಳು ರದ್ದಾಗಿತ್ತು. ಇಂದು ನಡೆದ ನಾಲ್ಕನೇ ದಿನದ ಆಟದಲ್ಲಿ ಟೀಂ ಇಂಡಿಯಾ ಬ್ಯಾಟರ್‌ಗಳು ಬಾಂಗ್ಲಾ ಬೌಲರ್‌ಗಳನ್ನು ದಂಡಿಸಿದ್ದಾರೆ.

ಹಿರಿಯ ನಟ ಮಿಥುನ್ ಚಕ್ರವರ್ತಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ

ನವದೆಹಲಿ: ಹಿರಿಯ ನಟ ಮಿಥುನ್ ಚಕ್ರವರ್ತಿ ಅವರು ಭಾರತೀಯ ಚಲನಚಿತ್ರೋದ್ಯಮದ ಅತ್ಯುನ್ನತ ಗೌರವ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಭಾರತೀಯ ಚಿತ್ರರಂಗದಲ್ಲಿ ಅವರ ಪ್ರಯಾಣ ಹಾಗೂ ಸಿನಿ ರಂಗಕ್ಕೆ ನೀಡಿದ ಕೊಡುಗೆಗಾಗಿ ಈ ಪ್ರತಿಷ್ಠಿತ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.



ಭಾರತದ ಅತ್ಯುನ್ನತ ಪ್ರಶಸ್ತಿಗಳಲ್ಲಿ ಒಂದಾದ ಪದ್ಮಭೂಷಣ ಪಡೆದ ಕೆಲವೇ ತಿಂಗಳಲ್ಲಿ ಮಿಥುನ್ ಚಕ್ರವರ್ತಿ ಅವರಿಗೆ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಮಿಥುನ್ ಚಕ್ರವರ್ತಿ ಅವರು ಕೇವಲ ನಟರಷ್ಟೇ ಅಲ್ಲ, ಟಿವಿ ನಿರೂಪಕ, ನಿರ್ಮಾಪಕ, ರಾಜಕಾರಣಿ ಆಗಿದ್ದಾರೆ. ಹಿಂದಿ ಹಾಗೂ ಬಂಗಾಳಿ ಸಿನಿಮಾಗಳಲ್ಲಿ ಅತ್ಯಂತ ಹೆಚ್ಚು ಹೆಸರು ಪಡೆದಿದ್ದಾರೆ. ಇವರು 1976ರಲ್ಲಿ ಮೊದಲ ಬಾರಿಗೆ ಹಿಂದಿ ಸಿನಿಮಾ ಮೃಗಯಾದಲ್ಲಿ ಅಭಿನಯ ಮಾಡಿದ್ದರು. ಅಂದಿನಿಂದ ಈವರೆಗೂ ಚಿತ್ರರಂಗದಲ್ಲಿ ದುಡಿಯುತ್ತಿದ್ದಾರೆ.



